ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೈಸೂರು ಮಿತ್ರ 43 ಅತ್ಯುತ್ತಮ ಪತ್ರಿಕೋದ್ಯಮ

ಜನವರಿ 4 ಬುಧವಾರ 2023

ಸಂಪುಟ: 43 | ಸಂಚಿಕೆ: 258 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4




ಪಂಚಭೂತಗಳಲ್ಲಿ ಸಿದ್ದೇಶ್ವರ ಶ್ರೀಗಳು ಲೀನ

● ಮುಂಜಾನೆಯಿಂದ ಅಂತಿಮ ಕ್ರಿಯೆವರೆಗೆ ಸ್ವಾಮೀಜಿ ಸಾನ್ನಿಧ್ಯದಲ್ಲಿ ಲಕ್ಷಾಂತರ ಭಕ್ತರು ● ದೇಶದ ನಾನಾ ಕಡೆಯಿಂದ ಹರಿದು ಬಂದ ಭಕ್ತಗಣ; ಶ್ರೀಗಳ ದರ್ಶನ ಪಡೆಯುವ ತವಕ ● ಜ್ಞಾನಯೋಗ ಆಶ್ರಮದ ಅಧ್ಯಕ್ಷ ಬಸವಲಿಂಗ ಸ್ವಾಮೀಜಿಗಳಿಂದ ಅಂತಿಮ ಕಾರ್ಯ

ವಿಜಯಪುರ, ಜ.3– ಸರಳತೆಯ ಸಾಕಾರಮೂರ್ತಿ, ಶತಮಾನದ ಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಅಂತ್ಯ ಸಂಸ್ಕಾರವನ್ನು ಅವರಿಚ್ಛೆಯಂತೆಯೇ ಸರ್ಕಾರಿ ಗೌರವ ಹಾಗೂ ವಿಧಿವಿಧಾನಗಳೊಂದಿಗೆ ಮಂಗಳವಾರ ರಾತ್ರಿ ನೆರವೇರಿತು.

ಸೈನಿಕ ಶಾಲೆ ಆವರಣದಿಂದ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಶ್ರೀ ಜ್ಞಾನಯೋಗಾಶ್ರಮದ ಆವರಣಕ್ಕೆ ಶ್ರೀ ಸಿದ್ದೇಶ್ವರರ ಪಾರ್ಥಿವ ಶರೀರವನ್ನು ಸ್ಥಳಾಂತರಿಸಿ, ಅವರ ಗುರುಗಳಾದ ವೇದಾಂತ ಕೇಸರಿ ಮಲ್ಲಿಕಾರ್ಜುನ ಸ್ವಾಮೀಜಿ ಗದ್ದುಗೆ ಬಳಿ ಪಾರ್ಥಿವ ಶರೀರವನ್ನಿಟ್ಟು ಪೂಜೆ ಸಲ್ಲಿಸಿದ ಬಳಿಕ ವಿಧಿ ವಿಧಾನಗಳೊಂದಿಗೆ ಚಿತೆಗೇರಿಸಲಾಯಿತು. ಶ್ರೀಗಳ ಶಿಷ್ಯ ಪೀಠಾಧಿಪತಿಯಾಗಿರುವ



ಬಾಗಲಕೋಟೆ ಆಶ್ರಮದ ಆವರಣದಲ್ಲಿ ಬೆಳೆದಿದ್ದ ಶ್ರೀಗಂಧದ ಕಟ್ಟಿಗೆಗಳಿಂದ ನಿರ್ಮಿಸಿದ ಚಿತೆಗೆ, ದೇಸಿ ಹಸುವಿನ ತುಪ್ಪ, ಕೊಬ್ಬರಿ, ಬೆರಣಿಯನ್ನು ಬಳಸಲಾಗಿತ್ತು. ಗಣ್ಯಾತಿ ಗಣ್ಯರು ಸೇರಿ ಸಾವಿರ ಮಂದಿಗಷ್ಟೇ ಅಂತಿಮ ▶ 5ನೇ ಪುಟಕ್ಕೆ

ಸರ್ಕಾರಿ ಗೌರವದೊಂದಿಗೆ ನೆರವೇರಿದ ಅಂತ್ಯಕ್ರಿಯೆ

20 ಲಕ್ಷಕ್ಕೂ ಹೆಚ್ಚು ಜನ...

ಸಿದ್ದೇಶ್ವರ ಸ್ವಾಮೀಜಿ ಅಂತಿಮ ದರ್ಶನಕ್ಕೆ ಜಿಲ್ಲಾಡಳಿತ ಸಕಲ ವ್ಯವಸ್ಥೆ ಮಾಡಿಕೊಂಡಿತ್ತು. ವಾಹನ ದಟ್ಟಣೆಯಾಗದಂತೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಊಟ, ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಜನ ಸರತಿಯಲ್ಲಿ ಸಾಗಿ ದರ್ಶನ ಪಡೆಯಲು ಬ್ಯಾರಿಕೇಡ್ ಅಳವಡಿಸಲಾಗಿತ್ತು. ಆದರೆ ಕ್ಷಣ ಕ್ಷಣಕ್ಕೂ ಭಕ್ತಸಾಗರ ಹೆಚ್ಚಾಗಿದ್ದರಿಂದ ನಿಯಂತ್ರಿಸಲು ಪೊಲೀಸರು ಹರಸಾಹಸಪಡಬೇಕಾಯಿತು. ಕಣ್ಣು ಹಾಯಿಸಿದಲ್ಲೆಲ್ಲಾ ಜನರೇ ಕಾಣುತ್ತಿದ್ದರು. ಕಣ್ಣೀರು, ಗೋಳಾಟದ ಜೊತೆಗೆ ನಮ್ಮ ದೇವರಿಗೆ ಸಾವಿಲ್ಲ ಮತ್ತೆ ಹುಟ್ಟಿ ಬನ್ನಿ ಸಿದ್ದಪ್ಪಾಜಿ ಘೋಷಣೆಗಳು ಮೊಳಗಿದವು. 20 ಲಕ್ಷಕ್ಕೂ ಹೆಚ್ಚು ಜನ ಶ್ರೀಗಳ ಅಂತಿಮ ದರ್ಶನ ಪಡೆದಿರಬಹುದು ಎನ್ನಲಾಗಿದೆ.



ಶ್ರೀಗಳ ಇಚ್ಛೆಯಂತೆ ಅಂತಿಮ ಸಂಸ್ಕಾರ

ನುಡಿದಂತೆ ನಡೆದ ಶ್ರೀ ಸಿದ್ದೇಶ್ವರ ಸ್ವಾಮೀಜಿ ತಾವು ಕಾಲವಾದಾಗ ಹೇಗೆ ಅಂತ್ಯಸಂಸ್ಕಾರ ನಡೆಯಬೇಕೆಂದು ಬಯಸಿದ್ದರೂ ಹಾಗೆಯೇ ಇಂದು ಅವರ ಅಂತ್ಯ ಸಂಸ್ಕಾರ ನೆರವೇರಿಸಲಾಯಿತು.]

'ದೇಹವನ್ನು ಭೂಮಿಯಲ್ಲಿಡುವ ಬದಲು ಅಗ್ನಿ ಸ್ಪರ್ಶ ಮಾಡುವುದು. ಶ್ರಾದ್ಧಿಕ ವಿಧಿ ವಿಧಾನಗಳು ಅನಗತ್ಯ. ಚಿತಾಭಸ್ಮವನ್ನು ನದಿ–ಸಾಗರದಲ್ಲಿ ವಿಸರ್ಜಿಸುವುದು. ▶ 5ನೇ ಪುಟಕ್ಕೆ

ಕೆಬಿಜಿಯವರ
ಛೂಮಂತ್ರ.. ಛೂಮಂತ್ರ..


ಪಂಚಭೂತಗಳಲ್ಲಿ ಲೀನರಾದ ಸದ್ಗುರು ಶ್ರೀ ಸಿದ್ದೇಶ್ವರ ಸ್ವಾಮಿಗಳು: ಒಂದು ಚಿಂತನೆ

■ ಪುಟ–4

ನಾಳೆ ಕೇಂದ್ರ ಸಾರಿಗೆ ಸಚಿವ ಗಡ್ಕರಿ ಅವರಿಂದ ಮೈಸೂರು–ಬೆಂಗಳೂರು ಹೆದ್ದಾರಿ ಪರಿಶೀಲನೆ



ಮೈಸೂರು, ಜ.3(ಆರ್‌ಕೆ)–ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಜನವರಿ 5ರಂದು ಮೈಸೂರು–ಬೆಂಗಳೂರು ಚತುಷ್ಪಥ ರಸ್ತೆಯನ್ನು ಪರಿಶೀಲಿಸುವರು.



ಗುರುವಾರ ಬೆಳಗ್ಗೆ 11.15ರಿಂದ ಮಧ್ಯಾಹ್ನ 12.15 ಗಂಟೆವರೆಗೆ ಮೈಸೂರು–ಬೆಂಗಳೂರು ನಡುವೆ ನಿರ್ಮಾಣವಾಗಿರುವ ಹೆದ್ದಾರಿಯ ವೈಮಾನಿಕ ಸಮೀಕ್ಷೆ ನಡೆಸಲಿರುವ ಸಚಿವರು, ಮಧ್ಯಾಹ್ನ 12.15 ರಿಂದ 12.55 ಗಂಟೆವರೆಗೆ ರಾಮನಗರ ಬಳಿಯ ಜೀಗೇನಹಳ್ಳಿ ಗ್ರಾಮದ ಟೋಲ್ ಪ್ಲಾಜಾದಿಂದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಬಸ್ಸಿನಲ್ಲಿ ಕಾಮಗಾರಿ ವೀಕ್ಷಿಸಿದ ಬಳಿಕ ಯೋಜನೆ ಕುರಿತು ಸಂವಾದ ನಡೆಸುವರು. ಅದಕ್ಕೂ ಮುನ್ನ ನಿತಿನ್ ಗಡ್ಕರಿ ಅವರು, ಬೆಳಗ್ಗೆ 9.30ರಿಂದ 10.30 ಗಂಟೆವರೆಗೆ ಹೆಚ್‌ಎಎಲ್ ಏರ್‌ಪೋರ್ಟ್‌ನಿಂದ ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇಯನ್ನು ವೈಮಾನಿಕ ಸಮೀಕ್ಷೆ ನಡೆಸುವರು ಎಂದು ಭಾರತೀಯ ಹೆದ್ದಾರಿ ಪ್ರಾಧಿಕಾರದ ಮೂಲಗಳು ತಿಳಿಸಿವೆ.

ಒಕ್ಕಲಿಗ, ಲಿಂಗಾಯತ ಸಮುದಾಯಗಳಿಗೆ

ತಲಾ ಶೇ.2ರಷ್ಟು ಮೀಸಲಾತಿ ಹೆಚ್ಚಳಕ್ಕೆ ಸರ್ಕಾರ ತೀರ್ಮಾನ

● ಪ್ರವರ್ಗ 2ಸಿ, 2ಡಿ ನಿರ್ಧಾರದಿಂದ ಹಿಂದೆ ಸರಿಯಲು ತೀರ್ಮಾನ ● ಮೊದಲಿನಂತೆ 3ಎ, 3ಬಿ ಮುಂದುವರೆಸಲು ನಿರ್ಧಾರ ● ಮೀಸಲಾತಿ ಪ್ರಮಾಣದಲ್ಲಿ ಶೇ.4ರಿಂದ 6, ಶೇ.5ರಿಂದ 7ಕ್ಕೆ ಹೆಚ್ಚಿಸಲು ನಿರ್ಣಯ ● ಅಲ್ಪಸಂಖ್ಯಾತರ ಕೋಟಾ ಶೇ.4ರಲ್ಲಿ ಹಂಚಿಕೆ ● ಕೇಂದ್ರದ ಮೀಸಲಾತಿಯಲ್ಲಿ ಅಲ್ಪಸಂಖ್ಯಾತರ ಪರಿಗಣನೆ

ಬೆಂಗಳೂರು, ಜ.3(ಕೆಎಂಶಿ)–ವಿಧಾನಸಭಾ ಚುನಾವಣೆ ಹೊಸ್ತಿಲಲ್ಲಿರುವ ಆಡಳಿತಾರೂಢ ಬಿಜೆಪಿಯು ಪ್ರಬಲ ಸಮುದಾಯಗಳಾದ ಒಕ್ಕಲಿಗ ಮತ್ತು ಲಿಂಗಾಯತರ ಕೆಂಗಣ್ಣಿಗೆ ಗುರಿಯಾಗುವುದನ್ನು ತಪ್ಪಿಸಲು ರಾಜ್ಯ ಸರ್ಕಾರವು ಅಲ್ಪ ಪ್ರಮಾಣದ ಮೀಸಲಾತಿ ಹೆಚ್ಚಳಕ್ಕೆ ಮುಂದಾಗಿದೆ.

ಕಳೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಿದ್ದ ಮೀಸಲಾತಿ ಪ್ರಮಾಣವನ್ನು ಮತ್ತೆ ಪರಿಷ್ಕರಿಸಿ ಚಾಲ್ತಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯನ್ನೇ ಹೆಚ್ಚು–ಕಡಿಮೆ ಮುಂದುವರೆಸಲು ತೀರ್ಮಾನಿಸಿದೆ. ಅಂದರೆ, ಒಕ್ಕಲಿಗರನ್ನು ಪ್ರವರ್ಗ 2ಸಿ ಮತ್ತು ಲಿಂಗಾಯತರನ್ನು 2ಡಿಯನ್ನಾಗಿ ಮಾಡುವ ನಿರ್ಧಾರದಿಂದ ಹಿಂದೆ ಸರಿಯಲಿದೆ.

ಈಗಿರುವ ಮೀಸಲಾತಿಯಲ್ಲಿ ಯಾವುದೇ ಸಮುದಾಯದ ಮೀಸಲಾತಿ ಪ್ರಮಾಣ ಕಡಿಮೆ ಮಾಡುವಂತಿಲ್ಲ. ಎಲ್ಲಾ ಸಮುದಾಯಗಳು ತಮ್ಮ ತಮ್ಮ ಮೀಸಲಾತಿ ಪ್ರಮಾಣದ ಹೆಚ್ಚಳದ ಬೇಡಿಕೆಯನ್ನು ಸರ್ಕಾರದ ಮುಂದಿಟ್ಟಿವೆ. ಮೀಸಲಾತಿ ವಿಚಾರವು ರಾಜ್ಯ ಸರ್ಕಾರಕ್ಕೆ ಬಿಸಿ ತುಪ್ಪವಾಗಿ ಪರಿಣಮಿಸಿದ್ದು, ಸುಪ್ರೀಂಕೋರ್ಟಿನ ಆದೇಶವೂ ಉಲ್ಲಂಘನೆ ಆಗಬಾರದು, ಬೇಡಿಕೆ ಇಟ್ಟಿರುವ ಸಮುದಾಯಗಳನ್ನು ಸಮಾಧಾನಪಡಿಸುವ ಯೋಜನೆ ರೂಪಿಸಲಾಗಿದೆ. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಆಡಳಿತ ಪಕ್ಷಕ್ಕೆ ಮಾರಕವಾಗದಂತೆ ಎಚ್ಚರಿಕೆಯ ಹೆಜ್ಜೆ ಇಡಲು ತೀರ್ಮಾನಿಸಿದೆ. ಹೀಗಾಗಿ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ 3ಎಗೆ ಒಳಪಡುವ ಒಕ್ಕಲಿಗರ ಮೀಸಲಾತಿ ಪ್ರಮಾಣವನ್ನು ಶೇ.4ರಿಂದ ಶೇ.6ಕ್ಕೆ, ಪ್ರವರ್ಗ 3ಬಿ ನಲ್ಲಿ ಬರುವ ಲಿಂಗಾಯತರ ಮೀಸಲಾತಿ ಪ್ರಮಾಣವನ್ನು ಶೇ.5ರಿಂದ ಶೇ.7ಕ್ಕೂ ಹೆಚ್ಚಿಸಲು ರಾಜ್ಯ ಸರ್ಕಾರ ಉದ್ದೇಶಿಸಿದೆ.

ಚಾಲ್ತಿಯಲ್ಲಿರುವ ಮೀಸಲಾತಿಯಡಿಯಲ್ಲಿ ಅಲ್ಪಸಂಖ್ಯಾತ ವರ್ಗಕ್ಕಿರುವ ಶೇ.4 ರಷ್ಟು ಮೀಸಲಾತಿಯನ್ನು ರದ್ದುಪಡಿಸಿ ಈ ಎರಡೂ ಸಮುದಾಯಗಳಿಗೂ ಸಮನಾಗಿ ತಲಾ ಶೇ.2ರಷ್ಟು ಮೀಸಲಾತಿಯನ್ನು ಹೆಚ್ಚುವರಿಯಾಗಿ ▶ 9ನೇ ಪುಟಕ್ಕೆ

ವಿಧಾನಸಭಾ ಚುನಾವಣೆ–2023

ಪ್ರಿಯಾಂಕಾ ಗಾಂಧಿಗೆ ರಾಜ್ಯದ ಕಾಂಗ್ರೆಸ್ ಚುನಾವಣಾ ಉಸ್ತುವಾರಿ

● ಜ.6ರಂದು ರಾಜ್ಯಕ್ಕೆ ಪ್ರಿಯಾಂಕಾ ಭೇಟಿ
● ಸಿದ್ಧತೆಗಳ ಬಗ್ಗೆ ಪರಿಶೀಲಿಸಿ, ಮಾಹಿತಿ ಸಂಗ್ರಹ



ಬೆಂಗಳೂರು, ಜ.3(ಕೆಎಂಶಿ)–ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಯ ನಾಯಕತ್ವವನ್ನು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಹಿಸಿಕೊಂಡಿದ್ದಾರೆ.

ಇದರ ಅಂಗವಾಗಿ ಜನವರಿ 6 ರಂದು ನಗರದಲ್ಲಿ ಇಡೀ ದಿನ ಕಾರ್ಯಕರ್ತರ ಮತ್ತು ಮುಖಂಡರ ಸಭೆ ನಡೆಸಲು ರಾಜ್ಯಕ್ಕೆ ಒಂದು ದಿನದ ಭೇಟಿ ನೀಡುತ್ತಿದ್ದಾರೆ. ಅಂದು ಮಹಿಳಾ ಕಾಂಗ್ರೆಸ್ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಕೆಪಿಸಿಸಿ ಕಚೇರಿಯಲ್ಲೇ ಇಡೀ ದಿನ ಕಳೆಯಲಿದ್ದಾರೆ.

ಮುಂಬರುವ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದ ಸಿದ್ಧತೆ, ಅಭ್ಯರ್ಥಿಗಳ ಆಯ್ಕೆ, ಪ್ರಚಾರಕ್ಕೆ ಕೈಗೊಂಡಿರುವ ಸಿದ್ಧತೆ ಬಗ್ಗೆ ರಾಜ್ಯ ನಾಯಕರಿಂದ ಮಾಹಿತಿ ಪಡೆಯಲಿದ್ದಾರೆ. ಚುನಾವಣೆ ಆರಂಭಗೊಂಡು ಪ್ರಚಾರದ ಅಂತ್ಯದವರೆಗೂ ಪಕ್ಷದ ಅಭ್ಯರ್ಥಿಗಳ ಪರ ರಾಜ್ಯಾದ್ಯಂತ ▶ 9ನೇ ಪುಟಕ್ಕೆ

ರಾಷ್ಟ್ರೀಯ ಈಜು ಸ್ಪರ್ಧೆ: 3 ಚಿನ್ನ, 1 ಬೆಳ್ಳಿ ಪದಕ ಗಳಿಸಿ ಹೊಸ ದಾಖಲೆ ಬರೆದ ಮೈಸೂರಿನ ಎಸ್.ತಾನ್ಯ




ಎಸ್.ತಾನ್ಯ

ಮೈಸೂರು, ಜ.3(ಆರ್‌ಕೆಬಿ)– ಕೇರಳದ ತಿರುವನಂತಪುರಂನಲ್ಲಿ ಕಳೆದ ಡಿ.27ರಿಂದ ನಡೆದ ಮೂರು ದಿನಗಳ 33ನೇ ರಾಷ್ಟ್ರ ಮಟ್ಟದ ದಕ್ಷಿಣ ವಲಯ ಸ್ವಿಮ್ಮಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರಿನ ಈಜುಪಟು ಎಸ್.ತಾನ್ಯ ವೈಯಕ್ತಿಕ ಚಾಂಪಿಯನ್‌ಶಿಪ್ ಹಾಗೂ 400 ಮೆಡ್ಲೆಯಲ್ಲಿ ಹೊಸ ದಾಖಲೆ ನಿರ್ಮಿಸಿ, 4 ವಿಭಾಗಗಳಲ್ಲಿ ಸ್ಪರ್ಧಿಸಿ, 3 ಚಿನ್ನ, 1 ಬೆಳ್ಳಿ ಪದಕ ಗಳಿಸಿದ್ದಾರೆ.

4 X 100 ಮೀ. ವೈಯಕ್ತಿಕ ವಿಭಾಗದಲ್ಲಿ ಚಿನ್ನದ ಪದಕ. 200 ಮೀ. ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಬೆಳ್ಳಿ ಪದಕ, 100 ಮೀ. ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಚಿನ್ನದ ಪದಕ, 50 ಮೀ. ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಎಸ್.ತಾನ್ಯ ಮೈಸೂರಿನ ಜೆ.ಪಿ.ನಗರದ ಗ್ಲೋಬಲ್ ಸ್ಪೋರ್ಟ್ಸ್ ಕ್ಲಬ್ ಈಜುಕೊಳದಲ್ಲಿ ತರಬೇತುದಾರ ಪವನ್‌ಕುಮಾರ್ ಬಳಿ 6 ವರ್ಷಗಳಿಂದ ತರಬೇತಿ ಪಡೆಯುತ್ತಿದ್ದಾರೆ. ಮೈಸೂರಿನ ದಟ್ಟಗಳ್ಳಿಯ ಶಾರದಾ ಪಬ್ಲಿಕ್ ಶಾಲೆಯ 8ನೇ ತರಗತಿ ವಿದ್ಯಾರ್ಥಿನಿಯಾಗಿದ್ದು, ತಂದೆ ಎಸ್.ಪಿ.ಷಡಕ್ಷರಿ, ಹಾಗೂ ಎನ್.ಶ್ವೇತಾ ದಂಪತಿಯ ಪುತ್ರಿ.

ಶಾಸಕ ಜಿ.ಟಿ.ದೇವೇಗೌಡರಿಗೆ ಅಭಿನಂದನೆ



ಇಲವಾಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಬಿ.ಮಹದೇವಸ್ವಾಮಿ, ಉಪಾಧ್ಯಕ್ಷರಾಗಿ ರಮೇಶ್ ಇತ್ತೀಚೆಗೆ ಅವಿರೋಧವಾಗಿ ಆಯ್ಕೆಯಾಗಿದ್ದು, ಇವರು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅವರನ್ನು ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಸಂಘದ ನಿರ್ದೇಶಕರಾದ ನಟೇಶ್, ಸುಧಾಕರ್, ನಂಜುಂಡಸ್ವಾಮಿ, ಮಹಮದ್ ರಫೀಕ್, ಶಿವೇಗೌಡ, ಚಿದಂಬರ, ಚರಣ್, ವೆಂಕಟಾಚಲ, ಶ್ರೀಮತಿ ಸಾವಿತ್ರಮ್ಮ, ಮಂಜುಳಾ, ರಾಜು, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಎನ್.ಪ್ರಕಾಶ್ ಉಪಸ್ಥಿತರಿದ್ದರು.

ಜ.7ರಂದು ಬಂಡಳ್ಳಿಯಲ್ಲಿ ಉಚಿತ ಆರೋಗ್ಯ ತಪಾಸಣೆ

ಮೈಸೂರು,ಜ.3(ಆರ್‌ಕೆಬಿ)–ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ವಕೀಲಿ ವೃತ್ತಿ ನಿರ್ವಹಿಸಿರುವ ತಾವು ಜ.7ರಂದು ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಬಂಡಳ್ಳಿ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವುದಾಗಿ ಎಂ.ಪೂರ್ಣಿಮ ತಿಳಿಸಿದರು.



ಮೈಸೂರು ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10.30ರಿಂದ ಮಧ್ಯಾಹ್ನ 2.30ರವರೆಗೆ ಬಂಡಳ್ಳಿಯ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಸುಯೋಗ್ ಆಸ್ಪತ್ರೆ ಸಹಯೋಗದಲ್ಲಿ ಶಿಬಿರ ನಡೆಯಲಿದೆ. ಈ ವೇಳೆ ಸಾಮಾನ್ಯ ರೋಗ ತಪಾಸಣೆ, ಸ್ತ್ರೀರೋಗ ಮತ್ತು ಪ್ರಸೂತಿ, ಮೂಳೆ ಮತ್ತು ಕೀಲು ರೋಗ, ಮೂತ್ರ ತಪಾಸಣೆ, ಕಿವಿ, ಮೂಗು ಮತ್ತು ಗಂಟಲು, ಹೃದಯ ಸಂಬಂಧೀ ಕಾಯಿಲೆ, ಬಿಪಿ, ಇಸಿಜಿ, ಎಕೋ, ಸಕ್ಕರೆ ಕಾಯಿಲೆಗಳಿಗೆ ಸಂಬಂಧಿಸಿದ ತಜ್ಞರು ಪಾಲ್ಗೊಳ್ಳಲಿದ್ದಾರೆ ಎಂದರು.

ಈ ಹಿಂದೆಯೂ ಮಲೆ ಮಹದೇಶ್ವರಬೆಟ್ಟಕ್ಕೆ ಸುಮಾರು 10 ಕಿ.ಮೀ. ನಡೆದು ವಿದ್ಯಾಭ್ಯಾಸಕ್ಕೆ ಬರುತ್ತಿದ್ದ ವಿದ್ಯಾರ್ಥಿನಿಯರಿಗೆ ಟ್ಯಾಬ್ ವಿತರಣೆ, ಮಹಿಳೆಯರ ಸ್ವಾವಲಂಬನೆಗಾಗಿ ತರಬೇತಿ, ಬೆಂಗಳೂರಿನ ಸ್ಲಂ ಒಂದರಲ್ಲಿ ಗ್ರಂಥಾಲಯ ಇತ್ಯಾದಿ ಕಲ್ಪಿಸುವ ಮೂಲಕ ಸೇವೆ ಸಲ್ಲಿಸಿದ್ದೇನೆ. ನನ್ನ ಸೇವಾ ಮನೋಭಾವದ ಹಿಂದೆ ಯಾವುದೇ ಉದ್ದೇಶವಿಲ್ಲ. ಕೇವಲ ಸೇವೆ ಸಲ್ಲಿಸಬೇಕೆಂಬುದಷ್ಟೇ ಆಗಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಬಸವರಾಜೇಂದ್ರ ಸ್ವಾಮಿ ಉಪಸ್ಥಿತರಿದ್ದರು.

ಇದೇ ತಿಂಗಳು 11 ರಾಜ್ಯಗಳಿಗೆ ಅಮಿತ್ ಶಾ ಭೇಟಿ

ನವದೆಹಲಿ: ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಣತಂತ್ರ ರೂಪಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಇದೇ ತಿಂಗಳು 11 ರಾಜ್ಯಗಳ ಭೇಟಿ ನೀಡಲಿದ್ದಾರೆ. ಜ.5ರಂದು ತ್ರಿಪುರಾ, 6ಕ್ಕೆ ಮಣಿಪುರ ಮತ್ತು ನಾಗಾಲ್ಯಾಂಡ್, ಜ.7ಕ್ಕೆ ಛತ್ತೀಸ್ ಗಢ ಮತ್ತು ಜಾರ್ಖಂಡ್ ಮತ್ತು 8ರಂದು ಆಂಧ್ರ ಪ್ರದೇಶಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ. ಜ.16ರಂದು ಉತ್ತರ ಪ್ರದೇಶಕ್ಕೆ ಭೇಟಿ ನೀಡಲಿರುವ ಅಮಿತ್ ಶಾ, ಜ.17ಕ್ಕೆ ಪಶ್ಚಿಮ ಬಂಗಾಳ, ಜ.28ರಂದು ಹುಬ್ಬಳ್ಳಿಗೆ ಭೇಟಿ ನೀಡಲಿದ್ದಾರೆ ಎನ್ನಲಾಗಿದೆ. ನಂತರ ಹರಿಯಾಣ ಮತ್ತು ಪಂಜಾಬ್‌ಗೆ ಭೇಟಿ ನೀಡುವ ಸಾಧ್ಯತೆಯಿದೆ. ಕಳೆದ ಬಾರಿಯ ಚುನಾವಣೆಯಲ್ಲಿ ಅಲ್ಪ ಅಂತರಗಳಲ್ಲಿ ಸೋತಿರುವ 160 ಕ್ಷೇತ್ರಗಳ ಕಿರುಪಟ್ಟಿಯನ್ನು ವಿಸ್ತಾರಕ್‌ಗಳಿಗೆ ಕಳುಹಿಸಿದೆ. ಈ ವಿಸ್ತಾರಕಗಳು 2024ರ ಲೋಕಸಭೆ ಚುನಾವಣೆಗೂ ಮುನ್ನಾ 9 ರಾಜ್ಯಗಳ ಎಲ್ಲಾ ಕ್ಷೇತ್ರಗಳಿಗೆ ಭೇಟಿ ನೀಡಲಿದ್ದಾರೆ.

ಇಂದು ಸಾರ್ವಜನಿಕ ಸಮಾಲೋಚನಾ ಸಭೆ

ಮೈಸೂರು,ಜ.3– ಮೈಸೂರು ಮಹಾನಗರ ಪಾಲಿಕೆ ವತಿಯಿಂದ 2022–23ನೇ ಸಾಲಿನ ಪರಿಷ್ಕೃತ ಹಾಗೂ 2023–24ನೇ ಸಾಲಿನ ಅಂದಾಜು ಆಯವ್ಯಯವನ್ನು ತಯಾರಿಸಲು ಮೈಸೂರು ನಗರದ ಅಭಿವೃದ್ಧಿ ದೃಷ್ಟಿಯಿಂದ ಸದರಿ ಆಯವ್ಯಯದ ಬಗ್ಗೆ ಮೈಸೂರು ನಗರದ ಸಮಸ್ತ ನಾಗರಿಕರು ಮತ್ತು ಸಂಘ–ಸಂಸ್ಥೆಗಳ ಅಭಿಪ್ರಾಯ ಮತ್ತು ಸಲಹೆಗಳನ್ನು ಪಡೆಯಲು 2ನೇ ಸುತ್ತಿನ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ಜ.4ರಂದು ಮೈಸೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಬೆಳಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಮೇಯರ್ ಶಿವಕುಮಾರ್ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಗೆ ಹಾಜರಾಗಿ ತಮ್ಮ ಸಲಹೆಗಳನ್ನು ನೀಡಬೇಕೆಂದು ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಧನ

ಕಾಕಮಾಡ ಎಸ್. ಕಾರ್ಯಪ್ಪ



ಮೈಸೂರು, ಜ.3– ಮೈಸೂರಿನ ಆಲನಹಳ್ಳಿಯ ಲಲಿತ ಮಹಲ್ ನಗರದ ನಿವಾಸಿ ಹಾಗೂ ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ ಸದಸ್ಯರೂ ಆದ ಕಾಕಮಾಡ ಎಸ್. ಸುಬ್ಬಯ್ಯ ಅವರ ಪುತ್ರ ಕಾಕಮಾಡ ಎಸ್. ಕಾರ್ಯಪ್ಪ (ಕನ್ನೋಜ್) ಅವರು ಇಂದು ನಿಧನರಾದರು. ಇವರಿಗೆ 44 ವರ್ಷ ವಯಸ್ಸಾಗಿತ್ತು. ಮೃತರು ತಂದೆ ತಾಯಿ, ಪತ್ನಿ, ಸಹೋದರಿ ಹಾಗೂ ಅಪಾರ ಬಂಧು ಬಾಂಧವರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ) ಬೆಳಗ್ಗೆ 11 ಗಂಟೆಗೆ ಚಾಮುಂಡಿ ಬೆಟ್ಟದ ತಪ್ಪಲಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೆಂಕಟರಾಮು



ಮೈಸೂರು ಗಂಗೋತ್ರಿ ಬಡಾವಣೆಯ ನಿವಾಸಿ ಅಡುಗೆ ಗುತ್ತಿಗೆದಾರ ವೆಂಕಟರಾಮು(73) ಅನಾರೋಗ್ಯ ನಿಮಿತ್ತ ನಿನ್ನೆ (ಜ.2) ಸ್ವಗೃಹದಲ್ಲಿ ನಿಧನರಾದರು. ಇವರು ಪತ್ನಿ, ಪುತ್ರ, ಪುತ್ರಿ ಮತ್ತು ಅಪಾರ ಬಂಧು–ಬಳಗ ಅಗಲಿದ್ದಾರೆ. ವೆಂಕಟರಾಮು ಅವರು ರಂಗಕಲಾವಿದರಾಗಿದ್ದು, ಬಿಡುವಿನ ವೇಳೆಯಲ್ಲಿ ಸಹನಟರಾಗಿ ಅನೇಕ ಪೌರಾಣಿಕ ಹಾಗೂ ಸಾಮಾಜಿಕ ನಾಟಕಗಳಲ್ಲಿ ಅಭಿನಯಿಸಿ, ಪ್ರೇಕ್ಷಕರ ಮನ ಗೆದ್ದಿದ್ದರು. ಅಂತ್ಯಕ್ರಿಯೆಯು ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ವಿದ್ಯುತ್ ಚಿತಾಗಾರದಲ್ಲಿ ನಿನ್ನೆಯೇ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹೆಚ್.ವಿ.ಶ್ರೀನಿವಾಸ್ (ಸುರೇಶ್)



ಚಾಮರಾಜನಗರ ತಾಲೂಕು ಹೆಬ್ಬಸೂರಿನ ನಿವಾಸಿ ಹೆಚ್.ವಿ. ಶ್ರೀನಿವಾಸ್(ಸುರೇಶ್) ಅವರು ಇಂದು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಇವರಿಗೆ 74 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ(ಬುಧವಾರ) ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಕಳೆದ ವರ್ಷ 10,32,091 ಸಂಚಾರ ನಿಯಮ ಉಲ್ಲಂಘನೆ: ಒಟ್ಟು 8,28,13,700 ರೂ. ದಂಡ ವಸೂಲಿ

777 ಅಪಘಾತಗಳಲ್ಲಿ 170 ಮಂದಿ ಸಾವು, 765 ಮಂದಿಗೆ ಗಾಯ

●ಎಸ್.ಟಿ. ರವಿಕುಮಾರ್

ಮೈಸೂರು, ಜ. 3– ರಾಜ್ಯ ರಾಜಧಾನಿ ಬೆಂಗಳೂರನ್ನು ಹೊರತುಪಡಿಸಿದರೆ ಅತೀ ವೇಗವಾಗಿ ಬೆಳೆಯುತ್ತಿರುವ ಮೈಸೂರು ನಗರದಲ್ಲಿ ವರ್ಷದಿಂದ ವರ್ಷಕ್ಕೆ ಜನ ಸಂಖ್ಯೆಗನುಗುಣವಾಗಿ ವಾಹನಗಳ ಸಂಖ್ಯೆಯು ಹೆಚ್ಚುತ್ತಿರುವುದರಿಂದ ರಸ್ತೆ ಅಪಘಾತಗಳೂ ಜಾಸ್ತಿಯಾಗುತ್ತಿವೆ.

2022ರ ಜನವರಿ 1ರಿಂದ ಡಿಸೆಂಬರ್ 31ರವರೆಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಒಟ್ಟು 777 ರಸ್ತೆ ಅಪಘಾತಗಳು ಸಂಭವಿಸಿವೆ. ಅದರಲ್ಲಿ 170 ಮಂದಿ ಪ್ರಾಣ ಕಳೆದುಕೊಂಡಿದ್ದರೆ, 765 ಮಂದಿಗೆ ನಾನಾ ಗಾಯಗಳಾಗಿವೆ. ಸಾವನ್ನಪ್ಪಿದ ಪ್ರಕರಣಗಳಲ್ಲಿ ಅವರನ್ನು ಅವಲಂಬಿಸಿದ್ದ ಕುಟುಂಬಗಳು ಸಂಕಷ್ಟ ಎದುರಿಸುತ್ತಿವೆ.

ಗಾಯಗೊಂಡು ಬದುಕುಳಿದಿರುವ 765 ಮಂದಿ ಪೈಕಿ ಕೆಲವರು ಶಾಶ್ವತ ಅಂಗ ವಿಕಲರಾಗಿ ಜೀವನಪರ್ಯಂತ ನರಳುವ ಪರಿಸ್ಥಿತಿ ಎದುರಾಗಿ, ಸರ್ಕಾರ ನೀಡುವ ಮಾಸಿಕ ಪಿಂಚಣಿಯನ್ನೇ ನಂಬಿ ಬದುಕು ಸಾಗಿಸುವ ಅನಿವಾರ್ಯತೆ ಉಂಟಾಗಿದೆ. ಸಂಭವಿಸಿದ ಒಟ್ಟು 777 ಅಪಘಾತ ಪ್ರಕರಣಗಳ ಪೈಕಿ ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡಿ 23 ಮಂದಿ ಮೃತಪಟ್ಟಿದ್ದರೆ 18 ಮಂದಿ ಗಾಯಗೊಂಡಿದ್ದಾರೆ.

ಮೈಸೂರಿನ ದೇವರಾಜ ಸಂಚಾರ ಠಾಣಾ ವ್ಯಾಪ್ತಿಯಲ್ಲಿ 46 ಅಪಘಾತಗಳು ಸಂಭವಿಸಿ ಮೂವರು ಮೃತಪಟ್ಟು 50 ಮಂದಿ ಗಾಯಗೊಂಡಿದ್ದಾರೆ. ಕೆ.ಆರ್.ನಲ್ಲಿ 190 ಪ್ರಕರಣ ವರದಿಯಾಗಿದ್ದು, 51 ಮಂದಿ ಮೃತಪಟ್ಟು 181 ಮಂದಿ ಗಾಯಗೊಂಡಿದ್ದರೆ, ಎನ್.ಆರ್. ಸಂಚಾರ ಠಾಣಾ ವ್ಯಾಪ್ತಿಯಲ್ಲಿ 108 ಅಪಘಾತಗಳು ಸಂಭವಿಸಿ 20 ಮಂದಿ ಮೃತಪಟ್ಟು, 112 ಮಂದಿ ಗಾಯಗೊಂಡಿದ್ದಾರೆ.

ಸಿದ್ಧಾರ್ಥ ಸಂಚಾರ ಠಾಣಾ ಸರಹದ್ದಿನಲ್ಲಿ ಕಳೆದ ವರ್ಷ 198 ರಸ್ತೆ ಅಪಘಾತಗಳು ಸಂಭವಿಸಿದ್ದು, 54 ಮಂದಿ ಸಾವನ್ನಪ್ಪಿ 183 ಮಂದಿ ಗಾಯಗೊಂಡಿದ್ದಾರೆ. ವಿವಿ ಪುರಂ ಸಂಚಾರ ಠಾಣೆ ವ್ಯಾಪ್ತಿಯಲ್ಲಿ ಒಟ್ಟು ಅತೀ ಹೆಚ್ಚು 235 ಅಪಘಾತಗಳು ಸಂಭವಿಸಿದ್ದು, 42 ಮಂದಿ ಸಾವಿಗೀಡಾದರೆ, 193 ಮಂದಿ ಗಾಯಗೊಂಡಿದ್ದರು.

ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡಿದಾಗ ಸಂಭವಿಸಿದ ರಸ್ತೆ ಅಪಘಾತದಿಂದ ಎಲ್ಲಾ 5 ಸಂಚಾರ ಠಾಣಾ ವ್ಯಾಪ್ತಿಯಲ್ಲಿ ಒಟ್ಟು 23 ಮಂದಿ ಸಾವನ್ನಪ್ಪಿದ್ದು, 18 ಮಂದಿ ಗಾಯಗೊಂಡಿದ್ದಾರೆ. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿದ್ದರಿಂದ ಅಪಘಾತ ಸಂಭವಿಸಿದ್ದರಿಂದ ಐವರು ಪ್ರಾಣ ಕಳೆದುಕೊಂಡಿದ್ದು, 12 ಮಂದಿಗೆ ಗಾಯಗಳಾಗಿವೆ. ಅಲ್ಲದೇ ಡಿಎಲ್ ಇಲ್ಲದೆ ವಾಹನ ಚಾಲನೆ ಮಾಡುತ್ತಿದ್ದ 64, ವಿಮೆ ಮಾಡಿ ಸದ 76 ಹಾಗೂ ಅತೀ ವೇಗದ ಚಾಲನೆಯಿಂದ ಸಂಭವಿಸಿದ ಅಪಘಾತಗಳಲ್ಲಿ 78 ಮಂದಿ ಮೃತಪಟ್ಟಿದ್ದಾರೆ.

5,08,514 ಹೆಲ್ಮೆಟ್ ಕೇಸ್: ರಾಜ್ಯಾದ್ಯಂತ ಹೆಲ್ಮೆಟ್ ಧರಿಸಿಯೇ ಚಾಲನೆ ಮಾಡಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾಗ್ಯೂ ಮೈಸೂರು ನಗರದಲ್ಲಿ ಒಟ್ಟು 5,08,514 ಪ್ರಕರಣ ದಾಖಲಿಸಿ 1,94,15,400 ರೂ.ಗಳ ದಂಡ ವಸೂಲಿ ಮಾಡಲಾಗಿದೆ. ವಾಹನ ಚಲನೆ ಮಾಡುವಾಗ ಮೊಬೈಲ್ ಬಳಸಿದ 2,038 ಮಂದಿ ವಿರುದ್ಧ ಪ್ರಕರಣ ದಾಖಲಿಸಿ 2,35,000 ರೂ. ದಂಡ ವಿಧಿಸಲಾಗಿದೆ.

ಸೀಟ್ ಬೆಲ್ಟ್ ಧರಿಸದೇ ವಾಹನ ಚಾಲನೆ ಮಾಡುತ್ತಿದ್ದ 4,219 ಮಂದಿ ವಿರುದ್ಧ ಪ್ರಕರಣ ದಾಖಲಿಸಿರುವ ಸಂಚಾರ ಠಾಣೆ ಪೊಲೀಸರು, ಅವರಿಂದ 20,95,100 ರೂ. ವಸೂಲಿ ಮಾಡಿದ್ದಾರೆ. ಡಿಎಲ್ ಇಲ್ಲದೆ ವಾಹನ ಚಾಲನೆ ಮಾಡುತ್ತಿದ್ದ 1,285 ಪ್ರಕರಣ ದಾಖಲಿಸಿ ಅವರಿಂದ 16,78,500 ರೂ.ಗಳನ್ನು ದಂಡ ರೂಪದಲ್ಲಿ ವಸೂಲಿ ಮಾಡಲಾಗಿದೆ. 6,507 ವಾಹನಗಳಿಗೆ ದೋಷಪೂರಿತ ನಂಬರ್ ಪ್ಲೇಟ್ ಅಳವಡಿಸಿದ, ನೋ ಎಂಟ್ರಿ (ಪ್ರವೇಶವಿಲ್ಲ) ರಸ್ತೆಯಲ್ಲಿ ಸಂಚಾರ ಮಾಡಿದ್ದರಿಂದ 2,566 ಪ್ರಕರಣ ದಾಖಲಿಸಿ 9,50,900 ರೂ.ಗಳ ದಂಡ ವಸೂಲಿ ಮಾಡಲಾಗಿದೆ.

1,862 ಡಿಡಿ ಕೇಸ್: ಮದ್ಯಪಾನ ಮಾಡಿ ವಾಹನ ಚಾಲನೆ (Drunken Driving) ಮಾಡಿದವರ ವಿರುದ್ಧ 1,862 ಪ್ರಕರಣ ದಾಖಲಿಸಿ ನ್ಯಾಯಾಲಯದಲ್ಲಿ ಒಟ್ಟು 1,76,85,000 ರೂ. ದಂಡ ವಸೂಲಿ ಮಾಡಲಾಗಿದೆ. 18,402 ತ್ರಿಬಲ್ ರೈಡಿಂಗ್ ಕೇಸ್‌ಗಳಲ್ಲಿ 15,60,400 ರೂ. ದಂಡ ವಸೂಲಿ ಮಾಡಲಾಗಿದ್ದು, ಹೆಲ್ಮೆಟ್ ಧರಿಸದೇ ವಾಹನದ ಹಿಂದೆ ಕುಳಿತು ಸವಾರಿ ಮಾಡಿದ 2,90,971 ಪ್ರಕರಣ ದಾಖಲಿಸಿರುವ ಸಂಚಾರ ಠಾಣೆ ಪೊಲೀಸರು, ಒಟ್ಟು ಅವರಿಂದ 1,30,48,100 ರೂ. ದಂಡ ವಸೂಲಿ ಮಾಡಿದ್ದಾರೆ.



10,32,091 ಪ್ರಕರಣ ದಾಖಲು

ಕಳೆದ ವರ್ಷ ಅತೀ ವೇಗ, ಡ್ರಂಕನ್ ಡ್ರೈವಿಂಗ್, ಫುಟ್‌ಪಾತ್ ಮೇಲೆ ವಾಹನ ನಿಲುಗಡೆ, ವಾಹನ ಚಾಲನೆ ಮಾಡುವಾಗ ಮೊಬೈಲ್ ಬಳಕೆ, ಅಜಾಗರೂಕತೆ ಚಾಲನೆ, ದಾಖಲೆ ಇಲ್ಲದೆ ವಾಹನ ಬಳಕೆ ಸೇರಿದಂತೆ ಸಂಚಾರ ನಿಯಮ ಉಲ್ಲಂಘಿಸಿದ ಒಟ್ಟು 10,32,091 ಪ್ರಕರಣದ ದಾಖಲಿಸಿಕೊಂಡಿರುವ ಮೈಸೂರಿನ ದೇವರಾಜ, ಕೃಷ್ಣರಾಜ, ವಿವಿ ಪುರಂ, ನರಸಿಂಹರಾಜ ಹಾಗೂ ಸಿದ್ಧಾರ್ಥ ಸಂಚಾರ ಠಾಣೆ ಪೊಲೀಸರು ನ್ಯಾಯಾಲಯಕ್ಕೆ ಪಾವತಿಸಿರುವ 1,76,85,000 ರೂ. ಸೇರಿ ಒಟ್ಟು 8,28,13,700 ರೂ. ದಂಡ ವಸೂಲಿ ಮಾಡಿರುವುದು ದಾಖಲೆಯಾಗಿದೆ.

ಅತೀ ಹೆಚ್ಚು ಉಲ್ಲಂಘನೆ


ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧ ಕಳೆದ ವರ್ಷ ಮೈಸೂರು ನಗರದಲ್ಲಿ ಒಟ್ಟು 10,32,091 ವಿವಿಧ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಒಟ್ಟು 8,28,13,700 ರೂ.ಗಳನ್ನು ದಂಡ ರೂಪದಲ್ಲಿ ವಸೂಲಿ ಮಾಡಲಾಗಿದೆ. ಆ ಪೈಕಿ ಸ್ಥಳದಲ್ಲೇ 3,50,63,000 ರೂ., ನೋಟಿಸ್ ಜಾರಿ ಮಾಡಿ 3,00,65,700 ರೂ. ಹಾಗೂ 1,76,85,000 ರೂ. ದಂಡವನ್ನು ನ್ಯಾಯಾಲಯದಲ್ಲಿ ಪಾವತಿಸಲಾಗಿದ್ದು, ಒಟ್ಟಾರೆ ಕಳೆದ ವರ್ಷ ಒಟ್ಟು 8,28,13,700 ರೂ.ಗಳನ್ನು ದಂಡ ರೂಪದಲ್ಲಿ ಪೊಲೀಸರು ವಸೂಲಿ ಮಾಡಿದ್ದಾರೆ.

ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನ ಚಾಲನೆ: ಹೋದ ವರ್ಷ 23 ಮಂದಿ ಸಾವು

ತಲೆಗೆ ಗಾಯಗಳಾಗಿ ಬದುಕು ದುಸ್ತರವಾದವರು 18 ಮಂದಿ

ಮೈಸೂರು, ಜ.3(ಆರ್‌ಕೆ)–2022ರಲ್ಲಿ ಸಂಭವಿಸಿದ 777 ರಸ್ತೆ ಅಪಘಾತಗಳ ಪೈಕಿ ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನ ಚಾಲನೆ ಮಾಡುತ್ತಿದ್ದ ಒಟ್ಟು 23 ಮಂದಿ ಪ್ರಾಣ ಕಳೆದುಕೊಂಡು, 18 ಮಂದಿ ತಲೆಗೆ ಗಾಯಗೊಂಡು ಅವರ ಜೀವನ ದುಸ್ತರವಾಗಿದೆ.





ಹೆಲ್ಮೆಟ್ ಧರಿಸಬೇಕೆಂಬ ಕಾನೂನು ಮಾಡಿರುವುದು ಜನರ ಅಮೂಲ್ಯ ಪ್ರಾಣ ರಕ್ಷಿಸುವ ಸಲುವಾಗಿಯೇ ಹೊರತು, ಯಾರಿಗೂ ತೊಂದರೆ ಕೊಡುವ ಉದ್ದೇಶದಿಂದಲ್ಲ ಎಂದು ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ತಿಳಿಸಿದ್ದಾರೆ.

ಅಪಘಾತ ಸಂಭವಿಸುವುದು ಆಕಸ್ಮಿಕ. ಆ ವೇಳೆ ಹೆಲ್ಮೆಟ್ ಧರಿಸಿದ್ದರೆ, ಪ್ರಾಣ ರಕ್ಷಣೆಯಾಗುತ್ತದೆ ಎಂಬುದನ್ನು ಪ್ರತಿಯೊಬ್ಬರೂ ಅರ್ಥ ಮಾಡಿಕೊಳ್ಳಬೇಕು. ಕಳೆದ ವರ್ಷ ಮೈಸೂರು ನಗರದಲ್ಲಿ 23 ಮಂದಿ ಹೆಲ್ಮೆಟ್ ಧರಿಸದಿದ್ದರಿಂದ ಪ್ರಾಣ ಕಳೆದುಕೊಂಡು, 18 ಮಂದಿ ತಲೆಗೆ ಗಾಯಗಳಾಗಿ ಮಾನಸಿಕ ತೊಂದರೆಯಿಂದ ಬಳಲುವಂತಾಗಿರುವುದು ಇತರರಿಗೆ ಎಚ್ಚರಿಕೆಯ ಗಂಟೆಯಾಗಬೇಕು ಎಂದರು.

ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡುವುದು ಅಪಾಯದ ಸವಾರಿಯಾಗಿದ್ದು, ನಿಮ್ಮ ಪ್ರಾಣ ರಕ್ಷಣೆಗಾಗಿ ಹೆಲ್ಮೆಟ್ ಧರಿಸಿ, ಕಾನೂನಿಗೋಸ್ಕರ ಅಥವಾ ದಂಡ ಪಾವತಿಸಬೇಕಾಗುತ್ತದೆ ಎಂಬ ಭಯದಿಂದಲ್ಲ. ಕಳೆದ ವರ್ಷ ಹೆಲ್ಮೆಟ್ ಧರಿಸದೇ ದ್ವಿಚಕ್ರ ವಾಹನದ ಹಿಂಬದಿ ಕುಳಿತು ಸವಾರಿ ಮಾಡಿದವರ ವಿರುದ್ಧ 2,90,971 ಪ್ರಕರಣ ದಾಖಲಿಸಿ, 1,30,48,100 ರೂ. ದಂಡ ವಸೂಲಿ ಮಾಡಿರುವುದು ಜನರ ಪ್ರಾಣ ರಕ್ಷಣೆಗಾಗಿ ಎಂದು ಸಲಹೆ ನೀಡಿದರು.

ಡಿಎಲ್ ಮತ್ತು ಇನ್ಶೂರೆನ್ಸ್ ಇಲ್ಲದೆ ವಾಹನ ಚಾಲನೆ ಮಾಡುವುದೂ ಅಪರಾಧವಾಗಿದ್ದು, ಕೆಲವರು ಅಪ್ರಾಪ್ತರಿಗೆ ವಾಹನ ಕೊಟ್ಟು ಸಮಸ್ಯೆ ಎದುರಿಸುತ್ತಾರೆ. ಅಂತಹ ಪ್ರಕರಣಗಳಲ್ಲಿ ವಾಹನಗಳ ಆರ್‌ಸಿ ಮಾಲೀಕರನ್ನು ಹೊಣೆಗಾರರನ್ನಾಗಿ ಮಾಡಿ ಪ್ರಕರಣ ದಾಖಲಿಸಲಾಗುತ್ತದೆ ಎಂದು ಆಯುಕ್ತ ಬಿ.ರಮೇಶ್ ಎಚ್ಚರಿಕೆ ನೀಡಿದ್ದಾರೆ.

ಜ.8ರಂದು ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಜ.3(ಆರ್‌ಕೆ)–ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದಿಂದ ದಕ್ಷಿಣ ಕನ್ನಡ ಮತ್ತು ಕರಾವಳಿ ಜಿಲ್ಲಾ ಸಂಘಗಳ ಒಕ್ಕೂಟದ ಸಹಯೋಗದೊಂದಿಗೆ ಶ್ರೀ ಯೋಗಾ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ಜ.8ರಂದು ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ನಡೆಯಲಿರುವ ಶಿಬಿರದಲ್ಲಿ ಸಕ್ಕರೆ ಕಾಯಿಲೆ, ರಕ್ತದೊತ್ತಡ, ಆಸ್ತಮ, ಅಲರ್ಜಿ, ಅಸಿಡಿಟಿ, ಮೈಗ್ರೇನ್, ಮೂಲವ್ಯಾಧಿ, ಮುಟ್ಟಿನ ಸಮಸ್ಯೆಗಳು, ನರ ದೌರ್ಬಲ್ಯ, ಗಂಟಲು ನೋವು, ಚರ್ಮದ ತೊಂದರೆಗಳು, ಕಣ್ಣು, ಹೃದಯ ತಪಾಸಣೆಯಂತಹ ಹಲವು ರೋಗಗಳ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು. ಶ್ರೀ ಯೋಗಾ ನರಸಿಂಹಸ್ವಾಮಿ ದೇವಸ್ಥಾನದ ಮುಖ್ಯಸ್ಥ ಪ್ರೊ. ಭಾಷ್ಯಂ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯುವ ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರವನ್ನು ಶಾಸಕ ಎಲ್.ನಾಗೇಂದ್ರ ಉದ್ಘಾಟಿಸಲಿದ್ದು, ಮೇಯರ್ ಶಿವಕುಮಾರ್ ಅತಿಥಿಗಳಾಗಿ ಭಾಗವಹಿಸುವರು ಎಂದು ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ. ಲಕ್ಷ್ಮೀನಾರಾಯಣ ಶೆಣೈ ತಿಳಿಸಿದ್ದಾರೆ.

ನೇಮಕ



ಮೈಸೂರು, ಜ. 3– ಮೈಸೂರು ನಗರ ಜನತಾದಳದ (ಜಾತ್ಯಾತೀತ) ಉಪಾಧ್ಯಕ್ಷರನ್ನಾಗಿ ಕೆ.ಎನ್.ಸುನೀಲ್ ಅವರನ್ನು ಜೆಡಿಎಸ್ ನಗರಾಧ್ಯಕ್ಷ ಕೆ.ಟಿ. ಚೆಲುವೇಗೌಡ ನೇಮಕ ಮಾಡಿದ್ದಾರೆ.

ದೇಶದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆ

ಅಕ್ಕನ ಬಳಗ ಶಾಲೆಯಲ್ಲಿ ಸಾಧಕ ಶಿಕ್ಷಕಿಯರಿಗೆ ಸನ್ಮಾನ



ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆಯ ಅಂಗವಾಗಿ ಮೈಸೂರಿನ ಅಕ್ಕನ ಬಳಗ ಶಾಲೆಯಲ್ಲಿ ಮಾಜಿ ಮೇಯರ್ ಸುನಂದಾ ಪಾಲನೇತ್ರ 10 ಮಂದಿ ಶಿಕ್ಷಕಿಯರನ್ನು ಸನ್ಮಾನಿಸಿದರು. ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಚಿಂತಕ ರಘುರಾಂ ವಾಜಪೇಯಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್,ವಕೀಲರ ಸಂಘದ ಕಾರ್ಯದರ್ಶಿ ಎಸ್.ಉಮೇಶ್ ಇನ್ನಿತರಿದ್ದಾರೆ.

ಮೈಸೂರು, ಜ.3(ಆರ್‌ಕೆಬಿ)–ಭಾರತದಲ್ಲಿ ಅಕ್ಷರ ಕ್ರಾಂತಿ ಆರಂಭಿಸಿದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆಯ ಅಂಗವಾಗಿ ಮೈಸೂರಿನ ತ್ಯಾಗರಾಜ ರಸ್ತೆಯಲ್ಲಿರುವ ಅಕ್ಕನ ಬಳಗ ಶಾಲೆಯಲ್ಲಿ 10 ಮಂದಿ ಶಿಕ್ಷಕಿಯರನ್ನು ಸನ್ಮಾನಿಸಲಾಯಿತು.

ಕೃಷ್ಣರಾಜ ಯುವ ಬಳಗ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಕಡಕೊಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹೆಚ್.ಎ.ಸುಮತಿ, ಗೋಪಾಲಪುರ ಶಾಲೆಯ ನಿವೃತ್ತ ಶಿಕ್ಷಕಿ ಎಸ್. ಮಂಜುಳಾ, ಮಳವಳ್ಳಿ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯಿನಿ ಎನ್.ವಿಶಾಲಾಕ್ಷಮ್ಮ, ಅಕ್ಕನ ಬಳಗ ಶಾಲೆಯ ಮುಖ್ಯ ಶಿಕ್ಷಕಿ ಸುಗುಣಾ, ದಳವಾಯಿ ಪ್ರೌಢ ಶಾಲೆಯ ಕೆ.ಎಂ.ಕಾವ್ಯಶ್ರೀ, ಜಯಲಕ್ಷ್ಮಿ ವಿಲಾಸ ಬಾಲಕ ಪಾಠಶಾಲೆಯ ಆರ್. ಸುನಿತಾ, ಶ್ರೀಕಾಂತ ಹಿರಿಯ ಪ್ರಾಥಮಿಕ ಶಾಲೆಯ ಶಿವಮ್ಮ, ಶ್ರೀ ಕೃಷ್ಣ ಲಲಿತ ಕಲಾಮಂದಿರದ ಸೌಮ್ಯಶ್ರೀ, ಅಕ್ಕನ ಬಳಗ ಶಾಲೆಯ ನಾಗರತ್ನ, ಮೈಸೂರು ವಿವಿಯ ಡಾ.ವೈ.ಎನ್.ರಮ್ಯಾ ಅವರನ್ನು ಅವರ ಸೇವೆಯನ್ನು ಪರಿಗಣಿಸಿ ಸನ್ಮಾನಿಸಲಾಯಿತು.

ಇದಕ್ಕೂ ಮುನ್ನ ಸಾವಿತ್ರಿಬಾಯಿ ಫುಲೆ ಅವರ ಭಾವಚಿತ್ರಕ್ಕೆ ಮಾಜಿ ಮೇಯರ್ ಸುನಂದಾ ಪಾಲನೇತ್ರ ಪುಷ್ಪ ನಮನ ಸಲ್ಲಿಸಿ, ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಮಹಿಳೆಯರು ಸಮಾನತೆಯಿಂದ ಎಲ್ಲಾ ಕ್ಷೇತ್ರದಲ್ಲೂ ಮುಖ್ಯವಾಹಿನಿಗೆ ಬಂದಿದ್ದಾರೆ. ಇದಕ್ಕೆ ಸಾವಿತ್ರಿಬಾಯಿ ಫುಲೆ ಅವರ ಕೊಡುಗೆ ಸ್ಮರಣೀಯ. ಸಮಾಜದಲ್ಲಿ ಕೆಳವರ್ಗದ ಸಮುದಾಯದವರು ವಿದ್ಯಾಭ್ಯಾಸ ಪಡೆದು ಶಿಕ್ಷಣವಂತರಾಗಬೇಕು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, 9ನೇ ವರ್ಷದಲ್ಲಿ ವಿವಾಹವಾದ ಸಾವಿತ್ರಿಬಾಯಿ ಫುಲೆ ಅವರು ತಮ್ಮ ಪತಿ ಜ್ಯೋತಿಬಾಯಿ ಫುಲೆ ಮಾರ್ಗದರ್ಶನದಲ್ಲಿ ಮನೆಯಲ್ಲಿ ಶಿಕ್ಷಣ ಪಡೆದು, ನಂತರ ದೇಶದ ಮೊದಲ ಶಿಕ್ಷಕಿ ಎನಿಸಿ, ಅಕ್ಷರದವ್ವ ಎಂಬ ನಾಮಾಂಕಿತಕ್ಕೆ ಭಾಜನರಾದರು. ಶಿಕ್ಷಣದಲ್ಲಿ ತರಬೇತಿ ಪಡೆದು ಸುಮಾರು 18 ಶಾಲೆಗಳನ್ನು ತೆರೆದು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿಯಾದರು. ಮೇಲ್ವರ್ಗದವರು ಇದನ್ನು ಸಹಿಸದೆ ಮತಾಂತರದಲ್ಲಿ ತೊಡಗಿದ್ದಾರೆಂದು ಅವರ ಮೇಲೆ ಆಪಾದನೆ ಮಾಡಿ ಶಾಲೆಗಳನ್ನು ನಿಲ್ಲಿಸುವಂತೆ ಬೆದರಿಕೆ ಒಡ್ಡಿದರು. ಇದ್ಯಾವುದಕ್ಕೂ ಜಗ್ಗದೆ ಸಾವಿತ್ರಿಬಾಯಿ ಫುಲೆ ಅವರು ಮನೆ ಮನೆಗೆ ಹೋಗಿ ಹಿಂದುಳಿದ ಹೆಣ್ಣು ಮಕ್ಕಳನ್ನು ಕರೆದು ಶಿಕ್ಷಣ ನೀಡುವಲ್ಲಿ ಯಶಸ್ವಿಯಾದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಚಿಂತಕ ರಘುರಾಂ ವಾಜಪೇಯಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್, ಮೈಸೂರು ವಕೀಲರ ಸಂಘದ ಕಾರ್ಯದರ್ಶಿ ಎಸ್.ಉಮೇಶ್, ಚಾಮುಂಡಿಬೆಟ್ಟದ ಧರ್ಮದರ್ಶಿ ಸವಿತಾ ಘಾಟ್ಕೆ, ಕೃಷ್ಣರಾಜ ಯುವ ಬಳಗದ ಅಧ್ಯಕ್ಷ ನವೀನ್ ಕೆಂಪಿ, ಜೈ ಭೀಮ್ ಜನಸ್ಪಂದನಾ ವೇದಿಕೆ ಅಧ್ಯಕ್ಷ ಚೇತನ್ ಕಾಂತರಾಜು, ಸುರೇಶ್ ಗೋಲ್ಡ್, ವಿನಯ್ ಕಣಗಾಲ್, ಅಜಯ್ ಶಾಸ್ತ್ರಿ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.1.2023 ಬುಧವಾರ, ಮಳೆ ನಕ್ಷತ್ರ: ಪೂಷಾ, 30.12.2022ರಿಂದ 10.01.2023
ಶ್ರೀ ಶುಭಕೃತ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ,
ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ರೋಹಿಣಿ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಐಯ್ಯಪ್ಪ ಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಲಕ್ಷಾರ್ಚನೆ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನಂ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30 ರಿಂದ.

■ **ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು, ಐಯುಸಿಇಇ ಫೌಂಡೇಷನ್:** ಐಯುಸಿಇಇ ವಿದ್ಯಾರ್ಥಿ ವೇದಿಕೆ–2023 ಉದ್ಘಾಟನಾ ಸಮಾರಂಭ, ಮುಖ್ಯ ಅತಿಥಿಗಳು: ಡಾ.ರಾಜು ದಂಡು, ಡಾ.ರಂಜಿ ವೈದ್ಯನಾಥನ್, ಅಧ್ಯಕ್ಷತೆ: ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಗೌರವ ಅತಿಥಿಗಳು: ವಿಶ್ವನಾಥ್, ಶ್ರೀಶೈಲ ರಾಮಣ್ಣವರ್, ಸಂಪದ ಪಚೌರಿ, ಡಾ.ಬಿ. ಸದಾಶಿವೇಗೌಡ, ಸ್ಥಳ: ಶ್ರೀ ಹೆಚ್. ಕೆಂಪೇಗೌಡ ಇಂಡೋರ್ ಸ್ಪೋರ್ಟ್ಸ್ ಕಾಂಪ್ಲೆಕ್ಸ್, ವಿವಿಸಿಇ, ಬೆಳಗ್ಗೆ 9.30ಕ್ಕೆ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್:** ಡಿಜಿಟಲ್ ಫಿಜಿಯೋಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಶ್ರೀ ಶಕ್ತಿ ಮಹಾಗಣಪತಿ ದೇವಸ್ಥಾನ, ನಿಮಿಷಾಂಬ ಬಡಾವಣೆ, ಬೆಳಗ್ಗೆ 10.30ರಿಂದ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ:** ವಿದುಷಿ ಬಿ.ಕೆ.ಸೀತಾಲಕ್ಷ್ಮಿ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ದೇವಸ್ಥಾನ ಆವರಣ, ಸಂಜೆ 6 ಗಂಟೆಗೆ.

■ **ಶ್ರೀ ಮಹಾಜನ ಸಭಾ :** ಪ್ರವಚನ ಪ್ರವೀಣ ವಿದ್ವಾನ್ ಮುಡುಂಬೈ ರಾಮಾನುಜ ಶರ್ಮ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಕೃಷ್ಣಮೂರ್ತಿಪುರಂ, ಕಾಂತರಾಜ ಅರಸು ರಸ್ತೆ, ಸಂಜೆ 6.15ರಿಂದ.

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ, ಕೆ.ಆರ್. ವನಂ:** ಡಾ.ಎನ್.ಕೆ.ರಾಮಶೇಷನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಡಾ. ಕಮಲಾ ರಾಮನ್ ಅವರ ಮಂದಿರ, ಅಂಬೇಡ್ಕರ್ ರಸ್ತೆ, ಸಂಜೆ 6.15ರಿಂದ.

■ **ಶ್ರೀ ಆಂಡಾಳ್ ಮಂದಿರಂ :** ಧನುರ್ಮಾಸ ಪೂಜೆ, ವಿದ್ವಾನ್ ಎಂ.ಕೆ.ಶೆಲ್ವನಾರಾಯಣ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ಆಂಡಾಳ್ ಮಂದಿರಂ ಆವರಣ, ವಿವಿ ಮೊಹಲ್ಲಾ, ಸಂಜೆ 6ರಿಂದ 7.30ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಜಿ.ಎಸ್.ಎಸ್. ಯೋಗದ ಮಾತು, ಪ್ರಸ್ತುತಿ–ಯೋಗಶಿಕ್ಷಕ ಡಿ.ಶ್ರೀಹರಿ, 6.40 ಅರಿವಿನ ಶಿಖರ, ಗಾಯನ–ನಿತಿನ್ ರಾಜಾರಾಂ ಶಾಸ್ತ್ರಿ, ಪಿ.ಎಸ್. ರಂಜನಿ, ವ್ಯಾಖ್ಯಾನ–ಡಾ.ಹೆಚ್.ಎನ್.ಮಂಜುರಾಜ್, 9.00 ನಂದನ–ಪ್ರೇರಣಾ ಆಸ್ಪತ್ರೆ, ಮೈಸೂರು, ಪ್ರಾಯೋಜಿತ ಕಾರ್ಯಕ್ರಮ, 10.00 ವಿಶ್ವ ಮೋಹನ್‌ಭಟ್–ಮೋಹನ ವೀಣಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ಡಾ.ಕೆ.ಟಿ.ಉದಯಕಿರಣ್, ಡಾ.ರಾಜ್‌ಕುಮಾರ್, 12.45 ಕನ್ನಡಿಯಲ್ಲಿ ಕಂಡಂತೆ ಮಾಲಿಕೆಯಲ್ಲಿ ಪ್ರಹಸನ, ರಚನೆ: ಯಮುನಾ ಮೂರ್ತಿ, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 1.20 ಭಾವಗೀತೆ –ಕೆ.ಪಿ.ರೇವತಿ, 3.00 ಲಯ ಸಂಭ್ರಮ, ಪ್ರಸ್ತುತಿ–ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ, 5.30ಸಿರಿ ತೋಟಗಾರಿಕೆ–ತೋಟಗಾರಿಕೆ ಇಲಾಖೆ ಪ್ರಾಯೋಜಿತ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ, 9.30 ಯಶೋಗಾಥೆ–ಕೇಂದ್ರ ಸರ್ಕಾರದ ಯೋಜನೆಗಳ ಫಲಾನುಭವಿಗಳೊಂದಿಗೆ ಸಂದರ್ಶನ, 10.00 ಜನಪದಗೀತೆ–ಜಯಮ್ಮ ಮತ್ತು ತಂಡ, 10.30 ಸವಿನೆನಪು

ಮೈಸೂರಲ್ಲಿ 'ನಡೆದಾಡುವ ದೇವರಿಗೆ' ನಮನ



ಮೈಸೂರಿನ ಜಯಚಾಮರಾಜ ಒಡೆಯರ್ ವೃತ್ತದ(ಹಾರ್ಡಿಂಗ್ ಸರ್ಕಲ್) ಬಳಿಯ ಸೆಲ್ಫಿ ಪಾಯಿಂಟ್ ಬಳಿ ಟೀಂ ಮೈಸೂರು ತಂಡದ ಸದಸ್ಯರು ಮಂಗಳವಾರ ಸಂಜೆ ಶ್ರೀ ಸಿದ್ದೇಶ್ವರ ಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ದೀಪ ಬೆಳಗುವುದರ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.



ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯ ರಾಜೇಂದ್ರ ಭವನದಲ್ಲಿ ವಿವಿಧ ಸಂಘ ಸಂಸ್ಥೆ ಮತ್ತು ವೀರಶೈವ ಮುಖಂಡರು ನುಡಿನಮನ ಸಲ್ಲಿಸಿದರು. ಈ ವೇಳೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್, ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಇನ್ನಿತರರು ಉಪಸ್ಥಿತರಿದ್ದರು.




ಮೈಸೂರಿನ ಕುವೆಂಪುನಗರದ ಶ್ರೀ ಸಿದ್ದಗಂಗಾ ಸ್ವಾಮೀಜಿ ವೃತ್ತದಲ್ಲಿ ಮಾಜಿ ಮೇಯರ್ ಸುನಂದಾ ಪಾಲನೇತ್ರ ನೇತೃತ್ವದಲ್ಲಿ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರಿಗೆ ಭಕ್ತಿಪೂರ್ವಕ ನಮನ ಸಲ್ಲಿಸಲಾಯಿತು. ಈ ವೇಳೆ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್, ಮುಖಂಡರಾದ ಲೋಕೇಶ್, ಗಿರೀಶ್, ಜಂಯಗೌಡ, ಶಿವಕುಮಾರ್ ಹಾಗೂ ನಿವಾಸಿಗಳು ಇನ್ನಿತರರಿದ್ದರು.



ಶ್ರೀ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮಿಗಳವರ ನಿಧನದ ಹಿನ್ನೆಲೆಯಲ್ಲಿ ಮೈಸೂರು ಶ್ರೀ ಸುತ್ತೂರು ಮಠದ ಭಕ್ತವೃಂದದ ವತಿಯಿಂದ ವಾರ್ಡ್ ನಂಬರ್ 50ರ ವ್ಯಾಪ್ತಿಯ ಶಾಂತಲ ವೃತ್ತದಲ್ಲಿ ಶ್ರದ್ಧಾಂಜಲಿ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಪಾಲಿಕೆ ಸದಸ್ಯ ಲೋಕೇಶ್ ಪಿಯಾ, ಮಾಜಿ ಸದಸ್ಯ ಜಾಕೀರ್ ಪಾಷ, ಹಿಂದುಳಿದ ವರ್ಗಗಳ ಅಧ್ಯಕ್ಷ ಶಿವಮಲ್ಲು, ಎನ್‌ಎಸ್‌ಯುಐನ ಪ್ರಶಾಂತ್ ಆರ್ಯ, ಮುಖಂಡರಾದ ಗೌರಿಶಂಕರ್,ನಾಗೇಶ್ ನಾಯಕ, ವಿಶ್ವನಾಥ್(ವಿಶ್ವ), ಶೇಖರ್, ಸತೀಶ್, ರವಿಶಂಕರ್, ವಿಜಿ, ಉಮೇಶ್, ನಾಸೀರ್ ಮತ್ತಿತರರು ಉಪಸ್ಥಿತರಿದ್ದರು.

ಸಿದ್ದೇಶ್ವರ ಶ್ರೀಗಳ ನಿಧನಕ್ಕೆ ಕುರುಬರ ಸಂಘ ಸಂತಾಪ

ಮೈಸೂರು, ಜ.3(ಆರ್‌ಕೆಬಿ)– ತಮ್ಮ ಸರಳ ಜೀವನ ಹಾಗೂ ಪ್ರವಚನದ ಮೂಲಕ ನಡೆದಾಡುವ ನಿಜ ದೇವರು ಎಂದೇ ಭಕ್ತರಿಂದ ಕರೆಯುತ್ತಿದ್ದ ವಿಜಯಪುರ ಜ್ಞಾನ ಯೋಗಾನಂದ ಸಿದ್ದೇಶ್ವರ ಸ್ವಾಮೀಜಿ ಅವರ ನಿಧನದಿಂದ ಅತೀವ ದುಃಖವಾಗಿದೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಸಂತಾಪ ಸೂಚಿಸಿದ್ದಾರೆ.



ವಿಜಯಪುರದ ಸಿದ್ದೇಶ್ವರ ಸ್ವಾಮಿಗಳು ನಡೆದಾಡುವ ವಿಶ್ವಕೋಶ. ಅವರ ಜ್ಞಾನ ಬೋಧನೆಯ ಲಾಭ ಪಡೆದು ಸನ್ಮಾರ್ಗದಲ್ಲಿ ನಡೆಯಬೇಕು. ಇವರ ಜ್ಞಾನ ಖ್ಯಾತಿ ದೇಶ–ವಿದೇಶಗಳಲ್ಲಿ ಪಸರಿಸಿದೆ. ಇಂತಹ ಮಹಾನ್ ಜ್ಞಾನಿಯ ಜ್ಞಾನ ಸುಧೆಯ ಬೆಳಕಿನಲ್ಲಿ ಎಲ್ಲರೂ ಮುನ್ನಡೆಯುವ ಅಗತ್ಯವಿದ್ದು, ಇದುವೇ ಅವರಿಗೆ ನಾವು ಸಲ್ಲಿಸುವ ನಿಜವಾದ ಗೌರವ. ಸಿದ್ದೇಶ್ವರ ಸ್ವಾಮೀಜಿ ಅವರಂತಹ ಸರಳ ವ್ಯಕ್ತಿಯನ್ನು ಎಲ್ಲಿಯೂ ನೋಡಿಲ್ಲ, ಜ್ಞಾನದಲ್ಲಿ ಬೃಹತ್ ಪರ್ವತದಂತಿದ್ದರು. ಸ್ವಾಭಿಮಾನದಿಂದ ಪದ್ಮಶ್ರೀ ಪ್ರಶಸ್ತಿಯನ್ನೇ ತಿರಸ್ಕರಿಸಿದರು. ಪರಮ ಪೂಜ್ಯ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳು ಆಧ್ಯಾತ್ಮದ ಬಗ್ಗೆ ತುಂಬ ಆಳವಾದ ಅಧ್ಯಯನ ಚಿಂತನೆಗಳನ್ನು ನಡೆಸಿರುವ ಶ್ರೇಷ್ಠ ಅನುಭಾವಿಗಳೂ ಮಧುರ ಸ್ವಭಾವದವರೂ ಆಗಿದ್ದ ಅವರು, ಕನ್ನಡ, ಸಂಸ್ಕೃತ, ಇಂಗ್ಲಿಷ್, ಮರಾಠಿ ಮತ್ತು ಹಿಂದಿ ಭಾಷೆಗಳಲ್ಲಿ ನಿಷ್ಣಾತರು. ಅತ್ಯಂತ ಸರಳ ಸಜ್ಜನಿಕೆಯ ಸಾಕಾರಮೂರ್ತಿ, ನನ್ನದು–ತನ್ನದೆಂಬ ಮಮಕಾರ ತೊರೆದ ಮಹಾಪುರುಷರು. ಪ್ರತಿಯೊಬ್ಬರೂ ಸರಿದಾರಿಯಲ್ಲಿ ಜೀವನ ಸಾಗಿಸಲು ಸಿದ್ದೇಶ್ವರ ಸ್ವಾಮಿಗಳ ಮಾರ್ಗ ದರ್ಶನ ಅನುಸರಿಸಬೇಕು ಎಂದು ತಮ್ಮ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.



ಮೈಸೂರಿನ ವಿವಿಧ ಬಡಾವಣೆಗಳ ವೀರಶೈವ ಲಿಂಗಾಯತ ಒಕ್ಕೂಟದ ಪದಾಧಿಕಾರಿಗಳು ಸಿದ್ದೇಶ್ವರ ಶ್ರೀಗಳಿಗೆ ಭಾವಪೂರ್ಣ ನಮನ ಸಲ್ಲಿಸಿದರು.



ಮೈಸೂರು ಜೆ.ಪಿ.ನಗರ ಶರಣರ ವೇದಿಕೆ, ಜೆ.ಪಿ.ನಗರದ ನಿವಾಸಿಗಳು ಜೆ.ಪಿ.ನಗರದ ವೃತ್ತದಲ್ಲಿ ಸಿದ್ದೇಶ್ವರ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಶ್ರದ್ಧಾಂಜಲಿ ಸಲ್ಲಿಸಿದರು.



ಮೈಸೂರಿನ ಮೇಟಗಳ್ಳಿಯ ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಮೌನಾಚರಣೆ ಮೂಲಕ ಶ್ರೀಗಳಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಮುಖ್ಯಶಿಕ್ಷಕ ಎನ್.ಪಿ.ಸತೀಶ್, ಶಿಕ್ಷಕರಾದ ಶಿವಸ್ವಾಮಿ, ನಟೇಶ್ ಸೇರಿದಂತೆ ಶಾಲಾ ವಿದ್ಯಾರ್ಥಿ ವೃಂದ, ಬೋಧಕ ವೃಂದದವರು ಉಪಸ್ಥಿತರಿದ್ದರು.

ಶ್ರೀಗಳಿಗೆ ಜೆಎಸ್‌ಎಸ್ ಆಯುರ್ವೇದ ಮೆಡಿಕಲ್ ಕಾಲೇಜಲ್ಲಿ ಶ್ರದ್ಧಾಂಜಲಿ



ಮೈಸೂರು, ಜ.3– ಮಹಾಮಾನವತಾವಾದಿ ಕನ್ನಡ ನಾಡು ಕಂಡ ಅಪರೂಪದ ಸಂತ, ಆಧ್ಯಾತ್ಮಿಕ ಚಿಂತಕ, ಅದ್ಭುತ ಪ್ರವಚನಕಾರರಾದ ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮಿಗಳವರ ನಿಧನ ಸಮಸ್ತ ನಾಡಿಗೆ ಅತೀವ ದುಃಖವನ್ನು ಉಂಟು ಮಾಡಿದೆ. ನುಡಿದಂತೆ ನಡೆಯುತ್ತಿದ್ದ ಶ್ರೀಗಳು ತಮ್ಮ ಅರ್ಥಗರ್ಭಿತ ಮಾತುಗಳಿಂದ ಮನೆ, ಮನಗಳಲ್ಲಿ ಶಾಶ್ವತ ಸ್ಥಾನವನ್ನು ಗಳಿಸಿದ್ದಾರೆ ಎಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಜೆಎಸ್‌ಎಸ್ ಆಯುರ್ವೇದ ಮೆಡಿಕಲ್ ಕಾಲೇಜಿನಲ್ಲಿ ನುಡಿನಮನ ಸಲ್ಲಿಸಲಾಯಿತು.

ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಉದ್ಘಾಟನೆಯು ಜ್ಞಾನ ದಾಸೋಹಿಗಳ ಅಮೃತ ಹಸ್ತದಿಂದ ನೆರವೇರಿತ್ತು. ಅಲ್ಲದೆ ಶ್ರೀಗಳು ವೈದ್ಯಕೀಯ ವಿದ್ಯಾರ್ಥಿಗಳಿಗೆ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಮನ ಶ್ಚೇತನ ಶಿಬಿರದ ಪ್ರವಚನಗಳಿಂದ ಜೀವಸೆಲೆಯ ಸ್ಫೂರ್ತಿಯನ್ನು ತುಂಬಿದ್ದರು. ಒಬ್ಬ ಶ್ರೇಷ್ಠ ಗುರುವರ್ಯರನ್ನು ಕಳೆದುಕೊಂಡ ದುಃಖ ಎಲ್ಲರಲ್ಲಿದೆ. ಈ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಈ ನಾಡಿಗೆ ಕರುಣಿಸಲಿ ಎಂದು ಪ್ರಾರ್ಥಿಸುವುದಾಗಿ ಕಾಲೇಜಿನ ಸಿಬ್ಬಂದಿ ತಿಳಿಸಿದರು. ಈ ಸಂದರ್ಭದಲ್ಲಿ ಕಾಲೇಜು ಹಾಗೂ ಆಸ್ಪತ್ರೆ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ವೈದ್ಯ ವೃಂದವು ಶ್ರೀಗಳಿಗೆ ಶ್ರದ್ಧಾಂಜಲಿ ಸಲ್ಲಿಸಿದರು.



ಕೆಎಸ್‌ಆರ್‌ಟಿಸಿ ಮೈಸೂರು ಬನ್ನಿಮಂಟಪ ಘಟಕದಲ್ಲಿ ಕೆಎಸ್‌ಆರ್‌ಟಿಸಿ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರೀಗಳ ಭಾವಚಿತ್ರಕ್ಕೆ ಕೆಎಸ್‌ಆರ್‌ಟಿಸಿ ನೌಕರರು ಪುಷ್ಪಾರ್ಚನೆ ಸಲ್ಲಿಸಿ, ಶ್ರದ್ಧಾಂಜಲಿ ಅರ್ಪಿಸಿದರು.



ಪ್ರಜ್ಞಾವಂತ ನಾಗರಿಕ ವೇದಿಕೆ ಹಾಗೂ ಸಿದ್ದೇಶ್ವರ ಶ್ರೀಗಳ ಭಕ್ತ ವೃಂದದ ವತಿಯಿಂದ ಮೈಸೂರು ಕೋರ್ಟ್ ಮುಂಭಾಗ ಶ್ರೀಗಳ ಭಾವಚಿತ್ರಕ್ಕೆ ಮೇಣದಬತ್ತಿ ಬೆಳಗಿಸಿ, ಸಂತಾಪ ಸಲ್ಲಿಸಲಾಯಿತು. ಈ ವೇಳೆ ಕಾರ್ಪೊರೇಟರ್ ಮಾ.ವಿ.ರಾಮಪ್ರಸಾದ್, ಕಸಾಪ ಮಾಜಿ ಜಿಲ್ಲಾಧ್ಯಕ್ಷ ಡಾ.ವೈ.ಡಿ.ರಾಜಣ್ಣ, ಹೋಟೆಲ್ ಮಾಲೀಕರ ಸಂಘದ ಜಿಲ್ಲಾಧ್ಯಕ್ಷ ಸಿ.ನಾರಾಯಣಗೌಡ, ಇಳೈ ಆಳ್ವಾರ್ ಸ್ವಾಮೀಜಿ, ನಗರಪಾಲಿಕೆ ನಾಮನಿರ್ದೇಶಿತ ಸದಸ್ಯ ಜಗದೀಶ್, ಮೈಸೂರು ನಗರ ಬಿಜೆಪಿ ಹಿಂದುಳಿದ ವರ್ಗದ ಮೋರ್ಚಾದ ಅಧ್ಯಕ್ಷ ಜೋಗಿ ಮಂಜು, ಬಿಜೆಪಿ ಯುವ ಮೋರ್ಚಾ ನಗರ ಪ್ರಧಾನ ಕಾರ್ಯದರ್ಶಿ ಸಂತೋಷ್, ಚಾಮುಂಡೇಶ್ವರಿ ಬಿಜೆಪಿ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಸಂತೋಷ್ ಕುಮಾರ್ ಪಾಲ್, ಪ್ರಜ್ಞಾವಂತ ನಾಗರಿಕ ವೇದಿಕೆ ಅಧ್ಯಕ್ಷ ಕಡಕೊಳ ಜಗದೀಶ್, ಶಿವಸ್ವಾಮಿ, ಮಹದೇವಪ್ರಸಾದ್, ಪಂಚಾಕ್ಷರಿ, ಲಿಂಗರಾಜು, ಎಸ್.ಎನ್.ರಾಜೇಶ್, ಶಿವಕುಮಾರ್, ರಾಘವೇಂದ್ರ, ನವೀನ್ ಕೆಂಪಿ ಹಾಗೂ ಇನ್ನಿತರರಿದ್ದರು.

ಮೈಸೂರು, ಜ.3 (ಎಸ್‌ಪಿಎನ್/ಜಿಎ)–ಸೋಮವಾರ ಸಂಜೆ ಅಸ್ತಂಗತರಾದ ನಿರ್ಮೋಹಿ, ನಡೆದಾಡುವ ದೇವರು ಎಂದೇ ಪ್ರಸಿದ್ಧರಾಗಿದ್ದ ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರಿಗೆ ಮೈಸೂರಿನ ನಾಗರಿಕರು, ಮತ್ತು ವಿವಿಧ ಸಂಘ–ಸಂಸ್ಥೆಗಳು ನಗರದಾದ್ಯಂತ ಶ್ರದ್ಧಾಂಜಲಿ ಸಲ್ಲಿಸಿದವು.

ತಮ್ಮ ಸಾರ್ಥಕ ಜೀವನ ಶೈಲಿ ಮತ್ತು ಪ್ರವಚನಗಳ ಮೂಲಕ ರಾಷ್ಟ್ರಮಟ್ಟದಲ್ಲಿ ಭಕ್ತಗಣ ಹೊಂದಿದ್ದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ನಿಧನಕ್ಕೆ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಸೇರಿದಂತೆ ಎಲ್ಲರೂ ದೇಶದಾದ್ಯಂತ ಕಂಬನಿ ಮಿಡಿದಿದ್ದು, ಮೈಸೂರಿನಲ್ಲಿಯೂ ನಾಗರಿಕರು ಮತ್ತು ವಿವಿಧ ಸಂಘ–ಸಂಸ್ಥೆ ವತಿಯಿಂದ ದೀಪ ಬೆಳಗಿ ನುಡಿ ನಮನ ಸಲ್ಲಿಸಲಾಯಿತು.

ನಗರದ ಜೆಎಸ್‌ಎಸ್ ಆಸ್ಪತ್ರೆಯ ರಾಜೇಂದ್ರ ಭವನದಲ್ಲಿ ವಿವಿಧ ಸಂಘ ಸಂಸ್ಥೆ ಮತ್ತು ವೀರಶೈವ ಮುಖಂಡರು ನುಡಿ ನಮನ ಸಲ್ಲಿಸಿದರು. ಈ ವೇಳೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಸಿದ್ದೇಶ್ವರ ಸ್ವಾಮೀಜಿ ಅವರು ದೇಹ ತ್ಯಾಗ ಮಾತ್ರ ಮಾಡಿದ್ದಾರೆ. ಆದರೆ, ಅವರ ಆದರ್ಶಗಳನ್ನು ನಮ್ಮಲ್ಲಿಯೇ ಬಿಟ್ಟು ಹೋಗಿದ್ದಾರೆ. ಅವರ ಆದರ್ಶಗಳನ್ನು ಪಾಲನೆ ಮಾಡುವ ಮೂಲಕ ಅವರಿಗೆ ನಾವು ನಮನ ಸಲ್ಲಿಸಬೇಕಿದೆ ಎಂದರು.

ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಮಾತನಾಡಿ, ಶ್ರೀಗಳ ಪ್ರವಚನವನ್ನು ಜೀವನಕ್ಕೆ ಅಳವಡಿಸಿಕೊಳ್ಳುವ ಮೂಲಕ ನಾವು ಅವರಿಗೆ ನಮನ ಸಲ್ಲಿಸಬೇಕು. ಬಸವಣ್ಣ ಅವರ ನಿಜವಾದ ಆದರ್ಶವನ್ನು ಪಾಲಿಸುವ ಮೂಲಕ ಅವರು ನಿಜವಾದ ಬಸವಣ್ಣ ಆಗಿದ್ದರು. ಮೈಸೂರಿನಲ್ಲಿ ಅವರು ಓಡಾಡಿದ್ದಾರೆ. ನಗರದಲ್ಲಿ ಅವರ ಹೆಸರಿನಲ್ಲಿ ಗ್ರಂಥಾಲಯ ಅಥವಾ ವೃತ್ತ ನಿರ್ಮಿಸಿ ಮುಂದಿನ ಪೀಳಿಗೆಗೆ ಅವರ ಬಗ್ಗೆ ತಿಳಿಸುವ ಕಾರ್ಯ ಮಾಡಬೇಕಿದೆ ಎಂದರು.

ಮಾಜಿ ಮೇಯರ್ ಹಾಗೂ ನಗರಪಾಲಿಕೆ ಸದಸ್ಯೆ ಸುನಂದಾ ಪಾಲನೇತ್ರ ಮಾತನಾಡಿ, ಕಳೆದ ಎಂಟು ತಿಂಗಳ ಹಿಂದಷ್ಟೇ ಅವರ ಆಶ್ರಮಕ್ಕೆ ಭೇಟಿ ನೀಡಿದ್ದೆ. ಅಲ್ಲಿ ಈ ಮಹಾಪುರುಷನ ಪ್ರವಚನವನ್ನು ಕೇಳಿದ ನಾವೇ ಧನ್ಯರು ಎಂದು ಸ್ಮರಿಸಿದರು.

ನಗರದ ಜಯಚಾಮರಾಜ ಒಡೆಯರ್ ವೃತ್ತದ(ಹಾರ್ಡಿಂಗ್ ಸರ್ಕಲ್) ಬಳಿಯ ಸೆಲ್ಫಿ ಪಾಯಿಂಟ್ ಬಳಿ ಟೀಂ ಮೈಸೂರು ತಂಡದ ಸದಸ್ಯರು ಶ್ರೀ ಸಿದ್ದೇಶ್ವರ ಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ದೀಪ ಬೆಳಗುವುದರ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು. ಈ ವೇಳೆ ನಗರಪಾಲಿಕೆ ಸದಸ್ಯ ಸತೀಶ್, ಮೃಗಾಲಯ ಪ್ರಾಧಿಕಾರದ ಸದಸ್ಯ ಗೋಕುಲ್ ಗೋವರ್ಧನ್, ಟೀಂ ಮೈಸೂರು ಸಹ ಸಂಚಾಲಕ ಯಶವಂತ್, ಅನಂತ್, ಲಿಂಗರಾಜ್, ಪ್ರಸನ್ನ, ಸಂತೋಷ್, ದೀಪಾ ಸಂತೋಷ್, ಹರೀಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಶ್ರೀ ಶಿವಕುಮಾರಸ್ವಾಮೀಜಿ ವೃತ್ತ: ಮೈಸೂರು ಕುವೆಂಪುನಗರ ವಿಶ್ವಮಾನವ ಜೋಡಿ ರಸ್ತೆಯ ಶ್ರೀ ಶಿವಕುಮಾರಸ್ವಾಮೀಜಿ ವೃತ್ತದ ಬಳಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಭಕ್ತವೃಂದ ಮತ್ತು ಕುವೆಂಪುನಗರ ನಿವಾಸಿಗಳ ಸಹಯೋಗದೊಂದಿಗೆ ಶ್ರೀಗಳಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ವೇಳೆ ಮಾಜಿ ಮೇಯರ್ ಸುನಂದಾ ಪಾಲನೇತ್ರ, ಕುವೆಂಪು ನಗರ ನಿವಾಸಿಗಳಾದ ಎನ್.ಜಿ.ಗಿರೀಶ್, ಹಿರಿಯ ಛಾಯಾಗ್ರಾಹಕ ಎಸ್.ಎಂ.ಜಂಬುಕೇಶ್ವರ್, ನಗರ ಪಾಲಿಕೆ ಮಾಜಿ ಸದಸ್ಯ ಹಾಗೂ ಜೆಡಿಎಸ್ ಮುಖಂಡ ಕೆ.ವಿ.ಮಲ್ಲೇಶ್, ಗುರುಸ್ವಾಮಿ, ಶಿಕ್ಷಕ ಬಿ.ಆರ್.ಶಿವಕುಮಾರ್, ಕಲ್ಯಾಣಿ ನಟರಾಜಪ್ಪ, ಜಂಯಗೌಡ, ಕಾಳಿಂಗಪ್ಪ, ಕೆಂಚಪ್ಪ, ಜಯದೇವ ಕುಮಾರ್, ಶಿವಶಂಕರ್, ಪ್ರಸನ್ನ ಮೂರ್ತಿ, ಚಿದಾನಂದ ಅವರುಗಳು ಉಪಸ್ಥಿತರಿದ್ದರು.

ಜೆ.ಪಿ.ನಗರ ವೃತ್ತ: ಶತಮಾನದ ಸಂತ, ಖ್ಯಾತ ಪ್ರವಚನಕಾರ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ನಿಧನಕ್ಕೆ ಮೈಸೂರು ಜೆ.ಪಿ.ನಗರ ಶರಣರ ವೇದಿಕೆ ಹಾಗೂ ಜೆ.ಪಿ.ನಗರದ ನಿವಾಸಿಗಳು ಜೆ.ಪಿ.ನಗರದ ವೃತ್ತದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಈ ವೇಳೆ ತೀರ್ಥಪ್ರಸಾದ್, ಸತ್ಯನಾರಾಯಣ ಮೂರ್ತಿ, ಎಂ.ಎಚ್.ಚಂದ್ರಶೇಖರ್, ಇಂಡೊಳ್ ಮಹದೇವಸ್ವಾಮಿ, ಎಸ್.ಪುಟ್ಟರಾಜಪ್ಪ, ಸದಾಶಿವು, ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್, ಸುಧಾಕರ್, ವಿಜಯ್‌ಕುಮಾರ್, ನಾಗರಾಜು, ವಿ.ಗಿರೀಶ್, ಪರಶಿವಮೂರ್ತಿ, ಕಾಂತರಾಜು ಮತ್ತು ಇತರರಿದ್ದರು.

ಜಿಲ್ಲಾ ಪತ್ರಕರ್ತರ ಭವನ: ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮೈಸೂರು ಶರಣ ಮಂಡಳಿ ಹಾಗೂ ಮೈಸೂರು ಕನ್ನಡ ವೇದಿಕೆ ವತಿಯಿಂದ ಶ್ರೀ ಸಿದ್ದೇಶ್ವರ ಸ್ವಾಮೀಜಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮೂಗೂರು ನಂಜುಂಡಸ್ವಾಮಿ, ಬಾಲಕೃಷ್ಣ, ರಘುರಾಮ್ ವಾಜಪೇಯಿ, ಕಾಂಗ್ರೆಸ್ ಮುಖಂಡ ವಿನಯ್ ಕುಣಿಗಲ್ ಮತ್ತು ಶರಣ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

ಕೆಎಸ್‌ಆರ್‌ಟಿಸಿ ನೌಕರರು: ಕೆಎಸ್‌ಆರ್‌ಟಿಸಿ ಮೈಸೂರು ಬನ್ನಿಮಂಟಪ ಘಟಕದಲ್ಲಿ ಕೆಎಸ್‌ಆರ್‌ಟಿಸಿ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶತಮಾನದ ಸಂತ, ನಡೆದಾಡುವ ದೇವರು ಎಂದೇ ಪ್ರಸಿದ್ಧರಾಗಿದ್ದ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಭಾವಚಿತ್ರಕ್ಕೆ ಕೆಎಸ್‌ಆರ್‌ಟಿಸಿ ನೌಕರರು ಪುಷ್ಪಾರ್ಚನೆ ಸಲ್ಲಿಸಿ, ಶ್ರದ್ಧಾಂಜಲಿ ಸಲ್ಲಿಸಿದರು.

ಮಹಾಲಿಂಗೇಶ್ವರ ಪ್ರೌಢಶಾಲೆಯಲ್ಲಿ ಶ್ರೀಗಳಿಗೆ ಶ್ರದ್ಧಾಂಜಲಿ: ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಉಪ್ಪನಹಳ್ಳಿ ಮಹಾಲಿಂಗೇಶ್ವರ ಪ್ರೌಢಶಾಲೆಯಲ್ಲಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ನಿಧನ ಹಿನ್ನೆಲೆಯಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಅಲ್ಲಿನ ವಿದ್ಯಾರ್ಥಿಗಳು, ಶಿಕ್ಷಕರು ಶ್ರದ್ಧಾಂಜಲಿ ಅರ್ಪಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಮೈಸೂರು ಕನ್ನಡ ವೇದಿಕೆ ಹಾಗೂ ಮೈಸೂರು ಶರಣ ಮಂಡಳಿ ಸೇರಿದಂತೆ ವಿವಿಧ ಸಂಘಟನೆಗಳ ವತಿಯಿಂದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರಿಗೆ ಶ್ರದ್ಧಾಂಜಲಿ ಸಭೆ ನಡೆಯಿತು. ಈ ವೇಳೆ ಕಾಂಗ್ರೆಸ್ ಮುಖಂಡ ನವೀನ್‌ಕುಮಾರ್, ಬಾಲಕೃಷ್ಣ, ಮೂಗೂರು ನಂಜುಂಡಸ್ವಾಮಿ ಇನ್ನಿತರರು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.



ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮಿಗಳ ನಿಧನದ ಹಿನ್ನೆಲೆಯಲ್ಲಿ ಸುತ್ತೂರು ಜೆಎಸ್‌ಎಸ್ ಸಂಸ್ಥೆಯ ಮುಖ್ಯಸ್ಥರು, ಶಾಲೆಯ ಶಿಕ್ಷಕರು ಹಾಗೂ ಸಹಸ್ರಾರು ವಿದ್ಯಾರ್ಥಿಗಳು ಮೌನ ನಮನ ಸಲ್ಲಿಸಿದರು.



ಶ್ರೀ ಸಿದ್ದೇಶ್ವರ ಶ್ರೀಗಳ ನಿಧನಕ್ಕೆ ಪಡುವಾರಹಳ್ಳಿಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಗ್ರಾಮಾಭ್ಯುದಯ ಟ್ರಸ್ಟ್ ಅಧ್ಯಕ್ಷ ಎಂ.ಮಹದೇವಸ್ವಾಮಿ, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ಎಂ.ಭೈರಪ್ಪ, ನಿರ್ದೇಶಕರಾದ ಈ.ಲೋಕೇಶ್ವರ, ಎಂ.ಸೋಮಣ್ಣ, ಸಿ.ಡಿ.ಕುಮಾರ್, ಬಿ.ಕುಮಾರ್, ರಾಘವ್ ಗೌಡ, ಉದಯ್, ಪ್ರಕಾಶ್, ಯೋಗೇಶ್, ಮರಿಸ್ವಾಮಿ, ನರಸಿಂಹ ಇದ್ದರು.



ಶ್ರೀ ಸಿದ್ದೇಶ್ವರ ಸ್ವಾಮಿಗಳಿಗೆ ಚಾಮುಂಡೇಶ್ವರಿ ಯುವಕರ ಬಳಗದಿಂದ ಚಾಮುಂಡಿಬೆಟ್ಟದ ಪಾದದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಈ ವೇಳೆ ಜೆಡಿಎಸ್ ನಗರ ಉಪಾಧ್ಯಕ್ಷ ಜಿ.ಎನ್.ಯದುನಂದನ್, ನಂದೀಶ್, ರಮೇಶ್, ಸಂತೋಷ್, ಚಂದ್ರು, ಕಲಾವತಿ, ಆಟೋ ಬೊಮ್ಮಾಯಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ಬೋಗಾದಿ ರೈಲ್ವೆ ಬಡಾವಣೆಯಲ್ಲಿರುವ ಶರಣು ವಿಶ್ವವಚನ ಫೌಂಡೇಶನ್ ವತಿಯಿಂದ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಶ್ರದ್ಧಾಂಜಲಿ ಅರ್ಪಿಸಲಾಯಿತು. ಈ ವೇಳೆ ವಚನ ಕುಮಾರಸ್ವಾಮಿ, ಅನಿತಾ ನಾಗರಾಜ್, ಕೇಂದ್ರೀಯ ಸಂಚಾಲಕ ವಿ.ಲಿಂಗಣ್ಣ, ನಾಗರಾಜ್ ಉಪಸ್ಥಿತರಿದ್ದರು.



ಮೈಸೂರು ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಮಂಗಳವಾರ ಶಾಲಾ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.



ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಉಪ್ಪನಹಳ್ಳಿ ಮಹಾಲಿಂಗೇಶ್ವರ ಪ್ರೌಢಶಾಲೆಯಲ್ಲಿ ಮಂಗಳವಾರ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಅಲ್ಲಿನ ವಿದ್ಯಾರ್ಥಿಗಳು, ಶಿಕ್ಷಕರು ಹೃದಯಪೂರ್ವಕ ಶ್ರದ್ಧಾಂಜಲಿ ಅರ್ಪಿಸಿದರು.

ನಕ್ಕರೆ ಅದೇ ಸ್ವರ್ಗ

ಗಂಡ : ಏನೇ ಕಾಫಿ ಮಾಡ್ಕೋಡ್ತೀಯಾ, ಇಲ್ಲ ಹೋಟೆಲ್‌ಗೆ ಹೋಗ್ಲೋ?
ಹೆಂಡತಿ : ಒಂದು ಐದು ನಿಮಿಷ ಇರೋಕಾಗಲ್ವೇ?
ಗಂಡ : ಸರಿ, ಹಾಗಾದ್ರೆ ಮಾಡ್ಕೋಡ್ತೀಯಾ ಅನ್ನು
ಹೆಂಡತಿ : ಅಲ್ಲ, ನಾನೂ ನಿಮ್ಮ ಜೊತೆ ಬರೋಣ ಅಂತ!

ಮೈಸೂರು ಮಿತ್ರ

ಬುಧವಾರ, 4 ಜನವರಿ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........


ಪ್ರತಿಯೊಬ್ಬರ ಜೀವನದಲ್ಲಿಯೂ ಅಮೂಲ್ಯ ಘಳಿಗೆಗಳಿರುತ್ತವೆ. ಅದರಲ್ಲೂ ನಿಮ್ಮ ಸಾಧನೆಗಳನ್ನು ಮತ್ತೊಬ್ಬರೊಂದಿಗೆ ಹಂಚಿಕೊಳ್ಳುವ ಸಮಯ ಎಂದಾದರೂ ಒಂದು ದಿನ ಬಂದೇ ಬರುತ್ತದೆ. –ರ್‍ಯಾಂಡಿಪಾಶ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಣ್ಣರಿಯದಿದ್ದರೂ ಕರುಳರಿಯದೇ?

ನಿಮ್ಮ ಪತ್ರಗಳು

ಪ್ರವಚನಗಳ ಮೂಲಕ ಜನಮನವನ್ನು ಗೆದ್ದಿದ್ದ ಶ್ರೀ ಸಿದ್ದೇಶ್ವರ ಶ್ರೀಗಳು!

ಮಾನ್ಯರೆ,



ವಿಜಯಪುರದ ಜ್ಞಾನ ಯೋಗಾಶ್ರಮದ ಪರಮಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಆಧ್ಯಾತ್ಮದ ಬಗ್ಗೆ ತುಂಬಾ ಆಳವಾದ ಅಧ್ಯಯನ ಮತ್ತು ಚಿಂತನೆಗಳನ್ನು ನಡೆಸಿರುವ ಶ್ರೇಷ್ಠ ಸಂತ, ಅನುಭವಿ ಹಾಗೂ ಮಧುರ ಸ್ವಭಾವದವರು, ಇವರು ಜೀವಂತ ದೇವರು, ಸಾಗರದಷ್ಟು ಜ್ಞಾನವನ್ನು ಹೊಂದಿದ್ದರು, ಅತ್ಯಂತ ಸರಳ, ಸಜ್ಜನಿಕೆಯ ಸಾಕಾರ ಮೂರ್ತಿ, ನುಡಿದಂತೆ ನಡೆದ, ನಡೆದಂತೆ ನುಡಿದ ನಡೆದಾಡುವ ದೇವರಿವರು, ನನ್ನದು, ತನ್ನದು ಎಂಬ ಮಮಕಾರವನ್ನೇ ತೊರೆದ ಮಹಾಪುರುಷರೇ ಶ್ರೀ ಸಿದ್ದೇಶ್ವರ ಸ್ವಾಮಿಗಳು, ಇವರು ಸಂತರಷ್ಟೇ ಅಲ್ಲ! ಜ್ಞಾನದ ಬಗ್ಗೆ ಉಪದೇಶವನ್ನು ನೀಡಿ ವಿಜಯಪುರದ ಜ್ಞಾನ ಯೋಗಾಶ್ರಮವು ಪ್ರಪಂಚದ ಜನತೆಗೆ ಜ್ಞಾನ ದಾಸೋಹ ನೀಡುವ ವಿಶಿಷ್ಟ ಕೇಂದ್ರವಾಗಿತ್ತು, ಜೇಬಿಲ್ಲದ ಬಿಳಿ ಅಂಗಿಯನ್ನು ಧರಿಸುತ್ತಿದ್ದರು, ಯಾರ ಹಂಗಿಗೂ ಒಳಗಾಗದೆ ಸರ್ವ ಜನರಿಂದ ಪ್ರೀತಿ ಪಡೆದುಕೊಂಡಿರುವ ಶ್ರೀ ಸಿದ್ದೇಶ್ವರ ಸ್ವಾಮಿಗಳು ಪದ್ಮಶ್ರೀ ಪ್ರಶಸ್ತಿ, ಅನೇಕ ಪದವಿ, ಸನ್ಮಾನ ಮತ್ತು ಸರ್ಕಾರದ ಅನುದಾನವನ್ನೇ ನಯವಾಗಿ ತಿರಸ್ಕರಿಸಿದ ಮಹಾನುಭಾವರು, ಅವರು ಆರು ಭಾಷೆಗಳಲ್ಲಿ ನಿರರ್ಗಳವಾಗಿ ಪ್ರವಚನ ಮಾಲಿಕೆಗಳ ಮೂಲಕ ಪ್ರಪಂಚದಾದ್ಯಂತ ಸಂಚರಿಸಿ ಸಮಾಜವನ್ನು ತಿದ್ದುವ ಕೆಲಸವನ್ನು ಮಾಡುತ್ತಿದ್ದರು, ನಾಡಿನ ಮೂಲೆ ಮೂಲೆಯಿಂದ ಲಕ್ಷಾಂತರ ಜನ ಪ್ರವಚನ ಕೇಳಲು ಆಗಮಿಸಿ ಎರಡು ಕಿವಿಗಳನ್ನು ನಿಮಿರಿಸಿ ಶಾಂತಚಿತ್ತತೆಯಿಂದ ಆಲಿಸಿ, ಅದೆಷ್ಟೋ ಜನರು ತಾವು ಮಾಡುತ್ತಿದ್ದ ಕೊಲೆ, ಸುಲಿಗೆ, ಮೋಸ, ವಂಚನೆ, ಕೆಟ್ಟ ಕೆಲಸಗಳಿಗೆ ತಿಲಾಂಜಲಿಟ್ಟು!! ಬದುಕಿನಲ್ಲಿ ಪರಿವರ್ತನೆಯಾಗಿ ನೆಮ್ಮದಿಯ ಜೀವನವನ್ನು ಕಟ್ಟಿಕೊಂಡಿದ್ದಾರೆ, ಆಡುಭಾಷೆಯಲ್ಲಿ ಅವರು ಮಾತನಾಡುವ ಪರಿ, ಅಸಂಖ್ಯಾತ ಭಕ್ತರ ಮನ ಮತ್ತು ಹೃದಯವನ್ನು ತಲುಪುತ್ತಿತ್ತು, ಸೂಜಿಗಲ್ಲಿನಂತಹ ಸೆಳೆತ, ಅವರು ಭಾಷೆ, ಧಾಟಿ, ಪದ ಪ್ರಯೋಗ, ಕಥೆ ಮತ್ತು ಉದಾಹರಣೆಗಳ ಮೂಲಕ ಪ್ರಚಲಿತ ಸಂಗತಿಗಳನ್ನು ಸಮ್ಮಿಳಿತಗೊಳಿಸುತ್ತಿದ್ದರು. ಜೊತೆಗೆ ಪರಿಸರವೆಂದರೆ ಪಂಚಪ್ರಾಣ. ಅದರಲ್ಲಿರುವ ಕಲ್ಲು, ಮಣ್ಣು, ಗಿಡ, ಮರ, ಹೂ, ಪಕ್ಷಿ, ಪ್ರಾಣಿಗಳಲ್ಲಿ ಜೀವಚೈತನ್ಯವಿದೆ ಎಂಬುದನ್ನು ವಿವರಿಸುವ ರೀತಿ ಅದ್ಭುತ ಮತ್ತು ಜನರನ್ನು ಮೂಕವಿಸ್ಮಿತರನ್ನಾಗಿ ಮಾಡುತ್ತಿದ್ದುದು ಸೋಜಿಗವಾಗಿತ್ತು, ಶ್ರೀಗಳ ಅಗಲಿಕೆ ಭಕ್ತ ಸಮೂಹಕ್ಕೆ ತುಂಬಾ ನೋವು ಉಂಟಾಗಿದ್ದು, ಈ ನಾಡು ಅನರ್ಘ್ಯ ರತ್ನವನ್ನು ಕಳೆದುಕೊಂಡು ಬಡವಾಗಿದೆ ಎಂದು ಹೇಳಬಹುದು.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಶೀಘ್ರ ಭತ್ತ, ರಾಗಿ ಖರೀದಿ ಕೇಂದ್ರ ತೆರೆಯಲು ಮನವಿ

ಮಾನ್ಯರೆ,

ಬೆಂಬಲ ಬೆಲೆ ಯೋಜನೆಯಡಿ ಭತ್ತ ಮತ್ತು ರಾಗಿ ಖರೀದಿ ಮಾಡಲು ವಿಳಂಬವಾದ ಕಾರಣ ಮತ್ತು ಅನಿರ್ದಿಷ್ಟ ಮಳೆ ಬೀಳುವ ಕಾರಣ ರೈತರು ಬೆಳೆದ ಭತ್ತ ಮತ್ತು ರಾಗಿಯನ್ನು ಸಂಗ್ರಹಿಸಲಾರದೆ ದಲ್ಲಾಳಿಗಳ ಪಾಲಾಗುತ್ತಿದೆ.

ಕಳೆದ ಎರಡು ಮೂರು ವರ್ಷಗಳಿಂದ ಭತ್ತವನ್ನು ಅಕ್ಕಿ ಗಿರಣಿ ಮಾಲೀಕರಿಂದ ಖರೀದಿ ಮಾಡಿಸಿ ಭತ್ತ ಪಡೆಯುತ್ತಿದ್ದ ಸರ್ಕಾರ ಈ ಬಾರಿ ತೀರ್ಮಾನ ಬದಲಿಸಿ ಎಪಿಎಂಸಿಗಳ ಮೂಲಕ ಖರೀದಿಸಲು ಮುಂದಾಗಿದೆ. ಹೀಗಾಗಿ ರೈತರು ಬೆಳೆದ ಭತ್ತವನ್ನು ಸಂಗ್ರಹಿಸಿಕೊಳ್ಳಲು ಆಗದ ಕಾರಣ ಮತ್ತು ಮಾರಾಟ ಮಾಡಲು APMC ಕೇಂದ್ರಗಳಿಗೆ ಹೋಗುವುದು ಕಡ್ಡಾಯವಾಗಿರುವುದರಿಂದ ಬಹುತೇಕ ರೈತರಿಗೆ ಇದು ಕಷ್ಟವಾದ ವಿಷಯವಾಗಿದೆ. ಜೊತೆಗೆ APMC ಕೇಂದ್ರಗಳಲ್ಲಿ ನೋಂದಣಿ ನಡೆಯುತ್ತಿದ್ದು, ಅದು ಮುಗಿದ ನಂತರ ಖರೀದಿಸಲು ಪ್ರಾರಂಭಿಸಲಾಗುತ್ತದೆ. ಇದಕ್ಕೆ ಇನ್ನೂ ತುಂಬಾ ದಿನಗಳು ಬೇಕಾಗಿರುವುದರಿಂದ ಹೆಚ್ಚಿನ ರೈತರು ಭತ್ತವನ್ನು ಮಧ್ಯವರ್ತಿಗಳಿಗೆ ಮಾರಾಟ ಮಾಡುವಂತಾಗಿದೆ. ಸಾಗಾಣಿಕೆ ಮತ್ತು ಸಂಗ್ರಹದ ಮೊತ್ತ ದೊಡ್ಡ ಮೊತ್ತವಾಗಿರುವುದು. ಆದ್ದರಿಂದ ರೈತರು ಅನಿವಾರ್ಯವಾಗಿ ಈ ನಿರ್ಧಾರಕ್ಕೆ ಬರುತ್ತಿದ್ದಾರೆ. ರೈತರ ಅಸಹಾಯಕತೆಯನ್ನು ದಲ್ಲಾಳಿಗಳು ದುರುಪಯೋಗಪಡಿಸಿಕೊಂಡು ಕಡಿಮೆ ಬೆಲೆಗೆ ಮತ್ತು ತೂಕದಲ್ಲಿ ಮೋಸ ಮಾಡಿ ಭತ್ತ ಕೊಳ್ಳಲು ಮುಂದಾಗಿದ್ದಾರೆ.

ಸರ್ಕಾರದ ಬೆಂಬಲ ಬೆಲೆ 2040 ರೂ ಇದ್ದರೆ ದಲ್ಲಾಳಿಗಳು ಕೇವಲ 1600–1700 ರೂ ದರದಲ್ಲಿ ಖರೀದಿ ಮಾಡಿ ಸಂಗ್ರಹಿಸಿ ಅದೇ ಭತ್ತವನ್ನು ಕೆಲ ರೈತರ ಹೆಸರಿನಲ್ಲಿ ಮತ್ತೆ ಸರ್ಕಾರಕ್ಕೆ ಮಾರುತ್ತಿರುವುದು ಕಂಡು ಬಂದಿದೆ.

ಆದ್ದರಿಂದ ಕೂಡಲೇ ರೈತರಿಗೆ ಅನುಕೂಲವಾಗುವಂತೆ ಹತ್ತಿರದ ಅಕ್ಕಿ ಗಿರಣಿಗಳಿಗೆ ಭತ್ತವನ್ನು ಕೊಳ್ಳಲು ಸೂಚನೆ ನೀಡಿದರೆ ರೈತರಿಗೆ ತುಂಬಾ ಅನುಕೂಲವಾಗುವುದು.

–ಆನಂದ್ ಪಿ ರಾಜು, ಮೂಡಲಹುಂಡಿ


ನಮ್ಮ ಕ್ಲಿನಿಕ್ ಯೋಜನೆ ಸ್ವಾಗತಾರ್ಹ

ಮಾನ್ಯರೆ,

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ನಮ್ಮ ಕ್ಲಿನಿಕ್ ನೂರ ಹದಿನಾಲ್ಕು ಕ್ಲಿನಿಕ್‌ಗೆ ಚಾಲನೆ ದೊರೆತಿದೆ. ಜೊತೆಗೆ ರಾಜ್ಯಾದ್ಯಂತ ಜನವರಿ ಅಂತ್ಯಕ್ಕೆ 438 ನಮ್ಮ ಕ್ಲಿನಿಕ್ ತೆರೆಯುವ ಉದ್ದೇಶ ಹೊಂದಿರುವ ಸರ್ಕಾರದ ಕೆಲಸಕ್ಕೆ ಅಭಿನಂದನೆ.

ಬಡವರ ಹಾಗೂ ಆರ್ಥಿಕವಾಗಿ ಹಿಂದುಳಿದ ಮಧ್ಯಮ ವರ್ಗದ ಜನರಿಗೆ ಇದರಿಂದ ಅನುಕೂಲವಾಗಲಿದೆ. ಇಂದಿನ ಕಾಲಘಟ್ಟದಲ್ಲಿ ವೈದ್ಯಕೀಯ ಖರ್ಚಿನ ವೆಚ್ಚ ಬಡವರಿಗೆ ನಿಲುಕುವುದಿಲ್ಲ. ಅದು ಆಕಾಶಕ್ಕೆ ಏಣಿ ಹಾಕಿದಂತೆ. ಇಂತಹ ಸಂದರ್ಭದಲ್ಲಿ ಬಡವರ ಮನೆ ಬಾಗಿಲಿಗೆ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸುವ ಡಯಾಲಿಸಿಸ್ ಸೈಕಲ್‌ಗಳನ್ನು 60,000ಕ್ಕೆ ಹೆಚ್ಚಿಸಲಾಗಿದೆ. ಕಿಮೋಥೆರಪಿಯನ್ನು ರಾಜ್ಯಾದ್ಯಂತ 12ಕ್ಕೆ ಹೆಚ್ಚಿಸಿರುವ ಹಾಗೂ ಜನವರಿಯಿಂದ 60 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರಿಗೂ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ ಮಾಡುವುದರ ಮೂಲಕ ನಮ್ಮ ಕ್ಲಿನಿಕ್‌ನಲ್ಲಿ 15000 ದಿಂದ 20000 ಜನಸಂಖ್ಯೆಗೆ ಒಂದರಂತೆ ಒದಗಿಸಿರುವುದು ಸ್ವಾಗತಾರ್ಹ. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಆರೋಗ್ಯ ಕ್ಷೇತ್ರಕ್ಕೆ 10 ಸಾವಿರ ಕೋಟಿ ಮೀಸಲಿಟ್ಟಿರುವ ಸರ್ಕಾರದ ಯೋಜನೆ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಆದ್ಯತೆ ನೀಡಿದ ಮುಖ್ಯಮಂತ್ರಿಗಳ ನಡೆಗೆ ಅಭಿನಂದನೆಗಳು.

–ಕಂಗಾಣಿಸೋಮು ಪಿ.ಸಿ., ಕ್ಯಾತಮಾರನಹಳ್ಳಿ, ಮೈಸೂರು



ಕೆಬಿಜೆಯವರ

ಛೂಮಂತ್ರ... ಛೂಮಂತ್ರ... ಛೂಮಂತ್ರ...

ಪಂಚಭೂತಗಳಲ್ಲಿ ಲೀನರಾದ ಸದ್ಗುರು ಶ್ರೀ ಸಿದ್ದೇಶ್ವರ ಸ್ವಾಮಿಗಳು: ಒಂದು ಚಿಂತನೆ

ಸೋಮವಾರ (02.01.2023) ರಾತ್ರಿ 10 ಘಂಟೆಯ ಸಮಯದಲ್ಲಿ ಟಿವಿಯಲ್ಲಿ ವಿಜಯಪುರದ (ಹಿಂದಿನ ಬಿಜಾಪುರ) ಜ್ಞಾನಯೋಗಾಶ್ರಮದ ಸಿದ್ದೇಶ್ವರ ಸ್ವಾಮೀಜಿಯವರ ನಿಧನದ ವಾರ್ತೆ ಕೇಳಿ ಓರ್ವ ಮಾನವತಾವಾದಿಯಾಗಿ ಸ್ವಲ್ಪ ವಿಚಲಿತನಾದೆ. ಸ್ವಾಮೀಜಿಯವರು ಸಂಜೆ 6.05 ಗಂಟೆಗೆ ನಿಧನ ಹೊಂದಿದ್ದರೂ ಸಹ, ಸದುದ್ದೇಶಕ್ಕಾಗಿಯೇ ಇರಬೇಕು. ಅವರ ನಿಧನ ವಾರ್ತೆಯನ್ನು ರಾತ್ರಿ 10 ಘಂಟೆಗೆ ಅಧಿಕೃತವಾಗಿ ಘೋಷಿಸಲಾಯಿತು. ಅವರ ಅಂತ್ಯಸಂಸ್ಕಾರದ ಏರ್ಪಾಡುಗಳು, ನಾನು ನೋಡಿದಂತೆ ಹಾಗೂ ಕೇಳಲ್ಪಟ್ಟಂತೆ ವಿರಳಾತಿವಿರಳ ವಿದ್ವಾಂಸರು, ಸದ್ಗುರು, ಸ್ವಾಮೀಜಿಯೊಬ್ಬರ ವ್ಯಕ್ತಿತ್ವಕ್ಕೆ ತಕ್ಕ ರೀತಿಯಲ್ಲಿ ಮಾಡಲಾಯಿತು.

ಆಯೋಜಕರು, ಸ್ವಾಮೀಜಿಗಳಿಗೆ ಅಂತಿಮ ನಮನವನ್ನು (ಗೌರವ) ಸಲ್ಲಿಸಲು ಲಕ್ಷಾಂತರ ಭಕ್ತರು ಹಾಗೂ ಅಭಿಮಾನಿಗಳು ಸೇರಬಹುದೆಂದು ಮೊದಲೇ ಊಹಿಸಿ, ಅದಕ್ಕೆ ಅನುಗುಣವಾಗಿ ಅತ್ಯಂತ ಯೋಜನಾಬದ್ಧವಾಗಿ, ಅಂತ್ಯಸಂಸ್ಕಾರದ ಸ್ಥಳದಲ್ಲಿ ಆಗಬೇಕಾದ ಪ್ರತಿಯೊಂದು ಕೆಲಸ–ಕಾರ್ಯವನ್ನು ಅಚ್ಚುಕಟ್ಟಾಗಿ ಹಾಗೂ ದಿವಂಗತ ಸ್ವಾಮೀಜಿಗಳ ವ್ಯಕ್ತಿತ್ವಕ್ಕೆ ಒಪ್ಪುವಂತಹ ರೀತಿಯಲ್ಲಿ ಮಾಡಿದರು. ಜಿಲ್ಲಾಧಿಕಾರಿಗಳ ಕಚೇರಿಯಿಂದ ಆಯೋಜಕರು, ಆಶ್ರಮದ ಆಡಳಿತ ಮಂಡಳಿಯವರು, ಆಶ್ಚರ್ಯಕರ ಅನ್ನುವ ರೀತಿಯಲ್ಲಿ, ಸಾಮಾನ್ಯವಾಗಿ ಕಿರಿಕಿರಿ ಮಾಡುವವರಿದಾಗ್ಯೂ ವಿವಿಧ ರಾಜಕೀಯ ಪಕ್ಷಗಳಿಗೆ ಸೇರಿದ ರಾಜಕೀಯ ನಾಯಕರು ಒಂದು ವ್ಯವಸ್ಥಿತ ಹಾಗೂ ಶಾಂತಿಯುತ ಅಂತ್ಯಸಂಸ್ಕಾರ ನೆರವೇರಲು ಪಟ್ಟ ಶ್ರಮ ಮತ್ತು ಅವರ ಸಾಮರ್ಥ್ಯಕ್ಕೆ ನನ್ನ ಅಭಿನಂದನೆಗಳು.

ಸ್ವಾಮೀಜಿಯವರ ನಿಧನ ನನಗೆ, ಕನ್ನಡದ ಗಾದೆಯ ಮಾತು 'ಶರಣರ ಗುಣವನ್ನು ಮರಣದಲ್ಲಿ ಕಾಣು' ನೆನಪಿಗೆ ತರಿಸಿತು. ಆದ್ದರಿಂದ, ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ಮರಣದಲ್ಲಿ ನಿಜವಾದ ಸಾರ್ಥಕ ಶರಣನನ್ನು ನೋಡಿದಂತಾಯ್ತು.

ಹಿಂದೆ, ನಮ್ಮ ಸುತ್ತೂರು ಸ್ವಾಮೀಜಿಗಳಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳು ಯಾವಾಗಲಾದರೊಮ್ಮೆ, ಹೆಸರಾಂತ ವ್ಯಕ್ತಿಗಳ ಅಥವಾ ಸ್ವಾಮೀಜಿಗಳ ಉಪನ್ಯಾಸ ಕಾರ್ಯಕ್ರಮಗಳಿದ್ದಾಗಲೆಲ್ಲಾ ನನಗೆ ತಿಳಿಸುತ್ತಿದ್ದರು. ಅದೇ ರೀತಿಯಲ್ಲಿ, ನಾನು ಕೆಲವು ವರ್ಷಗಳ ಹಿಂದೆ ಪ್ರಥಮ ಬಾರಿಗೆ ಸಿದ್ದೇಶ್ವರ ಸ್ವಾಮಿಯವರನ್ನು ಭೇಟಿಯಾಗಿದ್ದೆ. ಆಧ್ಯಾತ್ಮಿಕ ಭಾವ, ಮೆಲು ಧ್ವನಿ ಹಾಗೂ ಯಾವುದೇ ರೀತಿಯ ಆಂಗೀಕ ಭಾಷೆ ಇಲ್ಲದ, ಅವರ ವಿದ್ವತ್‌ಪೂರ್ಣ ಪ್ರವಚನದಿಂದ ನಾನು ಸಂಮೋಹಿತಗೊಂಡಿದ್ದೆ. ಆದರೂ ಪ್ರವಚನ ಕೇಳುತ್ತಿದ್ದ ಭಾರೀ ಜನ ಸಮೂಹದ ಗಮನವನ್ನು ಅವರು ಸೆಳೆಯುತ್ತಿದ್ದರು. ಅವರು ಓರ್ವ ಸಮ್ಮೋಹನ ಗಾರನ ರೀತಿಯಲ್ಲಿ ತಮ್ಮ ಕೇಳುಗರನ್ನು ಆವರಿಸಿಕೊಂಡಿದ್ದರು ಇಲ್ಲವೇ ಹಿಡಿದಿಡುತ್ತಿದ್ದರು. ಅದು ಎಂತಹ ಪ್ರವಚನ ! ಪ್ರತಿಯೊಂದು ವಿಚಾರ ಅಥವಾ ವಿಷಯವು ನೀತಿ ಕಥೆ, ದೃಷ್ಟಾಂತದೊಂದಿಗೆ ನಿರೂಪಿಸಲ್ಪಡುತ್ತಿದ್ದವು. ಇದರಿಂದ ಜನ ಸಮೂಹದಲ್ಲಿ ಇದ್ದಂತಹ ಸಾಮಾನ್ಯ ಜನರಿಗೆ ಸ್ವಾಮೀಜಿಗಳು ಹೇಳುತ್ತಿದ್ದ ವಿಷಯವನ್ನು ಸುಲಭವಾಗಿ ಅರ್ಥಮಾಡಿಕೊಳ್ಳಲು ಸಾಧ್ಯವಾಗುತ್ತಿತ್ತು.



ಕಳೆದ ಒಂದು ವರ್ಷದಿಂದ ಈಚೆಗೆ, ನಾನು ಸಾಮಾನ್ಯವಾಗಿ ರಾತ್ರಿ ಹೊತ್ತಿನಲ್ಲಿ ಸ್ವಾಮೀಜಿಗಳ ಉಪನ್ಯಾಸವನ್ನು ನನ್ನ ಮೊಬೈಲ್‌ನಲ್ಲಿ ಲಭ್ಯವಿರುವ "ಯೂ ಟ್ಯೂಬ್"ನಲ್ಲಿ ಕೇಳಿದ್ದೇನೆ. ಪ್ರತಿ ದಿನ ನಾನು ಮಲಗಲು ಹೋಗುವುದು ಇಂತಹ ಒಳ್ಳೆಯ ಆಲೋಚನೆಗಳ ಮೂಲಕ! ಕೆಲವು ಸ್ವಾಮೀಜಿಗಳು ಆಡುವ ಮಾತುಗಳಿಗೆ ಮಾಂತ್ರಿಕ ಶಕ್ತಿಯಿರುತ್ತದೆ. ಇವು ನಿಗೂಢವಾಗಿದ್ದು, ಸಮ್ಮೋಹನಗೊಳಿಸುವ ಶಕ್ತಿಯನ್ನು ಹೊಂದಿರುತ್ತವೆ. ಏಕೆಂದರೆ ಅಂತಹ ಮಾತುಗಳು ಆಧ್ಯಾತ್ಮಿಕತೆಯ ಪ್ರವಾಹವಾಗಿರುತ್ತವೆ.

ಓಶೋರವರ ಪ್ರವಚನಗಳನ್ನು ಕೇಳುತ್ತಿದ್ದ ಸಂದರ್ಭಗಳಲ್ಲಿ ನಾನು ಇದನ್ನು ಅನುಭವಿಸಿದ್ದೇನೆ. ಏಕೆಂದರೆ, ಅವರು ಒಂದು ಧರ್ಮ, ಒಂದು ಪುಸ್ತಕ, ಅಥವಾ ಒಬ್ಬ ವ್ಯಕ್ತಿ ವಿಚಾರವಾಗಿ ತಮ್ಮನ್ನು ಸೀಮಿತಗೊಳಿಸಿಕೊಳ್ಳುವುದಿಲ್ಲ. ಅವರು ತಮ್ಮ ಆಧ್ಯಾತ್ಮಿಕ ಪ್ರವಚನಗಳಲ್ಲಿ, ಎಲ್ಲಾ ಜಾತಿಗಳನ್ನು, ಎಲ್ಲಾ ಪುಸ್ತಕಗಳನ್ನು ಹಾಗೂ ಪ್ರಪಂಚದ ಎಲ್ಲಾ ಜನರನ್ನು ಕೊಂಡೊಯ್ಯುತ್ತಾರೆ. ಅವರು ಜಗತ್ತಿನ ಎಲ್ಲಾ ಜನರನ್ನು ಅಪ್ಪಿಕೊಂಡಿದ್ದಾರೆ. ಮನುಕುಲದ ಭ್ರಾತೃತ್ವದ ಬಗ್ಗೆ ಅವರು ಮಾತನಾಡಿದ್ದಾರೆ. ಯಾವುದೇ ರೀತಿಯ ತಾರತಮ್ಯ ಮಾಡಿಲ್ಲ.

ಸಿದ್ದೇಶ್ವರ ಸ್ವಾಮೀಜಿಗಳು ಸಹ ಅದೇ ರೀತಿ. ಅವರೊಬ್ಬ ತತ್ವಜ್ಞಾನಿ ಸಂತ. ಓಶೋ ರಜನೀಶ್ ಹಾಗೂ ಸ್ವಾಮಿ ವಿವೇಕಾನಂದರ ಪಡಿಯಚ್ಚಿನಂತೆ. ಅವರ ಮೇಧಾವಿತನ ಆಳವಾಗಿತ್ತು ಹಾಗೂ ಸಮೃದ್ಧವಾಗಿತ್ತು. ಅವು ವೇದ, ಉಪನಿಷತ್ತು, ಮಹಾಕಾವ್ಯ ಹಾಗೂ ವಿಶ್ವದ ಇತರ ಧರ್ಮಗಳನ್ನು ಮಾತ್ರವಲ್ಲ, ನಿಶ್ಚಯವಾಗಿ ಗ್ರೀಕ್ ತತ್ವಜ್ಞಾನಿಗಳನ್ನು ಒಳಗೊಂಡಿದ್ದವು. ಯಾವ ಅಚ್ಚರಿಯಿಲ್ಲ, ಅವರ ಪ್ರವಚನಗಳು, ಯಥಾಸ್ಥಿತಿಯಲ್ಲಿ ಯಾವಾಗಲೂ ಬುದ್ಧ ಹಾಗೂ ನಂತರ ಜೀಸಸ್ ಕ್ರೈಸ್ತ ಅವರಿಂದ ಪ್ರಸಿದ್ಧಿಗೆ ಬಂದ ಒಂದು ಅಥವಾ ಅದಕ್ಕೂ ಹೆಚ್ಚು ನೀತಿ ಕಥೆಗಳನ್ನು ಒಳಗೊಂಡಿರುತ್ತಿದ್ದವು.

ಬಹುಭಾಷಾ ವಿಶಾರದರಾಗಿದ್ದ ಅವರಿಗೆ ಐದು ಭಾಷೆಗಳು ಗೊತ್ತಿದ್ದವು. ಅವುಗಳೆಂದರೆ ಕನ್ನಡ, ಇಂಗ್ಲಿಷ್, ಹಿಂದಿ, ಮರಾಠಿ ಮತ್ತು ಸಂಸ್ಕೃತ. ವಾಸ್ತವವಾಗಿ, ಸ್ವಾಮೀಜಿಗಳು ಈ ಭಾಷೆಗಳ ಧಾರ್ಮಿಕ ಗ್ರಂಥಗಳ ಆಳಕ್ಕೆ ಇಳಿಯುವ ಸಾಮರ್ಥ್ಯ ಹೊಂದಿದ್ದರು. ತನ್ಮೂಲಕ ತಮ್ಮ ಆಧ್ಯಾತ್ಮಿಕ ಜ್ಞಾನ ಭಂಡಾರವನ್ನು ಶ್ರೀಮಂತಗೊಳಿಸಿಕೊಳ್ಳುತ್ತಿದ್ದು ತಮ್ಮ ಪ್ರವಚನ ಸಂದರ್ಭಗಳಲ್ಲಿ ತಮ್ಮ ಭಕ್ತರೊಂದಿಗೆ ಇವುಗಳನ್ನು ಹಂಚಿಕೊಳ್ಳುತ್ತಿದ್ದರು.

ಕುತೂಹಲಕಾರಿ ಸಂಗತಿ ಎಂದರೆ, ಒಂದು ನಿಗದಿತ ಧಾರ್ಮಿಕ ಆಶ್ರಮಕ್ಕೆ (ಮಠ) ಸ್ವಾಮೀಜಿಗಳಾಗಿರುವಂತಹವರಿಗಿಂತ ಅವರು ಅತ್ಯಂತ ಅಪವಾದ ಎನ್ನಬಹುದಾದ ರೀತಿಯಲ್ಲಿ ವಿಭಿನ್ನ ಹಾಗೂ ವಿಶಿಷ್ಟರಾಗಿದ್ದರು. ಬೇರೆ ಎಲ್ಲಾ ಆಶ್ರಮ ಅಥವಾ ಮಠಗಳ ಸ್ವಾಮೀಜಿಗಳು ಕೇಸರಿ ಅಥವಾ ಕಾವಿ ಬಟ್ಟೆಗಳನ್ನು ಧರಿಸಿದರೆ, ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಸಾಮಾನ್ಯ ಶ್ವೇತವರ್ಣದ ಜುಬ್ಬಾ ಮತ್ತು ಧೋತಿಯನ್ನು ಸದಾ ಧರಿಸಿರುತ್ತಿದ್ದರು. ಹಾಗಾಗಿ ಸ್ವಾಮೀಜಿ ಶ್ವೇತಪ್ರಿಯರು. ಮತ್ತು ಟಿವಿ ವರದಿಗಳ ಪ್ರಕಾರ ಅವರು ಇದುವರೆಗೂ ಧರಿಸುತ್ತಿದ್ದ ಜುಬ್ಬಾಗಳಿಗೆ ಜೇಬುಗಳು ಇರಲಿಲ್ಲ! ಒಳ್ಳೆಯದು, ಎಲ್ಲಾ ಜೇಬುಗಳು ಹಣವನ್ನು ಬಿಂಬಿಸಿದರೆ, ಈ ನಮ್ಮ ಸ್ವಾಮೀಜಿಯವರು ಹಣದ ಬದಲು ಆಧ್ಯಾತ್ಮಿಕ ಗುರಿಯತ್ತ ಸಾಗುತ್ತಿದ್ದರು.

ಈ ರೀತಿಯಲ್ಲಿ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಓಶೋ ರಜನೀಶ್ ಅವರಿಗಿಂತ ತೀರಾ ವಿಭಿನ್ನವಾದ ರೀತಿಯಲ್ಲಿ ನಿಲ್ಲುತ್ತಾರೆ. ಓಶೋ ರಜನೀಶ್‌ರವರು ಸುಖ ಜೀವನದಲ್ಲಿ ಮುಳುಗಿ, ದುಬಾರಿಯಾದ ವಸ್ತ್ರ ವಿನ್ಯಾಸಕಾರರ ಬಟ್ಟೆಗಳನ್ನು ಹಾಗೂ ಇನ್ನೂ ಹೆಚ್ಚಿನದನ್ನು ಅನುಭವಿಸುತ್ತಿದ್ದರು. ಆದರೆ ಅವುಗಳಿಗೆಲ್ಲಾ ಕಾರಣವಿದ್ದು, ಅದನ್ನು ತಮ್ಮ ಶೈಲಿಯಲ್ಲಿಯೇ ಅವರು ವಿವರಿಸುತ್ತಿದ್ದರು.

ಆದರೂ ಸಹ ಓಶೋ ರಜನೀಶ್‌ರವರು ನಂತರದ ವರ್ಷಗಳಲ್ಲಿ ತಮ್ಮದೊಂದು ಹೊಸ ನೀತಿಯನ್ನು ಒತ್ತಿ ಹೇಳುತ್ತಿದ್ದರು. ಅದೇನೆಂದರೆ ಅವರ ಅನುಯಾಯಿಗಳು, ಅನುಮೋದಿತ ಹಳದಿ ಬಣ್ಣದ ನಿಲುವಂಗಿಗಳನ್ನು ತ್ಯಜಿಸಿ, ತಮಗೆ ಇಷ್ಟ ಬಂದ ಬಟ್ಟೆಗಳನ್ನು ಧರಿಸಬಹುದಾಗಿತ್ತು. ಬಟ್ಟೆಗಳಿಂದ ಯಾರೂ ಸನ್ಯಾಸಿ ಆಗುವುದಿಲ್ಲ. ಆದರೆ ಸನ್ಯಾಸಿಯ ಗುಣ ಅಂತರಾತ್ಮದಿಂದ ಮಾತ್ರ ಬರಲು ಸಾಧ್ಯ. **ನೀವು ಹಳದಿ ನಿಲುವಂಗಿಗಳನ್ನು ಧರಿಸಬಹುದಾದರೂ, ಸನ್ಯಾಸಿ ತರಹವಲ್ಲದ ಜೀವನವನ್ನು ನಡೆಸಬಹುದು. ಅಥವಾ ನಿಮಗೆ ಇಷ್ಟ ಬಂದ ಯಾವುದೇ ಧಿರಿಸನ್ನು ಧರಿಸಿ, ಸನ್ಯಾಸಿಯ ಜೀವನ ನಡೆಸಬಹುದು.** ಅತ್ಯಂತ ಗೌರವಾನ್ವಿತ ನಮ್ಮ ಶ್ರೀ ಸಿದ್ದೇಶ್ವರ ಸ್ವಾಮಿಯವರು, ಓರ್ವ ಸಾಮಾನ್ಯ ಮನುಷ್ಯನಂತೆ ಬಟ್ಟೆ ಧರಿಸುತ್ತಿದ್ದರೂ ಸಹ ಅತ್ಯಂತ ವಿಶೇಷವಾದ ಗುಣಗಳಿಂದ ಕರುಣಾಭಾವದ ಸನ್ಯಾಸಿಯಂತೆ ಜೀವನ ಸಾಗಿಸಿದರು.

ಅವರನ್ನು ಅನೇಕ ಬಾರಿ ನೋಡಿ ಹಾಗೂ ಅವರ ಪ್ರವಚನಗಳನ್ನು ಕೇಳಿದ ನಂತರ ಅವರು ತಮ್ಮ ಪಾರ್ಥಿವ ಶರೀರಕ್ಕೆ ಯಾವ ರೀತಿಯ ಸಂಸ್ಕಾರ ಮಾಡಬೇಕೆಂಬ ಬಗ್ಗೆ ತಮ್ಮ ಅಂತಿಮ ಬಯಕೆಯನ್ನು ಉಯಿಲಿನಲ್ಲಿ ಬರೆದಿರುವ ವಿಚಾರವನ್ನು ಕೇಳಿ ನನಗೆ ಆಶ್ಚರ್ಯ ಉಂಟಾಗಲಿಲ್ಲ. ಅವರು ತಮ್ಮ ದೇಹವನ್ನು ದಹಿಸಲು ಅಪೇಕ್ಷಿಸಿದ್ದರು. ಹೂಳುವುದು ಅವರ ಧರ್ಮದ ಪ್ರಕಾರ ನೆರವೇರಿಸತಕ್ಕ ಧಾರ್ಮಿಕ ವಿಧಿ. ಆದರೂ ಅವರು ಅದನ್ನು ಅಪೇಕ್ಷೆಪಡಲಿಲ್ಲ. ಸ್ವಾಮೀಜಿಗಳ ಉಯಿಲಿನ ಪ್ರಕಾರ, ಧಾರ್ಮಿಕ ಕ್ರಿಯೆಗಳ ಅವಶ್ಯಕತೆ ಇಲ್ಲ. ಪಾರ್ಥಿವ ಶರೀರ ದಹಿಸಿದ ನಂತರ, ಬೂದಿಯನ್ನು ನದಿ ಅಥವಾ ಸಮುದ್ರದಲ್ಲಿ ವಿಸರ್ಜಿಸಬೇಕು. ಯಾವುದೇ ರೀತಿಯ ಸಮಾಧಿ ಅಥವಾ ಸ್ಮಾರಕವನ್ನು ಕಟ್ಟಬಾರದು.

ಅವರ ಮರಣ ಶಾಸನದಲ್ಲಿ ಬರೆದಿರುವ ಕಡೆಯ ಸಂದೇಶ ಅವರನ್ನು ಓರ್ವ ಸರ್ವಶ್ರೇಷ್ಠ ಚಿಂತಕ, ತತ್ವಜ್ಞಾನಿ ಹಾಗೂ ಮಹಾನ್ ಜ್ಞಾನಿಯನ್ನಾಗಿಸಿದೆ:

ಸತ್ಯವೂ ಇಲ್ಲ ಅಸತ್ಯವೂ ಇಲ್ಲ,
ಸಹಜವೂ ಇಲ್ಲ, ಅಸಹಜವೂ ಇಲ್ಲ,
ನಾನೂ ಇಲ್ಲ, ನೀನೂ ಇಲ್ಲ,
ಇಲ್ಲ ಇಲ್ಲ ಎಂಬುದು ತಾನಿಲ್ಲ,
ಗುಹೇಶ್ವರನೆಂಬುದು ತಾ ಬಯಲು?
ಅಂತ್ಯ: ಪ್ರಣಮಾಂಜಲಿ: !

ಸೈನಿಕರಿಗೆ ಸಾವೆಂಬುದಿರುವುದಿಲ್ಲ ಎಂದು ಹೇಳಲಾಗುತ್ತದೆ. ಅವರು ಮರೆಯಾಗಿ ಹೋಗುತ್ತಾರೆ ಅಷ್ಟೆ. ಬಹುಶಃ, ಸನ್ಯಾಸಿಗಳು ಸಹ ಅಸು ನೀಗುವುದಿಲ್ಲ. ಅವರು ಕಣ್ಮರೆಯಾಗುತ್ತಾರೆ ಅಷ್ಟೆ. ನಮ್ಮ ಶ್ರೇಷ್ಠ ಸದ್ಗುರು ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಈ ಜಗದಲ್ಲಿ ನಮ್ಮ ಜೀವನವನ್ನು ಸಾಗಿಸಲು ನೆರವಾಗಲು ತಮ್ಮ ಆಧ್ಯಾತ್ಮಿಕ ಜ್ಯೋತಿಯನ್ನು ಇಲ್ಲಿ ಬಿಟ್ಟು ಅನಂತದಲ್ಲಿ ಲೀನವಾಗಿದ್ದಾರೆ. ಮಹಾಶ್ರೇಷ್ಠ ಸದ್ಗುರುವಿನ ಆತ್ಮಕ್ಕೆ ನನ್ನ ಪ್ರಣಾಮಗಳು.

(ಮೂಲ ಇಂಗ್ಲಿಷ್ ಲೇಖನದ ಕನ್ನಡ ಅನುವಾದ)

email : voice@starofmysore.com

ಒಡಿಶಾದಲ್ಲಿ ಮತ್ತೊಬ್ಬ ರಷ್ಯನ್ ನಿಗೂಢ ಸಾವು; 15 ದಿನಗಳಲ್ಲಿ ಮೂರನೇ ಪ್ರಕರಣ

ಭುವನೇಶ್ವರ, ಜ.3– ಒಡಿಶಾದಲ್ಲಿ ಮತ್ತೊಬ್ಬ ರಷ್ಯನ್ ಪ್ರಜೆಯ ಶವ ಪತ್ತೆಯಾಗಿದ್ದು, ಕಳೆದ ಹದಿನೈದು ದಿನಗಳಲ್ಲಿ ನಡೆದ ಮೂರನೇ ಘಟನೆ ಇದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜಗತ್‌ಸಿಂಗ್‌ಪುರ ಜಿಲ್ಲೆಯ ಪಾರಾದೀಪ್ ಬಂದರಿನಲ್ಲಿ ಲಂಗರು ಹಾಕಲಾಗಿದ್ದ ಹಡಗಿನಲ್ಲಿ ಮಿಲ್ಯಕೋವ್ ಸೆರ್ಗೆ ಎಂಬ ರಷ್ಯನ್ ಪ್ರಜೆಯ ಶವ ಪತ್ತೆಯಾಗಿದೆ. 51 ವರ್ಷದ ವ್ಯಕ್ತಿ MB Aldnah ನೌಕೆಯ ಮುಖ್ಯ ಇಂಜಿನಿಯರ್ ಆಗಿದ್ದು, ನೌಕೆ ಬಾಂಗ್ಲಾದೇಶದ ಚಿತ್ತಗಾಂಗ್ ಬಂದರಿನಿಂದ ಪರದೀಪ್ ಮೂಲಕ ಮುಂಬೈಗೆ ತೆರಳುತ್ತಿತ್ತು. ಮುಂಜಾನೆ 4.30ರ ಸುಮಾರಿಗೆ ಹಡಗಿನ ಕೊಠಡಿಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಸಾವಿಗೆ ಕಾರಣವನ್ನು ತಕ್ಷಣವೇ ಕಂಡುಹಿಡಿಯಲು ಪೊಲೀಸರಿಗೆ ಸಾಧ್ಯವಾಗಲಿಲ್ಲ.



ಪಾರಾದೀಪ್ ಪೋರ್ಟ್ ಟ್ರಸ್ಟ್ ಅಧ್ಯಕ್ಷ ಪಿ.ಎಲ್. ಹರಾನಂದ್ ಅವರು ರಷ್ಯಾದ ಎಂಜಿನಿಯರ್ ಸಾವನ್ನು ದೃಢಪಡಿಸಿದ್ದು ತನಿಖೆ ನಡೆಸುತ್ತಿದ್ದಾರೆ. ಡಿಸೆಂಬರ್ ಆರಂಭದಲ್ಲಿ ದಕ್ಷಿಣ ಒಡಿಶಾದ ರಾಯಗಡ ಪಟ್ಟಣದಲ್ಲಿ ಶಾಸಕರು ಸೇರಿದಂತೆ ಇಬ್ಬರು ರಷ್ಯಾದ ಪ್ರವಾಸಿಗರು ನಿಗೂಢವಾಗಿ ಮೃತಪಟ್ಟಿದ್ದರು. ರಷ್ಯಾದಲ್ಲಿ ಶಾಸಕರಾಗಿದ್ದ ಪಾವೆಲ್ ಆಂಟೊವ್ (65) ಅವರು ಡಿಸೆಂಬರ್ 24 ರಂದು ಹೋಟೆಲ್‌ನ ಮೂರನೇ ಮಹಡಿಯಿಂದ ಬಿದ್ದು ಮೃತಪಟ್ಟಿದ್ದರೆ, ಅವರ ಸ್ನೇಹಿತ ವ್ಲಾಡಿಮಿರ್ ಬಿಡೆನೋವ್ ಡಿಸೆಂಬರ್ 22 ರಂದು ತಮ್ಮ ಕೋಣೆಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಎರಡೂ ಪ್ರಕರಣಗಳನ್ನು ಒಡಿಶಾ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.


ಜ.16ರಿಂದ ಬಿಜೆಪಿ ರಾಷ್ಟ್ರೀಯ ಕಾರ್ಯಕಾರಿಣಿ

ನವದೆಹಲಿ, ಜ.3– ಬಿಜೆಪಿಯು 2 ದಿನಗಳ ರಾಷ್ಟ್ರೀಯ ಕಾರ್ಯಕಾರಿಣಿ ಇದೇ 16 ಮತ್ತು 17ರಂದು ಇಲ್ಲಿ ನಡೆಯಲಿದ್ದು, ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಗೆ ತನ್ನ ಕಾರ್ಯತಂತ್ರವನ್ನು ಚರ್ಚಿಸಲಾಗುವುದು ಎಂದು ಪಕ್ಷದ ಮೂಲ ಮಂಗಳವಾರ ತಿಳಿಸಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ 3 ವರ್ಷಗಳ ಅವಧಿ ಈ ತಿಂಗಳ ಕೊನೆಯಲ್ಲಿ ಕೊನೆಗೊಳ್ಳಲಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಪಂಚಭೂತಗಳಲ್ಲಿ ಸಿದ್ದೇಶ್ವರ ಶ್ರೀಗಳು ಲೀನ







ವಸ್ತ್ರ ಧಾರಣೆಯಲ್ಲೂ ಗುರು ಅನುಸರಣೆ

ಸಿದ್ದೇಶ್ವರ ಶ್ರೀಗಳ ಗುರುಗಳಾದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿಯೂ ಶ್ವೇತ ವಸ್ತ್ರಧಾರಿಗಳಾಗಿದ್ದರು. ಹಾಗೆಯೇ ಸಿದ್ದೇಶ್ವರ ಶ್ರೀಗಳು ಸನ್ಯಾಸ ದೀಕ್ಷೆ ಪಡೆದ ನಂತರದಲ್ಲೂ ಕಾವಿ ಧರಿಸದೆ, ಗುರುಗಳಂತೆ ಶ್ವೇತವಸ್ತ್ರಗಳನ್ನೇ ಧರಿಸುತ್ತಿದ್ದರು. ಆದರೆ ಪೂಜೆ-ಪುನಸ್ಕಾರ ಮಾಡುವಾಗ ಹಾಗೂ ಕೆಲ ಸಂದರ್ಭದಲ್ಲಿ ಕಾವಿ ಧರಿಸುತ್ತಿದ್ದರಂತೆ. ಶ್ರೀಗಳು ಧರಿಸುತ್ತಿದ್ದ ನೀಳ ಅಂಗಿಗೆ ಜೇಬುಗಳೇ ಇರಲಿಲ್ಲ. ಅವರ ಬಳಿ ಇದ್ದ 2 ಜತೆ ಬಿಳಿ ಪಂಚೆ ಹಾಗೂ ಅಂಗಿಯನ್ನು ತಾವೇ ಸ್ವಚ್ಛ ಮಾಡಿಕೊಳ್ಳುತ್ತಿದ್ದರು ಎಂದು ತಿಳಿದವರು ಹೇಳಿದ್ದಾರೆ.

ಒಂದನೇ ಪುಟದಿಂದ

ಸಂಸ್ಕಾರದಲ್ಲಿ ಭಾಗಿಯಾಗಲು ವ್ಯವಸ್ಥೆ ಮಾಡಲಾಗಿತ್ತು. ಅಂತಿಮ ವಿಧಿ ವಿಧಾನಗಳ ವೀಕ್ಷಿಸಲು ಎಲ್ಇಡಿ ಪರದೆಗಳನ್ನೂ ಅಳವಡಿಸಲಾಗಿತ್ತು. ಈ ವೇಳೆ ನೆರೆದಿದ್ದವರು ಓಂ ನಮಃ ಶಿವಾಯ ಜಪಿಸಿದರು. ಅಂತಿಮವಾಗಿ ಪೂರ್ವಕ್ಕೆ ತಲೆ ಮಾಡಿ ಶ್ರೀಗಳ ಪಾರ್ಥಿವ ಶರೀರವನ್ನಿಟ್ಟು ಅಂತಿಮ ವಿಧಿ ವಿಧಾನ ನೆರವೇರಿಸಲಾಯಿತು. ಇದೇ ವೇಳೆ ಸಕಲ ಸರ್ಕಾರಿ ಗೌರವವನ್ನು ಸಲ್ಲಿಸಲಾಯಿತು.

ಸುತ್ತೂರು ಶ್ರೀಗಳು, ಸಿರಿಗೆರೆ ಶ್ರೀಗಳು ಸೇರಿದಂತೆ ನೂರಾರು ಮಠಾಧೀಶರು, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಭಾಪತಿ ಬಸವರಾಜ ಹೊರಟ್ಟಿ ಸಚಿವ ಸಿ.ಸಿ.ಪಾಟೀಲ್, ಶಾಸಕರಾದ ಎಂ.ಬಿ.ಪಾಟೀಲ್, ಲಕ್ಷ್ಮಣ್ ಸವದಿ, ಸಿದ್ದು ಸವದಿ, ಹೆಚ್.ಕೆ.ಪಾಟೀಲ್, ಸಂಸದ ಅಣ್ಣಾ ಸಾಹೇಬ್ ಜೊಲ್ಲೆ, ಸಚಿವೆ ಶಶಿಕಲಾ ಜೊಲ್ಲೆ ಸೇರಿದಂತೆ ಜನಪ್ರತಿನಿಧಿಗಳು ಸಿದ್ದೇಶ್ವರರ ಚಿತೆಗೆ ತುಪ್ಪವನ್ನೆರೆದು ಅಂತಿಮ ವಿಧಿ ವಿಧಾನದಲ್ಲಿ ಭಾಗಿಯಾದರು. ಅಂತಿಮವಾಗಿ ಲಕ್ಷಾಂತರ ಜನರ ಅಶ್ರುತರ್ಪಣದ ನಡುವೆ ವಿಜಯಪುರದ ಜ್ಞಾನಯೋಗಾಶ್ರಮದ ಅಧ್ಯಕ್ಷ ಬಸವಲಿಂಗ ಶ್ರೀಗಳು, ಸಿದ್ದೇಶ್ವರರ ಚಿತೆಗೆ ಅಗ್ನಿಸ್ಪರ್ಶ ಮಾಡಿದರು. ಸರಳ ಸಂತ ತಮ್ಮಿಚ್ಛೆಯಂತೆಯೇ ಪ್ರಕೃತಿ ಮಡಿಲಲ್ಲಿ ಲೀನವಾದರು.

ಅಂತಿಮ ಯಾತ್ರೆ: ಸೈನಿಕ್ ಶಾಲೆ ಆವರಣದಿಂದ ಜ್ಞಾನಯೋಗಾಶ್ರಮದವರೆಗೆ ಶ್ರೀಗಳ ಅಂತಿಮ ಯಾತ್ರೆಯಲ್ಲಿ ಲಕ್ಷಾಂತರ ಮಂದಿ ಪಾಲ್ಗೊಂಡು ಕಂಬನಿ ಮಿಡಿದರು. 'ಬದುಕು ಸರಳ ಸ್ವಚ್ಛಂದವಾಗಿರಲಿ...' ಎಂಬ ಶ್ರೀಗಳ ವಾಕ್ಯವುಳ್ಳ ಬ್ಯಾನರ್ ಅಳವಡಿಸಿದ್ದ ತೆರೆದ ವಾಹನದಲ್ಲಿ ಶ್ರೀಗಳ ಪಾರ್ಥಿವ ಶರೀರವನ್ನು ಮೆರವಣಿಗೆಯಲ್ಲಿ ತರಲಾಯಿತು. ದಾರಿಯುದ್ದಕ್ಕೂ ರಂಗೋಲಿ ಬಿಡಿಸಿ, ಶ್ರೀಗಳಿಗೆ ನಮನ ಸಲ್ಲಿಸಲಾಗಿತ್ತು. ಇಕ್ಕೆಲಗಳ ಕಟ್ಟಡಗಳ ಮೇಲೆ ಸಾವಿರಾರು ಜನ ನಿಂತು ಶ್ರೀಗಳ ಅಂತಿಮ ದರ್ಶನ ಪಡೆದರು. ಸುಮಾರು 5 ಕಿ.ಮೀ. ಮಾರ್ಗದುದ್ದಕ್ಕೂ ರಸ್ತೆ ಬದಿ ನೆರೆದಿದ್ದವರು ಶ್ರೀಗಳ ಅಂತಿಮ ಯಾತ್ರೆ ವಾಹನಕ್ಕೆ ಪುಷ್ಪನಮನ ಸಲ್ಲಿಸಿದರು. ಸಿದ್ದೇಶ್ವರ ಮಹಾರಾಜ್‌ಕೀ ಜೈ ಎಂದು ಉದ್ಘರಿಸಿ, ಅಶ್ರುತರ್ಪಣದೊಂದಿಗೆ ಶ್ರೀಗಳನ್ನು ಬೀಳ್ಕೊಟ್ಟರು.

ಹರಿದುಬಂದ ಜನ: ವೈಕುಂಠ ಏಕಾದಶಿಯಂದು ಇಹಲೋಕದ ಪಯಣ ಮುಗಿಸಿದ ಶ್ರೀ ಸಿದ್ದೇಶ್ವರ ಪಾರ್ಥಿವ ಶರೀರವನ್ನು ಇಂದು ಮುಂಜಾನೆಯಿಂದ ಸೈನಿಕ್ ಶಾಲೆ ಆವರಣದಲ್ಲಿ ಅಂತಿಮ ದರ್ಶನಕ್ಕಿಡಲಾಗಿತ್ತು. ಸೋಮವಾರ ರಾತ್ರಿಯಿಂದ ಇಂದು ಸಂಜೆವರೆಗೂ ಜನಸಾಗರವೇ ಹರಿದು ಬಂದಿತು. ಕಡೆಯದಾಗಿ ಶ್ರೀಗಳ ದರ್ಶನ ಪಡೆಯಲೆಂದು ರಾಜ್ಯವೇ ಅಲ್ಲದೆ ನೆರೆ ಹೊರೆಯ ರಾಜ್ಯದ ವಿವಿಧೆಡೆಯಿಂದ ಜನ ಆಗಮಿಸಿದ್ದರು. ಕ್ಷಣ ಕ್ಷಣಕ್ಕೂ ಜನರ ಸಂಖ್ಯೆ ಹೆಚ್ಚುತ್ತಲೇ ಇತ್ತು. ಸರದಿಯಲ್ಲಿ ನಿಂತು ಶಿಸ್ತಿನಿಂದ ಶ್ರೀಗಳ ಅಂತಿಮ ದರ್ಶನ ಪಡೆದು ಪುನೀತ ಭಾವದಿಂದ ನಮನ ಸಲ್ಲಿಸಿದರು. ಲಕ್ಷಾಂತರ ಸಂಖ್ಯೆಯಲ್ಲಿ ಜನರ ಆಗಮನವನ್ನು ಗಮನಿಸಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಹನೆಯಿಂದ ಶ್ರೀಗಳ ದರ್ಶನ ಪಡೆಯಿರಿ, ಸಕಲ ಸರ್ಕಾರಿ ಗೌರವ ಸಮರ್ಪಣೆ ಬಳಿಕವೂ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು ಎಂದು ಮನವಿ ಮಾಡಿದ್ದರು. ಅಂತಿಮ ಯಾತ್ರೆವರೆಗೂ ಹಿಂದೂ-ಮುಸ್ಲಿಮ್-ಕ್ರಿಶ್ಚಿಯನ್ ಎನ್ನದೇ ಎಲ್ಲಾ ಸಮುದಾಯದ ಜನ ಸ್ವಾಮೀಜಿ ಅಂತಿಮ ದರ್ಶನಕ್ಕೆ ಬಂದಿದ್ದರು. ವಿವಿಧೆಡೆಯಿಂದ ಆಗಮಿಸಿದ್ದ ಶ್ರೀಗಳ ಭಕ್ತರಿಗೆ ಸಂಘ ಸಂಸ್ಥೆಗಳ ವತಿಯಿಂದಲೂ ಊಟ, ನೀರಿನ ವ್ಯವಸ್ಥೆ ಮಾಡಲಾಗಿತ್ತು. ವಿಜಯಪುರ ಜಿಲ್ಲೆಯ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು.

ಅಂತಿಮ ಸಂಸ್ಕಾರ

ಯಾವುದೇ ಬಗೆಯ ಸ್ಮಾರಕ ನಿರ್ಮಿಸಲಾಗದು.' ಎಂದು ತಮ್ಮ ಅಂತಿಮ ಅಭಿ ವಂದನ ಉಯಿಲಿನಲ್ಲಿ ದಾಖಲಿಸಿದ್ದರು. ಅದರಂತೆಯೇ ಸಹಜ ವಿಧಿ ವಿಧಾನಗಳನ್ನು ಅನುಸರಿಸಲಾಯಿತು. ಜ್ಞಾನಯೋಗಾಶ್ರಮದ ಆವರಣದಲ್ಲಿ ಕಟ್ಟೆ ಕಟ್ಟಿ, ಅದರ ಮೇಲೆ 6 ಅಡಿ ಅಗಲ ಹಾಗೂ 9 ಅಡಿ ಉದ್ದ ಹಾಗೂ ಒಂದೂವರೆ ಅಡಿ ಎತ್ತರದ ಗದ್ದುಗೆ ನಿರ್ಮಿಸಿ, ಅದರ ಮೇಲೆ ಶ್ರೀಗಂಧದ ಕಟ್ಟಿಗೆಗಳನ್ನು ಜೋಡಿಸಿ, ಬೆರಣಿ, ದೇಶಿ ಹಸುವಿನ ತುಪ್ಪ, ಕೊಬ್ಬರಿ ಹಾಕಿ ಶ್ರೀಗಳ ಇಚ್ಛೆಯಂತೆಯೇ ಅಗ್ನಿಸ್ಪರ್ಶ ಮಾಡಲಾಯಿತು. ಸುತ್ತೂರು ಶ್ರೀಗಳು ಹಾಗೂ ಕನ್ನೇರಿ ಶ್ರೀಗಳ ಸಮ್ಮುಖದಲ್ಲಿ ಜ್ಞಾನಯೋಗ ಆಶ್ರಮದ ಅಧ್ಯಕ್ಷ ಬಸವಲಿಂಗ ಸ್ವಾಮೀಜಿ ಅಂತಿಮ ಸಂಕಲ್ಪ ಪೂರೈಸಿದರು.

ಸಿದ್ದೇಶ್ವರ ಶ್ರೀಗಳ ಕುರಿತ 'ಸಂತರೆಂದರೆ ಯಾರು' ಹಾಡು ಬರೆದವರು ಮೈಸೂರಿನ ಶಿವಪ್ಪ

ಮೈಸೂರು, ಜ.3- ಶ್ರೀ ಸಿದ್ದೇಶ್ವರ ಶ್ರೀಗಳು ಲಿಂಗೈಕ್ಯರಾದ ಮೇಲೆ ಶ್ರೀಗಳ ಭಾವಚಿತ್ರದೊಂದಿಗೆ ಸಾಮಾಜಿಕ ಜಾಲತಾಣದಲ್ಲಿ ಸಂತನೆಂದರೆ ಯಾರು ಹಾಡು ವೈರಲ್ ಆಗಿದೆ. ಸಂತನೆಂದರೆ ಯಾರು, 'ದಿವ್ಯತೆಯ ಅರಿತವನು, ಸರಳತೆಯ ಸೂತ್ರದಲಿ ಸುಖವ ಕಂಡವನು' ಹಾಡು ಸಾಕಷ್ಟು ವೈರಲ್ ಆಗಿತ್ತು. ಈ ಹಾಡು ಸಿದ್ದೇಶ್ವರ ಶ್ರೀಗಳಿಗೆ ಒಪ್ಪುವಂತಹ ಹಾಡು. ಸುಂದರವಾದ ಸಾಹಿತ್ಯವನ್ನು ಹೊಂದಿರುವ ಈ ಹಾಡನ್ನು ಬರೆದವರು ಮೈಸೂರಿನ ಸಾಹಿತಿ ಕೆ.ಸಿ.ಶಿವಪ್ಪ 2002ರಲ್ಲಿ ಬರೆದಿದ್ದ ಹಾಡು ಈಗ ವೈರಲ್ ಆಗುತ್ತಿದೆ.

ಸಾಹಿತಿ ಶಿವಪ್ಪ ಪ್ರೇಮ ಕವಿಯಾಗಿದ್ದರು. ನಂತರ ಇವರು ಸಿದ್ದೇಶ್ವರ ಶ್ರೀಗಳ ಒಡನಾಟಕ್ಕೆ ಬಂದರು. ಶ್ರೀಗಳ ಪರಿಚಯದ ನಂತರ ಸಂಪೂರ್ಣ ಬದಲಾದರು. ಪ್ರೇಮಕವಿಯಾಗಿದ್ದ ಸಾಹಿತಿ ಶಿವಪ್ಪ ಆಧ್ಯಾತ್ಮಕದ ಕಡೆಗೆ ಒಲವು ಬೆಳಸಿಕೊಂಡರು. ಹೀಗೆ ಶ್ರೀಗಳೊಂದಿಗೆ ಕಳೆದ 25 ವರ್ಷಗಳಿಂದ ಒಡನಾಟದಲ್ಲಿದ್ದರು. ಸಾಹಿತಿ ಶಿವಪ್ಪ ದೇಶ-ವಿದೇಶಗಳಲ್ಲಿ ಅವರ ಜೊತೆ ಪ್ರವಚನದಲ್ಲಿ ಭಾಗಿಯಾಗಿದ್ದರು. ಸಾಹಿತಿ ಶಿವಪ್ಪ, ಶ್ರೀಗಳ ಒಡನಾಟಕ್ಕೆ ಬಂದ ನಂತರ ಶ್ರೀಗಳಿಗಾಗಿ ಸಂತನೆಂದರೆ ಯಾರು ಎಂದು ಹಾಡನ್ನು ಬರೆದರು. ಅದರ ಹಸ್ತಪ್ರತಿಯನ್ನು ಈಗಲೂ ಅವರು ಇಟ್ಟುಕೊಂಡಿದ್ದಾರೆ. ಈ ಹಾಡನ್ನು ಶಿವಪ್ಪ 10 ದಿನದ ಹಿಂದೆ ಸಿದ್ದೇಶ್ವರ ಶ್ರೀಗಳನ್ನು ಭೇಟಿಯಾಗಿ ಕೇಳಿಸಿದ್ದರು. ಸಂತನೆಂದರೆ ಯಾರು ಹಾಡು ಕೇಳಿದ ಸಿದ್ದೇಶ್ವರ ಶ್ರೀಗಳು, ಮಾತನಾಡಲು ಆಗದೆ ಸನ್ನೆ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದ್ದರು. ತದನಂತರ ಸಾಹಿತಿ ಶಿವಪ್ಪ ಶ್ರೀಗಳ ಮುಂದೆ ಕಣ್ಣೀರಾಕಿದ್ದರು. ಶಿವಪ್ಪ 30 ಸಾವಿರಕ್ಕೂ ಹೆಚ್ಚು ಚೌಪದಿ ಬರೆದಿದ್ದಾರೆ. ಇದೀಗ ಸಿದ್ದೇಶ್ವರ ಶ್ರೀಗಳ ಅಗಲಿಕೆ ಕಂಡು ತೀವ್ರ ದುಃಖಿತರಾಗಿದ್ದಾರೆ.

ಸಿದ್ದೇಶ್ವರ ಶ್ರೀಗಳ ಅಗಲಿಕೆಗೆ ನಟರ ಸಂತಾಪ

ಮೈಸೂರು: ಸಿದ್ದೇಶ್ವರ ಶ್ರೀಗಳ ಅಗಲಿಕೆಗೆ ಸ್ಯಾಂಡಲ್‌ವುಡ್ ನಟರು ಸಂತಾಪ ಸೂಚಿಸಿದ್ದಾರೆ. ನಟ ಶಿವರಾಜ್‌ಕುಮಾರ್ 'ಜ್ಞಾನಿಯೋಗಿಗಳಾಗಿದ್ದ ಶ್ರೀ ಸಿದ್ದೇಶ್ವರ ಸ್ವಾಮಿಗಳ ಅಗಲಿಕೆಯ ನೋವಿನಲ್ಲಿ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ' ಎಂದು, ನಟ ಯಶ್ 'ನುಡಿದಂತೆ ನಡೆದು ಸರಳತೆಯ ಸಂದೇಶ ಸಾರಿ ಶತಮಾನಗಳಿಗಾಗುವಷ್ಟು ಜ್ಞಾನದ ಬುತ್ತಿ ಕಟ್ಟಿಕೊಟ್ಟ ಸಂತಶ್ರೇಷ್ಠರಿಗೆ ವಿನಮ್ರ ಶ್ರದ್ಧಾಂಜಲಿ... ಓಂ ಶಾಂತಿ...' ಎಂದು, ಉಪೇಂದ್ರ 'ಓಂ ಶಾಂತಿ' ಎಂದು, ಡಾಲಿ ಧನಂಜಯ್ 'ಶತಮಾನದ ಸಂತ, ನಾಡು ಕಂಡ ನಡೆದಾಡುವ ದೇವರು ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರು ಲಿಂಗೈಕ್ಯರಾಗಿರುವುದು ತುಂಬಾ ನೋವುಂಟು ಮಾಡಿದೆ... ಅವರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಜ್ಞಾನದ ಬೆಳಕು ನಮ್ಮನ್ನು ಸದಾ ಕಾಯುತ್ತಿರಲಿ' ಎಂದು ಟ್ವೀಟ್ ಮಾಡಿದ್ದಾರೆ. ಕಿಚ್ಚ ಸುದೀಪ್ 'ಶ್ರೀಗಳ ಫೋಟೋ ಸಹಿತ ಭಾವಪೂರ್ಣ ಶ್ರದ್ಧಾಂಜಲಿ' ಪೋಸ್ಟ್ ಮಾಡಿದ್ದಾರೆ.

ಸಿದ್ದೇಶ್ವರ ಶ್ರೀಗಳಿಗೆ 'ಭಾರತ ರತ್ನ' ನೀಡಬೇಕೆಂಬ ಕೂಗು...

ವಿಜಯಪುರ, ಜ.3- ನಿಸ್ವಾರ್ಥ ಸೇವೆ, ಯಾರ ಹಂಗಿಗೂ ಒಳಗಾಗದೆ ಸರ್ವಜನರಿಂದಲೂ ಪ್ರೀತಿ, ವಿಶ್ವಾಸದ ಆಶ್ರಯತಾಣವಾಗಿ ಪೂಜ್ಯ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಪ್ರವಚನದ ಮೂಲಕ ಜನರಲ್ಲಿ ಜ್ಞಾನದ ಜ್ಯೋತಿಯನ್ನು ಬೆಳಗುತ್ತ ಸರಳವಾದ ಸ್ಫೂರ್ತಿದಾಯಕ ಜೀವನ ಶೈಲಿಯನ್ನು ಹೊಂದಿದ್ದ ವಿಜಯಪುರ ಜ್ಞಾನಯೋಗಾಶ್ರಮದ ಪರಮ ಪೂಜ್ಯ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಶಿವೈಕ್ಯರಾಗಿದ್ದಾರೆ. ಈಗ ಅವರಿಗೆ ಅವರಿಗೆ ಭಾರತರತ್ನ ಪ್ರಶಸ್ತಿ ನೀಡಬೇಕೆಂಬ ಮೊದಲ ಕೂಗು ಕೇಳಿಬಂದಿದೆ.

ಇಂದು(ಜನವರಿ 03) ಸಿದ್ದೇಶ್ವರ ಸ್ವಾಮೀಜಿಗೆ ಅಂತಿಮ ನಮನ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಬಾಗಲಕೋಟೆ ಜಿಲ್ಲೆ ಇಳಕಲ್ ವಿಜಯಮಹಾಂತೇಶ್ ಮಠದ ಗುರುಮಹಾಂತ ಶ್ರೀಗಳು, ಸಿದ್ದೇಶ್ವರ ಶ್ರೀಗಳಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕೆಂದು ಮೊದಲು ಧ್ವನಿ ಎತ್ತಿದ್ದಾರೆ.

ಸಿದ್ದೇಶ್ವರ ಶ್ರೀಗಳು ನಾಡಿನ ಮಹಾನ್ ಸಂತರು. ನಡೆದಾಡುವ ದೇವರು. ಅವರ ಖ್ಯಾತಿ ಮಹಿಮೆ ಜಗದಗಲ, ಮುಗಿಲಗಲ. ಅವರಿಗೆ ಜಾತಿಭೇದ ಪಂಥವಿಲ್ಲ. ಹಾಗಾಗಿ ಅವರಿಗೆ ಭಾರತ ಸರಕಾರ ಭಾರತರತ್ನ ನೀಡಬೇಕು. ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಿದರೆ ಪ್ರಶಸ್ತಿ ಗೌರವ ಹೆಚ್ಚಾಗುತ್ತದೆ ಎಂದು ಆಗ್ರಹಿಸಿದರು.

ಪದ್ಮಶ್ರೀ ಪ್ರಶಸ್ತಿ ನಿರಾಕರಿಸಿದ್ದ ಶ್ರೀಗಳು: ಇನ್ನು 2018ರಲ್ಲಿ ಕಲಬುರಗಿ ನಗರದಲ್ಲಿ ಸಿದ್ದೇಶ್ವರ ಸ್ವಾಮೀಜಿಯವರ ಪ್ರವಚನ ಕಾರ್ಯಕ್ರಮವಿತ್ತು. ಆಗಲೇ ಕೇಂದ್ರ ಸರ್ಕಾರ, ಸಿದ್ದೇಶ್ವರ ಸ್ವಾಮೀಜಿಗೆ ಪದ್ಮಶ್ರೀ ಪ್ರಶಸ್ತಿಯನ್ನು ಘೋಷಿಸಿತ್ತು. ಆದರೆ ಪ್ರಶಸ್ತಿಯನ್ನು ಶ್ರೀಗಳು ವಿನಯದಿಂದಲೇ ತಿರಸ್ಕರಿಸಿದ್ದರು. ನಾನು ಒಬ್ಬ ಸಂತ. ನನಗೇಕೆ ಪ್ರಶಸ್ತಿ, ಕೇಂದ್ರ ಸರ್ಕಾರ ನೀಡಿರುವ ಪ್ರಶಸ್ತಿ ಮೇಲೆ ನನಗೆ ಗೌರವವಿದೆ. ಆದರೆ ನನಗೆ ಪ್ರಶಸ್ತಿ ಬೇಡ ಎಂದು ತಿರಸ್ಕರಿಸಿದ್ದರು.

ಭಾರತ ಸರಕಾರ ನೀಡುವ ಅತ್ಯುನ್ನತ ನಾಗರಿಕ ಗೌರವ ಪ್ರಶಸ್ತಿಗಳ ಮೇಲೆ ನನಗೆ ಅಪಾರ ಗೌರವವಿದೆ. ಪದ್ಮಶ್ರೀ ಪ್ರಶಸ್ತಿ ಘೋಷಿಸಿದ್ದಕ್ಕೆ ಧನ್ಯವಾದಗಳು. ಆದರೆ ನಾನೊಬ್ಬ ಸರಳ ವ್ಯಕ್ತಿ. ಸಾಮಾನ್ಯ ಜೀವನ ನಡೆಸುತ್ತ, ಆಧ್ಯಾತ್ಮಿಕ ಬೋಧನೆಯ ಮೂಲಕ ಜನರ ಜೀವನ ಉದಾತ್ತಗೊಳಿಸುವ ಉದ್ದೇಶ ನನ್ನದು. ಹಾಗಾಗಿ ಪ್ರಶಸ್ತಿಗಳ ಅವಶ್ಯಕತೆ ನನಗಿಲ್ಲ. ಎಲ್ಲ ಗೌರವಾದರಗಳೊಂದಿಗೆ ಈ ಪ್ರಶಸ್ತಿಯನ್ನು ಹಿಂದಿರುಗಿಸುತ್ತಿದ್ದೇನೆ. ಅನ್ಯಥಾ ಭಾವಿಸದಿರಿ ಎಂದು ಸಿದ್ದೇಶ್ವರ ಸ್ವಾಮೀಜಿಗಳು ಪದ್ಮಶ್ರೀ ಪ್ರಶಸ್ತಿಯನ್ನು ನಿರಾಕರಿಸಿದ್ದರು.

ವಿಶ್ವವಿದ್ಯಾನಿಲಯ ಅವರಿಗೆ ಗೌರವ ಡಾಕ್ಟರೇಟ್ ಪ್ರಕಟಿಸಿತ್ತು. ಅದನ್ನೂ ಶ್ರೀಗಳು ಸ್ವೀಕರಿಸಿರಲಿಲ್ಲ. ಹೀಗೆ ತಮಗೆ ಸಂದ ಎಷ್ಟೋ ಪ್ರಶಸ್ತಿ ಮತ್ತು ಪುರಸ್ಕಾರಗಳನ್ನು ಅವರು ವಿನಮ್ರವಾಗಿಯೇ ನಿರಾಕರಿಸಿದ್ದರು. ಇದಕ್ಕೆ ಕಾರಣವೇನು ಎಂಬ ಪ್ರಶ್ನೆಗೆ, ಅವರು ಆಧ್ಯಾತ್ಮ, ಆದರ್ಶ ಮತ್ತು ನೈತಿಕತೆ ಬಗ್ಗೆ ಕೇವಲ ಬೋಧನೆ ಮಾಡುವುದಷ್ಟೇ ಅಲ್ಲ. ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ. ನುಡಿದಂತೆ ನಡೆಯುವ ಮತ್ತು ನಡೆದಂತೆಯೇ ನುಡಿಯುವ ವ್ಯಕ್ತಿತ್ವ ಅವರದು ಎಂದು ಸ್ವಾಮೀಜಿಯನ್ನು ಹತ್ತಿರದಿಂದ ಕಂಡವರು ಹೇಳುತ್ತಾರೆ.



ಜನಪರ ಕಾರ್ಯದಿಂದ ಜನರ ಮನಗೆಲ್ಲಿ

ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಶಾಸಕ ಪುಟ್ಟರಾಜು ಕಿವಿಮಾತು



ಮಂಡ್ಯ, ಜ.3– ಸಾರ್ವಜನಿಕರ ಕೆಲಸಗಳನ್ನು ಉತ್ಸುಕತೆಯಿಂದ ನಿರ್ವಹಿಸಿ, ಜನಪರ ಕಾರ್ಯವೈಖರಿ ಮೂಲಕ, ಸಾರ್ವಜನಿಕರ ಮನಗೆಲ್ಲಿ ಎಂದು ಶಾಸಕ ಸಿ.ಎಸ್.ಪುಟ್ಟರಾಜು ತಿಳಿಸಿದರು.

ಮಂಡ್ಯ ನಗರದಲ್ಲಿ ನಡೆದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾ ಕೂಟ, ರಾಷ್ಟ್ರದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನ ಹಾಗೂ ಕನ್ನಡ ರಾಜ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.

ಕನ್ನಡ ರಾಜ್ಯೋತ್ಸವ ಕೇವಲ ನವೆಂಬರ್ ತಿಂಗಳಿಗಷ್ಟೆ ಸೀಮಿತವಾಗದೆ ವರ್ಷ ಪೂರ್ತಿ ಆಚರಣೆ ಮಾಡಬೇಕು. ಕ್ರೀಡೆಯಿಂದ ಕೆಲಸ ಒಂದು ಗುರಿ ಮುಟ್ಟುವ ಉತ್ಸಾಹ ಹೆಚ್ಚುತ್ತದೆ. ಈ ಉತ್ಸಾಹ ಮನೋಭಾವವನ್ನು ನೌಕರರು ತಮ್ಮ ಕೆಲಸದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನೌಕರರಿಗಾಗಿ ಕ್ರೀಡಾಕೂಟಗಳು ನಡೆಯುತ್ತಿರಬೇಕು. ಒತ್ತಡದಲ್ಲಿ ಕೆಲಸ ಮಾಡುವವರಿಗೆ ಕ್ರೀಡೆ ಮಾನಸಿಕ ಹಾಗೂ ದೈಹಿಕವಾಗಿ ಸದೃಢಗೊಳಿಸುತ್ತದೆ. ಮಾನಸಿಕ ಒತ್ತಡ ಕಡಿಮೆಗೊಳಿಸುತ್ತದೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷರಾದ ಹೆಚ್.ಎಸ್.ಮಂಜು ಮಾತನಾಡಿ, ದೇಹ ಮತ್ತು ಮನಸ್ಸು ಇವೆರಡರ ಸಮನ್ವಯತೆ ಸಾಧಿಸಿದಾಗ ಬದುಕು ಸಾರ್ಥಕ. ದೈಹಿಕ ಕಸರತ್ತು ಮತ್ತು ಸಕಾರಾತ್ಮಕ ಚಿಂತನೆಗಳ ನಮ್ಮೆಲ್ಲರ ದೈನಂದಿನ ಚಟುವಟಿಕೆ ಭಾಗವಾಗಬೇಕು ಎಂದು ಹೇಳಿದರು. ಸ್ಪರ್ಧಾ ಸಾಮರ್ಥ್ಯವನ್ನು ಹೆಚ್ಚಿಸಲು ಕ್ರೀಡೆ ಸಹಕಾರಿ, ಮನಸ್ಸನ್ನು ಮುದಗೊಳಿಸಲು ಸಾಂಸ್ಕೃತಿಕ ಚಟುವಟಿಕೆ ಸಹಕರಿಸುತ್ತದೆ.

ಅವಸರದ ಜೀವನ ಶೈಲಿ ಕಾರ್ಯಭಾರದ ಒತ್ತಡ ದೈಹಿಕ ಶಕ್ತಿಯನ್ನು ಕುಗ್ಗಿಸುತ್ತದೆ. ದೈಹಿಕ, ಮಾನಸಿಕ ಚಟುವಟಿಕೆ ಇಲ್ಲದಿದ್ದರೆ, ಕೆಲಸದಲ್ಲಿ ನಿರಾಸಕ್ತಿ, ನಿರುತ್ಸಾಹ ಮಡುಗಟ್ಟುತ್ತದೆ. ಲವಲವಿಕೆಯ ಕ್ರಿಯಾಶೀಲತೆಗಾಗಿ ಸರ್ಕಾರಿ ನೌಕರರಿಗೆ ಕ್ರೀಡಾಕೂಟಗಳು, ಸಾಂಸ್ಕೃತಿಕ ಚಟುವಟಿಕೆಗಳು ಅಗತ್ಯ ಎಂದು ತಿಳಿಸಿದರು.

ಶಿಕ್ಷಕರು ಪಾಠ ಪ್ರವಚನದಲ್ಲಿ ತೊಡಗಿರುತ್ತಾರೆ, ಕಚೇರಿಯ ಕೆಲಸ ಮಾಡುವವರು ಕಡತಗಳ ಮಧ್ಯದಲ್ಲಿ ಇರುತ್ತಾರೆ. ಇಂತಹ ಒತ್ತಡದಿಂದ ಹೊರ ಬಂದು ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಎಂ.ಶ್ರೀನಿವಾಸ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಶಂಭುಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಓಂಪ್ರಕಾಶ್ ಜಿ, ಕರಾಸನೌ ಸಂಘದ ಖಜಾಂಚಿ ಕೆ.ಗೋಪಾಲ್, ಪ್ರಧಾನ ಕಾರ್ಯದರ್ಶಿ ಆರ್.ದೇವರಾಜು, ಗೌರವಾಧ್ಯಕ್ಷ ಸಿ.ಜೆ.ಶ್ರೀನಿವಾಸ್, ರಾಜ್ಯ ಪರಿಷತ್ ಸದಸ್ಯ ಬಿ.ಎನ್.ನಾಗೇಶ್, ಡಿಹೆಚ್‌ಓ ಡಾ. ಧನಂಜಯ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ವಿ.ಎಸ್. ಅಶೋಕ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

ನಾಳೆ ಕೆಎಸ್‌ನ ಸಾಹಿತ್ಯ, ಕಾವ್ಯ ಗಾಯನ ಪ್ರಶಸ್ತಿ ಪ್ರದಾನ

ಮಂಡ್ಯ, ಜ.3– ಕೆ.ಎಸ್ ನರಸಿಂಹ ಸ್ವಾಮಿ ಟ್ರಸ್ಟ್ ಮಂಡ್ಯ ಇವರ ವತಿಯಿಂದ 2021–2022 ಮತ್ತು 2022–23ನೇ ಸಾಲಿನ ಸಾಹಿತ್ಯ ಪ್ರಶಸ್ತಿ ಹಾಗೂ ಕಾವ್ಯಗಾಯನ ಪ್ರಶಸ್ತಿ ಪ್ರದಾನ ಸಮಾರಂಭ ಜ.5ರಂದು ಮಂಡ್ಯ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಸಂಜೆ 5ಗಂಟೆಗೆ ಹಮ್ಮಿಕೊಳ್ಳ ಲಾಗಿದೆ ಎಂದು ಕೆಎಸ್. ನರಸಿಂಹಸ್ವಾಮಿ ಟ್ರಸ್ಟ್‌ನ ಆಡಳಿತಾಧಿಕಾರಿ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಕಲಾಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಮೊದಲ ಬಾರಿಗೆ ಈ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ. ಮಂಡ್ಯ ಉಸ್ತುವಾರಿ ಸಚಿವ ಕೆ.ಗೋಪಾಲಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ರೇಷ್ಮೆ ಸಚಿವ ಡಾ.ಕೆ.ಸಿ ನಾರಾಯಣಗೌಡ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಹೇಳಿದರು.

2021–22 ನೇ ಸಾಲಿನ ಕೆಎಸ್‌ಎನ್ ಸಾಹಿತ್ಯ ಪ್ರಶಸ್ತಿಯನ್ನು ಕವಯತ್ರಿ ಸವಿತಾ ನಾಗಭೂಷಣ್ ರವರಿಗೆ, 2022–23 ನೇ ಸಾಲಿನ ಸಾಹಿತ್ಯ ಪ್ರಶಸ್ತಿಯನ್ನು ಕವಿ ಸರಜೂ ಕಾಟ್ಕರ್ ರವರಿಗೆ ಪ್ರದಾನ ಮಾಡಲಾಗುವುದು ಎಂದರು.



ಇದೇ ರೀತಿ 2021–22 ನೇ ಸಾಲಿನ ಕಾವ್ಯಗಾಯನ ಪ್ರಶಸ್ತಿಯನ್ನು ಗಾಯಕಿ ಎಂ.ಕೆ ಜಯಶ್ರೀ, 2022–23 ನೇ ಸಾಲಿನ ಕಾವ್ಯಗಾಯನ ಪ್ರಶಸ್ತಿಯನ್ನು ಗಾಯಕರಾದ ಗರ್ತಿಕೆರೆ ರಾಘಣ್ಣರವರಿಗೆ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ಕೆ.ಎಸ್ ನರಸಿಂಹಸ್ವಾಮಿ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಕಿಕ್ಕೇರಿ ಕೃಷ್ಣಮೂರ್ತಿ ಮಾತನಾಡಿ, ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಖ್ಯಾತಿಯ ಕಲಾವಿದರಾದ ಜೋಗಿ ಸುನೀತಾ, ಅರ್ಚನ ಉಡುಪ, ಶ್ರೀನಿವಾಸ ಉಡುಪ, ಮಂಡ್ಯದ ಡೇವಿಡ್, ವಿದ್ಯಾಶಂಕರ್, ಶ್ರೀಧರ್ ಇನ್ನೂ ಮುಂತಾದ ಕಲಾವಿದರಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದರು. ಕೆ.ಎಸ್.ನ ಗೀತೆಗಳಿಗೆ ಚಿದಂಬರ ನಟೇಶ್ ನೃತ್ಯ ಶಾಲೆ ಹಾಗೂ ಸುನೀತಾ ಮತ್ತು ತಂಡದಿಂದ ನೃತ್ಯ ರೂಪಕ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಉದಯಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲಾ ಹಾಜರಿದ್ದರು.

ಸಿದ್ಧಾರೂಢ ಮಠದಲ್ಲಿ ವೈಕುಂಠ ಏಕಾದಶಿ



ಕಿಕ್ಕೇರಿ, ಜ.3– ಪಟ್ಟಣದ ಕುರುಹಿನ ಶೆಟ್ಟಿ ಸಮುದಾಯದ ಸಿದ್ಧಾರೂಢ ಮಠದಲ್ಲಿ ವೈಕುಂಠ ಏಕಾದಶಿ ಸಂಭ್ರಮ ವಿಜೃಂಭಣೆಯಿಂದ ನೆರವೇರಿತು.

ಕೆ.ಎಸ್. ನರಸಿಂಹಸ್ವಾಮಿ ಬೀದಿಯಲ್ಲಿರುವ ನರಸಿಂಹಸ್ವಾಮಿ ದೇವಾಲಯದಲ್ಲಿ ನಡೆದ ಪೂಜೆಯಲ್ಲಿ ವಿವಿಧ ಹೂವುಗಳಿಂದ ಅಲಂಕರಿಸಿದ್ದ ವೈಕುಂಠ ಪ್ರವೇಶ ದ್ವಾರದಿಂದ ಭಕ್ತರು ದೇಗುಲ ಪ್ರವೇಶಿಸಿ ದೇವರ ದರ್ಶನ ಪಡೆದರು. ಗದ್ದೆಹೊಸೂರು ಗ್ರಾಮದ ಅಭಯ ವೆಂಕಟೇಶ್ವರ ದೇಗುಲ, ಗೂಡೆ ಹೊಸಹಳ್ಳಿ ಗ್ರಾಮದ ವೆಂಕಟೇಶ್ವರಸ್ವಾಮಿ, ಆನೆಗೊಳ, ಡಾಣನಹಳ್ಳಿ, ಮಂದಗೆರೆ, ಮಾದಾಪುರ ಆಂಜನೇಯ ದೇಗುಲದಲ್ಲಿ ವಿಶೇಷ ಪೂಜೆ ನೆರವೇರಿತು.

ಚೆಲುವನಾರಾಯಣಸ್ವಾಮಿಗೆ ಬಂಗಾರದ ಕವಚ ಧಾರಣೆ

ಮೇಲುಕೋಟೆ, ಜ.3– ವೈಕುಂಠದ ಒಡೆಯನಾದ ಚೆಲುವನಾರಾಯಣಸ್ವಾಮಿಗೆ ಮುಕ್ಕೋಟಿ ದ್ವಾದಶಿಯ ಪ್ರಯುಕ್ತ ಮಂಗಳವಾರ ಬಂಗಾರದ ಕವಚ ಧರಿಸಿ ಧನುರ್ಮಾಸದ ಪೂಜೆ ನೆರವೇರಿಸಲಾಯಿತು.



ಚೆಲುವನಾರಾಯಣಸ್ವಾಮಿಯೇ ಸಾಕ್ಷಾತ್ ಮಹಾವಿಷ್ಣುವಾಗಿರುವ ಕಾರಣ ಮೇಲುಕೋಟೆ ಕ್ಷೇತ್ರ ಭೂವೈಕುಂಠ ಎನಿಸಿದೆ. ಸದಾಕಾಲ ಭಕ್ತರಿಗೆ ಸ್ವರ್ಗದಲ್ಲಿರುವ ಚೆಲುವನಾರಾಯಣಸ್ವಾಮಿಯೇ ದರ್ಶನ ನೀಡುವ ಕಾರಣ ದೇವಾಲಯದಲ್ಲಿ ಪ್ರತ್ಯೇಕ ಸ್ವರ್ಗದ ಬಾಗಿಲಿಲ್ಲ. ಆದರೆ, ಏಕಾದಶಿ ಆಚರಣೆ ಮಾತ್ರ ಇದ್ದು ಪೂಜೆಗಳು ನೆರವೇರಿದವು

ಮುಕ್ಕೋಟಿ ದ್ವಾದಶಿ ನಿಮಿತ್ತ ದೇಗುಲದ ಬೊಕ್ಕಸದಲ್ಲಿರುವ ಮಹಾರಾಜರು ಸಮರ್ಪಿಸಿರುವ ಬಂಗಾರದ ಕವಚವನ್ನು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಮಹೇಶ್ ಹಾಗೂ ಸ್ಥಾನೀಕರಾದ ಕರಗಂ ನಾರಾಯಣಯ್ಯಂಗಾರ್, ಸ್ಥಾನಾಚಾರ್ಯರಾದ ಶ್ರೀನಿವಾಸನರಸಿಂಹನ್ ಗುರೂಜಿ, ಸಂಪತ್ ಕುಮಾರನ್, ಪ್ರಸನ್ನ, ಶ್ರೀರಾಮನ್, ಸ್ವಾಮಿ ಸನ್ನಿಧಿ ಅರ್ಚಕರಾದ ವರದರಾಜ ಭಟ್ ಹಾಗೂ ಪರಿಚಾರಕರು ಮತ್ತು ಪಾರುಪತ್ತೇಗಾರ ಎಂ.ಎನ್ ಪಾರ್ಥಸಾರಥಿ, ಪರಕಾಲಮಠದ ಪ್ರತಿನಿಧಿಗಳ ಸಮಕ್ಷಮ ತೆಗೆದು ಚೆಲುವ ನಾರಾಯಣಸ್ವಾಮಿಗೆ ಧರಿಸಿ ಅಲಂಕಾರ ಮಾಡಲಾಗಿತ್ತು. ಸಾವಿರಾರು ಭಕ್ತರು ಸ್ವಾಮಿಯ ದರ್ಶನ ಪಡೆದರು. ಮೇಲುಕೋಟೆ ಚೆಲುವ ನಾರಾಯಣಸ್ವಾಮಿ ಕೃಪಾಕಟಾಕ್ಷಕ್ಕೆ ಶನಿವಾರ ಮತ್ತು ದ್ವಾದಶಿಯ ದರ್ಶನ ಅದರಲ್ಲೂ ಮುಕ್ಕೋಟಿ ದ್ವಾದಶಿಯ ದರ್ಶನ ಅತ್ಯಂತ ಪವಿತ್ರವಾಗಿದೆ. ಆದರೆ ಬಹುಪಾಲು ಭಕ್ತರಿಗೆ ದ್ವಾದಶಿ ಮಹತ್ವದ ಮಾಹಿತಿಯಿಲ್ಲದ ಕಾರಣ ಭಕ್ತರ ಸಂಖ್ಯೆ ವಿರಳವಾಗಿತ್ತು.

ತಡಗವಾಡಿ ಗ್ರಾಪಂ ಅಧ್ಯಕ್ಷ, ಪಿಡಿಓ ವಿರುದ್ಧ ಪ್ರತಿಭಟನೆ

ಶ್ರೀರಂಗಪಟ್ಟಣ, ಜ.3– ತಾಲೂಕಿನ ತಡಗವಾಡಿ ಗ್ರಾಪಂ ಅಧ್ಯಕ್ಷ ಜಿ.ಎನ್ ಮಧು ಹಾಗೂ ಪಿಡಿಓ ಎಂ.ಶ್ರೀನಿವಾಸ್ ಪಂಚಾಯಿತಿ ಸದಸ್ಯರನ್ನ ವಿಶ್ವಾಸಕ್ಕೆ ತೆಗೆದುಕೊಳ್ಳದೆ ಹಲವು ನಿರ್ಣಯಗಳನ್ನು ಕೈಗೊಂಡಿದ್ದಾರೆ ಎಂದು ಆರೋಪಿಸಿ ಗ್ರಾಪಂ ಕೆಲ ಸದಸ್ಯರು ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಿದರು.



ಗ್ರಾಪಂ ಸಾಮಾನ್ಯ ಸಭೆಯ ನಿರ್ಣಯಗಳನ್ನು ತಿರುಚಿ, ತಮಗೆ ಅನುಕೂಲವಾಗುವಂತೆ ಬರೆದುಕೊಳ್ಳುತ್ತಿದ್ದಾರೆ. ಸಾಮಾನ್ಯ ಸಭೆಗಳನ್ನು ಸಮಯಾನುಸಾರ ಕರೆಯದೇ, ಜಮಾ– ಖರ್ಚಿನ ವಿವರಗಳನ್ನು ಸಭೆಯಲ್ಲಿ ಮಂಡಿಸಿ ಒಪ್ಪಿಗೆ ಪಡೆಯದೆ ಬಿಲ್‌ಗಳನ್ನು ಪಾಸ್ ಮಾಡಿದ್ದಾರೆ ಎಂದು ಆರೋಪಿಸಿದರು. ನ.23 ರಂದು ನಡೆದ ಸಾಮಾನ್ಯ ಸಭೆ ಸಭಾ ನಿರ್ಣಯವನ್ನು ಡಿ.31ರವರೆಗೂ ದಾಖಲಿಸದೆ, ಸಭೆಯಲ್ಲಿ ಚರ್ಚಿಸದೇ ಇರುವ ವಿಷಯಗಳನ್ನು ಸಭಾ ನಿರ್ಣಯದಲ್ಲಿ ದಾಖಲಿಸಿದ್ದಾರೆ ಎಂದು ಅಧ್ಯಕ್ಷ ಹಾಗೂ ಪಿಡಿಓ ವಿರುದ್ಧ ಕಿಡಿಕಾರಿದರು.

ಸದಸ್ಯ ಟಿ.ಎಲ್. ರಘು ಮಾತನಾಡಿ, 15ನೇ ಹಣಕಾಸಿನ 10.8ಲಕ್ಷ ಎಂಜಿಎನ್‌ಆರ್‌ಇಜಿಎ ಯೋಜನೆಗೆ ಬಹುತೇಕ ಸದಸ್ಯರಿಂದ ವಿರೋಧ ವ್ಯಕ್ತವಾಗಿ ಯೋಜನೆ ಕೈ ಬಿಡುವಂತೆ ನಿರ್ಣಯವಾಗಿದ್ದರೂ ಸಹ ಸಭೆಯು ಒಪ್ಪಿರುತ್ತದೆ ಎಂದು ದಾಖಲಿಸುವ ಮೂಲಕ ತಮ್ಮ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದರು.

ಪಂಚಾಯಿತಿಯಲ್ಲಿ ನಡೆಯುವ ಎಲ್ಲಾ ವಿವರಗಳಿಗೆ ತನಿಖೆ ನಡೆಸಬೇಕು ಹಾಗೂ ಅಧಿಕಾರ ದುರ್ಬಳಕೆ ಮಾಡಿಕೊಂಡು ಏಕ ಪಕ್ಷಿಯ ನಿರ್ಣಯಗಳನ್ನು ದಾಖಲಿಸಿರುವ ಸಭಾ ನಿರ್ಣಯವನ್ನು ರದ್ದುಪಡಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಪಂಚಾಯಿತಿ ಸದಸ್ಯರಾದ ಟಿ.ಎಲ್. ರಘು, ಪ್ರಹ್ಲಾದ, ಟಿ. ಎನ್.ದಿನೇಶ್‌ಕುಮಾರ್, ಸ್ವಾಮಿಗೌಡ, ಅನಿವಾಶ್, ಸಿ.ರಾಧ, ಪೂರ್ಣಿಮಾ, ಕವಿತ, ಕಾಂತರಾಜು ಸೇರಿದಂತೆ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಒತ್ತಾಯಿಸಿದರು.

ಉಪ್ಪಾರಹಳ್ಳಿ ಶಾಲೆಯಲ್ಲಿ ಬಾಗಿಲು ಮುರಿದು ಕಳವು

ನಾಗಮಂಗಲ, ಜ.3– ಸರ್ಕಾರಿ ಪ್ರೌಢಶಾಲಾ ಕೊಠಡಿ ಬಾಗಿಲು ಮುರಿದು ಡೆಸ್ಕ್‌ನ ಕಬ್ಬಿಣದ ಸ್ಟ್ಯಾಂಡ್ ಹಾಗೂ 1, 2ಕೆ.ಜಿ ತೂಕದ ಎರಡು ಕಬ್ಬಿಣದ ಗುಂಡುಗಳನ್ನು ದುಷ್ಕರ್ಮಿಗಳು ಕಳವು ಮಾಡಿರುವ ಘಟನೆ ತಾಲೂಕಿನ ಉಪ್ಪಾರಹಳ್ಳಿಯಲ್ಲಿ ಸಂಭವಿಸಿದೆ. ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಶಾಲೆಯಲ್ಲಿ ಕಳೆದ ತಿಂಗಳು 2 ಸಲ ಕಳವು ನಡೆದಿತ್ತು. ಮೊದಲ ಸಲ ಅಕ್ಷರ ದಾಸೋಹಕ್ಕೆ ಬಳಸುವ 5 ಸಿಲಿಂಡರ್‌ಗಳನ್ನು ಹಾಗೂ ಎರಡನೇ ಸಲ ಸಿಲಿಂಡರ್ ಹಾಗೂ ಡೆಸ್ಕ್‌ನ ಕಬ್ಬಿಣದ ಸ್ಟ್ಯಾಂಡ್‌ಗಳನ್ನು ದುಷ್ಕರ್ಮಿಗಳು ಕಳುವ ಮಾಡಿದ್ದರು.

ಬೈಕ್‌ಗೆ ಕಾರು ಡಿಕ್ಕಿ: ಸವಾರ ಸಾವು

ನಾಗಮಂಗಲ, ಜ.3– ಕಾರೊಂದು ಡಿಕ್ಕಿ ಹೊಡೆದ ಪರಿಣಾಮ 65 ವರ್ಷದ ವ್ಯಕ್ತಿಯೊಬ್ಬರು ಮೃತಪಟ್ಟಿದ್ದು, ಅಪಘಾತ ಮಾಡಿದ ಕಾರು ಪರಾರಿಯಾಗಿರುವ ಘಟನೆ ತಾಲೂಕಿನ ಬಿಂಡಿಗನವಿಲೆ ಹೋಬಳಿಯ ಲಾಳನಕೆರೆ ಬಳಿ ನಡೆದಿದೆ.

ಲಾಳನಕೆರೆ ಗ್ರಾಮದ ನಾಗರಾಜು ಎಂಬುವವರು ಸಂಜೆ 4.30ರಲ್ಲಿ ತಮ್ಮ ಬೈಕಿನಲ್ಲಿ ಹೋಗುತ್ತಿದ್ದಾಗ ಹಾಸನ ಕಡೆಗೆ ಹೋಗುತ್ತಿದ್ದ ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಗಾಯಗೊಂಡ ನಾಗರಾಜು ಅವರನ್ನು ಆಸ್ಪತ್ರೆಗೆ ಸೇರಿಸುವ ವೇಳೆ ಕಾರಿನ ಚಾಲಕ ಪರಾರಿ ಆಗಿದ್ದಾನೆ ಎಂದು ತಿಳಿದು ಬಂದಿದೆ. ಬಿಂಡಿಗನವಿಲೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗೂಡ್ಸ್ ವಾಹನಗಳ ಡಿಕ್ಕಿ: ವ್ಯಕ್ತಿ ಸಾವು

ನಾಗಮಂಗಲ, ಜ.3– ಗೂಡ್ಸ್ ವಾಹನಗಳ ನಡುವೆ ಮುಖಾಮುಖಿ ಡಿಕ್ಕಿಯಾದ ಪರಿಣಾಮ ಒಬ್ಬ ವ್ಯಕ್ತಿ ಸ್ಥಳದಲ್ಲಿ ಮೃತಪಟ್ಟಿರುವ ಘಟನೆ ತಾಲೂಕಿನ ಹೊಣಕೆರೆ ಹೋಬಳಿ ಬಳಿ ನಡೆದಿದೆ.

ಗುಬ್ಬಿ ತಾಲೂಕಿನ ಬಾಡೇನಹಳ್ಳಿ ಗ್ರಾಮದ ಮಧು ಮತ್ತು ಪುನೀತ್ ಸಹೋದರರು ಮೈಸೂರಿನಿಂದ ನಾಗಮಂಗಲಕ್ಕೆ ವಾಪಸ್ ಹೋಗುತ್ತಿದ್ದಾಗ, ನಾಗಮಂಗಲದಿಂದ ಮೈಸೂರಿಗೆ ಬರುತ್ತಿದ್ದ ಗೂಡ್ಸ್ ವಾಹನ ಡಿಕ್ಕಿ ಹೊಡೆದಿದ್ದು ಮಧು ಸ್ಥಳದಲ್ಲಿ ಮೃತಪಟ್ಟಿದ್ದಾನೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಿ.ನರಸೀಪುರದಲ್ಲಿ ಕಮಲ ಅರಳಿಸಲು ಕಾರ್ಯಕರ್ತರು ಸನ್ನದ್ಧ

ವಿಧಾನ ಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ವಿಶ್ವಾಸ

ತಿ.ನರಸೀಪುರ, ಜ.3– ಯಾವುದೇ ಸಂದರ್ಭ ವಿಧಾನಸಭಾ ಚುನಾವಣೆ ನಡೆದರೂ ತಿ.ನರಸೀಪುರದಲ್ಲಿ ಕಮಲ ಅರಳಿಸಲು ಪಕ್ಷದ ಕಾರ್ಯಕರ್ತರು ಸನ್ನದ್ಧರಾಗಿದ್ದಾರೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ತಿಳಿಸಿದರು.

ತಾಲೂಕಿನ ಬನ್ನಹಳ್ಳಿಹುಂಡಿ ಗ್ರಾಮದಲ್ಲಿ ಬೂತ್ ಅಧ್ಯಕ್ಷರ ನಿವಾಸದ ಎದುರು ಪಕ್ಷದ ಬಾವುಟ ಹಾರಿಸುವ ಬೂತ್ ವಿಜಯ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಚುನಾವಣೆ ಯಾವಾಗ ಘೋಷಣೆಯಾದರೂ ಪಕ್ಷದ ಗೆಲುವಿಗೆ ದುಡಿಯಲು ನಾವು ಸಿದ್ಧ ಎಂದರು.

ಹೈಕಮಾಂಡ್ ಕ್ಷೇತ್ರದ ಅಧಿಕೃತ ಅಭ್ಯರ್ಥಿ ಘೋಷಿಸಿಲ್ಲ. ಅಭ್ಯರ್ಥಿ ಆಯ್ಕೆ ಪ್ರಧಾನಿ ಮೋದಿ, ರಾಷ್ಟ್ರೀಯ ಅಧ್ಯಕ್ಷ ನಡ್ಡಾ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಅವರ ವಿವೇಚನೆಗೆ ಬಿಟ್ಟಿದ್ದು, ಪಕ್ಷದ ಕಾರ್ಯಕರ್ತನಾಗಿ ನೀಡಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದರು.



ಕ್ಷೇತ್ರದ ಟಿಕೆಟ್ ಆಕಾಂಕ್ಷಿ, ಎಸ್ಸಿ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಸಾಮ್ರಾಟ್ ಸುಂದರೇಶನ್ ಮಾತನಾಡಿ, ರಾಜ್ಯ ಸಮಿತಿ ಸೂಚನೆಯಂತೆ ಬೂತ್ ವಿಜಯ ಅಭಿಯಾನ ಜ.12ರವರೆಗೆ ರಾಜ್ಯಾದ್ಯಂತ ನಡೆಯಲಿದೆ. ಕಾರ್ಯಕರ್ತರ ಮನೆ ಮೇಲೆ ಬಿಜೆಪಿ ಧ್ವಜ ಹಾರಿಸುವುದರೊಂದಿಗೆ ಮುಂಬರುವ ಚುನಾವಣೆ ವಿಜಯದ ಕಡೆಗೆ ಸದೃಢ ಹೆಜ್ಜೆಯನ್ನಿಡುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು.

ಅಭಿಯಾನಕ್ಕೆ ಕಾಂಪೋಸ್ಟ್ ನಿಗಮದ ಅಧ್ಯಕ್ಷ ಎಸ್.ಮಹದೇವಯ್ಯ ಚಾಲನೆ ನೀಡಿದರು. ಕ್ಷೇತ್ರಾಧ್ಯಕ್ಷ ಕೆ.ಸಿ.ಲೋಕೇಶ್, ಪುರಸಭೆ ಸದಸ್ಯರಾದ ಎಸ್.ಕೆ.ಕಿರಣ್, ಎನ್.ಲೋಕೇಶ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಎಸ್.ಬಸವರಾಜು, ಸಿದ್ಧಮಲ್ಲಪ್ಪ, ವಿಸ್ತಾರಕ ಅರವಿಂದ್, ಗ್ರಾಪಂ ಸದಸ್ಯ ಬಿ.ಎಂ. ಪ್ರಕಾಶ್, ಹಿರಿಯ ಮುಖಂಡ ಕರೋಹಟ್ಟಿ ಮಹದೇವಯ್ಯ, ಹಿಂ.ವರ್ಗಗಳ ಮೋರ್ಚಾ ಅಧ್ಯಕ್ಷ ಗೂಳಿ ಮಹೇಶ್, ಮುಖಂಡರಾದ ಕುರುಬೂರು ಮಂಜು, ಮೂಗೂರು ಅರವಿಂದ್, ಎಂ.ಟಿ.ಬಸಪ್ಪಣ್ಣ ಇನ್ನಿತರರಿದ್ದರು.

ವಿದ್ಯಾರ್ಥಿಗಳು ವ್ಯಕ್ತಿತ್ವ ವಿಕಸನದ ಕಡೆಗೆ ಗಮನ ಹರಿಸಿ

ಹನಗೋಡು, ಜ.3– ವಿದ್ಯಾರ್ಥಿಗಳು ಓದಿನೊಂದಿಗೆ ವ್ಯಕ್ತಿತ್ವ ವಿಕಸನದ ಕಡೆಗೆ ಹೆಚ್ಚು ಗಮನ ಹರಿಸಬೇಕು ಎಂದು ಶಾಸಕ ಹೆಚ್.ಪಿ.ಮಂಜುನಾಥ್ ಸಲಹೆ ನೀಡಿದರು.

ಇಲ್ಲಿನ ಹೆಗ್ಗಂದೂರು ಗ್ರಾಮದಲ್ಲಿ ಹುಣಸೂರು ಜ್ಞಾನಧಾರ ಪ್ರಥಮ ದರ್ಜೆ ಕಾಲೇಜು ವತಿಯಿಂದ ಹಮ್ಮಿಕೊಂಡಿರುವ ಎನ್‌ಎಸ್‌ಎಸ್ ಶಿಬಿರದ ಸಮರೋಪದಲ್ಲಿ ಮಾತನಾಡಿದ ಅವರು, ಬಹುತೇಕ ವಿದ್ಯಾರ್ಥಿಗಳು ಶಾಲಾ–ಕಾಲೇಜು ಶಿಕ್ಷಣಕ್ಕೆ ಮಾತ್ರ ಸೀಮಿತವಾಗುತ್ತಾರೆ. ಇದು ಸ್ಪರ್ಧಾತ್ಮಕ ಯುಗವಾಗಿದ್ದು, ಉನ್ನತ ಹುದ್ದೆ ಪಡೆಯಲು ಪಠ್ಯದೊಂದಿಗೆ ದೇಶದ ಆಗುಹೋಗು, ಪ್ರಚಲಿತ ವಿದ್ಯಮಾನಗಳು, ಸ್ಥಳೀಯ ಸಂಸ್ಥೆಗಳ ಆಡಳಿತ ವ್ಯವಸ್ಥೆ ಬಗ್ಗೆ ತಿಳಿದಿರಬೇಕು. ಆಡಳಿತದ ಲೋಪ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ದೇಶದ ಜನತಂತ್ರ ವ್ಯವಸ್ಥೆ, ಸಂವಿಧಾನದ ಬಗ್ಗೆ ಅರಿವು ಪಡೆಯಬೇಕು. ನಿಮ್ಮ ಶಾಲಾ–ಕಾಲೇಜು ಹಾಗೂ ಗ್ರಾಮದ ಸಮಸ್ಯೆಯನ್ನು ಜನಪ್ರತಿನಿಧಿಗಳ ಗಮನಕ್ಕೆ ತರುವ ಜೊತೆಗೆ ಓದಿನೊಂದಿಗೆ ನಿಮ್ಮ ಪ್ರತಿಭೆ ಹೊರಹಾಕಲು ಇಂತಹ ವೇದಿಕೆ ಬಳಸಿಕೊಳ್ಳಿ ಎಂದು ಸಲಹೆ ನೀಡಿದರು.

ಜ್ಞಾನಧಾರ ಶಿಕ್ಷಣ ಸಂಸ್ಥೆ ಯಮುನಾ ಮಾತನಾಡಿ, ಎನ್‌ಎಸ್‌ಎಸ್ ಗಾಂಧೀಜಿಯವರ ಕನಸು. ಗ್ರಾಮವನ್ನು ಶ್ರಮದಾನದ ಮೂಲಕ ಸ್ವಚ್ಛಗೊಳಿಸುವ, ಶೌಚಾಲಯ ನಿರ್ಮಾಣ ಹಾಗೂ ಬಳಕೆ, ಆರೋಗ್ಯ ಇಲಾಖೆ ವತಿಯಿಂದ ಬಡವರಿಗೆ ಸಿಗುವ ಅನೇಕ ಯೋಜನೆಗಳನ್ನು ಜನರಿಗೆ ತಲುಪಿಸಿ ಎಂದರು. ಈ ವೇಳೆ ಸಂಸ್ಥೆ ಕಾರ್ಯದರ್ಶಿ ನಾಗೇಂದ್ರ ಪ್ರಾಂಶುಪಾಲ ಹಾಗೂ ಶಿಬಿರಾಧಿಕಾರಿ ಹೆಚ್.ಪಿ.ಕಾರ್ತಿಕ್, ಸಹ ಶಿಬಿರಾಧಿಕಾರಿಗಳಾದ ಉಮೇಶ್, ಪ್ರದೀಪ್ ಕುಮಾರ್, ನಿವೇದಿತಾ, ಸುಮ, ಮಾಜಿ ಸೈನಿಕ ದೊಡ್ಡನಂಜಯ್ಯ ಸೇರಿದಂತೆ ಗ್ರಾಮಸ್ಥರಿದ್ದರು.



ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ನಂಜನಗೂಡು, ಜ.3– ನಗರದ ಟೆಂಪೋ ನಿಲ್ದಾಣ ಹಾಗೂ ಶಿಕ್ಷಕರ ಬಡಾವಣೆಯಲ್ಲಿ 20 ಲಕ್ಷ ರೂ. ವೆಚ್ಚದ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ನಗರಸಭಾಧ್ಯಕ್ಷ ಹೆಚ್.ಎಸ್.ಮಹದೇವಸ್ವಾಮಿ ಗುದ್ದಲಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಮಳೆ ಬಂದಾಗ ನಗರದ ಟೆಂಪೋ ನಿಲ್ದಾಣದಲ್ಲಿ ಗಲೀಜು ನೀರು ತುಂಬಿ ತೊಂದರೆಯಾಗುತ್ತಿತ್ತು. ಹೀಗಾಗಿ ನಗರಸಭೆ ಸಾಮಾನ್ಯ ನಿಧಿಯಲ್ಲಿ 10 ಲಕ್ಷ ಅನುದಾನ ಬಿಡುಗಡೆಗೊಳಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಅಲ್ಲದೆ ಶಿಕ್ಷಕರ ಬಡಾವಣೆಯಲ್ಲಿ ಚರಂಡಿ ನೀರು ಒಂದೇ ಕಡೆ ನಿಂತು ನಿವಾಸಿಗಳಿಗೆ ತೊಂದರೆಯಾಗಿತ್ತು. ಈ ಸಮಸ್ಯೆ ನಿವಾರಿಸುವ ಸಲುವಾಗಿ 10 ಲಕ್ಷ ವೆಚ್ಚದಲ್ಲಿ ಚರಂಡಿ ಮತ್ತು ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಅವಧಿಯೊಳಗೆ ಕಾಮಗಾರಿ ಮುಗಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳು, ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದರು. ಈ ವೇಳೆ ನಗರಸಭಾ ಉಪಾಧ್ಯಕ್ಷೆ ನಾಗಮಣಿ, ಸದಸ್ಯರಾದ ಯೋಗೀಶ್, ಸಿದ್ದರಾಜು, ಮಂಗಳಮ್ಮ, ಮುಖಂಡರಾದ ಶ್ರೀಕಂಠ, ಸತೀಶ್, ನಗರಸಭಾ ಎಇಇ ಸುರೇಶ್ ಸೇರಿದಂತೆ ಇತರರಿದ್ದರು.

ಮೂಗೂರಲ್ಲಿ ಸಂಭ್ರಮದ ವಧೆ ಉತ್ಸವ



ಮೂಗೂರು, ಜ.3– ಶ್ರೀತ್ರಿಪುರ ಸುಂದರಿ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ವಧೆ ಉತ್ಸವ ಸಂಭ್ರಮದಿಂದ ನಡೆಯಿತು.

ಅಮ್ಮನವರು 7 ದಿನಗಳ ಮೌನ ವ್ರತದೊಂದಿಗೆ ರಾಕ್ಷಸರನ್ನು ಸಂಹಾರ ಮಾಡುವ ತಪಸ್ಸಿನ ಆಚರಣೆಯೇ ವಧೆ ಉತ್ಸವ. ಉತ್ಸವದಲ್ಲಿ ಹೆಬ್ರೆ ಮನೆಯಿಂದ ಹೊರಟ ಹೆಬ್ರೆ ಉತ್ಸವವು ದುಬ್ಬಮ್ಮನವರ ದೇಗುಲಕ್ಕೆ ತೆರಳಿ, ಅಲ್ಲಿ ಕಂಕಣಧಾರಿ ಅರ್ಚಕರು ಪೂಜೆ ಸಲ್ಲಿಸುವರು. ಬಳಿಕ ಮೆರವಣಿಗೆಯಲ್ಲಿ ಗ್ರಾಮದ ಶ್ರೀತ್ರಿಪುರ ಸುಂದರಿ ಅಮ್ಮನವರ ದೇಗುಲಕ್ಕೆ ಆಗಮಿಸುವ ಮಾರ್ಗದುದ್ದಕ್ಕೂ ಮಹಿಳೆಯರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹೆಬ್ರೆಗಳಿಗೆ ಹೂ, ಅಕ್ಕಿ, ಎಣ್ಣೆ ಎರೆದು ನಮಿಸಿದರು. ಅಲ್ಲದೇ ರೈತರು ದೇವಾಲಯದ ಎದುರು ಹಾಕಲಾಗಿದ್ದ ಹುಲ್ಲಿನ ರಾಶಿಗೆ ಅಗ್ನಿ ಸ್ಪರ್ಶ ಮಾಡಿದರು. ದೊಡ್ಡಕೆರೆ ಬಳಿಯ ಕಣಿಯರ ಮಂಟಪದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಉತ್ಸವ ನಡೆಸಲಾಯಿತು.

ಅವಿಶ್ವಾಸ ಗೊತ್ತುವಳಿಗೆ ಹೈಕೋರ್ಟ್ ತಡೆಯಾಜ್ಞೆ

ತಿ.ನರಸೀಪುರ, ಜ.3– ತಾಲೂಕಿನ ಮಲಿಯೂರು ಗ್ರಾಪಂ ಅಧ್ಯಕ್ಷ ಡಿ.ಜಯರಾಮು ಅವರ ವಿರುದ್ಧದ ಅವಿಶ್ವಾಸ ಗೊತ್ತುವಳಿಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಡಿ.15 ರಂದು ಅವಿಶ್ವಾಸ ನಿರ್ಣಯ ಸಂಬಂಧ ಸದಸ್ಯರ ಸಹಿಯೊಂದಿಗೆ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಮಂಗಳವಾರ ಮಧ್ಯಾಹ್ನ ಗ್ರಾಪಂನಲ್ಲಿ ಅವಿಶ್ವಾಸ ಗೊತ್ತುವಳಿ ಸಭೆ ಕರೆಯಲಾಗಿತ್ತು. ಆದರೆ, ಕೋರ್ಟ್ ತಡೆಯಾಜ್ಞೆ ನೀಡಿದ್ದು, ನ್ಯಾಯಾಲಯದಿಂದ ಮುಂದಿನ ಆದೇಶದ ಬರುವವರೆಗೂ ಅವಿಶ್ವಾಸ ನಿರ್ಣಯ ಗೊತ್ತುವಳಿ ಮುಂದೂಡಿರುವುದಾಗಿ ಪಿಡಿಓ ಅಶೋಕ್ ತಿಳಿಸಿದರು.

ಒಟ್ಟು 18 ಸದಸ್ಯರ ಪೈಕಿ ಹಾಲಿ ಅಧ್ಯಕ್ಷ ಡಿ.ಜಯರಾಮು ಅವರನ್ನು ಹೊರತುಪಡಿಸಿ ಉಳಿದ ಎಲ್ಲಾ 17 ಸದಸ್ಯರು ಅವಿಶ್ವಾಸ ನಿರ್ಣಯದ ಪರ ಇದ್ದು, ಇಂದು ಎಲ್ಲಾ ಸದಸ್ಯರು ಅವಿಶ್ವಾಸ ಮಂಡನೆ ಸಭೆಗೆ ಹಾಜರಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸದಸ್ಯ ಕೆ.ಬಿ.ಜಯರಾಮು, ಸರ್ವ ಸದಸ್ಯರ ಅಭಿಪ್ರಾಯದ ಮೇರೆಗೆ ಉಪವಿಭಾಗಾಧಿಕಾರಿಗಳು ಅವಿಶ್ವಾಸ ನಿರ್ಣಯ ಮಂಡಿಸಲು ಇಂದು ದಿನಾಂಕ ನಿಗದಿಪಡಿಸಿದ್ದರು.



ಆದರೆ ಸಭೆ ಮುಂದೂಡಿರುವುದು ಬೇಸರ ತಂದಿದೆ. ಹಾಲಿ ಅಧ್ಯಕ್ಷರು ಸದಸ್ಯರ ವಿಶ್ವಾಸ ಕಳೆದುಕೊಂಡಿದ್ದಾರೆ. ಯಾವ ಸದಸ್ಯರಿಗೂ ಅವರು ಸ್ಪಂದಿಸದ ಕಾರಣ ಅವರ ವಿರುದ್ಧ ಅವಿಶ್ವಾಸಕ್ಕೆ ಸರ್ವ ಸದಸ್ಯರು ಸಮ್ಮತಿ ನೀಡಿದ್ದಾರೆ. ಹಾಗಾಗಿ ಇಂದು ಅವಿಶ್ವಾಸ ಮಂಡಿಸಲು ಎಲ್ಲಾ ಸದಸ್ಯರು ಸೇರಿದ್ದರು ಎಂದರು.

ಸಭೆಯಲ್ಲಿ ಗ್ರಾಪಂ ಉಪಾಧ್ಯಕ್ಷೆ ರಾಣಿ, ಸದಸ್ಯರಾದ ಮಹದೇವಮ್ಮ, ಭಾಗ್ಯಲಕ್ಷ್ಮಿ, ಎಸ್.ಶಿಲ್ಪ, ಬಾಬು, ರತ್ನಮ್ಮ ರಾಮಕೃಷ್ಣ ಯಲ್ಲಪ್ಪ ರಾಮೇಗೌಡ, ರಾಮಲಿಂಗ, ಬಿ.ಎಸ್.ಮಮತಾ, ವಿ.ಸಿದ್ದೇಗೌಡ, ಕೆ.ಸಿ.ಮಮತಾ, ಎಸ್.ರೇಖಾ, ರಂಗಸ್ವಾಮಿ, ಶಿವಮ್ಮ, ಶಾಂತಮ್ಮ ಇದ್ದರು.



ಹುಣಸೂರಿನ ಶಿಕ್ಷಕರ ಭವನದಲ್ಲಿ ವಿಜಯಪುರದ ಜ್ಞಾನ ಯೋಗಾಶ್ರಮದ ಶ್ರೀಸಿದ್ದೇಶ್ವರ ಸ್ವಾಮೀಜಿ ಅವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಈ ವೇಳೆ ಶಾಸಕ ಹೆಚ್.ಪಿ.ಮಂಜುನಾಥ್, ಬಿಇಓ ಎಸ್.ರೇವಣ್ಣ ಸೇರಿದಂತೆ ಶಿಕ್ಷಕರು ಹಾಜರಿದ್ದರು.

ಕೆ.ಮಂಜುಳ ನಿಧನ



ಹೆಚ್.ಡಿ.ಕೋಟೆ, ಜ.3– ಪಟ್ಟಣದ ಆಸ್ಪತ್ರೆ ಬಡಾವಣೆ ನಿವಾಸಿ ಕೆ.ಮಂಜುಳ (60) ಮಂಗಳವಾರ ನಿಧನರಾದರು. ಮೃತರು ಪತಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ರುದ್ರಭೂಮಿಯಲ್ಲಿ ನಡೆಯಿತು ಎಂದು ಕುಟುಂಬ ವರ್ಗ ತಿಳಿಸಿದೆ.

ಜಿಲ್ಲಾ ಕಾಂಗ್ರೆಸ್ ಸಮಿತಿಗೆ ದೇವರಾಜು ಉಪಾಧ್ಯಕ್ಷ



ನಂಜನಗೂಡು, ಜ.3– ನಂಜನಗೂಡು ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ದೇವರಾಜು ಅವರನ್ನು ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ತಿಳಿಸಿದ್ದಾರೆ.

ಮೊದಲ ಟಿ20: ಲಂಕಾ ವಿರುದ್ಧ ಭಾರತಕ್ಕೆ ರೋಚಕ ಜಯ

ಮುಂಬೈ, ಜ.3– ಶಿವಂ ಮಾವಿ ಅವರ ಮಾರಕ ಬೌಲಿಂಗ್ ದಾಳಿ ಹಾಗೂ ದೀಪಕ್ ಹೂಡಾ ಅವರ ಬಿರುಸಿನ ಬ್ಯಾಟಿಂಗ್ ನೆರವಿನಿಂದ ಶ್ರೀಲಂಕಾ ವಿರುದ್ಧ ಭಾರತ 2 ರನ್‌ಗಳ ರೋಚಕ ಜಯ ಸಾಧಿಸಿದೆ. ಆ ಮೂಲಕ 3 ಪಂದ್ಯಗಳ ಟಿ20 ಸರಣಿಯಲ್ಲಿ 1–0 ಅಂತರದಿಂದ ಮುನ್ನಡೆ ಸಾಧಿಸಿದೆ.



ಇಲ್ಲಿನ ವಾಂಖೇಡೆ ಮೈದಾನದಲ್ಲಿ ನಡೆದ ಮೊದಲ ಟಿ20 ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 162 ರನ್ ಗಳಿಸಿತು. ತಂಡದ ಮೊತ್ತ 46 ರನ್ ಆಗುವಷ್ಟರಲ್ಲಿ ಶುಭ್‌ಮನ್ ಗಿಲ್, ಸೂರ್ಯ ಕುಮಾರ್ ಯಾದವ್ ಹಾಗೂ ಸಂಜು ಸ್ಯಾಮ್ಸನ್ ವಿಕೆಟ್ ಕಳೆದುಕೊಂಡು ಭಾರತ ಸಂಕಷ್ಟಕ್ಕೆ ಸಿಲುಕಿತು. ಈ ವೇಳೆ ಒಂದಾದ ಇಶನ್ ಕಿಶನ್ ಹಾಗೂ ನಾಯಕ ಹಾರ್ದಿಕ್ ಪಾಂಡ್ಯ ಜೋಡಿ 31 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರಾದರೂ 2 ಸಿಕ್ಸರ್, 3 ಬೌಂಡರಿ ಒಳಗೊಂಡ 37 ರನ್ ಗಳಿಸಿ ಉತ್ತಮವಾಗಿ ಆಟವಾಡುತ್ತಿದ್ದ ಇಶನ್ ಕಿಶನ್ ವಿಕೆಟ್ ಒಪ್ಪಿಸಿದರು. ಇವರ ಹಿಂದೆಯೇ ಪಾಂಡ್ಯ ಕೂಡ 29ರನ್ ಗಳಿಸಿ ನಿರ್ಗಮಿಸಿದರು. 6ನೇ ವಿಕೆಟ್‌ಗೆ ಜೊತೆಯಾದ ದೀಪಕ್ ಹೂಡಾ ಹಾಗೂ ಅಕ್ಷರ್ ಪಟೇಲ್ 68 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ದೀಪಕ್ ಹೂಡಾ 23 ಎಸೆತಗಳಲ್ಲಿ 4 ಸಿಕ್ಸರ್, 1 ಬೌಂಡರಿ ಒಳಗೊಂಡ 41 ರನ್ ಗಳಿಸಿದರೇ, ಅಕ್ಷರ್ ಪಟೇಲ್ 31 ರನ್ ಗಳಿಸಿ ಅಜೇಯರಾಗಿ ಉಳಿದರು. ಶ್ರೀಲಂಕಾ ಪರ ದಿಲ್ಶನ್ ಮಧುಶಂಕ, ಮಹೀಶ ತೀಕ್ಷಣ, ಕರುಣರತ್ನೆ, ಧನಂಜಯ ಡಿಸಿಲ್ವ ಹಾಗೂ ವಾನಿಂದು ಹಸರಂಗ ತಲಾ ಒಂದೊಂದು ವಿಕೆಟ್ ಪಡೆದರು.

ಭಾರತ ನೀಡಿದ 163 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಶ್ರೀಲಂಕಾ ಪಂದ್ಯದ ಕೊನೆ ಎಸೆತದವರೆಗೂ ಹೋರಾಟ ನಡೆಸಿತಾದರೂ, ಭಾರತೀಯ ಬೌಲರ್‌ಗಳ ಬೌಲಿಂಗ್ ದಾಳಿಗೆ ತತ್ತರಿಸಿ ನಿಗದಿತ 20 ಓವರ್‌ಗಳಿಗೆ 160 ರನ್‌ಗಳಿಗೆ ಆಲೌಟಾಗುವ ಮೂಲಕ 2 ರನ್‌ಗಳ ಸೋಲು ಒಪ್ಪಿಕೊಂಡಿತು.

ತಂಡದ ಪರ ಕುಶಾಲ್ ಮೆಂಡೀಸ್ 28, ಚರಿತ್ ಅಸಲಂಕ 12, ಬಾನುಕಾ ರಾಜಪಕ್ಸೆ 10, ನಾಯಕ ದಾಸುನ್ ಶನಕ 45, ವಾನಿಂದು ಹಸರಂಗ 21, ಚಮಿಕ ಕರುಣರತ್ನ 23ರನ್ ಗಳಿಸಿದರು. ಭಾರತದ ಪರ ಪಾದರ್ಪಣೆ ಪಂದ್ಯದಲ್ಲೇ ಶಿವಂ ಮಾವಿ 4 ವಿಕೆಟ್ ಪಡೆದು ಯಶಸ್ವಿ ಬೌಲರ್ ಎನಿಸಿದರು. ಉಳಿದಂತೆ ಉಮ್ರಾನ್ ಮಲ್ಲಿಕ್ ಹಾಗೂ ಹರ್ಷಲ್ ಪಟೇಲ್ ತಲಾ 2 ವಿಕೆಟ್ ಉರುಳಿಸಿದರು. ದೀಪಕ್ ಹೂಡಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಸಿದ್ದೇಶ್ವರ ಸ್ವಾಮೀಜಿಗಳಿಗೆ ಶ್ರದ್ಧಾಂಜಲಿ



ಮೈಸೂರು, ಜ.3(ಎಂಕೆ)–ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಶ್ರೀ ಸಿದ್ಧೇಶ್ವರ ಸ್ವಾಮೀಜಿಯವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ವೇಳೆ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ. ಮಧು ಮಾತನಾಡಿ, ಸಿದ್ದೇಶ್ವರ ಶ್ರೀಗಳು ಸುತ್ತೂರು ಶ್ರೀ ಮಠದೊಡನೆ ಅತ್ಯಂತ ಆತ್ಮೀಯ ಸಂಬಂಧ ಹೊಂದಿದ್ದರು. ಜೆಎಸ್‌ಎಸ್ ಮಹಾವಿದ್ಯಾ ಪೀಠವು ಆಯೋಜಿಸಿದ್ದ ವಿವಿಧ ವ್ಯಕ್ತಿತ್ವ ವಿಕಸನ ಶಿಬಿರಗಳಲ್ಲಿ ಭಾಗವಹಿಸಿ, ಮಾರ್ಗದರ್ಶನ ನೀಡುತ್ತಿದ್ದರು ಎಂದು ಸ್ಮರಿಸಿದರಲ್ಲದೆ ಶ್ರೀಗಳು ಮನುಕುಲಕ್ಕೆ ನೀಡಿದ ಮಾರ್ಗದರ್ಶನ ಸಮಾಜದ ಶ್ರೇಯೋಭಿವೃದ್ಧಿಗೆ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗುತ್ತಿದೆ ಎಂದು ತಿಳಿಸಿದರು. ಆಸ್ಪತ್ರೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.



ಮೈಸೂರಿನ ಶ್ರೀ ಸಿದ್ದಗಂಗಾ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಕುವೆಂಪುನಗರ ನಿವಾಸಿಗಳಿಂದ ಸಿದ್ದೇಶ್ವರ ಸ್ವಾಮೀಜಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಭಾರತವು ಈಗ ವಿಜ್ಞಾನ ಕ್ಷೇತ್ರದಲ್ಲಿ ಅಗ್ರಗಣ್ಯ ರಾಷ್ಟ್ರಗಳಲ್ಲಿ ಒಂದಾಗಿದೆ

ವಿಜ್ಞಾನವು ಭಾರತವನ್ನು 'ಆತ್ಮ ನಿರ್ಭರ್' ಮಾಡುವ ಗುರಿಯನ್ನು ಹೊಂದಿರಬೇಕು: ಪ್ರಧಾನಿ ನರೇಂದ್ರ ಮೋದಿ

ನವದೆಹಲಿ, ಜ.3– ಇಂದು ಭಾರತವು ಸ್ಟಾರ್ಟ್ ಅಪ್ ವಲಯದಲ್ಲಿ ಅಗ್ರ 3 ರಾಷ್ಟ್ರಗಳಲ್ಲಿ ಒಂದಾಗಿದೆ. 2015ರವರೆಗೆ ನಾವು 130 ದೇಶಗಳ ಜಾಗತಿಕ ಆವಿಷ್ಕಾರ ಸೂಚ್ಯಂಕದಲ್ಲಿ 81ನೇ ಸ್ಥಾನದಲ್ಲಿದ್ದೆವು. 2022ರಲ್ಲಿ 40 ನೇ ಸ್ಥಾನವನ್ನು ತಲುಪಿದ್ದೇವೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ 108ನೇ ಭಾರತೀಯ ವಿಜ್ಞಾನ ಕಾಂಗ್ರೆಸ್‌ನ ಉದ್ಘಾಟನಾ ಅಧಿವೇಶನವನ್ನು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಉದ್ಘಾಟಿಸಿ ಮಾತನಾಡಿದರು.

ಇಂದು ವಿಜ್ಞಾನ ಕ್ಷೇತ್ರ ಭಾರತವನ್ನು ಆತ್ಮನಿರ್ಭರ್ ಮಾಡುತ್ತಿದೆ. ಪ್ರಯೋಗಾಲಯದಿಂದ ಪ್ರಾಯೋಗಿಕವಾಗಿ ಹೋದಾಗ ಮಾತ್ರ ವಿಜ್ಞಾನದ ಪ್ರಯತ್ನಗಳು ಫಲ ನೀಡುತ್ತವೆ. 2023ನ್ನು ಅಂತಾರಾಷ್ಟ್ರೀಯ ಸಿರಿ





ಧಾನ್ಯಗಳ ವರ್ಷವೆಂದು ಘೋಷಿಸಲಾಗಿದ್ದು, ವಿಜ್ಞಾನದ ಬಳಕೆಯೊಂದಿಗೆ ಭಾರತದ ಸಿರಿಧಾನ್ಯಗಳ ಬಳಕೆಯನ್ನು ಇನ್ನಷ್ಟು ಸುಧಾರಿಸಬೇಕು ಎಂದು ಹೇಳಿದರು. ಭಾರತದ ಅಗತ್ಯಗಳನ್ನು ಪೂರೈಸಲು ವೈಜ್ಞಾನಿಕ ಅಭಿವೃದ್ಧಿ ನಮ್ಮ ವಿಜ್ಞಾನಿ ಸಮುದಾಯಕ್ಕೆ ಸ್ಫೂರ್ತಿಯಾಗಬೇಕು, ಜಾಗತಿಕ ಜನಸಂಖ್ಯೆಯ ಶೇಕಡಾ 17ರಿಂದ 18ರಷ್ಟು ಮಂದಿ ಭಾರತದಲ್ಲಿ ವಾಸಿಸುತ್ತಿದ್ದಾರೆ. ಭಾರತವನ್ನು ಸಶಕ್ತಗೊಳಿಸುವ ವೈಜ್ಞಾನಿಕ ಆವಿಷ್ಕಾರಗಳು ಈ ಜಾಗತಿಕ ಜನಸಂಖ್ಯೆಯನ್ನು ಸಬಲೀಕರಣಗೊಳಿಸಲು ಸಹ ಸಹಾಯ ಮಾಡುತ್ತವೆ ಎಂದು ಹೇಳಿದರು.

ಅಮರಾವತಿ ರೋಡ್ ಕ್ಯಾಂಪಸ್‌ನಲ್ಲಿ ರಾಷ್ಟ್ರಸಂತ್ ತುಕಾಡೋಜಿ ಮಹಾರಾಜ್ ನಾಗ್ಪುರ ವಿಶ್ವವಿದ್ಯಾಲಯ ಆಯೋಜಿಸಿರುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಹಾರಾಷ್ಟ್ರದ ರಾಜ್ಯಪಾಲ ಭಗತ್ ಸಿಂಗ್ ಕೊಶ್ಯಾರಿ, ಮಹಾರಾಷ್ಟ್ರ ಸಾರ್ವಜನಿಕ ವಿಶ್ವವಿದ್ಯಾನಿಲಯಗಳ ಕುಲಪತಿ, ಕೇಂದ್ರ ಸಚಿವರು ಮತ್ತು RTMNU ಶತಮಾನೋತ್ಸವ ಆಚರಣೆಗಳ ಸಲಹಾ ಸಮಿತಿಯ ಅಧ್ಯಕ್ಷರು, ನಿತಿನ್ ಗಡ್ಕರಿ, ಕೇಂದ್ರ ರಾಜ್ಯ ಸಚಿವ (ಸ್ವತಂತ್ರ ಉಸ್ತುವಾರಿ) ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಭೂ ವಿಜ್ಞಾನ, ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ್ ಶಿಂಧೆ ಮತ್ತು ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಸೇರಿದಂತೆ ಇನ್ನಿತರರು ಹಾಜರಿದ್ದರು.

'ಮಗಳು ಮಗನಿಗೆ ಸಮಾನ, ಗುರುತು ಚೀಟಿ ಪಡೆಯಲು ಸಮಾನ ಅರ್ಹಳು': ಹೈಕೋರ್ಟ್

ಬೆಂಗಳೂರು,ಜ.3–ಲಿಂಗ ಸಮಾನತೆಯನ್ನು ತರಲು, ಮಾಜಿ ಸೈನಿಕರ ಅವಲಂಭಿತರಿಗೆ ಮಾರ್ಗಸೂಚಿ 5 (ಸಿ) ಪ್ರಕಾರ ಗುರುತಿನ ಚೀಟಿ (ಐ–ಕಾರ್ಡ್) ವಿತರಿಸಲು ವಿವಾಹಿತ ಮಗಳನ್ನು ಹೊರಗಿಡುವುದು ಸಂವಿಧಾನದ 14 ಮತ್ತು 15ನೇ ವಿಧಿಗಳ ಉಲ್ಲಂಘನೆಯಾಗಿದೆ ಎಂದು ಕರ್ನಾಟಕ ಹೈಕೋರ್ಟ್ ತೀರ್ಪು ನೀಡಿದೆ.



ಗುರುತು ಚೀಟಿ ಮಂಜೂರಾತಿಗೆ ಮಾರ್ಗಸೂಚಿಗಳಲ್ಲಿ 'ಮದುವೆಯಾಗುವವರೆಗೆ' ಎಂಬ ಪದಗಳನ್ನು ಹೊಡೆದು ಹಾಕಲಾಗಿದ್ದು, ಗುರುತು ಚೀಟಿ ನಿರಾಕರಣೆಯ ವಿರುದ್ಧ ಕಾರ್ಯಾಚರಣೆಯಲ್ಲಿ ಹತ್ಯೆಯಾದ ಮೈಸೂರಿನ ಮಾಜಿ ಸೈನಿಕನ ಪುತ್ರಿ ಪ್ರಿಯಾಂಕಾ ಆರ್ ಪಾಟೀಲ್ ಸಲ್ಲಿಸಿದ ಅರ್ಜಿಯನ್ನು ಪುರಸ್ಕರಿಸಿದೆ. ನಾಗಪ್ರಸನ್ನ ಅವರಿಗೆ ಕಾರ್ಡ್ ವಿತರಿಸುವಂತೆ ಸೈನಿಕ ಕಲ್ಯಾಣ ಇಲಾಖೆಗೆ ಸೂಚಿಸಿದೆ. ಆಗಸ್ಟ್ 26, 2021ರ ಅಧಿಸೂಚನೆ ಪ್ರಕಾರ, ಸಹಾಯಕ ಪ್ರಾಧ್ಯಾಪಕ ಹುದ್ದೆಯ ಮಾಜಿ ಸೈನಿಕರ ಕೋಟಾದ ಅಡಿಯಲ್ಲಿ ಪ್ರಿಯಾಂಕಾ ಅವರ ಪ್ರಕರಣವನ್ನು ಪರಿಗಣಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚಿಸಲಾಗಿದೆ.

25 ವರ್ಷ ವಯಸ್ಸಿನ ನಂತರ ಮಾರ್ಗಸೂಚಿಯು ಮಗ ಮತ್ತು ಮಗಳು ಇಬ್ಬರಿಗೂ ಏಕರೂಪವಾಗಿರುತ್ತದೆ. ಮಗಳು, 25 ವರ್ಷಕ್ಕಿಂತ ಕಡಿಮೆ ವಯಸ್ಸಿನವಳು, ಮದುವೆಯಾದಳು ಮತ್ತು ಗುರುತು ಚೀಟಿ ನೀಡುವ ಉದ್ದೇಶದಿಂದ ಮಾಜಿ ಸೈನಿಕನ ವಾರ್ಡ್ ಆಗಿರುವ ಪ್ರಯೋಜನವನ್ನು ಕಳೆದುಕೊಳ್ಳುತ್ತಾಳೆ. ಮಗ ವಿವಾಹಿತನಾಗಿದ್ದರೂ ಅಥವಾ ಅವಿವಾಹಿತನಾಗಿದ್ದರೂ ಪ್ರಯೋಜನವನ್ನು ಪಡೆಯುತ್ತಾನೆ; ಮಗಳು ಮದುವೆಯಾಗದೆ ಉಳಿದರೆ ಮಾತ್ರ ಪ್ರಯೋಜನವನ್ನು ಪಡೆಯುತ್ತದೆ ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿತ್ತು. ಮಾರ್ಗಸೂಚಿಯು ಲಿಂಗದ ಆಧಾರದ ಮೇಲೆ ಪಕ್ಷಪಾತ ಹೊಂದಿರುವುದರಿಂದ ಇಲ್ಲಿ ತಾರತಮ್ಯವೆಸಗಲಾಗಿದೆ. ಲಿಂಗ ಆಧಾರದ ಮೇಲೆ ಅಸಮಾನತೆ, ಮಗಳ ಮದುವೆಯು ಗುರುತುಚೀಟಿ ಪಡೆಯುವ ಹಕ್ಕನ್ನು ಕಸಿದುಕೊಳ್ಳುತ್ತದೆ. ಮಗನ ವಿವಾಹವು ಗುರುತು ಚೀಟಿ ಪಡೆಯುವ ಹಕ್ಕನ್ನು ಕಸಿದುಕೊಳ್ಳುವುದಿಲ್ಲ. ನ್ಯಾಯಾಲಯದ ದೃಷ್ಟಿಯಲ್ಲಿ, ಮಗ ಮಗನಾಗಿ ಉಳಿದಿದ್ದರೆ, ವಿವಾಹಿತ ಅಥವಾ ಅವಿವಾಹಿತ, ಮಗಳು ಮಗಳು, ವಿವಾಹಿತ ಅಥವಾ ಅವಿವಾಹಿತ. ಮದುವೆಯ ಕ್ರಿಯೆಯು ಮಗನ ಸ್ಥಿತಿಯನ್ನು ಬದಲಾಯಿಸದಿದ್ದರೆ, ಮದುವೆಯ ಕ್ರಿಯೆಯು ಮಗಳ ಸ್ಥಿತಿಯನ್ನು ಬದಲಾಯಿಸುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

'ಪುರುಷ'ನನ್ನು 'ಸಿಬ್ಬಂದಿ' ಎಂದು ಬದಲಾಯಿಸಿ ಮಹಿಳೆಯರು ಕೂಡ ಇಂದು ಅಧಿಕಾರಿಗಳು ಮತ್ತು ಇತರ ಜವಾಬ್ದಾರಿಗಳಲ್ಲಿ ಮೇಲ್ವಿಚಾರಣಾ ಪಾತ್ರಗಳಲ್ಲಿ ಯುದ್ಧ ಸೇವೆಗಳನ್ನು ತಲುಪಿದ್ದಾರೆ, ಅದು ಭಾರತೀಯ ಸೇನೆ ಅಥವಾ ವಾಯುಪಡೆ ಅಥವಾ ನೌಕಾಪಡೆಯಲ್ಲಿರಬಹುದು. ಆದ್ದರಿಂದ, ಶೀರ್ಷಿಕೆಯಲ್ಲಿನ 'ಪುರುಷರು' ಪದವು ಮಾಜಿ ಸೈನಿಕರು ಎಂಬ ಪದದ ಒಂದು ಭಾಗವು ಸನಾತನ ಪುಲ್ಲಿಂಗ ಸಂಸ್ಕೃತಿಯ ಸ್ತ್ರೀದ್ವೇಷವನ್ನು ಪ್ರದರ್ಶಿಸುತ್ತದೆ. ನಿಯಮದ ಮನಸ್ಥಿತಿ ಬದಲಾವಣೆಯಾಗಬೇಕು. ಆಗ ಮಾತ್ರ ಸಂವಿಧಾನದ ಮೌಲ್ಯಗಳಿಗೆ ಬದ್ಧತೆಗೆ ಮನ್ನಣೆ ಸಿಗುತ್ತದೆ, ನಾಮಕರಣದ ಬದಲಾವಣೆಯ ಈ ಅನಿವಾರ್ಯ ಅಗತ್ಯವನ್ನು ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಎಲ್ಲಿ ಬೇಕಾದರೂ ಪರಿಹರಿಸಬೇಕು. 'ಮಾಜಿ–ಸೇವಾ ಸಿಬ್ಬಂದಿ'ಗೆ 'ಮಾಜಿ ಸೈನಿಕ' ಎಂದು ಚಿತ್ರಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ.

ಜ.31ಕ್ಕೆ ಸಂಸತ್ ಅಧಿವೇಶನ; ಫೆ.1ಕ್ಕೆ ಕೇಂದ್ರ ಬಜೆಟ್ ಮಂಡನೆ

ನವದೆಹಲಿ, ಜ.3–ಈ ಬಾರಿ ಸಂಸತ್ ಬಜೆಟ್ ಅಧಿವೇಶನ ಜನವರಿ 31 ರಿಂದ ಪ್ರಾರಂಭವಾಗಿ ಏ.6ರಂದು ಮುಕ್ತಾಯವಾಗುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ. ಈ ಬಗ್ಗೆ ಸರ್ಕಾರ ಶೀಘ್ರದಲ್ಲೇ ಅಧಿಕೃತ ಪ್ರಕಟಣೆ ನೀಡುವ ನಿರೀಕ್ಷೆ ಇದೆ.



ಕೇಂದ್ರ ಬಜೆಟ್ 2023–24 ಅನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಫೆ.1ರಂದು ಸಂಸತ್ತಿನಲ್ಲಿ ಮಂಡಿಸಲಿದ್ದಾರೆ. ಬಜೆಟ್ ಅಧಿವೇಶನದ ಮೊದಲ ಭಾಗ ಫೆ.10ರವರೆಗೆ ಮುಂದುವರಿಯುವ ನಿರೀಕ್ಷೆಯಿದೆ ಎಂದು ವರದಿಗಳು ತಿಳಿಸಿವೆ. ಬಜೆಟ್ ಅಧಿವೇಶನದ ಮೊದಲ ದಿನ ಸಂಸತ್ತಿನ ಉಭಯ ಸದನದಲ್ಲಿ ಆರ್ಥಿಕ ಸಮೀಕ್ಷೆಯನ್ನೂ ಮಂಡಿಸುವ ಸಾಧ್ಯತೆಯಿದೆ. ಸಂಸತ್ತಿನ ಸೆಂಟ್ರಲ್ ಹಾಲ್ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಷಣ ಮಾಡಿ, ಅಧಿವೇಶನವನ್ನು ಪ್ರಾರಂಭಿಸುವ ನಿರೀಕ್ಷೆಯಿದೆ. ಪ್ರತಿ ವರ್ಷ ಕೇಂದ್ರ ಬಜೆಟ್ ಅನ್ನು ಅಧಿವೇಶನಗಳಲ್ಲಿ ಮಂಡಿಸಲಾಗುತ್ತದೆ. ವರದಿಯ ಪ್ರಕಾರ, ಅಧಿವೇಶನದ 2ನೇ ಭಾಗವು ಮಾರ್ಚ್ 6 ರಂದು ಪ್ರಾರಂಭವಾಗಿ ಏಪ್ರಿಲ್ 6ಕ್ಕೆ ಕೊನೆಗೊಳ್ಳುವ ಸಾಧ್ಯತೆಯಿದೆ.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಇಂದಿನಿಂದ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಮುಷ್ಕರ

ಮೈಸೂರು,ಜ.3(ಜಿಎ)–ಮೈಸೂರು ವಿಶ್ವ ವಿದ್ಯಾನಿಲಯದ ಸ್ನಾತಕೋತ್ತರ ಮತ್ತು ಘಟಕ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಾಳೆಯಿಂದ (ಜ.4) ಅನಿರ್ದಿಷ್ಟಾವದಿ ಮುಷ್ಕರ ನಡೆಸಲು ನಿರ್ಧರಿಸಿದ್ದಾರೆ.



ಅತಿಥಿ ಉಪನ್ಯಾಸಕರ ವೇತನ ಹೆಚ್ಚಳವೂ ಸೇರಿದಂತೆ ಇತರ ಬೇಡಿಕೆಗಳ ಕುರಿತು ವಿವಿಯ ಆವರಣದಲ್ಲಿರುವ ಗಾಂಧಿ ಭವನದಲ್ಲಿ ಮಂಗಳವಾರ ಸಭೆ ಸೇರಿದ ಅತಿಥಿ ಉಪನ್ಯಾಸಕರು ಬುಧವಾರ ಬೆಳಗ್ಗೆ 10 ಗಂಟೆಯಿಂದ ಮಾನಸ ಗಂಗೋತ್ರಿಯ ಕುವೆಂಪು ಪ್ರತಿಮೆ ಬಳಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ಅತಿಥಿ ಉಪನ್ಯಾಸಕರ ವೇತನ ಹೆಚ್ಚಳ ಸಂಬಂಧ ಹಲವು ವರ್ಷಗಳಿಂದ ಮುಖ್ಯಮಂತ್ರಿ ಮತ್ತು ಕುಲಪತಿಗೆ ಮನವಿ ಸಲ್ಲಿಸಲಾಗಿದೆ. ಇದಕ್ಕೆ ಸ್ಪಂದಿಸಿ ಸಿಂಡಿಕೇಟ್ ಸಭೆಯಲ್ಲಿ ಈ ಕುರಿತು ಚರ್ಚಿಸಿ ವೇತನ ಏರಿಕೆಗೆ ನಿರ್ಣಯ ಕೈಗೊಂಡು ಆದೇಶವನ್ನೂ ಸಹ ಹೊರಡಿಸಲಾಗಿದೆ. ಈ ಆದೇಶವನ್ನು ವಾಪಸ್ ಪಡೆದುಕೊಳ್ಳಲಾಗಿದ್ದು, ಪರಿಷ್ಕೃತ ವೇತನವನ್ನು ಹಿಂಪಡೆದು ಹಳೆಯ ವೇತನವನ್ನು ಕುಲಪತಿ ಮರು ಜಾರಿಗೊಳಿಸಿದ್ದಾರೆ. ಈ ನಿರ್ಧಾರ ಸರಿಯಲ್ಲ. ಇದರಿಂದ ಅತಿಥಿ ಉಪನ್ಯಾಸಕರಿಗೆ ಅನ್ಯಾಯವಾಗಲಿದೆ. ಆದ್ದರಿಂದ ಕೂಡಲೇ ಪರಿಷ್ಕೃತ ವೇತನ ಜಾರಿಗೊಳಿಸಬೇಕು. ಹಾಗೇ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಅಲ್ಲಿಯವರೆಗೆ ಅನಿರ್ದಿಷ್ಟಾವಧಿ ಪ್ರತಿಭಟನೆ ಮುಂದುವರೆಸಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಅತಿಥಿ ಉಪನ್ಯಾಸಕರೊಬ್ಬರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

BPL ಪಡಿತರದಾರರಿಗೆ 5 ಕೆಜಿ ಜೊತೆಗೆ 1 ಕೆಜಿ ಹೆಚ್ಚುವರಿ ಅಕ್ಕಿ


ಸರ್ಕಾರದ ಆದೇಶ



ಬೆಂಗಳೂರು, ಜ.3– ಬಿಪಿಎಲ್ ಪಡಿತರದಾರರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಫಲಾನುಭವಿಗಳಿಗೆ ಈವರೆಗೆ ವಿತರಿಸುತ್ತಿದ್ದ 5 ಕೆಜಿ ಜೊತೆಗೆ 1 ಕೆಜಿ ಹೆಚ್ಚುವರಿಯಾಗಿ ಅಕ್ಕಿ ವಿತರಣೆಗೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆದ್ಯತಾ ಪಡಿತರ ಚೀಟಿಗಳ (ಬಿಪಿಎಲ್) ಪ್ರತಿ ಫಲಾನುಭವಿಗಳಿಗೆ ಪ್ರತಿ ತಿಂಗಳು ತಲಾ 5 ಕೆಜಿ ಅಕ್ಕಿ ವಿತರಿಸಲಾಗುತ್ತಿತ್ತು. ಈಗ 1 ಕೆಜಿ ಹೆಚ್ಚುವರಿ ಸೇರಿದಂತೆ ಒಟ್ಟು 6 ಕೆಜಿ ಅಕ್ಕಿ ವಿತರಿಸಲಾಗುವುದು. ಜನವರಿ 1ರಿಂದಲೇ ಈ ಆದೇಶ ಜಾರಿಗೊಂಡಿದೆ ಎಂದು ಸರ್ಕಾರ ತಿಳಿಸಿದೆ. ರಾಜ್ಯದಲ್ಲಿರುವ ಆದ್ಯತಾ ಪಡಿತರ ಚೀತಿಗಳ ಪ್ರತಿ ಫಲಾನುಭವಿಗಳಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲಾಗುತ್ತಿರುವ 5 ಕೆಜಿ ಆಹಾರ ಧಾನ್ಯದೊಂದಿಗೆ ಹೆಚ್ಚುವರಿಯಾಗಿ ಪ್ರತಿ ತಿಂಗಳು 1 ಕೆಜಿ ಅಕ್ಕಿಯನ್ನು ವಿತರಿಸಲು ಸರ್ಕಾರ ಆದೇಶಿಸಿದೆ. ಚುನಾವಣೆ ಸಮೀಪದಲ್ಲಿರುವ ಹೊತ್ತಿನಲ್ಲೇ ಸರ್ಕಾರ ಈ ಆದೇಶ ಹೊರಡಿಸಿದೆ. ವಿಪಕ್ಷ ನಾಯಕ ಸಿದ್ದರಾಮಯ್ಯ ಸಮಾವೇಶವೊಂದರಲ್ಲಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಪಡಿತರದಾರರಿಗೆ 10 ಕೆಜಿ ಅಕ್ಕಿ ವಿತರಿಸಲಾಗುವುದು ಎಂದು ಹೇಳಿಕೆ ನೀಡಿದ್ದರು. ಇದರ ಬೆನ್ನಲ್ಲೇ ಸರ್ಕಾರ ಸದ್ಯ ನೀಡುತ್ತಿರುವ ಪಡಿತರ ಜೊತೆಗೆ 1 ಕೆಜಿ ಹೆಚ್ಚುವರಿ ಅಕ್ಕಿ ನೀಡುವುದಾಗಿ ತಿಳಿಸಿದೆ.

ಜನಪ್ರಿಯ ಘೋಷಣೆಗಳ ಬಜೆಟ್ ಮಂಡನೆಗೆ ಸಿಎಂ ಬೊಮ್ಮಾಯಿ ತಯಾರಿ

ಬೆಂಗಳೂರು, ಜ.3– ಸಿಎಂ ಬೊಮ್ಮಾಯಿ ತಮ್ಮ ಆಡಳಿತಾವಧಿಯ ಕೊನೆಯ ಬಜೆಟ್ ಮಂಡಿಸಲು ಸಿದ್ಧತೆ ಪ್ರಾರಂಭಿಸಿದ್ದಾರೆ. ಚುನಾವಣೆ ಹೊಸ್ತಿಲಲ್ಲಿ ಬಹುತೇಕ ಚುನಾವಣಾ ಬಜೆಟ್‌ಗೆ ತಯಾರಿ ನಡೆಸುತ್ತಿರುವ ಸಿಎಂ ಪೂರ್ಣಪ್ರಮಾಣದ ಹಾಗೂ ಹೆಚ್ಚುವರಿ ಬಜೆಟ್ ಮಂಡಿಸಲು ಸಜ್ಜಾಗಿದ್ದಾರೆ.



2023–24ನೇ ಸಾಲಿನ ಬಜೆಟ್‌ಗೆ ಅಧಿಕಾರಿಗಳ ಜೊತೆ ಸಭೆ ಆರಂಭಿಸಿದ್ದಾರೆ. ಫೆಬ್ರವರಿ ಎರಡನೇ ವಾರದಲ್ಲಿ ಬಜೆಟ್ ಮಂಡಿಸಲಿರುವ ಸಿಎಂ ಬೊಮ್ಮಾಯಿ ಈಗಾಗಲೇ ಆರ್ಥಿಕ ಇಲಾಖೆ ಅಧಿಕಾರಿಗಳ ಜೊತೆ ಎರಡು ಸುತ್ತಿನ ಸಭೆ ನಡೆಸಿದ್ದಾರೆ. ಇತ್ತ ಅಧಿಕಾರಿಗಳ ಜೊತೆ ಬಜೆಟ್ ಪೂರ್ವತಯಾರಿ ಸಭೆಗಳನ್ನು ನಡೆಸಲು ಪ್ರಾರಂಭಿಸಿದ್ದಾರೆ. 2022–23 ಸಾಲಿನಲ್ಲಿ 2.7 ಲಕ್ಷ ಕೋಟಿ ಆಯವ್ಯಯ ಮಂಡಿಸಿದ್ದ ಸಿಎಂ ಬೊಮ್ಮಾಯಿ 3 ಲಕ್ಷ ಕೋಟಿಗೂ ಅಧಿಕ 2023–24 ಸಾಲಿನ ಬಜೆಟ್ ಮಂಡಿಸಲು ತಯಾರಿ ನಡೆಸಿದ್ದಾರೆ.

ಚುನಾವಣೆ ಹೊಸ್ತಿಲಲ್ಲಿ ಬಿಜೆಪಿ ಸರ್ಕಾರಕ್ಕೆ ಇದು ನಿರ್ಣಾಯಕ ಆಯವ್ಯಯ ಆಗಿದೆ. ಜನಪ್ರಿಯ ಘೋಷಣೆ, ಚುನಾವಣಾ ಲಾಭ ತರುವ ಆಯವ್ಯಯ ಮಂಡಿಸಲು ಸಿಎಂ ಬೊಮ್ಮಾಯಿ ತಯಾರಿ ನಡೆಸುತ್ತಿದ್ದಾರೆ. ಈ ಬಾರಿಯ ಬಜೆಟ್ ಬಹುತೇಕ ಚುನಾವಣಾ ಬಜೆಟ್ ಆಗಿರುವುದರಲ್ಲಿ ಯಾವುದೇ ಅನುಮಾನ ಇಲ್ಲ. ಇತ್ತ ರಾಜ್ಯ ಕೋವಿಡ್ ಲಾಕ್‌ಡೌನ್‌ನಿಂದ ಚೇತರಿಕೆ ಕಾಣುತ್ತಿದ್ದು, ಗುರಿ ಮೀರಿ ಆದಾಯ ಸಂಗ್ರಹ ಸಿಎಂ ಬೊಮ್ಮಾಯಿ ನಿಟ್ಟುಸಿರು ಬಿಡುವಂತಾಗಿದೆ. ಆದಾಯ ಸಂಗ್ರಹ ಉತ್ತಮವಾಗಿರುವುದರಿಂದ ಚುನಾವಣಾ ಬಜೆಟ್ ಮಂಡನೆಗೆ ಹಾದಿ ಸುಗಮಗೊಳಿಸಿದೆ.

ಕಳೆದ ಎರಡು ವರ್ಷಗಳಿಂದ ಕೋವಿಡ್ ಲಾಕ್‌ಡೌನ್ ಹಿನ್ನೆಲೆ ಆದಾಯ ಕೊರತೆಯ ಬಜೆಟ್ ಮಂಡನೆಯಾಗಿತ್ತು. ಈ ಬಾರಿ ಹೆಚ್ಚುವರಿ ಆಯವ್ಯಯ ಮಂಡನೆ ಮಾಡಲು ಸಿಎಂ ಸಿದ್ಧತೆ ನಡೆಸಿದ್ದಾರೆ ಎಂದು ಸಿಎಂ ಕಚೇರಿ ಮೂಲಗಳು ತಿಳಿಸಿವೆ.

ಕೋವಿಡ್ ಎರಡನೇ ಬೂಸ್ಟರ್ ಡೋಸ್ ಅಗತ್ಯವಿಲ್ಲ

ಆರೋಗ್ಯ ಸಚಿವಾಲಯ ಸ್ಪಷ್ಟನೆ

ನವದೆಹಲಿ, ಜ.3– ದೇಶದಲ್ಲಿ ಸದ್ಯದ ಕೋವಿಡ್ ಪರಿಸ್ಥಿತಿಯನ್ನು ಗಮನಿಸಿದರೆ ಎರಡನೇ ಬೂಸ್ಟರ್ ಡೋಸ್ ಪಡೆಯುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವಾಲಯದ ಮೂಲಗಳು ತಿಳಿಸಿವೆ. ದೇಶದಲ್ಲಿ ಮೊದಲ ಬೂಸ್ಟರ್ ಡ್ರೈವ್ ಅನ್ನು ಪೂರ್ಣಗೊಳಿಸಬೇಕಾಗಿದೆ ಎಂದು ಸರ್ಕಾರದ ಮೂಲಗಳು ತಿಳಿಸಿರುವುದಾಗಿ ಸುದ್ದಿಸಂಸ್ಥೆ ಎಎನ್‌ಐ ವರದಿ ಮಾಡಿದೆ. ಕೇಂದ್ರ ಆರೋಗ್ಯ ಸಚಿವಾಲಯದ ಅಂಕಿಅಂಶಗಳ ಪ್ರಕಾರ ಕಳೆದ 24 ಗಂಟೆಗಳಲ್ಲಿ 134 ಹೊಸ ಕೋವಿಡ್ ಪ್ರಕರಣಗಳು ದಾಖಲಾಗಿದ್ದು, ಭಾರತದ ಸಕ್ರಿಯ ಪ್ರಕರಣಗಳ ಸಂಖ್ಯೆ 2,582ರಷ್ಟಿದೆ. ದೇಶದಾದ್ಯಂತ ಇದುವರೆಗೆ ಒಟ್ಟು 220.11 ಕೋಟಿ ಡೋಸ್ ಕೋವಿಡ್ ಲಸಿಕೆ ವಿತರಿಸಲಾಗಿದೆ. ಚೀನಾ, ಅಮೆರಿಕ ಸೇರಿದಂತೆ ಕೆಲವು ದೇಶಗಳಲ್ಲಿ ಕೋವಿಡ್ ಪ್ರಕರಣಗಳು ಭಾರಿ ಪ್ರಮಾಣದಲ್ಲಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಭಾರತದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

ಡಿಸಿ ಭರವಸೆ: ಅನ್ನಭಾಗ್ಯ ಯೋಜನೆಯ ಲೋಡಿಂಗ್, ಅನ್ ಲೋಡಿಂಗ್ ಕಾರ್ಮಿಕರ ಪ್ರತಿಭಟನೆ ಅಂತ್ಯ

ಮೈಸೂರು,ಜ.3(ಜಿಎ)–ಜಿಲ್ಲಾಧಿಕಾರಿಗಳ ಭರವಸೆ ಹಿನ್ನೆಲೆಯಲ್ಲಿ ಪಡಿತರ ಅನ್ನಭಾಗ್ಯ ಯೋಜನೆಯಡಿಯ ಲೋಡಿಂಗ್, ಅನ್ ಲೋಡಿಂಗ್ ಕಾರ್ಮಿಕರು ಅನಿರ್ದಿಷ್ಟಾವಧಿ ಮುಷ್ಕರ ಕೈಬಿಟ್ಟಿದ್ದಾರೆ. ಕೂಲಿ ಹೆಚ್ಚಿಸಬೇಕೆಂಬುದೂ ಸೇರಿದಂತೆ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜ.2ರಿಂದ ಜಿಲ್ಲೆಯಾದ್ಯಂತ ಆಹಾರ ಧಾನ್ಯಗಳ ಎತ್ತುವಳಿ ಸ್ಥಗಿತಗೊಳಿಸಿ, ಅನಿರ್ದಿಷ್ಟಾವಧಿ ಮುಷ್ಕರ ನಡೆಸುವುದಾಗಿ ಎಚ್ಚರಿಸಿ, ಲೋಡಿಂಗ್ ಮತ್ತು ಅನ್‌ಲೋಡಿಂಗ್ ಎರಡೂ ಸೇರಿದಂತೆ ಕ್ವಿಂಟಾಲ್‌ಗೆ ಕನಿಷ್ಠ 25 ರೂ. ಕೂಲಿ ದರ ನಿಗದಿಪಡಿಸಬೇಕು ಎಂಬುದೂ ಸೇರಿದಂತೆ ವಿವಿಧ ಬೇಡಿಕೆ ಮುಂದಿಟ್ಟುಕೊಂಡು ಮುಷ್ಕರಕ್ಕೆ ಮುಂದಾಗಿದ್ದರು. ಆದರೆ, ಜಿಲ್ಲಾಧಿಕಾರಿಗಳು ಸಮಸ್ಯೆಗಳ ಕುರಿತು ಚರ್ಚಿಸುವುದಾಗಿ ಭರವಸೆ ನೀಡಿದ ಹಿನ್ನೆಲೆಯಲ್ಲಿ 2ನೇ ದಿನಕ್ಕೆ ಮುಷ್ಕರ ಸ್ಥಗಿತಗೊಳಿಸಿದ್ದಾರೆ. ಡಿಸಿ ಆಪ್ತ ಸಹಾಯಕರು, ನಿಮ್ಮ ಸಮಸ್ಯೆಗಳ ಕುರಿತು ಎರಡು ದಿನಗಳಲ್ಲಿ ಸಭೆ ನಡೆಸಲಾಗುವುದು ಎಂದು ತಿಳಿಸಿದ ಹಿನ್ನೆಲೆಯಲ್ಲಿ ಮುಷ್ಕರವನ್ನು ಕೈಬಿಟ್ಟಿದ್ದೇವೆ ಎಂದು ಕರ್ನಾಟಕ ರಾಜ್ಯ ಲೋಡಿಂಗ್ ಮತ್ತು ಅನ್‌ಲೋಡಿಂಗ್ ಕಾರ್ಮಿಕರ ಒಕ್ಕೂಟದ(ಕರ್ನಾಟಕ ಶ್ರಮಿಕ ಶಕ್ತಿಯ ಅಂಗಸಂಘಟನೆ) ಜಿಲ್ಲಾಧ್ಯಕ್ಷ ಕರಿನಾಯಕ 'ಮೈಸೂರು ಮಿತ್ರ'ನಿಗೆ ತಿಳಿಸಿದರು.



ವಿಜಯಪುರ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರಿಗೆ ಮೈಸೂರು ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿ ಮಂಗಳವಾರ ಸಂಜೆ ಶ್ರದ್ಧಾಂಜಲಿ ಸಲ್ಲಿಸಿ, ಗೌರವ ಸೂಚಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಎಸ್.ಪಿ.ಮಂಜುನಾಥ್, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಕೆ.ಆರ್.ಸಂತಾನಂ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು ಎರಡು ನಿಮಿಷ ಮೌನಾಚರಣೆ ಮಾಡಿ, ಶ್ರೀ ಸಿದ್ಧೇಶ್ವರ ಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಕೊರೊನಾ, ಕ್ಯಾನ್ಸರ್‌ಗೆ ಮದ್ದಿದೆ ಆದರೆ ದುರಾಸೆಗೆ ಮದ್ದಿಲ್ಲ!

- ಸಮಾಜದಲ್ಲಿ ಮಾನವೀಯ ಮೌಲ್ಯಗಳು ಮರೆಯಾಗುತ್ತಿರುವುದಕ್ಕೆ ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗಡೆ ತೀವ್ರ ವಿಷಾದ
- ಕೆಂಪೇಗೌಡರ ಪ್ರತಿಷ್ಠಾನದ ವಾರ್ಷಿಕೋತ್ಸವ: ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಭಾಗಿ
- ತಪ್ಪು ಮಾಡಿದವರನ್ನು ಶಿಕ್ಷಿಸುತ್ತಿದ್ದ ಸಮಾಜ ಈಗ ತಪ್ಪು ಮಾಡಿದವರನ್ನು ಸ್ವಾಗತಿಸಿ, ಸಂಭ್ರಮಿಸುತ್ತಿದೆ; ಬೇಸರ

ಮೈಸೂರು,ಜ.3(ಎಂಕೆ)– ಕೊರೊನಾಗೆ ಮದ್ದಿದೆ, ಕ್ಯಾನ್ಸರ್‌ಗೆ ಮದ್ದಿದೆ. ಆದರೆ ದುರಾಸೆ ಎಂಬ ರೋಗಕ್ಕೆ ಮದ್ದಿಲ್ಲ. ತೃಪ್ತಿ ಎಂಬ ಗುಣ, ಮಾನವೀಯ ಮೌಲ್ಯವನ್ನು ನಮ್ಮಲ್ಲಿ ಹಾಗೂ ಸಮಾಜದಲ್ಲಿ ಅಳವಡಿಸಿದರೆ ದುರಾಸೆಯನ್ನು ನಿರ್ಮೂಲನೆ ಮಾಡಲು ಸಾಧ್ಯವಾಗದಿದ್ದರೂ ಮಟ್ಟ ಹಾಕಬಹುದಾಗಿದೆ ಎಂದು ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗಡೆ ಹೇಳಿದರು.



ಮೈಸೂರು ವಿಜಯನಗರ 1ನೇ ಹಂತದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿದ ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗಡೆ ಅವರು ನಂತರ ಮಾತನಾಡಿದರು.

ಮೈಸೂರು ವಿಜಯನಗರ 1ನೇ ಹಂತದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇದ್ದುದ್ದರಲ್ಲಿಯೇ ನಡೆಸುವ ಜೀವನ ನೆಮ್ಮದಿ ತರುತ್ತದೆ ಎಂದರು.

ನಾನು ಹಲವಾರು ಹುದ್ದೆಗಳನ್ನು ನಿರ್ವಹಿಸಿದ್ದೇನೆ. ಆದರೆ ಲೋಕಾಯುಕ್ತಕ್ಕೆ ಬಂದ ನಂತರ ಅನೇಕ ಅನ್ಯಾಯಗಳನ್ನು ಕಂಡೆ. ಇದರ ಬಗ್ಗೆ ಚಿಂತಿಸಿದಾಗ ಇದು ವ್ಯಕ್ತಿಗಳ ತಪ್ಪಲ್ಲ ಸಮಾಜದ ತಪ್ಪು ಎಂಬುದು ತಿಳಿಯಿತು. ವ್ಯಕ್ತಿಗಳು ಸಮಾಜ ಏನನ್ನು ಭಾವಿಸುತ್ತದೋ ಅದೇ ದಾರಿಯಲ್ಲಿ ಹೋಗುತ್ತಾರೆ. ನಾವು ಚಿಕ್ಕವರಾಗಿದ್ದಾಗ ಅಂದಿನ ಸಮಾಜ ತಪ್ಪು ಮಾಡಿದವರನ್ನು ಬಹಿಷ್ಕರಿಸುತಿತ್ತು. ಗ್ರಾಮದಲ್ಲಿ ಯಾರಾದರೂ ಜೈಲಿಗೆ ಹೋಗಿದ್ದರೆ, ಪೋಷಕರು ಮಕ್ಕಳಿಗೆ ಅವರ ಮನೆ ಕಡೆ ಹೋಗಬೇಡ ಎನ್ನುತ್ತಿದ್ದರು. ಅದೊಂದು ಸಾಮಾಜಿಕ ಶಿಕ್ಷೆಯಾಗಿತ್ತು. ಇದರಿಂದಾಗಿ ಜನರು ತಪ್ಪು ಮಾಡಲು ಭಯಪಡುತ್ತಿದ್ದರು. ಆದರೆ ಇವತ್ತು ಬರೀ ಶ್ರೀಮಂತಿಕೆ ಮತ್ತು ಅಧಿಕಾರವನ್ನು ಕ್ರೋಡಿಕರಿಸುವ ಸಮಾಜವಿದೆ. ಪ್ರಾಮಾಣಿಕರಿಗೆ ಯಾವುದೇ ಬೆಲೆಯಿಲ್ಲ. ಪ್ರಾಮಾಣಿಕರ ಬಗ್ಗೆ ಮಾತನಾಡಿದರೆ ಬಿಡ್ರೀ ಅವನೊಬ್ಬ ಹುಚ್ಚ ಎನ್ನುವ ಮಾತು ಸಾಮಾನ್ಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ನಮ್ಮ ಹಿರಿಯರು ತಿಳಿಸಿದ್ದ ಹಲವಾರು ಮೌಲ್ಯಗಳು ಕಣ್ಮರೆಯಾಗಿವೆ. ಅತೀ ಮುಖ್ಯವಾಗಿ ನಮ್ಮಲ್ಲಿ ಹಾಗೂ ಸಮಾಜದಲ್ಲಿರುವ ವ್ಯಕ್ತಿಗಳಲ್ಲಿರುವುದು ಆಸ್ತಿ ಮಾಡುವ ದುರಾಸೆ. ಈ ದುರಾಸೆ ಯಾವ ಮಟ್ಟದ ವೇಗದಲ್ಲಿದೆ ಎಂದರೆ, 50ನೇ ದಶಕದಲ್ಲಿ ಬಯಲಿಗೆ ಬಂದ ಜೀಪ್ ಹಗರಣ (ಹೊರ ದೇಶದಿಂದ ನಮ್ಮ ಸೈನಿಕರಿಗೆ ಜೀಪ್ ವಾಹನ ಖರೀದಿ)ದಲ್ಲಿ ಅಧಿಕಾರದಲ್ಲಿದ್ದ ಕೆಲವೇ ಕೆಲವು ವ್ಯಕ್ತಿಗಳು 52 ಲಕ್ಷ ರೂ. ಸುಲಿಗೆ ಮಾಡಿದರು. 60ನೇ ದಶಕದಲ್ಲಿ ನಮ್ಮ ಯೋಧರಿಗೆ ವಿದೇಶದಿಂದ ಶಸ್ತ್ರಾಸ್ತ್ರಗಳನ್ನು ಖರೀದಿ ಮಾಡುತ್ತೇವೆಂದು 64 ಕೋಟಿ ರೂ. ನುಂಗಿದರು. 70ನೇ ದಶಕದಲ್ಲಿ ಕಾಮನ್‌ವೆಲ್ತ್ ಗೇಮ್ಸ್‌ನಲ್ಲಾದ ಹಗರಣದಲ್ಲಿ 70 ಸಾವಿರ ಕೋಟಿ ರೂ., 2ಜಿ ಹಗರಣದಲ್ಲಿ 1.70 ಲಕ್ಷ ಕೋಟಿ ರೂ., ಕಲ್ಲಿದ್ದಲು ಹಗರಣದಲ್ಲಿ 1.80 ಲಕ್ಷ ಕೋಟಿ ರೂ. ದೇಶಕ್ಕೆ ನಷ್ಟವಾಗಿದೆ. ಹೀಗೆ ಹಗರಣಗಳಿಂದ ಕೋಟಿ ಕೋಟಿ ರೂ. ಹಣ ನಷ್ಟವಾದರೆ ದೇಶದ ಅಭಿವೃದ್ಧಿ ಹೇಗೆ ಸಾಧ್ಯ? ಎಂದು ಪ್ರಶ್ನಿಸಿದರು.

ಕರ್ನಾಟಕ ರಾಜ್ಯದ ಒಂದು ವರ್ಷದ ಬಜೆಟ್‌ನಷ್ಟು ಹಣ ಒಂದು ಹಗರಣದಿಂದ ನಷ್ಟವಾಗುತ್ತದೆ ಎಂದರೆ ಯಾವ ಹಂತದಲ್ಲಿದ್ದೇವೆ ಎಂಬುದು ಅರ್ಥವಾಗುತ್ತದೆ. ಇವತ್ತು ರಾಜ್ಯದಲ್ಲಿ ವಿರೋಧ ಪಕ್ಷದವರು ಆಡಳಿತ ಪಕ್ಷವನ್ನು 40 ಪರ್ಸೆಂಟ್ ಕಮಿಷನ್ ಸರ್ಕಾರ ಎನ್ನುತ್ತಿದ್ದಾರೆ. ಅದಕ್ಕೆ ಆಡಳಿತ ಪಕ್ಷದವರು ನಿಮ್ಮ ಅವಧಿಯಲ್ಲಿ ಎಷ್ಟಿತ್ತು ಎಂದು ಮರು ಪ್ರಶ್ನಿಸಿದರೆ, ಬರೀ 10 ಪರ್ಸೆಂಟ್ ಇತ್ತು ಎಂದು ಧೈರ್ಯವಾಗಿಯೇ ಹೇಳುತ್ತಾರೆ. ನಮ್ಮೂರಕಡೆ ಗಾದೆ ಮಾತಿದೆ 'ಮನೆ ಕದ್ದವನೂ ಕಳ್ಳ, ಅಡಿಕೆ ಕದ್ದವನು ಕಳ್ಳ' ಎಂದು. ಇದೇ ರೀತಿ ದುರಾಸೆ, ಭ್ರಷ್ಟಾಚಾರ ಮುಂದುವರೆಯುತ್ತಾ ಹೋದರೆ ಸಮಾಜದಲ್ಲಿ ಶಾಂತಿ–ಸೌಹಾರ್ದತೆ ಎಂಬುದು ಇಲ್ಲದಂತಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಜೈಲಿಗೆ ಹೋಗಿ ಬಿಡುಗಡೆಯೂ ಅಲ್ಲ, ಜಾಮೀನು ಪಡೆದು ಬಂದವರಿಗೆ ಹಾರ ಹಾಕಿ, ಅದೂ ಸೇಬಿನ ಹಾರ ಹಾಕಿ ಜೈಕಾರ ಕೂಗುತ್ತಾರೆ. ಈ ಮೂಲಕ ಎಂತಹ ಸಂದೇಶವನ್ನು ಸಮಾಜಕ್ಕೆ ನೀಡುತ್ತಿದ್ದಾರೆ ಎಂಬುದನ್ನು ಆಲೋಚಿಸಬೇಕಾಗಿದೆ. ಜೈಕಾರ ಹಾಕುವ ಬದಲು ಜೈಲಿಗೆ ಹೋಗಿದ್ದ ವ್ಯಕ್ತಿ ಯಾವ ರೀತಿ, ಯಾವ ಮಾರ್ಗದಲ್ಲಿ ಹಣ ಸಂಪಾದಿಸಿದ, ಹೇಗೆ ಶ್ರೀಮಂತನಾದ ಎಂಬುದನ್ನು ತಿಳಿದುಕೊಳ್ಳುವುದು, ಅರಿತುಕೊಳ್ಳುವುದು ಮುಖ್ಯವಾಗಿದೆ ಎಂದು ವಿದ್ಯಾರ್ಥಿಗಳಿಗೆ ಉದಾಹರಣೆ ಸಹಿತ ಸನ್ಮಾರ್ಗದ ಮಹತ್ವ ಹೇಳಿಕೊಟ್ಟರು.

ಕೊರೊನಾಗೆ ಮದ್ದಿದೆ, ಕ್ಯಾನ್ಸರ್‌ಗೆ ಮದ್ದಿದೆ. ಆದರೆ ದುರಾಸೆ ಎಂಬ ರೋಗಕ್ಕೆ ಮದ್ದಿಲ್ಲ. ಆದರೆ ತೃಪ್ತಿ ಎಂಬ ಗುಣ, ಮಾನವೀಯ ಮೌಲ್ಯವನ್ನು ನಮ್ಮಲ್ಲಿ ಹಾಗೂ ಸಮಾಜದಲ್ಲಿ ಅಳವಡಿಸಿದರೆ ದುರಾಸೆಯನ್ನು ನಿರ್ಮೂಲನೆ ಮಾಡಲು ಸಾಧ್ಯ ವಾಗದಿದ್ದರೂ ಮಟ್ಟ ಹಾಕಬಹುದಾಗಿದೆ. ಇನ್ನೊಬ್ಬರಿಗೆ ದಾರಿದೀಪವಾಗಬೇಕು, ಏಣಿಯಾಗಬೇಕು ಎಂದು ಬಯಸುವವರು ಮೊದಲು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಕೋಟ್ಯಾಂತರ ರೂ. ಹಣ ಮಾಡಿ. ಆದರೆ ಕಾನೂನು ಚೌಕಟ್ಟಿನಲ್ಲಿರಲಿ ಎಂದರು.

ಬಳಿಕ ಮೈಸೂರು ಕನ್ನಡ ಪ್ರಾಧ್ಯಾಪಕ ಡಾ.ಎಂ.ಜಿ.ಮಂಜುನಾಥ, ಮಹಾರಾಣಿ ಕಲಾ ಕಾಲೇಜು ಸಹಾಯಕ ಪ್ರಾಧ್ಯಾಪಕರಾದ ಡಾ.ಎಂ.ಮುನಿಕೆಂಪೇಗೌಡ ಹಾಗೂ ಡಾ.ಟಿ.ಎಲ್.ಜಗದೀಶ್ ಅವರನ್ನು ಅಭಿನಂದಿಸಿ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಕೆಂಪೇಗೌಡ ಪ್ರಾಧಿಕಾರದ ಆಯುಕ್ತ ಆರ್.ವಿನಯ್‌ದೀಪ್, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣದ ನಿವೃತ್ತ ಸದಸ್ಯ ಹೆಚ್.ಜಯದೇವ, ಮಾಜಿ ಮೇಯರ್ ಶ್ರೀಕಂಠಯ್ಯ, ಪಾಲಿಕೆ ಸದಸ್ಯೆ ಶಾಂತಕುಮಾರಿ, ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದ ಅಧ್ಯಕ್ಷ ಮರಿಮಲ್ಲಯ್ಯ, ಹಿರಿಯ ವಕೀಲ ಅನಂತಸ್ವಾಮಿ, ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಟಿ.ಜಿ.ಆದಿಶೇಷನ್‌ಗೌಡ, ಸಂಘಟನಾ ಕಾರ್ಯದರ್ಶಿ ಸಿ.ವೆಂಕಟೇಶ್ ಮತ್ತಿತರರಿದ್ದರು.

ನೀತಿ ಪಾಠಗಳು ಮಾಯವಾಗಿವೆ...

ನಾನು ಶಾಲೆಗೆ ಹೋಗುವಾಗ ಪಠ್ಯ–ಪುಸ್ತಕದಲ್ಲಿದ್ದಂತಹ ನೀತಿ ಪಾಠಗಳು ಈಗ ಒಂದೂ ಇಲ್ಲ. ಇದರ ಬಗ್ಗೆ ಮಕ್ಕಳಷ್ಟೇ ಅಲ್ಲ ಪೋಷಕರು ಯೋಚನೆ ಮಾಡಬೇಕಾಗುತ್ತದೆ. ಮನೆಯಲ್ಲಿ, ಶಾಲೆಯಲ್ಲಿ ಮಕ್ಕಳಿಗೆ ನೀತಿ ಪಾಠ ಹೇಳಿಕೊಡದಿದ್ದರೆ ಮಾನವೀಯ ಮೌಲ್ಯಗಳನ್ನು ತಿಳಿಯುವುದಾದರೂ ಹೇಗೆ.

– ಎನ್.ಸಂತೋಷ್ ಹೆಗಡೆ, ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ

ಮೈಸೂರು ಮಿತ್ರ ಬುಧವಾರ 4 ಜನವರಿ 2023

ಸಿದ್ದೇಶ್ವರ ಶ್ರೀಗಳಿಗೆ ನುಡಿನಮನ



ಕುಶಾಲನಗರ, ಜ.3– ಸೋಮವಾರ ರಾತ್ರಿ ಲಿಂಗೈಕ್ಯರಾದ ವಿಜಯಪುರದ ಜ್ಞಾನ ಯೋಗಾಶ್ರಮದ ಸಂತ ಸಿದ್ದೇಶ್ವರ ಸ್ವಾಮೀಜಿಗಳಿಗೆ ನುಡಿನಮನ ಸಲ್ಲಿಸಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಪಿ.ಕೇಶವ ಕಾಮತ್ ಮಾತನಾಡಿ, ಸಿದ್ದೇಶ್ವರ ಶ್ರೀಗಳು ಸದಾ ಶ್ವೇತ ವಸ್ತ್ರಧಾರಿಗಳಾಗಿ ಸರಳವಾಗಿ ಬದುಕು ನಡೆಸಿದವರು. ನಿತ್ಯವೂ ಪ್ರವಚನಗಳ ಮೂಲಕ ಸಹಸ್ರಾರು ಭಕ್ತರ ಬದುಕನ್ನು ಕಟ್ಟಿದ ಶ್ರೀಗಳು ಉತ್ತರ ಕರ್ನಾಟಕದ ಭಕ್ತರ ಪಾಲಿಗೆ ನಡೆದಾಡುವ ದೇವರಾದರು ಎಂದು ಬಣ್ಣಿಸಿದರು.

ಕುಶಾಲನಗರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಮೂರ್ತಿ ಮಾತನಾಡಿ, ಭಕ್ತರ ಪಾಲಿನ ನಿಜದೈವ ಸಿದ್ದೇಶ್ವರ ಶ್ರೀಗಳು ಬುದ್ಧ, ಬಸವ, ಅಂಬೇಡ್ಕರ್, ಗಾಂಧೀಜಿ, ಮಹಾವೀರ ಮೊದಲಾದ ಶ್ರೇಷ್ಠ ವ್ಯಕ್ತಿಗಳ ಆದರ್ಶಗಳನ್ನು ಮೈಗೂಡಿಸಿಕೊಂಡು ಪ್ರತಿದಿನ ಆಶ್ರಮದ ಆವರಣದಲ್ಲಿ ನೀಡುತ್ತಿದ್ದ ಪ್ರವಚನಕ್ಕೆ ಭಕ್ತರ ದಂಡೇ ಕಾದಿರುತ್ತಿತ್ತು. ಹಾಗಾಗಿ ಶ್ರೀಗಳ ಅಗಲಿಕೆ ಯಿಂದ ಭಕ್ತ ಕುಲ ಬಡವಾಗಿದೆ ಎಂದರು.

ಸೋಮವಾರಪೇಟೆ ತಾಲೂಕು ಕಸಾಪ ಅಧ್ಯಕ್ಷ ವಿಜೇತ್, ಹೆಬ್ಬಾಲೆ ಹೋಬಳಿ ಕಸಾಪ ಅಧ್ಯಕ್ಷ ಮಣಜೂರು ಮಂಜುನಾಥ್, ಪದಾಧಿಕಾರಿಗಳಾದ ಮೊಹಿದ್ದೀನ್, ಡೆನ್ನಿಸ್ ಡಿಸೋಜ, ಫ್ಯಾನ್ಸಿ ಮುತ್ತಣ್ಣ, ಎಸ್. ನಾಗರಾಜು, ಪ್ರೊ.ಹೆಚ್.ಬಿ.ಲಿಂಗಮೂರ್ತಿ, ವೆಂಕಟೇಶ ಪೂಜಾರಿ ಇದ್ದರು.

ಹಳೆ ಪಿಂಚಣಿ ಯೋಜನೆ ಮುಂದುವರೆಸಬೇಕು

ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಶಾಸಕ ಎಂ.ಪಿ.ಅಪ್ಪಚ್ಚುರಂಜನ್ ಮನವಿ



ಮಡಿಕೇರಿ, ಜ.3– 2006ರ ಏಪ್ರಿಲ್ ನಂತರ ನೇಮಕವಾದ ಸರ್ಕಾರಿ ನೌಕರರಿಗೆ 'ಹಳೆ ಪಿಂಚಣಿ ಯೋಜನೆ' (ಒಪಿಎಸ್) ಜಾರಿ ಮಾಡುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಜೊತೆ ಚರ್ಚಿಸಲಾಗಿದ್ದು, ಈ ಸಂಬಂಧ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಮತ್ತೊಮ್ಮೆ ಸಿಎಂ ಜತೆ ಸಮಾಲೋಚನೆ ನಡೆಸಿದಲ್ಲಿ ಹಳೆ ಪಿಂಚಣಿ ಯೋಜನೆ ಜಾರಿಯಾಗಬಹುದು ಎಂದು ಶಾಸಕ ಎಂ.ಪಿ. ಅಪ್ಪಚ್ಚುರಂಜನ್ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ ಸಂಯುಕ್ತ ಆಶ್ರಯದಲ್ಲಿ ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಕೊಡಗು ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿಂದೆ ಸರ್ಕಾರಿ ನೌಕರರಿಗೆ ಇದ್ದ ಹಳೆ ಪಿಂಚಣಿ ಯೋಜನೆಯನ್ನು ಮುಂದುವರಿಸುವಂತಾಗಬೇಕು. ಸರ್ಕಾರಿ ನೌಕರರು ನೆಮ್ಮದಿಯಿಂದ ನಿವೃತ್ತಿ ಜೀವನ ನಡೆಸುವಂತಾಗಬೇಕು. ನಿವೃತ್ತಿ ಸಂದರ್ಭದಲ್ಲಿ ಆರೋಗ್ಯ ಅತೀ ಮುಖ್ಯವಾಗಿದ್ದು, ಆ ಸಂದರ್ಭದಲ್ಲಿ ಪಿಂಚಣಿ ಅತ್ಯಗತ್ಯವಾಗಿದೆ. ಆದ್ದರಿಂದ ಎನ್‌ಪಿಎಸ್ ಬದಲಾಗಿ ಒಪಿಎಸ್ ಜಾರಿ ಆಗಬೇಕು ಎಂದು ಮನವಿ ಮಾಡಿದರು.

ಕೊಡಗು ಜಿಲ್ಲೆ ಸೈನಿಕರು ಮತ್ತು ಕ್ರೀಡಾಪಟುಗಳ ನಾಡು. ಜಿಲ್ಲೆಯಲ್ಲಿ ಹೆಚ್ಚಿನ ಸೈನಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಹಾಕಿ, ಕ್ರಿಕೆಟ್, ಅಥ್ಲೆಟಿಕ್ಸ್ ಹೀಗೆ ಹಲವು ಕ್ರೀಡೆಯಲ್ಲಿ ಪಾಲ್ಗೊಂಡು ಹೆಸರು ಗಳಿಸಿದ್ದಾರೆ. ಆ ನಿಟ್ಟಿನಲ್ಲಿ ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಂಡು ಮತ್ತಷ್ಟು ಹೆಸರು ತರುವಂತಾಗಬೇಕು ಎಂದರು.

ಸರ್ಕಾರಿ ನೌಕರರು ಪ್ರತೀ ನಿತ್ಯ ಒಂದಲ್ಲ ಒಂದು ರೀತಿಯಲ್ಲಿ ಒತ್ತಡದಲ್ಲಿ ಕೆಲಸ ನಿರ್ವಹಿಸುತ್ತಾರೆ. ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಳ್ಳುವುದರಿಂದ ಒಂದು ರೀತಿ ಕ್ರಿಯಾಶೀಲ ಚಟುವಟಿಕೆಗೆ ಸಹಕಾರಿಯಾಗಲಿದೆ ಎಂದು ಅವರು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ವೆಂಕಟೇಶ್ ಅವರು ಕ್ರೀಡಾ ಜ್ಯೋತಿ ಬೆಳಗಿಸಿ ಮಾತನಾಡಿ, ಸರ್ಕಾರಿ ನೌಕರರ ಚಲನಶೀಲತೆಗೆ ಕ್ರೀಡಾ ಚಟುವಟಿಕೆ ಸಹಕಾರಿಯಾಗಲಿದೆ. ಇದರಿಂದ ಉತ್ಸಾಹ ಹೆಚ್ಚಲಿದೆ ಎಂದರು.

ಪೌರಾಯುಕ್ತರಾದ ವಿಜಯ ಅವರು ಮಾತನಾಡಿ, ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಸ್ಫೂರ್ತಿ ಮತ್ತು ಲವಲವಿಕೆ ದೊರೆಯುತ್ತದೆ ಎಂದರು.

ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಪೊನ್ನಚ್ಚನ ಶ್ರೀನಿವಾಸ ಅವರು ಮಾತನಾಡಿ, ಎನ್‌ಪಿಎಸ್ ರದ್ದುಗೊಳಿಸಿ, ಒಪಿಎಸ್‌ನ್ನು ಜಾರಿಗೊಳಿಸಬೇಕು ಎಂದು ಅವರು ಕೋರಿದರು. ಮಡಿಕೇರಿ ನಗರದಲ್ಲಿ ಸರ್ಕಾರಿ ನೌಕರರ ಭವನ ನಿರ್ಮಾಣಕ್ಕೆ 40 ಸೆಂಟ್ ಜಾಗ ನೀಡಲಾಗಿದೆ. ಭವನ ನಿರ್ಮಾಣ ಸಂಬಂಧ ಹೆಚ್ಚಿನ ಅನುದಾನ ನೀಡಬೇಕು ಎಂದು ಶಾಸಕರಲ್ಲಿ ಕೋರಿದರು.

ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಆನಂದ್ ಅವರು ಮಾತನಾಡಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿ.ಟಿ.ವಿಸ್ಮಯಿ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರಾದ ಗುರುರಾಜ್ (ವಿರಾಜಪೇಟೆ), ಪ್ರದೀಪ್(ಸೋಮವಾರಪೇಟೆ), ಗೌರವ ಅಧ್ಯಕ್ಷರಾದ ಶಿವಕುಮಾರ್, ಮಂಜುನಾಥ್, ಕುಮಾರ, ಶಮ್ಮಿ ಅನಿತಾ, ಇತರರು ಇದ್ದರು. ನಿರ್ಮಲ ಅವರು ಕ್ರೀಡಾ ಪ್ರತಿಜ್ಞಾ ವಿಧಿ ಬೋಧಿಸಿದರು.

ಹೆಚ್ಚು ಅಂಕ ಪಡೆದ ಪಿಯು ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್



ಮಡಿಕೇರಿ, ಜ.3– ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ 13 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿ ಅತೀ ಹೆಚ್ಚು ಅಂಕ ಪಡೆದ 24 ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಪುಟ್ಟರಾಜು ವಿತರಿಸಿದರು.

ನಗರದ ಜೂನಿಯರ್ ಕಾಲೇಜಿನ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇವುಗಳನ್ನು ವಿತರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ಜ್ಞಾನ ಹೆಚ್ಚಿಸಿಕೊಳ್ಳುವುದರ ಜೊತೆಗೆ ಉದ್ಯೋಗ ಪಡೆಯುವಂತಾಗಬೇಕು ಎಂದು ಸಲಹೆ ನೀಡಿ ದರು. ಸಮಯವನ್ನು ವ್ಯರ್ಥ ಮಾಡದೆ ಇರುವ ಕಾಲಾವಕಾಶವನ್ನು ಸರಿಯಾಗಿ ಬಳಸಿಕೊಂಡು ಗುಣಮಟ್ಟದ ಶಿಕ್ಷಣ ಪಡೆಯುವಂತಾಗಬೇಕು ಎಂದು ಪುಟ್ಟರಾಜು ಅವರು ಹೇಳಿದರು.

ಕಳೆದ 2022 ರ ಏಪ್ರಿಲ್‌ನಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಂಶುಪಾಲ ಪಿ.ಎಂ.ವಿಜಯ, ದೇವಕಿ, ಪುರುಷೋತ್ತಮ, ಸಿದ್ದರಾಜು ಬೆಳ್ಳಯ್ಯ ಇತರರು ಇದ್ದರು.

ಅಡಿಷನಲ್ ಎಸ್ಪಿಯಾಗಿ ಸುಂದರ್‌ರಾಜ್ ನೇಮಕ

ಮಡಿಕೇರಿ, ಜ.3– ಕೊಡಗು ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಯಾಗಿ ರಾಷ್ಟ್ರಪತಿ ಪದಕ ಪುರಸ್ಕೃತ ಕೆ.ಎಸ್.



ಸುಂದರರಾಜ್ ಅವರನ್ನು ರಾಜ್ಯ ಸರ್ಕಾರ ನೇಮಿಸಿದೆ. ಈ ಹಿಂದೆ ಚಾಮರಾಜನಗರದಲ್ಲಿ ಎ.ಎಸ್.ಪಿ. ಆಗಿ ಕಾರ್ಯ ನಿರ್ವಹಿಸುತ್ತಿದ್ದ ಸುಂದರರಾಜ್ ಅವರು ಇದಕ್ಕೂ ಮುನ್ನ ಕೊಡಗು ಜಿಲ್ಲೆಯಲ್ಲಿ ವೃತ್ತ ನಿರೀಕ್ಷಕರಾಗಿ ಸೇವೆ ಸಲ್ಲಿಸಿ ವರ್ಗಾವಣೆಯಾಗಿದ್ದರು. ತದನಂತರ ಮಡಿಕೇರಿ ಉಪ ವಿಭಾಗದ ಡಿ.ವೈ.ಎಸ್.ಪಿ. ಆಗಿ ಕಾರ್ಯನಿರ್ವಹಿಸಿದ್ದ ಸುಂದರರಾಜ್ ಅವರನ್ನು ಸರಕಾರ ಬಡ್ತಿಯೊಂದಿಗೆ ಚಾಮರಾಜನಗರದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಯಾಗಿ ನಿಯೋಜನೆ ಮಾಡಿತ್ತು.

ಕುಡಿಯುವ ನೀರಿಗೆ 65 ಕೋಟಿ ಮಂಜೂರು



ವಿರಾಜಪೇಟೆ, ಜ.3– ವಿರಾಜಪೇಟೆ ಪುರಸಭೆ ವ್ಯಾಪ್ತಿಯಲ್ಲಿ 3.5 ಕೋಟಿ ರೂ. ಅನುದಾನದಲ್ಲಿ ನಡೆಯುತ್ತಿರುವ ರಸ್ತೆ ಡಾಂಬರೀಕರಣ, ಚರಂಡಿ ಮತ್ತು ಕಾಂಕ್ರೀಟ್ ರಸ್ತೆ ಸೇರಿದಂತೆ ಇತರ ಅಭಿವೃದ್ಧಿ ಕಾರ್ಯ ಮುಗಿಯುವ ಹಂತದಲ್ಲಿದ್ದು, ನಗರದ ಜನತೆಗೆ ಕುಡಿಯುವ ನೀರು ಪೂರೈಕೆಗಾಗಿ 65 ಕೋಟಿ ರೂ. ಅನುದಾನ ಮಂಜೂರಾಗಿದೆ ಎಂದು ಶಾಸಕ ಕೆ.ಜಿ.ಬೋಪಯ್ಯ ತಿಳಿಸಿದ್ದಾರೆ.

ರಾಜ್ಯ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ 25 ಲಕ್ಷ ರೂ. ಅನುದಾನದಲ್ಲಿ ವಿರಾಜಪೇಟೆಯ ಸುಂಕದಕಟ್ಟೆ ಕೊಳಚೆ ಪ್ರದೇಶದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ನಗರದ ಎಲ್ಲಾ ಮನೆ ಮನೆಗಳಿಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸಲಾಗಿದ್ದರೂ ಮುಂದೆಯೂ ಕುಡಿಯುವ ನೀರಿನ ಸೌಲಭ್ಯ ಹೆಚ್ಚಿಸುವ ನಿಟ್ಟಿನಲ್ಲಿ ಸರಕಾರ 65 ಕೋಟಿ ರೂ. ಅನುದಾನ ಮಂಜೂರು ಮಾಡಿದೆ ಎಂದರು.

ಮುಂದಿನ ದಿನದಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದು. ಸರ್ಕಾರದ ಅನುದಾನದಲ್ಲಿ ನಡೆಯುವ ಕಾಮಗಾರಿಗಳು ಕಳಪೆಯಾಗದಂತೆ ಸ್ಥಳೀಯರು ಗಮನ ಹರಿಸಬೇಕು ಹಾಗೂ ಗುತ್ತಿಗೆದಾರರು ಸಮಯಕ್ಕೆ ಸರಿಯಾಗಿ ಕಾಮಗಾರಿಯನ್ನು ಮುಗಿಸುವಂತಾಗಬೇಕು ಎಂದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಸುಸ್ಮಿತಾ, ಸ್ಥಾಯಿ ಸಮಿತಿ ಅಧ್ಯಕ್ಷೆ ಯಶೋಧ, ಮುಖ್ಯಾಧಿಕಾರಿ ಚಂದ್ರಕುಮಾರ್, ಕೊಳಗೇರಿ ಅಭಿವೃದ್ಧಿ ಮಂಡಳಿ ಅಭಿಯಂತರರಾದ ತೇಜಸ್ವಿನಿ, ಜವಹಾರ್ ಜೋಗಿ, ಪುರಸಭೆ ಸದಸ್ಯರಾದ ಜೂನಾ, ಆಶಾ ಸುಬ್ಬಯ್ಯ, ತಸ್ನಿಂ ಅಕ್ತರ್, ಮಹದೇವ, ಡಿಸಿಸಿ ಬ್ಯಾಂಕ್ ಜಿಲ್ಲಾ ನಿರ್ದೇಶಕ ರಘು ನಾಣಯ್ಯ, ಜಿಪಂ ಮಾಜಿ ಸದಸ್ಯ ಶಶಿಸುಬ್ರಮಣಿ, ಮಧುದೇವಯ್ಯ, ಸಂಪಿ ಪೂಣಚ್ಚ ಉಪಸ್ಥಿತರಿದ್ದರು.

ಪ್ರಥಮದರ್ಜೆ ಕಾಲೇಜಿಗೆ ನ್ಯಾಕ್ ಸಂಸ್ಥೆ ಭೇಟಿ

ಮಡಿಕೇರಿ, ಜ.3– ಜ.4 ಮತ್ತು 5 ರಂದು ವಿರಾಜಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸರ್ವತೋಮುಖ ಶೈಕ್ಷಣಿಕ ಗುಣಮಟ್ಟವನ್ನು ಮೌಲ್ಯಮಾಪನ ಮಾಡಿ ಶ್ರೇಯಾಂಕ ನೀಡುವ ಸಲುವಾಗಿ ನ್ಯಾಕ್ ಸಂಸ್ಥೆಯ ಅಧಿಕಾರಿಗಳು ಭೇಟಿ ನೀಡಲಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಸಿ. ದಯಾನಂದ ಅವರು ತಿಳಿಸಿದ್ದಾರೆ.

ಭಾಗಮಂಡಲದಲ್ಲಿ ಜ.15 ರಿಂದ 10ನೇ ವರ್ಷದ 'ಚಂಡಿಕಾ ಹೋಮ'

ಮಡಿಕೇರಿ, ಜ.3– ಶ್ರೀ ಕಾವೇರಮ್ಮೆ ಕೊಡವ ಮತ್ತು ಅಮ್ಮಕೊಡವ ಹಿತರಕ್ಷಣಾ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕಾವೇರಿ ಕ್ಷೇತ್ರ ಭಾಗಮಂಡಲದ ಟ್ರಸ್ಟ್‌ನ ಜಾಗದಲ್ಲಿ ಜ.15 ರಂದು 10ನೇ ವರ್ಷದ 'ಚಂಡಿಕಾ ಹೋಮ' ನಡೆಯಲಿದೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಟ್ರಸ್ಟ್‌ನ ಅಧ್ಯಕ್ಷ ಎಂ.ಬಿ.ದೇವಯ್ಯ, ಅಂದು ಸುಬ್ರಹ್ಮಣ್ಯ ಬೆಳ್ಳೂಕ ರಾಯ ಅವರ ನೇತೃತ್ವದಲ್ಲಿ ಬೆಳಗ್ಗೆ 7 ಗಂಟೆಗೆ ಶ್ರೀ ಗಣಪತಿ ಹೋಮ, ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ, ಶತರುದ್ರ ಪಠಣ ಹಾಗೂ ಚಂಡಿಕಾ ಹೋಮ ನಡೆಯಲಿದೆ ಎಂದರು.

ಜಿಲ್ಲೆಯ ಕೊಡವ ಮತ್ತು ಅಮ್ಮಕೊಡವ ಜನಾಂಗದ ಬಾಂಧವರು ಒಂದಾಗಿ ಸೇರಿ ಟ್ರಸ್ಟ್‌ನ ಸಹಯೋಗದಲ್ಲಿ ಚಂಡಿಕಾ ಹೋಮವನ್ನು ಆಯೋಜಿಸಿಕೊಂಡು ಬರಲಾಗುತ್ತಿದೆ. ಪುರಾಣಗಳಲ್ಲಿ ಪ್ರಸ್ತಾಪವಾಗಿರುವಂತೆ ಅಗಸ್ತ್ಯ ಮುನಿಗಳು ಮತ್ತು ಕಾವೇರಿಯ ನಡುವೆ ಕಲಹವೇರ್ಪಟ್ಟಾಗ ಕಾವೇರಿಯ ಪರವಾಗಿ ನಿಂತ ಕೊಡವರಿಗೆ ಮತ್ತು ಅಮ್ಮ ಕೊಡವರಿಗೆ ಅಗಸ್ತ್ಯ ಮುನಿಗಳು ಶಾಪ ನೀಡಿದ್ದರು. ಈ ಬಗ್ಗೆ ಅಷ್ಟಮಂಗಲ ಪ್ರಶ್ನೆಯಲ್ಲಿ ಬಂದ ಪರಿಹಾರ ಕ್ರಮಗಳಂತೆ ಕಾವೇರಿಯ ಕ್ಷೇತ್ರದಲ್ಲಿ 'ಚಂಡಿಕಾ ಹೋಮ'ವನ್ನು ನಡೆಸಿಕೊಂಡು ಬರಲಾಗುತ್ತಿದೆ. ಶಾಪ ವಿಮೋಚನೆಗಾಗಿ ಮತ್ತಷ್ಟು ವರ್ಷಗಳ ಕಾಲ ಈ ಧಾರ್ಮಿಕ ಕಾರ್ಯಗಳು ನಡೆಯಬೇಕಾಗಿದೆ ಎಂದು ಹೇಳಿದರು. ಶ್ರೀ ಕಾವೇರಮ್ಮೆ ಕೊಡವ ಮತ್ತು ಅಮ್ಮ ಕೊಡವ ಹಿತರಕ್ಷಣಾ ಚಾರಿಟೇಬಲ್ ಟ್ರಸ್ಟ್‌ನಿಂದ ಭಾಗಮಂಡಲದ ಶ್ರೀ ಭಗಂಡೇಶ್ವರ ದೇವಾಲಯದ ಮುಂಭಾಗದಲ್ಲಿ 47 ಸೆಂಟ್ ಜಾಗವನ್ನು ಖರೀದಿಸಲಾಗಿದೆ. ಈ ಜಾಗದಲ್ಲಿ ಸಮುದಾಯ ಭವನ ನಿರ್ಮಾಣದ ಚಿಂತನೆ ಇದ್ದು, ಈಗಾಗಲೆ ಉದ್ದೇಶಿತ ಕಾರ್ಯ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರವನ್ನು ಸಂಪರ್ಕಿಸಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್‌ನ ಉಪಾಧ್ಯಕ್ಷ ಚೆಪ್ಪುಡಿರ ಎಂ.ಪೊನ್ನಪ್ಪ, ಕಾರ್ಯದರ್ಶಿ ಮುಕ್ಕಾಟೀರ ಎ. ನಾಣಯ್ಯ, ಟ್ರಸ್ಟಿ ಪಾಸುರ ಸಿ.ಕಾವೇರಪ್ಪ ಉಪಸ್ಥಿತರಿದ್ದರು.

ಬಸ್ಸಿಗೆ ಹತ್ತಿಸಿಕೊಳ್ಳಲು ನಕಾರ: ರಸ್ತೆ ತಡೆ



ಯಳಂದೂರು, ಜ.3– ಕೆಎಸ್‌ಆರ್‌ಟಿಸಿ ಬಸ್‌ಗೆ ವಿದ್ಯಾರ್ಥಿಗಳನ್ನು ಹತ್ತಿಸಿಕೊಳ್ಳಲು ಕಂಡಕ್ಟರ್ ನಿರಾಕರಿಸಿದ್ದರಿಂದ ವಿದ್ಯಾರ್ಥಿಗಳು ಬಸ್ ನಿಲ್ದಾಣದಲ್ಲಿ ರಸ್ತೆ ತಡೆ ನಡೆಸಿದರು.

ಇಲ್ಲಿಂದ ಚಾಮರಾಜನಗರ ಹಾಗೂ ಕೊಳ್ಳೇಗಾಲದ ಶಾಲಾ–ಕಾಲೇಜುಗಳಿಗೆ ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು ಓಡಾಡುತ್ತಾರೆ. ಆದರೆ ಇಲ್ಲಿ ಬೆಳಗ್ಗೆ ವೇಳೆ ಕೆಎಸ್‌ಆರ್‌ಟಿಸಿ ಬಸ್‌ಗಳು ಹೆಚ್ಚಾಗಿ ಇರುವುದಿಲ್ಲ. ಇದ್ದರೂ ಪ್ರಯಾಣಿಕರಿರುವ ನೆಪವೊಡ್ಡಿ ಪಾಸ್ ಇರುವ ವಿದ್ಯಾರ್ಥಿಗಳನ್ನು ಹತ್ತಿಸಿಕೊಳ್ಳಲು ನಿರಾಕರಿಸುತ್ತಾರೆ. ಈ ಸಮಸ್ಯೆ ಹಲವು ವರ್ಷಗಳಿಂದಲೂ ಇದೆ. ಈ ವಿಷಯವನ್ನು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಹಲವು ಬಾರಿ ಗಮನಕ್ಕೆ ತಂದಿದ್ದರೂ ಇನ್ನೂ ಕೂಡ ಇದಕ್ಕೆ ಪರಿಹಾರ ಸಿಕ್ಕಿಲ್ಲ ಎಂದು ಬಸ್ ನಿಲ್ಲಿಸದ ಕಂಡಕ್ಟರ್ ಹಾಗೂ ಚಾಲಕನ ವಿರುದ್ಧ ವಾಗ್ವಾದಕ್ಕಿಳಿದ ಪೋಷಕರು ಇವರೊಂದಿಗೆ ಕೈ ಕೈ ಮಿಲಾಯಿಸುವ ಪರಿಸ್ಥಿತಿಗೆ ತಲುಪಿದರು. ನಂತರ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿಯನ್ನು ಶಾಂತಗೊಳಿಸಿದರು.

ಪ್ರತಿನಿತ್ಯ ಬೆಳಿಗ್ಗೆ ವೇಳೆ ಇಲ್ಲಿನ ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾಗಿರುತ್ತದೆ. ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು ನಿಲ್ದಾಣದೊಳಗೆ ನಿಲ್ಲದೆ ರಸ್ತೆಯಲ್ಲೇ ಬಸ್ ನಿಲ್ಲಿಸುತ್ತಾರೆ. ಇದು ರಾಷ್ಟ್ರೀಯ ಹೆದ್ದಾರಿ 209 ಆಗಿದ್ದು ಇಲ್ಲಿ ವಾಹನ ದಟ್ಟಣೆ ಅಧಿಕವಾಗಿರುತ್ತದೆ. ಹಲವು ಬಾರಿ ಪ್ರಯಾಣಿಕರು, ವಿದ್ಯಾರ್ಥಿಗಳು ಬಿದ್ದು ಗಾಯಗೊಂಡಿರುವ ಘಟನೆಗಳೂ ನಡೆದಿವೆ. ಆದರೂ ಸಂಬಂಧಪಟ್ಟವರು ಈ ಬಗ್ಗೆ ಹೆಚ್ಚಿನ ನಿಗಾವಹಿಸಿಲ್ಲ ಎಂಬುದು ವಿದ್ಯಾರ್ಥಿಗಳ ದೂರು. ಈ ಬಗ್ಗೆ ಜನಪ್ರತಿನಿಧಿಗಳು, ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ವಹಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ವಿದ್ಯಾರ್ಥಿಗಳೂ ಸೇರಿದಂತೆ ಪೋಷಕರು ಆಗ್ರಹಿಸಿದ್ದಾರೆ.

ದಿ.ನಾಗಪ್ಪ ಸಾತ್ವಿಕ, ಸಜ್ಜನ, ಸ್ವಾಭಿಮಾನಿ ರಾಜಕಾರಣಿ

ನಾಗಪ್ಪನವರ ಪುಣ್ಯಸ್ಮರಣೆಯಲ್ಲಿ ಸಂಸದ ಶ್ರೀನಿವಾಸಪ್ರಸಾದ್ ಬಣ್ಣನೆ



ಹನೂರು, ಜ.3– ಮಾಜಿ ಸಚಿವ ದಿವಂಗತ ಹೆಚ್. ನಾಗಪ್ಪನವರು ಸಾತ್ವಿಕ, ಸಜ್ಜನ ಮತ್ತು ಸ್ವಾಭಿಮಾನಿ ರಾಜಕಾರಣಿಯಾಗಿದ್ದರು ಎಂದು ಲೋಕಸಭಾ ಸದಸ್ಯ ವಿ. ಶ್ರೀನಿವಾಸ್ ಪ್ರಸಾದ್ ಬಣ್ಣಿಸಿದ್ದಾರೆ.

ದಿವಂಗತ ಹೆಚ್. ನಾಗಪ್ಪ ಪ್ರತಿಷ್ಠಾನ ಕಾಮಗೆರೆ ಹಾಗೂ ನಾಗಪ್ಪ ಅಭಿಮಾನಿಗಳು ಹನೂರು ಪಟ್ಟಣದಲ್ಲಿ ಆಯೋಜಿಸಿದ್ದ 20ನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜಕಾರಣ, ಸಾಮಾಜಿಕ ಸೇವೆ ಆಗಿರಬೇಕು ಎಂಬಂತಹ ಸಂವಿಧಾನಿಕ ಅಂಶಗಳನ್ನು ಮೈಗೂಡಿಸಿಕೊಂಡು ಬದುಕಿದ ಅಪರೂಪದ ರಾಜಕಾರಣಿಯಾಗಿದ್ದರು. ಸೋತಾಗ ಕುಗ್ಗದೆ, ಗೆದ್ದಾಗ ಹಿಗ್ಗದೆ ಯಾವುದೇ ಗೊಂದಲದ ಸಂದರ್ಭದಲ್ಲಿ ಉದ್ವೇಗಗೊಳ್ಳದ ಶಾಂತಿಪ್ರಿಯ ರಾಜಕಾರಣಿ. ಮೂಲತಃ ಪಟ್ಟಣದಲ್ಲಿ ಹುಟ್ಟಿ ಬೆಳೆದ ನನಗೆ ಹನೂರಿನ ಹಳ್ಳಿಗಳ ಪರಿಚಯ ಮಾಡಿಸಿದ್ದು ನಾಗಪ್ಪರವರು ಎಂದು ಅವರ ಮತ್ತು ನಾಗಪ್ಪ ಒಡನಾಟದ ದಿನಗಳನ್ನು ನೆನಪು ಮಾಡಿಕೊಂಡರು. ಪ್ರಾಮಾಣಿಕ ಜನಸೇವೆ ಎಂಬುದು ಚಿನ್ನವನ್ನು ಬೆಂಕಿಗೆ ಇಟ್ಟ ಹಾಗೆ, ಅದು ಮತ್ತಷ್ಟು ಹೊಳೆಯುತ್ತದೆ. ಇದು ನಾಗಪ್ಪ ನವರ ಜೀವನ ಪ್ರಕಾರ ಎಂದು ತಿಳಿಸಿದರು.

ದಿವಂಗತ ನಾಗಪ್ಪ ಅವರ ಪತ್ನಿ ಮಾಜಿ ಶಾಸಕಿ ಪರಿಮಳ ನಾಗಪ್ಪ ಅವರು ಮಾತನಾಡಿ, ನಾಗಪ್ಪ ಅವರ ಸೇವೆಯ ಪ್ರತೀಕವಾಗಿ ಅವರ ಸೇವೆಯನ್ನು ಮುಂದಿನ ದಿನಗಳಲ್ಲಿ ಮುನ್ನಡೆಸಲು ಮಗ ಪ್ರೀತಮ್ ನಾಗಪ್ಪ ಅವರಿಗೆ ನಿಮ್ಮ ಬೆಂಬಲ ಸದಾ ಇರಬೇಕು. ಸತತ ಮೂರು ಸೋಲು ಕಂಡಿರುವ ನಮ್ಮ ಕುಟುಂಬಕ್ಕೆ ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ಪ್ರಜ್ಞಾವಂತ ಮತದಾರರು ಮತ್ತು ನಾಗಪ್ಪ ಅಭಿಮಾನಿಗಳು ಬೆಂಬಲ ಸೂಚಿಸಬೇಕು ಎಂದು ಮನವಿ ಮಾಡಿದರು.

ಸಾಲೂರು ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ನಾಗಪ್ಪ ಅವರ ತತ್ವಾದರ್ಶಗಳನ್ನು ಅವರ ಕುಟುಂಬಸ್ಥರು ಪರಿಪಾಲಿಸುವ ಮೂಲಕ ಪ್ರೀತಂ ನಾಗಪ್ಪನವರು ಜನಸೇವೆಗೆ ಮುಂದಾಗಿರುವುದು ಸಂತೋಷದ ಸಂಗತಿಯಾಗಿದೆ. ಇಲ್ಲಿ ನೆರೆದಿರುವ ನಾಗಪ್ಪ ಅಭಿಮಾನಿಗಳು ಮುಂದಿನ ದಿನಗಳಲ್ಲಿ ಅವರ ಸಮಾಜ ಸೇವಾ ಕಾರ್ಯಗಳಿಗೆ ಬೆಂಬಲವಾಗಿ ನಿಲ್ಲಬೇಕೆಂದು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ಮಾತನಾಡಿ, ಕಾಡುಗಳ್ಳ ವೀರಪ್ಪನ್ ದಿವಂಗತ ನಾಗಪ್ಪ ಅವರ ದೇಹವನ್ನು ಕೊಂದಿರಬಹುದು. ಆದರೆ ಅವರ ಆತ್ಮ ಮತ್ತು ಮನಸ್ಸು ಈ ಕ್ಷೇತ್ರದ ಜನರಲ್ಲಿ ಜೀವಂತವಾಗಿದೆ ಎಂಬುದಕ್ಕೆ ಇಲ್ಲಿ ಸೇರಿರುವ ಎಲ್ಲಾ ಅಭಿಮಾನಿಗಳೇ ಸಾಕ್ಷಿ. ನಾಗಪ್ಪ ಅವರು ಮಾನವತಾವಾದಿಯಾಗಿ, ಮಾದರಿ ರಾಜಕಾರಣಿಯಾಗಿ ಆದರ್ಶದ ಬದುಕು ಬದುಕಿದವರಾಗಿದ್ದರು. ರಾಜಕೀಯವಾಗಿ ಉತ್ತುಂಗದ ಸ್ಥಿತಿಯಲ್ಲಿದ್ದ ನಾಗಪ್ಪ ಶಾಸಕರಾಗಿ, ಮಂತ್ರಿಯಾಗಿ ಅಧಿಕಾರ ಅನುಭವಿಸಿದರೂ ಕೂಡ ಸಮಾಜವನ್ನು ಬೆಳೆಸಿದರೇ ಹೊರತು ಅವರ ಮನೆ ಬೆಳೆಸಲಿಲ್ಲ. ಈ ಕಾರಣಕ್ಕಾಗಿ ನಾಗಪ್ಪನವರ ಸ್ಮರಣೆ ತುಂಬಾ ಔಚಿತ್ಯಪೂರ್ಣವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೊಳ್ಳೇಗಾಲ ಶಾಸಕ ಎನ್. ಮಹೇಶ್, ಗುಂಡ್ಲುಪೇಟೆ ಶಾಸಕ ನಿರಂಜನ್ ಕುಮಾರ್ ಮತ್ತು ತಮಿಳು ನಾಡಿನ ಸತ್ಯಮಂಗಲ ಶಾಸಕ ಧರ್ಮಲಿಂಗಂ ಅವರು ತಮ್ಮ ಅಭಿಪ್ರಾಯ ಹಂಚಿಕೊಂಡರು.

ಪರಮಪೂಜ್ಯ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳು ದೇಗುಲ ಮಠ ಕನಕಪುರ, ಶ್ರೀ ಮುಮ್ಮಡಿ ಶಿವರುದ್ರ ಮಹಾಸ್ವಾಮಿಗಳು ಮರಳೆ ಗವಿಮಠ ಕನಕಪುರ, ಶ್ರೀ ಮಹಾಂತ ಸ್ವಾಮಿಗಳು ಶ್ರೀ ಗುರು ಮಲ್ಲೇಶ್ವರ ದಾಸೋಹ ಮಠ ದೇವನೂರು, ಶ್ರೀ ಶರತ್ ಚಂದ್ರ ಸ್ವಾಮಿಗಳು ಕುಂದೂರು ಮಠ ಮೈಸೂರು ಅವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಪ್ರೀತಂ ನಾಗಪ್ಪ, ಪರಿಮಳ ನಾಗಪ್ಪ, ಕೆಆರ್‌ಡಿಎಲ್ ಅಧ್ಯಕ್ಷ ರುದ್ರೇಶ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ದತ್ತೇಶ್ ಕುಮಾರ್, ಮಾಜಿ ಶಾಸಕ ಜಿ.ಎನ್. ನಂಜುಂಡ ಸ್ವಾಮಿ, ಚಾಮುಲ್ ಅಧ್ಯಕ್ಷ ನಾಗೇಂದ್ರ, ಪ್ರೊಫೆಸರ್ ಶಿವರಾಜಪ್ಪ, ಮೆಹುಲ್ ಜೆ ಪಟೇಲ್ ಹಾಗೂ ಅಪಾರ ಸಂಖ್ಯೆಯ ನಾಗಪ್ಪ ಅಭಿಮಾನಿಗಳು ಹಾಜರಿದ್ದರು.

ಇಂದು ಗಡಿನಾಡು ಆದಿದ್ರಾವಿಡ ಸಮಾವೇಶ

ಚಾಮರಾಜನಗರ, ಜ.3– ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಜ. 4ರಂದು ಬೆಳಗ್ಗೆ 11 ಗಂಟೆಗೆ ಗಡಿನಾಡು ಆದಿದ್ರಾವಿಡ ಸಮಾವೇಶ ಹಾಗೂ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಮತ್ತು ಸಫಾಯಿ ಕರ್ಮಚಾರಿಗಳ ಸಂಘದ ಉದ್ಘಾಟನೆ ನಡೆಯಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಸಿ. ಶಂಕರ ಅಂಕನಶೆಟ್ಟಿಪುರ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಬೆಳಗ್ಗೆ 10ಗಂಟೆಗೆ ನಗರದ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಸಮುದಾಯ ಜನರು ಸಮಾವೇಗೊಂಡು ಪೂರ್ಣಕುಂಭ ಕಳಸ ಹಾಗೂ ನಗಾರಿಯೊಂದಿಗೆ ಮೆರವಣಿಗೆ ಜಿಲ್ಲಾಡಳಿತ ಭವನದವರೆಗೆ ನಡೆಯಲಿದೆ ಎಂದು ತಿಳಿಸಿದರು.

ಭೀಮಾ ಕೋರೆಗಾಂವ್ ವಿಜಯಸ್ತಂಭ ನಿರ್ಮಾಣಕ್ಕೆ ಗುದ್ದಲಿಪೂಜೆ



ಚಾಮರಾಜನಗರ, ಜ.3– ತಾಲೂಕಿನ ದೇಶವಳ್ಳಿ ಹಾಗೂ ಹೆಗ್ಗವಾಡಿಪುರ ಗ್ರಾಮದಲ್ಲಿ ಭೀಮಾ ಕೋರೆಗಾಂವ್ ವಿಜಯಸ್ತಂಭ ಮತ್ತು ಬುದ್ದ, ಬಸವ, ಅಂಬೇಡ್ಕರ್ ಅವರ ಪುತ್ಥಳಿ ಹಾಗೂ ಗ್ರಂಥಾಲಯ ನಿರ್ಮಾಣಕ್ಕೆ ಮಾಜಿ ಶಾಸಕ ಎ.ಆರ್ .ಕೃಷ್ಣಮೂರ್ತಿ ಗುದ್ದಲಿಪೂಜೆ ನೆರವೇರಿಸಿದರು.

ಭೀಮಾ ಕೋರೆಗಾಂವ್ ವಿಜಯಸ್ತಂಭ ಮತ್ತು ಬುದ್ದ, ಬಸವ, ಅಂಬೇಡ್ಕರ್ ಅವರ ಪುತ್ಥಳಿ ಹಾಗೂ ಗ್ರಂಥಾಲಯ ನಿರ್ಮಾಣ ಸಮಿತಿ ಅಧ್ಯಕ್ಷ ಡಿ.ಎನ್.ನಟರಾಜು ಮಾತನಾಡಿ, ಸುಮಾರು 50 ಲಕ್ಷ ರೂ.ವೆಚ್ಚದಲ್ಲಿ ಭೀಮಾ ಕೋರೆಗಾಂವ್ ವಿಜಯಸ್ತಂಭ ಮತ್ತು ಬುದ್ದ, ಬಸವ, ಅಂಬೇಡ್ಕರ್ ಅವರ ಪುತ್ಥಳಿ ಹಾಗೂ ಗ್ರಂಥಾಲಯ ನಿರ್ಮಾಣ ಮಾಡಲಾಗುತ್ತಿದ್ದು, ದೇಣಿಗೆ ಸಂಗ್ರಹಿಸಲಾಗುತ್ತಿದೆ. 9 ವಿಶೇಷ ಪುತ್ಥಳಿ, 4 ಅಶೋಕಸ್ತಂಭಗಳನ್ನೊಳಗೊಂಡಿರುತ್ತದೆ. ಕರ್ನಾಟಕದಲ್ಲಿ ಇದೆ ಮೊಟ್ಟ ಮೊದಲ ಭೀಮಾ ಕೋರೆಗಾಂವ್ ವಿಜಯಸ್ತಂಭವಾಗಿದೆ. ಇದೊಂದು ಐತಿಹಾಸಿಕ ಸ್ಥಳವಾಗಿ ಮಾರ್ಪಾಡಾಗಿ ಈ ಭಾಗದ ಜನತೆ ಮುಂದಿನ ಹೊಸ ವರ್ಷಾಚರಣೆ ಇಲ್ಲಿ ಆಚರಣೆ ಮಾಡುವಂತೆ ಮಾಡಲಾಗುವುದು ಎಂದರು.

ಅಂಬೇಡ್ಕರ್ ವಾದಿ ಚಿಂತಕರಾದ ಡಾ.ಕೃಷ್ಣಮೂರ್ತಿ ಚಮರಂ ಮುಖ್ಯಭಾಷಣಕಾರರಾಗಿ ಭಾಗವಹಿಸಿ ಮಾತನಾಡಿದರು. ಬೌದ್ಧ ಭಿಕ್ಕುಗಳಾದ ಬಂತೆ ಬೋಧಿ ತೀಸ ಅವರ ದಿವ್ಯ ಸಾನಿಧ್ಯವಹಿಸಿದ್ದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಎಸ್. ಬಾಲರಾಜ್. ಜಿ.ಎನ್.ನಂಜುಂಡ ಸ್ವಾಮಿ. ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್ .ಮಹದೇವಯ್ಯ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಿಲಿಂದ್ ಧರ್ಮಸೇನ, ಮಾಜಿ ಮೇಯರ್ ಪುರುಷೋತ್ತಮ್, ಬೆಂಗಳೂರು ವಿಶ್ವ ವಿದ್ಯಾಲಯದ ಬೋಧಕೇತರ ನೌಕರರ ಸಂಘದ ಮಾಜಿ ಅಧ್ಯಕ್ಷ ಮುದ್ದಯ್ಯ, ಜಿಪಂ ಉಪಾಧ್ಯಕ್ಷ ಯೋಗೇಶ, ಮಾಜಿ ಸದಸ್ಯ ಕಮಲ್ ನಾಗರಾಜ್, ತಾಪಂ ಮಾಜಿ ಅಧ್ಯಕ್ಷ ಎಚ್.ವಿ. ಚಂದ್ರು, ದಲಿತ ಮುಖಂಡ ಸಿ.ಎಂ.ಕೃಷ್ಣಮೂರ್ತಿ, ರಫೀಕ್ ಅಹಮದ್, ಗ್ರಾಮ ಪಂಚಾಯಿತಿ ಸದಸ್ಯರುಗಳು ವಿವಿಧ ಮಹಿಳಾ ಸಂಘಟನೆಗಳ ಮುಖಂಡರು ಹಾಗೂ ಜಿಲ್ಲೆಯ ಪ್ರಗತಿಪರ ಚಿಂತಕರು ಭಾಗವಹಿಸಿ ಪ್ರಶಂಸಿದರು.

ಸಮಿತಿ ಸಂಚಾಲಕರಾದ ಎಂ.ಆನಂದ, ಡಿ.ಎಂ.ಜಗದೀಶ್, ಮಹೇಶ್, ಗ್ರಾಮದ ಮುಖಂಡರಾದ ಡಿ.ಪಿ. ಪ್ರಕಾಶ, ಡಿ.ಪಿ. ರಾಜು, ಡಿ.ಎಸ್.ಮಾದೇಶ್, ಡಿ.ಎಸ್. ಮಹಾದೇವಯ್ಯ, ಎಚ್.ಎನ್. ಶಿವಕುಮಾರ್, ಪುಟ್ಟಬುದ್ಧಿ, ಪೊಲೀಸ್ ಅಧಿಕಾರಿ ಲಿಂಗರಾಜು, ಸಂತೆಮರಳ್ಳಿ ಪೊಲೀಸ್ ನಿರೀಕ್ಷಕ ತಾಜುದ್ದೀನ್ ಮತ್ತು ಮಹಿಳಾ ಸಂಘಟಕಿ ಮಹದೇವಮ್ಮ, ಪಾರ್ವತಮ್ಮ ಹಾಜರಿದ್ದರು.

ದಿ. ಮಹದೇವಪ್ರಸಾದ್ ಅವರ ಪುಣ್ಯಸ್ಮರಣೆ




ಗುಂಡ್ಲುಪೇಟೆ ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ದಿ.ಎಚ್.ಎಸ್.ಮಹದೇವಪ್ರಸಾದ್ ಅವರ ಪುಣ್ಯಸ್ಮರಣೆ ಅಂಗವಾಗಿ ಮಾಜಿ ಸಚಿವೆ ಡಾ.ಗೀತಾ ಮಹದೇವಪ್ರಸಾದ್ ಮತ್ತು ಪುತ್ರ ಗಣೇಶಪ್ರಸಾದ್ ಹಾಗೂ ಕುಟುಂಬದ ಸದಸ್ಯರು ಸಮಾಧಿಗೆ ನಮನ ಸಲ್ಲಿಸಿದರು.

ಬೇಗೂರು/ಗುಂಡ್ಲುಪೇಟೆ, ಜ.3– ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ಮಾಜಿ ಸಚಿವ ದಿ.ಎಚ್.ಎಸ್.ಮಹದೇವ ಪ್ರಸಾದ್ ಅವರ 6ನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮ ನೆರವೇರಿತು.

ಮಾಜಿ ಸಚಿವೆ ಡಾ.ಗೀತಾ ಮಹದೇವ ಪ್ರಸಾದ್ ಮತ್ತು ಪುತ್ರ ಹೆಚ್.ಎಂ.ಗಣೇಶ ಪ್ರಸಾದ್ ಅವರು ತಮ್ಮ ಕುಟುಂಬದ ಸದಸ್ಯರ ಜತೆಗೂಡಿ ಗ್ರಾಮದ ಹೊರ ವಲಯದಲ್ಲಿರುವ ಬೊಗ್ಗನಪುರ ಫಾರಂನಲ್ಲಿ ನಿರ್ಮಿಸಲಾಗಿರುವ ಮಹದೇವ ಪ್ರಸಾದ್ ಅವರ ಸಮಾಧಿಗೆ ಪೂಜೆ ಸಲ್ಲಿಸಿದರು. ಪುಣ್ಯಸ್ಮರಣೆಯ ಹಿನ್ನೆಲೆಯಲ್ಲಿ ಸಮಾಧಿ ಸ್ಥಳದಲ್ಲಿ ವಿವಿಧ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು. ಕ್ಷೇತ್ರದ ಮತ್ತು ನಾಡಿನ ವಿವಿಧ ಭಾಗದ ಮಹದೇವಪ್ರಸಾದ್ ಅವರ ಅಭಿಮಾನಿಗಳು ಮತ್ತು ಕಾರ್ಯಕರ್ತರು ಹಾಗೂ ಮುಖಂಡರು ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿ ಮಹದೇವಪ್ರಸಾದ್ ಅವರ ಸಮಾಧಿಗೆ ನಮನ ಸಲ್ಲಿಸಿದರು.

ಈ ವೇಳೆ ಮಹದೇವಪ್ರಸಾದ್ ಸೊಸೆ ವಿದ್ಯಾಗಣೇಶ್, ಸಹೋದರ ಹೆಚ್.ಎಸ್. ನಂಜುಂಡಪ್ರಸಾದ್, ಸಹೋದರಿ ಪ್ರೇಮಾ ಚಂದ್ರಚೂಡಾ ಹಾಗೂ ಕುಟುಂಬದ ಸದಸ್ಯರು ಪೂಜೆ ಸಲ್ಲಿಸಿದರು. ಪುಣ್ಯಸ್ಮರಣೆಗೆ ಅಗಮಿಸಿದ ಅಭಿಮಾನಿಗಳು ಹಾಗೂ ಕಾರ್ಯಕರ್ತರಿಗೆ ಗ್ರಾಮದ ಹೆಚ್.ಎನ್.ಎಸ್. ಸಭಾಂಗಣದಲ್ಲಿ ಭೋಜನ ವ್ಯವಸ್ಥೆ ಮಾಡಲಾಗಿತ್ತು.

ಕ್ವಾರಿ ಗುಡ್ಡ ಕುಸಿದು ಮೂವರ ಸಾವು: ಮೃತ ಕಾರ್ಮಿಕರ ಕುಟುಂಬಕ್ಕೆ ವೈಯಕ್ತಿಕ ನೆರವು



ಚಾಮರಾಜನಗರ, ಜ.3– ತಾಲೂಕಿನ ಬಿಸಲವಾಡಿಯ ಬಿಳಿಕಲ್ಲು ಕ್ವಾರಿಯಲ್ಲಿ ಗುಡ್ಡ ಕುಸಿದು ಮೃತಪಟ್ಟ ಕಾಗಲವಾಡಿ ಮೋಳೆಯ ಮೂವರು ಕಾರ್ಮಿಕರ ನಿವಾಸಕ್ಕೆ ಬಿಜೆಪಿ ರೈತ ಮುಖಂಡ ಅಮ್ಮನಪುರ ಮಲ್ಲೇಶ್ ಭೇಟಿ ನೀಡಿ ಸಾಂತ್ವನ ಹೇಳಿ, ಮೂವರು ಕಾರ್ಮಿಕರ ಕುಟುಂಬಗಳಿಗೆ ತಲಾ 10 ಸಾವಿರ ರೂ.ಗಳ ವೈಯಕ್ತಿಕ ಪರಿಹಾರ ನೀಡಿದರು.

ತಾಲೂಕಿನ ಕಾಗಲವಾಡಿ ಮೋಳೆ ಗ್ರಾಮಕ್ಕೆ ತೆರಳಿ ಅಲ್ಲಿನ ಗ್ರಾಮದ ಮುಖಂಡರೊಂದಿಗೆ ಕಾರ್ಮಿಕರಾದ ಸಿದ್ದರಾಜು, ಶಿವರಾಜು, ಕುಮಾರ್ ಅವರ ಮನೆಗಳಿಗೆ ಮಲ್ಲೇಶ್ ಭೇಟಿ ನೀಡಿ ಕುಟುಂಬ ವರ್ಗದವರಿಗೆ ಧೈರ್ಯ ಹೇಳಿದರು.

ಬಿಸಲವಾಡಿಯಲ್ಲಿ ನಡೆದ ದುರಂತದಿಂದ ಕಾಗಲವಾಡಿ ಮೋಳೆ ಬಡ ಮೂವರು ಕಾರ್ಮಿಕರು ಧಾರುಣವಾಗಿ ಸಾವಿಗೀಡಾಗಿರುವುದು ಮನಸ್ಸಿಗೆ ತುಂಬ ನೋವುಂಟು ಮಾಡಿದೆ. ಕುಟುಂಬಕ್ಕೆ ಆಧಾರವಾಗಿದ್ದ, ದುಡಿಯುವ ಜೀವವನ್ನೇ ಕುಟುಂಬ ಕಳೆದುಕೊಂಡಿದೆ. ಭಗವಂತ ಈ ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿಯನ್ನು ನೀಡಲಿ ಎಂದರು.

ಜಿಲ್ಲಾ ಉಸ್ತುವಾರಿ ಸಚಿವರಾದ ವಿ. ಸೋಮಣ್ಣ ಅವರು ಶನಿವಾರ ಜಿಲ್ಲೆಗೆ ಆಗಮಿಸುತ್ತಿದ್ದಾರೆ. ಬೆಳಗ್ಗೆ 10 ಗಂಟೆಗೆ ಕಾಗಲವಾಡಿ ಮೋಳೆಗೆ ಭೇಟಿ ನೀಡಿ, ಮೃತ ಕಾರ್ಮಿಕರ ಕುಟುಂಬಗಳಿಗೆ ಸಾಂತ್ವನ ಹೇಳಲಿದ್ದಾರೆ. ಈ ಸಂದರ್ಭದಲ್ಲಿ ಅವರಿಗೆ ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟು, ಹೆಚ್ಚಿನ ಪರಿಹಾರ ದೊರೆಯುವಂತೆ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಉದ್ಯಮಿ ಪ್ರದೀಪ್ ಆತ್ಮಹತ್ಯೆ ಪ್ರಕರಣ

ಬಿಜೆಪಿ ಶಾಸಕ ಅರವಿಂದ ಲಿಂಬಾವಳಿ ಬಂಧನಕ್ಕೆ ಸಿದ್ದರಾಮಯ್ಯ ಒತ್ತಾಯ



ಬೆಂಗಳೂರು: ಉದ್ಯಮಿ ಪ್ರದೀಪ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಅರವಿಂದ ಲಿಂಬಾವಳಿ ಸಹಿತ ಇತರ ಎಲ್ಲಾ ಆರೋಪಿಗಳನ್ನು ಈ ಕೂಡಲೇ ಬಂಧಿಸಿ, ನಿಷ್ಪಕ್ಷಪಾತ ತನಿಖೆ ನಡೆಸಲು ಪೊಲೀಸ್ ಇಲಾಖೆಗೆ ಆದೇಶ ನೀಡಬೇಕು ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಒತ್ತಾಯಿಸಿದ್ದಾರೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ಉದ್ಯಮವೊಂದಕ್ಕೆ ಸುಮಾರು 1.5 ಕೋಟಿ ರೂಪಾಯಿ ಬಂಡವಾಳ ಹೂಡಿದ್ದ ಪ್ರದೀಪ್‌ಗೆ ನಯಾಪೈಸೆ ಲಾಭದ ಹಣ ಕೈಸೇರಿಲ್ಲ. ಈ ವಿವಾದದಲ್ಲಿ ಶಾಸಕ ಅರವಿಂದ ಲಿಂಬಾವಳಿ ಮಧ್ಯಸ್ಥಿಕೆ ವಹಿಸಿದ್ದು ಸಂಶಯಕ್ಕೆ ಎಡೆಮಾಡಿಕೊಟ್ಟಿದೆ. ಪತಿಯ ಸಾವಿಗೆ ನ್ಯಾಯ ಸಿಗಬೇಕು ಮತ್ತು ಸಾಲ ಮಾಡಿ ಹೂಡಿಕೆ ಮಾಡಿದ್ದ ಹಣ ವಾಪಸು ಕೊಡಿಸಬೇಕು ಎಂಬುದು ಮೃತ ಪ್ರದೀಪ್ ಪತ್ನಿ ನಮಿತಾ ಅವರ ಮನವಿ. ಪೊಲೀಸ್ ಇಲಾಖೆ ತಕ್ಷಣ ಕ್ರಮವಹಿಸಿ, ಈ ಹಣವನ್ನು ವಾಪಸು ಕೊಡಿಸುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಡೆತ್‌ನೋಟ್‌ನಲ್ಲಿ ಅರವಿಂದ ಲಿಂಬಾವಳಿ ಹೆಸರಿದೆ ಎಂಬ ಕಾರಣಕ್ಕೆ ಪೊಲೀಸರು ಅಪರಾಧಿಗಳನ್ನು ಬಂಧಿಸದಿದ್ದರೆ ಸಾಕ್ಷ್ಯನಾಶ ಮಾಡುವ ಸಾಧ್ಯತೆಗಳಿರುತ್ತದೆ. ಹೀಗಾದಾಗ ಅನ್ಯಾಯಕ್ಕೊಳಗಾದ ಕುಟುಂಬಕ್ಕೆ ನ್ಯಾಯ ಸಿಗಲು ಸಾಧ್ಯವೇ, ಪೊಲೀಸರು ಮಧ್ಯರಾತ್ರಿಯಲ್ಲಿ ಮೃತನ ಮೊಬೈಲ್ ಕೊಡಿ ಎಂದು ಕುಟುಂಬದವರ ಬಳಿ ಕೇಳಿದ್ದಾರೆ. ಸಾವಿಗೂ ಮುನ್ನ ಪ್ರದೀಪ್ ಅವರು ಬರೆದ ಡೆತ್‌ನೋಟ್‌ನಲ್ಲಿ ಸಾವಿಗೆ ಕಾರಣರಾದವರ ಹೆಸರು ಸ್ಪಷ್ಟವಾಗಿರುವಾಗ ತನಿಖೆಯನ್ನು ಬೇರೆ ಆಯಾಮಗಳಿಗೆ ತಿರುಗಿಸುವ ಅಗತ್ಯವೇನಿದೆ ಎಂದು ಪ್ರಶ್ನಿಸಿದ್ದಾರೆ. ಈ ಹಿಂದೆ ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಮಾಡಿಕೊಂಡಾಗ ಸೂಕ್ತ ತನಿಖೆ ನಡೆಸದೆ ಪ್ರಕರಣವನ್ನು ಮುಚ್ಚಿ ಹಾಕಲಾಗಿದೆ. ಈ ಪ್ರಕರಣವು ಅದೇ ರೀತಿ ಆಗುವುದು ಬೇಡ. ತನಿಖೆಯಲ್ಲಿ ರಾಜ್ಯ ಸರ್ಕಾರ ಹಸ್ತಕ್ಷೇಪ ಮಾಡಬಾರದು ಎಂದು ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

ಶ್ರೀಗಂಧದ ಮರಗಳ ರಕ್ಷಣೆಗೆ ರಾಜ್ಯ ಸರ್ಕಾರ ನಿರ್ಧಾರ

ಶೀಘ್ರದಲ್ಲೇ ಸಿಸಿಟಿವಿ, ಭದ್ರತಾ ಸಿಬ್ಬಂದಿ ನಿಯೋಜನೆ

ಬೆಂಗಳೂರು, ಜ.3– ರಾಜ್ಯದಲ್ಲಿನ ಶ್ರೀಗಂಧದ ಮರಗಳ ರಕ್ಷಣೆಗೆ ಸರ್ಕಾರ ಮುಂದಾಗಿದ್ದು, ಈ ಮರಗಳ ಮೇಲೆ ಕಣ್ಗಾವಲಿಡಲು ಸಿಸಿಟಿವಿ ಅಳವಡಿಕೆ ಹಾಗೂ ಭದ್ರತಾ ಸಿಬ್ಬಂದಿಗಳ ನಿಯೋಜನೆಗೆ ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ತಿಳಿದುಬಂದಿದೆ.

ಮರಗಳ ಸಂಖ್ಯೆಯನ್ನು ಹೆಚ್ಚಿಸಲು ಹಾಗೂ ಕಳ್ಳರಿಂದ ಮರಗಳ ರಕ್ಷಿಸಲು ಹಲವು ಕ್ರಮಗಳ ಕೈಗೊಳ್ಳಲು ಸರ್ಕಾರ ಮುಂದಾಗಿದೆ. 100 ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆಯುವ ಶ್ರೀಗಂಧದ ಮರಗಳಿಗೆ ರಕ್ಷಣೆ ಒದಗಿಸಲಾಗುತ್ತದೆ. ಈ ಪ್ರದೇಶಗಳು ಶೂನ್ಯ ಸಹಿಷ್ಣು ವಲಯಗಳಾಗಿ ಮಾರ್ಪಡಿಸಲಾಗುತ್ತದೆ. ವಿಶೇಷ ಭದ್ರತೆ, ಶ್ವಾನದಳ ಮತ್ತು ಸಿಸಿಟಿವಿಗಳೊಂದಿಗೆ 24 ಗಂಟೆಗಳ ಕಾಲ ಈ ಪ್ರದೇಶಗಳಲ್ಲಿ ಕಾವಲು ಕಾಯಲಾಗುತ್ತದೆ. ಕೇರಳದ ಮರಯೂರಿನಲ್ಲಿರುವ ಶ್ರೀಗಂಧದ ಮರಗಳಿಗೆ ಅಂತಹ ರಕ್ಷಣೆ ನೀಡಲಾಗಿದೆ. ಇದೇ ರೀತಿಯ ರಕ್ಷಣೆಯನ್ನು ಇಲ್ಲಿಯ ಮರಗಳಿಗೂ ನೀಡುವ ಕುರಿತು ಚಿಂತನೆಗಳು ನಡೆದಿವೆ ಎಂದು ಹಿರಿಯ ಅರಣ್ಯ ಇಲಾಖೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಹೊಸ ನಿಯಮಗಳ ಪ್ರಕಾರ ಇಂತಹ ಪ್ರಕರಣಗಳಲ್ಲಿ ಸಿಕ್ಕಿ ಬಿದ್ದವರು, ತಪ್ಪಿತಸ್ಥರಿಗೆ 7–10 ವರ್ಷಗಳ ಕಠಿಣ ಜೈಲು ಶಿಕ್ಷೆಗೆ ಒಳಗಾಗಬೇಕಾಗುತ್ತದೆ. ಪ್ರತಿ ಮರ ಮತ್ತು ಕ್ಲಸ್ಟರ್ ಅನ್ನು ಜಿಪಿಎಸ್ ಮೂಲಕ ಟ್ರ್ಯಾಕ್ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

ರಾಜ್ಯದ ಮರ ಶ್ರೀಗಂಧದ ಮರವಾಗಿದೆ. ಆದರೆ, ಹಲವಾರು ಕಾರಣಗಳಿಂದ ಸಂಖ್ಯೆಯು ಕ್ಷೀಣಿಸುತ್ತಿದೆ. ಮರಗಳ ಕಡಿಯಲು ಅನುಮತಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಮರಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಶ್ರೀಗಂಧವನ್ನು ರಾಜ್ಯ ವೃಕ್ಷವೆಂದು ಘೋಷಿಸಿದ್ದರೂ ಮರಗಳನ್ನು ಕಾಪಾಡುವುದು ಮತ್ತು ರಕ್ಷಿಸುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಇದೀಗ ರಾಜ್ಯ ಸರ್ಕಾರ ಕ್ಲಸ್ಟರ್ ಗುರುತಿಸುವಿಕೆ ಮತ್ತು ರಕ್ಷಣೆ ಮಾಡಲು ಮುಂದಾಗಿರುವುದರಿಂದ ಮರಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆಗಳಿವೆ ಎಂದಿದ್ದಾರೆ.

ಇಲ್ಲಿಯವರೆಗೆ, ಅಂತಹ 20–30 ಬ್ಲಾಕ್ಗಳನ್ನು ಗುರುತಿಸಲಾಗಿದೆ. ಈ ಮರಗಳು ಸುಮಾರು 30 ವರ್ಷಗಳಷ್ಟು ಹಳೆಯವುಗಳಾಗಿವೆ. ಕೆಲವು 45 ಸೆಂ.ಮೀ ಸುತ್ತಳತೆ ಹೊಂದಿರುತ್ತವೆ. ರಾಜ್ಯ ಅರಣ್ಯ ಇಲಾಖೆಯ ಅಂಕಿಅಂಶಗಳ ಪ್ರಕಾರ, ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಎರಡು ಮರಗಳಿವೆ. ಕ್ಲಸ್ಟರ್ ಘೋಷಿಸಲು, ಕೇವಲ ವಿಸ್ತೀರ್ಣ ಮಾತ್ರವಲ್ಲದೆ ಮರಗಳ ಸಂಖ್ಯೆಯನ್ನು ಕೂಡ ಪರಿಗಣಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಚೀನಾಕ್ಕೆ ರಾಜನಾಥ್ ಸಿಂಗ್ ಎಚ್ಚರಿಕೆ ಸಂದೇಶ

ಬೋಲೆಂಗ್, ಜ.3– ಗಡಿಯುದ್ದಕ್ಕೂ ದೇಶದ ಭೂ ಪ್ರದೇಶವನ್ನು ಸಂರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಎದುರಾಗುವ ಎಲ್ಲಾ ಸವಾಲುಗಳನ್ನು ಮೆಟ್ಟಿ ನಿಲ್ಲುವ ಸಾಮರ್ಥ್ಯವನ್ನು ಭಾರತ ಹೊಂದಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಂಗಳವಾರ ಪ್ರತಿಪಾದಿಸುವ ಮೂಲಕ ನೆರೆಯ ರಾಷ್ಟ್ರ ಚೀನಾಕ್ಕೆ ಎಚ್ಚರಿಕೆಯ ಸಂದೇಶ ನೀಡಿದ್ದಾರೆ.

ಬೋಲೆಂಗ್‌ನಲ್ಲಿ ಸೇತುವೆ ಉದ್ಘಾಟಿಸಿ ಮಾತನಾಡಿದ ಸಿಂಗ್, ಭಾರತ ಎಂದಿಗೂ ಯುದ್ಧವನ್ನು ಪ್ರೋತ್ಸಾಹಿಸುವುದಿಲ್ಲ, ನೆರೆಯ ರಾಷ್ಟ್ರಗಳೊಂದಿಗೆ ಯಾವಾಗಲೂ ಸೌಹಾರ್ದಯುತ ಸಂಬಂಧವನ್ನು ಬಯಸುತ್ತದೆ. ಆದಾಗ್ಯೂ, ಗಡಿಯಲ್ಲಿ ಎದುರಾಗುವ ಯಾವುದೇ ಸವಾಲನ್ನು ಎದುರಿಸುವ ಸಾಮರ್ಥ್ಯವನ್ನು ಭಾರತದ ಸೇನೆ ಹೊಂದಿದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸಿದ್ಧವಿದೆ ಎಂದರು. ಭಾರತ ನೆರೆಹೊರೆಯವರೊಂದಿಗೆ ಶಾಂತಿಯನ್ನು ಬಯಸುತ್ತದೆ. ಇದು ಶ್ರೀರಾಮ ಮತ್ತು ಭಗವಾನ್ ಬುದ್ಧನಿಂದ ಬಂದ ನಮ್ಮ ತತ್ವವಾಗಿದೆ. ಒಂದು ವೇಳೆ ಪ್ರಚೋದಿಸಿದರೆ ಯಾವುದೇ ರೀತಿಯ ಪರಿಸ್ಥಿತಿಯನ್ನು ನಿಭಾಯಿಸುವ ಸಾಮರ್ಥ್ಯವನ್ನು ಭಾರತ ಹೊಂದಿದೆ ಎಂದು ರಾಜನಾಥ್ ಸಿಂಗ್ ಎಚ್ಚರಿಕೆ ನೀಡಿದರು.

ಒಂದನೇ ಪುಟದಿಂದ

ಹೆಚ್ಚಳಕ್ಕೆ ಸರ್ಕಾರ ತೀರ್ಮಾನ

ಹಂಚಿಕೆ ಮಾಡಲು ಸರ್ಕಾರ ನಿರ್ಧರಿಸಿದೆ. ಈಗಿರುವ ಮೀಸಲಾತಿ ಕಳೆದುಕೊಳ್ಳುವ ಅಲ್ಪಸಂಖ್ಯಾತರಿಗೆ ಕೇಂದ್ರ ಸರ್ಕಾರದ ಆರ್ಥಿಕ ದುರ್ಬಲ ವರ್ಗದವರಿಗಾಗಿ ಜಾರಿಗೊಳಿಸಿರುವ ಶೇ.10 ರ ಮೀಸಲಾತಿಯಲ್ಲಿ ಶೇ. 4ರಷ್ಟು ಅಲ್ಪಸಂಖ್ಯಾತರಿಗೂ ಉಳಿದ 6 ಅನ್ನು ಯಾವುದೇ ಮೀಸಲಾತಿಗೆ ಒಳಪಡದ ಬ್ರಾಹ್ಮಣ ಹಾಗೂ ಇತರೆ ಸಮುದಾಯಗಳಿಗೆ ಹಂಚಿಕೆ ಮಾಡಲು ಸರ್ಕಾರ ನಿರ್ಧರಿಸಿದೆ. ಆರ್ಥಿಕ ದುರ್ಬಲರಿಗೆ ನೀಡುವ ಮೀಸಲಾತಿಯಲ್ಲಿ ಮುಂದುವರೆದ ಸಮುದಾಯಗಳಾದ ಒಕ್ಕಲಿಗ ಮತ್ತು ವೀರಶೈವರಿಗೂ ಸರ್ಕಾರ ನೀಡಲು ಈ ಮೊದಲು ಉದ್ದೇಶಿಸಿತ್ತು.

ಈಗಿರುವ ಒಳ ಮೀಸಲಾತಿಯಿಂದ ಹಿಂದಕ್ಕೆ ಪಡೆದು ಹೊಸ ಪ್ರವರ್ಗಕ್ಕೆ ಸೇರಿಸಲು ಈ ಎರಡೂ ಸಮುದಾಯಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದರಿಂದ ಮತ್ತು ಕಾನೂನು ತಜ್ಞರ ಸಲಹೆಯಂತೆ ಹೊಸ ಬದಲಾವಣೆ ತರಲು ಸರ್ಕಾರ ನಿರ್ಧರಿಸಿದೆ.

ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಿದ್ದು, ಅದಕ್ಕೂ ಮುನ್ನ ಸಮುದಾಯದ ಮಠಾಧೀಶರನ್ನು ಭೇಟಿಯಾಗಿ ಮೀಸಲಾತಿ ಹೆಚ್ಚಳದ ಕಾನೂನು ತೊಡಕುಗಳು ಹಾಗೂ ಅದರಿಂದಾಗುವ ಸಾಧಕ ಬಾಧಕ ಪರಿಣಾಮಗಳ ಬಗ್ಗೆ ಬಿಜೆಪಿ ಶಾಸಕರು ಮನವರಿಕೆ ಮಾಡಿಕೊಡಲಿದ್ದಾರೆ. ಪಂಚಮಸಾಲಿಯನ್ನು ಪ್ರವರ್ಗ 2ಬಿಗೆ ಸೇರಿಸುವಂತೆ ಹಾಗೂ ಒಕ್ಕಲಿಗರ ಮೀಸಲಾತಿ ಪ್ರಮಾಣವನ್ನು ಶೇ.12ಕ್ಕೆ ಹೆಚ್ಚಿಸುವಂತೆ ಸರ್ಕಾರದ ಮೇಲೆ ಒತ್ತಡ ಹೇರಿವೆ. ಇತರೆ ಸಮುದಾಯಗಳು ಮೀಸಲಾತಿ ಹೆಚ್ಚಳಕ್ಕಾಗಿ ಸರ್ಕಾರವನ್ನು ಆಗ್ರಹಿಸುತ್ತಲೇ ಇವೆ. ಈಗಾಗಲೇ ಎಸ್ಸಿ, ಎಸ್ಟಿ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿ ಅನುಷ್ಠಾನಗೊಳಿಸುತ್ತಿರುವುದರಿಂದ ಸರ್ಕಾರದ ಮೇಲೆ ಒತ್ತಡ ತೀವ್ರಗೊಂಡಿದೆ. ಒಕ್ಕಲಿಗರು, ಲಿಂಗಾಯತರಿಗೆ ಹೆಚ್ಚಿಸಲಿರುವ ತಲಾ ಶೇ.2ರ ಮೀಸಲಾತಿ ಪ್ರಮಾಣದ ಬಗ್ಗೆ ಕಂದಾಯ ಸಚಿವ ಆರ್.ಅಶೋಕ್ ನೇತೃತ್ವದಲ್ಲಿ ಬಿಜೆಪಿಯ ಒಕ್ಕಲಿಗರ ಶಾಸಕರು ನಾಳೆ (ಬುಧವಾರ) ಸಮುದಾಯದ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರನ್ನು ಭೇಟಿಯಾಗಿ ಸರ್ಕಾರದ ಈ ನಿರ್ಧಾರವನ್ನು ಮನವರಿಕೆ ಮಾಡಿಕೊಡಲಿದ್ದಾರೆ. ಅಲ್ಲದೆ ಇದಕ್ಕೆ ಮುಖ್ಯಮಂತ್ರಿಗಳ ಒಪ್ಪಿಗೆ ಇರುವುದಾಗಿಯೂ ತಿಳಿಸಲಿದ್ದಾರೆ.

ಕಾಂಗ್ರೆಸ್ ಚುನಾವಣಾ ಉಸ್ತುವಾರಿ

ಪ್ರವಾಸ ಕೈಗೊಳ್ಳುತ್ತೇನೆ ಎಂಬ ಮಾಹಿತಿಯನ್ನು ಈಗಾಗಲೇ ಕೆಪಿಸಿಸಿ ಮುಖಂಡರಿಗೆ ತಿಳಿಸಿದ್ದಾರೆ. ಅವರ ಭರವಸೆಯಂತೆ ಜನವರಿ 6 ರಂದು ಪೂರ್ವ ಸಭೆ ನಡೆಸುತ್ತಿದ್ದಾರೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ರಾಜ್ಯಾದ್ಯಂತ ಬಸ್ ಪ್ರವಾಸ ಕಾರ್ಯಕ್ರಮ ಮುಗಿಸಿದ ನಂತರ ಪ್ರಿಯಾಂಕಾ ತಮ್ಮ ಪ್ರಚಾರ ಕಾರ್ಯ ಆರಂಭಿಸಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ಪ್ರಿಯಾಂಕಾ ಸಕ್ರಿಯವಾಗಿ ಪಾಲ್ಗೊಂಡರೂ ಪಕ್ಷಕ್ಕೆ ಯಾವುದೇ ಲಾಭವಾಗಿಲ್ಲ. ಹಿಮಾಚಲ ಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ಎಡೆಬಿಡದೆ ಅವರು ಪ್ರಚಾರ ಕಾರ್ಯ ಕೈಗೊಂಡರು. ಇದರಿಂದ ಪಕ್ಷಕ್ಕೂ ಲಾಭವಾಯಿತು. ಬಿಜೆಪಿ ಪರ ಪ್ರಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ರಾಷ್ಟ್ರೀಯ ನಾಯಕರ ದಂಡೇ ರಾಜ್ಯಕ್ಕೆ ಇಳಿಯುತ್ತಿದೆ.


ಕಾಂಗ್ರೆಸ್‌ಗೆ ಈ ಬಾರಿ ಪ್ರಿಯಾಂಕಾ ಗಾಂಧಿ ಅವರನ್ನು ಮುಂಚೂಣಿಗೆ ತರುತ್ತಿರುವುದು ಚುನಾವಣೆಯಲ್ಲಿ ಆ ಪಕ್ಷಕ್ಕೆ ಎಷ್ಟು ಲಾಭ ತರುತ್ತದೆ ಮತ್ತು ಮಹಿಳಾ ಮತಗಳನ್ನು ಆಕರ್ಷಣೆ ಮಾಡುತ್ತಾರಾ ಎಂದು ಕಾದು ನೋಡಬೇಕು.

ಆರು ದಿನಗಳ ಕಾಲದ ಮೈಸೂರು ಸಾಂಪ್ರದಾಯಿಕ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ

'ನೋಟ'ದ ಆಧಾರದ ಮೇಲೆ 'ದೃಶ್ಯಕಲೆ' ನಿಂತಿದೆಯೇ ಹೊರತು ಸಿದ್ಧಾಂತ, ಸಂಪ್ರದಾಯದ ಮೇಲಲ್ಲ

ಕರ್ನಾಟಕ ಲಲಿತ ಕಲಾ ಅಕಾಡೆಮಿ ಮಾಜಿ ಅಧ್ಯಕ್ಷ ಡಾ.ಎಂ.ಎಸ್.ಮೂರ್ತಿ





ಮೈಸೂರು,ಜ.3(ಪಿಎಂ)– ದೃಶ್ಯಕಲೆಯು ಅಕ್ಷರ ಲೋಕದ ತಾಯಿ. ಇದು ನೋಟದ ಆಧಾರದ ಮೇಲೆ ನಿಂತಿದೆಯೇ ಹೊರತು ಯಾವುದೇ ಸಿದ್ಧಾಂತ, ಸಂಪ್ರದಾಯದ ಮೇಲೆ ಅಲ್ಲ ಎಂದು ಕರ್ನಾಟಕ ಲಲಿತ ಕಲಾ ಅಕಾಡೆಮಿ ಮಾಜಿ ಅಧ್ಯಕ್ಷ ಡಾ.ಎಂ.ಎಸ್.ಮೂರ್ತಿ ಹೇಳಿದರು.

ಮೈಸೂರಿನ ವಿಜಯನಗರದ ಶ್ರೀ ಕಲಾನಿಕೇತನ ದೃಶ್ಯಕಲಾ ಕಾಲೇಜು ವತಿಯಿಂದ ಕಾಲೇಜಿನಲ್ಲಿ ಹಮ್ಮಿಕೊಂಡಿರುವ ಮೈಸೂರು ಸಾಂಪ್ರದಾಯಿಕ ಚಿತ್ರಕಲಾ ಪ್ರದರ್ಶನದ ಉದ್ಘಾಟನಾ ಸಮಾರಂಭ ಅಧ್ಯಕ್ಷತೆ ವಹಿಸಿ ಮಂಗಳವಾರ ಅವರು ಮಾತನಾಡಿದರು.

ಯಾವುದೇ ಸಿದ್ಧಾಂತ, ಸಂಪ್ರದಾಯ, ಕಸಬುಗಾರಿಕೆ, ಚಮತ್ಕಾರದ ಮೇಲೆ ದೃಶ್ಯಕಲೆ ನಿಂತಿಲ್ಲ. ದೃಶ್ಯಕಲೆಯ ತಾತ್ವಿಕ ನೆಲೆ ನೋಟ. ಹಾಗಾಗಿ ಒಬ್ಬ ಕಲಾವಿದ ನೋಡುವುದನ್ನು ಕಲಿಯಬೇಕು. ದೃಶ್ಯಕಲೆಯ ಮೂಲ ತಾತ್ವಿಕ ನೆಲೆಯನ್ನು ನಾವು ತಿಳಿದುಕೊಳ್ಳಬೇಕು. ವೈಚಾರಿಕ ನೆಲೆಯಲ್ಲಿ ದೃಶ್ಯಕಲೆಯನ್ನು ಬೆಳೆಸಬೇಕು ಎಂದು ಚಿತ್ರಕಲಾ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನೋಡುವುದು, ಅರ್ಥ ಮಾಡಿಕೊಳ್ಳುವುದು, ಆಲೋಚಿಸುವುದು ಮತ್ತು ಅಭಿವ್ಯಕ್ತಪಡಿಸುವುದು, ಈ ನಾಲ್ಕು ವಿಚಾರಗಳನ್ನು ತಿಳಿದುಕೊಳ್ಳಬೇಕು. ಎಲ್ಲಾ ಭಾಷೆಗಳ ಸಾಹಿತ್ಯದಲ್ಲಿ ಶಬ್ಧಕೋಶ ಇದೆ. ಅದು ಪರಂಪರೆಯಿಂದ ಪರಂಪರೆಗೆ ನವೀಕರಣಗೊಳ್ಳುತ್ತಿದೆ. ಆದರೆ ನಮ್ಮ ದೃಶ್ಯಕಲೆಯ ಕೋಶ ಎಲ್ಲಿದೆ ಎಂಬುದನ್ನು ಗ್ರಹಿಸಬೇಕು ಎಂದು ಸಲಹೆ ನೀಡಿದರು.

ಈ ಸಮಾಜ, ರಾಜಕಾರಣಿಗಳು, ದೊಡ್ಡ ದೊಡ್ಡ ಮನುಷ್ಯರಿಗೆ ದೃಶ್ಯಕಲೆ ಎನ್ನುವುದು ಯಕಶ್ಚಿತ್ ವಿಷಯವಾಗಿದೆ. ದೃಶ್ಯಕಲೆ ಅಕ್ಷರ ಲೋಕದ ತಾಯಿ. ಅಂತಹ ದೃಶ್ಯಕಲೆಯನ್ನು ಎಲ್ಲಾ ಕ್ಷೇತ್ರಗಳ ಕೊನೆಯ ಸಾಲಿನಲ್ಲಿ ಅನಿವಾರ್ಯವಾಗಿ ಗುರುತಿಸಲಾಗುತ್ತಿದೆ. ದೃಶ್ಯಕಲೆಯನ್ನು ಈ ಮಟ್ಟದಲ್ಲಿ ಇರಿಸಿರುವುದು ಇಡೀ ಸಮಾಜದ ದುಸ್ಥಿತಿ. ಇಡೀ ಸಮಾಜ ತನ್ನ ನೋಟವನ್ನು ಹೇಗೆ ಕಳೆದುಕೊಂಡಿದೆ ಎಂಬುದನ್ನು ಇದು ಸೂಚಿಸುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ಸರ್ಕಾರದ ನಿರ್ಲಕ್ಷ್ಯ: ನಾನೊಬ್ಬ 4 ದಶಕಗಳ ಪೂರ್ಣ ಕಲಾವಿದ. ಇಡೀ ನಮ್ಮ ಕುಟುಂಬದಲ್ಲಿ ದೃಶ್ಯಕಲೆ ಆಯ್ಕೆ ಮಾಡಿಕೊಂಡ ಮೊದಲನೇ ವ್ಯಕ್ತಿ. ಆರಂಭದಲ್ಲಿ 'ನೀನು ರಸ್ತೆಯಲ್ಲಿ ಚಿತ್ರ ಬರೆಯುವವರ ರೀತಿ ಆಗುತ್ತೀಯಾ ಅಷ್ಟೇ' ಎಂದು ಕೇವಲವಾಗಿ ನೋಡುತ್ತಿದ್ದರು. ನನ್ನ ಈ ಮಾತಿನ ಅರ್ಥ ರಸ್ತೆಯಲ್ಲಿ ಚಿತ್ರ ಬರೆಯುವವರನ್ನು ಕಡೆಗಣಿಸುವುದಲ್ಲ. ಅವರ ಆ ದುಸ್ಥಿತಿಗೆ ಪೂರ್ಣ ಹೊಣೆಯನ್ನು ಇಡೀ ದೃಶ್ಯಕಲಾವಿದರ ಪರಂಪರೆ ಹೊರಬೇಕಾಗುತ್ತದೆ. ನಂತರದಲ್ಲಿ ಸರ್ಕಾರ ಸಂಪೂರ್ಣ ಹೊಣೆಗಾರಿಕೆಯಿಂದ ತಪ್ಪಿಸಿಕೊಂಡು ಕೇವಲ ನಾಲ್ಕು ಮಂದಿಗೆ ಅವಕಾಶ ನೀಡುವ ಸಂದರ್ಭ ಸೃಷ್ಟಿ ಮಾಡುತ್ತಿದೆ. ಸರ್ಕಾರದ ಇಂತಹ ನಿರ್ಲಕ್ಷ್ಯದ ಬಗ್ಗೆ ನನಗೆ ಹೇಸಿಗೆ ಅನ್ನಿಸುತ್ತದೆ. ಶತಮಾನದ ಇತಿಹಾಸ ಹೊಂದಿರುವ ಸಿನಿಮಾ ಕ್ಷೇತ್ರವು ವಿವಿಧ ಕ್ಷೇತ್ರಗಳನ್ನು ಸಮ್ಮಿಲನಗೊಳಿಸಿ ಸಮಾಜಕ್ಕೆ ಅಗತ್ಯವಾದ ಮಾಹಿತಿ ಮತ್ತು ಮನರಂಜನೆ ನೀಡುತ್ತದೆ. ಆದರೆ ದೃಶ್ಯಕಲೆ ಜನತೆಗೆ ಅತ್ಯಗತ್ಯವಾಗಿ ಬೇಕಾದ ನೋಟ ನೀಡುವ ಒಂದು ಪರಂಪರೆ ಎಂದು ವ್ಯಾಖ್ಯಾನಿಸಿದರು.

ಉದ್ಘಾಟನೆ ನೆರವೇರಿಸಿದ ಟಿ.ನರಸೀಪುರದ ಸಾಂಪ್ರದಾಯಿಕ ಚಿತ್ರಕಲಾವಿದ ಕೆ.ಎಸ್.ಶ್ರೀಹರಿ ಮಾತನಾಡಿ, ಮೈಸೂರು ಸಾಂಪ್ರದಾಯಿಕ ಚಿತ್ರಕಲೆ ದೊಡ್ಡ ಸಾಗರ. ಮೈಸೂರು ಸಂಸ್ಥಾನದಲ್ಲಿ ಇದು ವಿಶೇಷ ಕಲೆಯಾಗಿ ಬೆಳೆಯಿತು. ಇದಕ್ಕಿರುವ ಚೌಕಟ್ಟು ದಾಟಿದರೆ ಅದು ಮೈಸೂರು ಸಾಂಪ್ರದಾಯಿಕ ಶೈಲಿ ಎನ್ನಲಾಗದು. ಈ ಕಲೆಯಲ್ಲಿ ದೈವದ ಸಾಂಪ್ರದಾಯಿಕ ಆಸನಗಳನ್ನು ತಿಳಿದುಕೊಳ್ಳುವುದು ಮುಖ್ಯ ಎಂದರು.

ಕೇಂದ್ರ ಸರ್ಕಾರದ ಮೈಸೂರಿನ ಕರಕುಶಲ ಸೇವಾ ಕೇಂದ್ರದ ಸಹಾಯಕ ನಿರ್ದೇಶಕ ಕೆ.ಎಸ್.ಸುನೀಲ್ ಕುಮಾರ್ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮೈಸೂರು ಸಾಂಪ್ರದಾಯಿಕ ಚಿತ್ರಕಲೆಯನ್ನು ನಶಿಸುತ್ತಿರುವ ಕಲೆ ಎಂದು ಪರಿಗಣಿಸಿ ಉತ್ತೇಜನ ನೀಡುತ್ತಿವೆ ಅಲ್ಲದೆ ಈ ಕಲೆಗೆ ಜಿಐ ಟ್ಯಾಗ್ (ಭೌಗೋಳಿಕ ಸೂಚ್ಯಂಕ) ಮಾನ್ಯತೆ ನೀಡಲಾಗಿದೆ. ಅಲ್ಲದೆ, ಈ ಶೈಲಿ ಕಲಾವಿದರಿಗೆ ತಮ್ಮ ಕಲಾ ಪ್ರದರ್ಶನಕ್ಕೆ ಸರ್ಕಾರ ಆಗಾಗ್ಗೆ ಅವಕಾಶ ಕಲ್ಪಿಸುತ್ತಿದೆ ಎಂದು ಮಾಹಿತಿ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಕೆ.ಸಿ.ಮಹದೇವಶೆಟ್ಟಿ, ಇಂದಿನ ಆಧುನಿಕ ಕಾಲಘಟ್ಟದಲ್ಲಿ ಮೈಸೂರು ಸಾಂಪ್ರದಾಯಿಕ ಚಿತ್ರಕಲೆ ನಶಿಸುವ ಸ್ಥಿತಿಯಲ್ಲಿದ್ದು, ಇದನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಮ್ಮ ಕಾಲೇಜು ವಿದ್ಯಾರ್ಥಿಗಳಿಗೆ 2022ರ ಜ.18ರಿಂದ 29ರವರೆಗೆ ಕಲಾ ಶಿಬಿರ ನಡೆಸಲಾಗಿತ್ತು. ಶಿಬಿರದಲ್ಲಿ ಮಾಡಿದ ಚಿತ್ರಕಲೆಗಳನ್ನು ಪ್ರದರ್ಶನಕ್ಕಿಡಲಾಗಿದೆ ಎಂದು ತಿಳಿಸಿದರು. ಹಿರಿಯ ಕಲಾವಿದ ಜಿ.ಆರ್.ನೀಡುವಳ್ಳಿ, ದೃಶ್ಯಕಲಾ ಪ್ರಾಧ್ಯಾಪಕ ಡಾ.ಶಂಕರ್ ಎಂ.ಕುಂದಗೋಳ, ಕಾವಾ ನಿವೃತ್ತ ಡೀನ್ ಬಸವರಾಜ ಮುಸಾವಳಗಿ, ಶಿಬಿರದ ನಿರ್ದೇಶಕ ಡಾ.ವಿಠ್ಠಲರೆಡ್ಡಿ ಚುಳಕಿ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಹಾಜರಿದ್ದರು.

ಎಡ–ಬಲ ರೋಗಗಳಿಂದ ಮುಕ್ತವಾಗಬೇಕು...

ಸಾಹಿತ್ಯ, ಸಂಗೀತ, ನಾಟ್ಯ, ನಡವಳಿಕೆ, ಜಾನಪದ ಮೊದಲಾದವು ಸೇರಿದಂತೆ ಎಲ್ಲವನ್ನೂ ಒಂದೇ ಶಬ್ಧದಲ್ಲಿ 'ಸಂಸ್ಕೃತಿ' ಎಂದು ಕರೆಯುತ್ತೇವೆ. ಅಂತಹ ಇಡೀ ಸಂಸ್ಕೃತಿಯ ಸೌಜನ್ಯವೇ 'ದೃಶ್ಯಕಲೆ'. ಕಲಾವಿದರು ಸಂಸ್ಕಾರವಂತರು, ಪ್ರೀತಿ–ವಿಶ್ವಾಸ ಹೊಂದಿರುವವರು ಆಗುವುದು ಅತೀ ಮುಖ್ಯ. ಇಂದಿನ ಧಾವಂತ ಮತ್ತು ಸಂಘರ್ಷದ ನೆಲೆಯಲ್ಲಿ ಎಲ್ಲದರ ಬಗ್ಗೆಯೂ ನಮ್ಮ ವಿವೇಕ ಕೆಲಸ ಮಾಡಬೇಕು. ವಾಸ್ತವಸ್ಥಿತಿ ಅವಲೋಕಿಸಬೇಕು. ಧರ್ಮ, ಜಾತಿ ಹಾಗೂ ಸಂಘರ್ಷದ ತಲ್ಲಣದಲ್ಲಿ ಸಾಹಿತ್ಯ ಹೆಚ್ಚು ಮಾತನಾಡುತ್ತಿದೆ. ಉದ್ವೇಗದಲ್ಲಿ ಮಾತನಾಡುವವರಿಂದ ದೂರವಿದ್ದು, ಸಮಾಧಾನದ ಸ್ಥಿತಿಯಲ್ಲಿ ಎಡ–ಬಲ ರೋಗಗಳಿಂದ ಮುಕ್ತವಾಗಿ ಸಮಾಜ ನೋಡಬೇಕು.

-ಡಾ.ಎಂ.ಎಸ್.ಮೂರ್ತಿ



ಹಿಂದೂ ದೇವಾನುದೇವತೆಗಳ ಚಿತ್ರಕಲಾಕೃತಿಗಳು ಮೈಸೂರು ಸಾಂಪ್ರದಾಯಿಕ ಚಿತ್ರಕಲೆಯಲ್ಲಿ ಇಲ್ಲಿ ಮೂಡಿಬಂದಿವೆ. ಒಟ್ಟು 28 ಚಿತ್ರಕಲೆಗಳನ್ನು ಇಲ್ಲಿನ ವಿದ್ಯಾರ್ಥಿಗಳು ರಚಿಸಿದ್ದು, ಅವುಗಳನ್ನು ಇಂದಿನಿಂದ ಜ.8ರವರೆಗೆ ಪ್ರದರ್ಶನಕ್ಕಿಡಲಾಗಿದೆ. ಬೆಳಗ್ಗೆ 10.30ರಿಂದ ಸಂಜೆ 4ರವರೆಗೆ ಸಾರ್ವಜನಿಕರು ಉಚಿತವಾಗಿ ಪ್ರದರ್ಶನ ವೀಕ್ಷಿಸಲು ಅವಕಾಶವಿದೆ. ಹಿಂದೂ ದೇವತೆ ಚಿತ್ರಗಳ ಜೊತೆಗೆ ಯೇಸುಕ್ರಿಸ್ತರ ಒಂದು ಚಿತ್ರ ಇರುವುದೂ ವಿಶೇಷ.

ಕರ್ನಾಟಕ ವಿಧಾನಸಭೆ ಚುನಾವಣೆ-2023

ಕೇಂದ್ರ ಚುನಾವಣಾ ಅಧಿಕಾರಿಗಳಿಂದ ಪೂರ್ವ ತಯಾರಿಯ ಪರಿವೀಕ್ಷಣೆ

● ರಾಜ್ಯದ ಅಧಿಕಾರಿಗಳೊಂದಿಗೆ ಸುದೀರ್ಘ ಸಭೆ ● ಪರಿಷ್ಕೃತ ಅಂತಿಮ ಮತದಾರರ ಪಟ್ಟಿ ಸಂಬಂಧ ಚರ್ಚೆ

ಬೆಂಗಳೂರು, ಜ.3– ಕರ್ನಾಟಕ ರಾಜ್ಯ ವಿಧಾನಸಭೆ ಸಾರ್ವತ್ರಿಕ ಚುನಾವಣೆ –2023ರ ಹಿನ್ನೆಲೆಯಲ್ಲಿ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವತಿಯಿಂದ ಹಮ್ಮಿಕೊಳ್ಳಲಾಗಿರುವ ಪೂರ್ವ ತಯಾರಿ ಕಾರ್ಯಗಳನ್ನು, ಭಾರತ ಚುನಾವಣಾ ಆಯೋಗದ ಉಪ ಚುನಾವಣಾ ಆಯುಕ್ತರಾದ ಅಜಯ್ ಭಾದೂ ಹಾಗೂ ಕಾರ್ಯದರ್ಶಿ ಬಿ.ಸಿ.ಪಾತ್ರ ಪರಿವೀಕ್ಷಣೆ ನಡೆಸಿದರು.

2023ರ ರಾಜ್ಯ ವಿಧಾನಸಭೆ ಚುನಾವಣೆಯ ಹಿನ್ನೆಲೆಯಲ್ಲಿ ಪೂರ್ವ ತಯಾರಿ ಕಾರ್ಯಗಳನ್ನು ಪರಿವೀಕ್ಷಿಸಲು ಎರಡು ದಿನಗಳ ಭೇಟಿಗಾಗಿ ಜನವರಿ 2 ರಂದು ರಾಜ್ಯಕ್ಕೆ ಆಗಮಿಸಿರುವ ಅವರು ಮೊದಲ ದಿನ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಎರಡನೇ ದಿನ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಅವರ ಸಂಬಂಧಿಸಿದ ಅಧಿಕಾರಿಗಳ ತಂಡಗಳ ಜೊತೆ ವರ್ಚ್ಯುಯಲ್ ಮೂಲಕ ಸಭೆ ನಡೆಸಿ ಸಂಪೂರ್ಣ ಮಾಹಿತಿ ಪಡೆದರು.

ಸಭೆಯಲ್ಲಿ ಮುಖ್ಯವಾಗಿ ಇದೇ ತಿಂಗಳು ಪ್ರಕಟವಾಗಲಿರುವ ಪರಿಷ್ಕೃತ ಅಂತಿಮ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಚರ್ಚಿಸಲಾಯಿತು. ಅದರಲ್ಲೂ ಮುಖ್ಯವಾಗಿ ಅಂತಿಮ ಮತದಾರರ ಪಟ್ಟಿ ತಯಾರಿಕೆಯಲ್ಲಿ ಮೃತಪಟ್ಟವರ ಹೆಸರುಗಳನ್ನು ತೆಗೆದುಹಾಕುವುದು, ವಿಳಾಸ ಬದಲಾದವರ ಹೆಸರುಗಳ ವರ್ಗಾವಣೆ ಮತ್ತು ಹೊಸ ಯುವ ಮತದಾರರ ಹೆಸರುಗಳ ಸೇರ್ಪಡೆ ಕುರಿತಂತೆ ಅನುಸರಿಸಬೇಕಾದ ವಿಧಾನಗಳ ಕುರಿತು ಹೆಚ್ಚು ಒತ್ತು ನೀಡುವಂತೆ ಹಾಗೂ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಅಂತಿಮ ಮತದಾರರ ಪಟ್ಟಿಯಲ್ಲಿ ಮುಖ್ಯವಾಗಿ ಸಾರ್ವಜನಿಕರ ಮಾಹಿತಿ ಸರಿಯಾಗಿರಬೇಕು. ಜೊತೆಗೆ ಯಾವುದೇ ಕಾರಣದಿಂದ ಇರುವವರ ಹೆಸರುಗಳನ್ನು ಕೈ ಬಿಡದಂತೆ ಜಾಗೃತಿ ವಹಿಸಬೇಕು, ಜಿಲ್ಲಾ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಜಿಲ್ಲೆಗಳಲ್ಲಿ ಖುದ್ದು ಭೇಟಿ ನೀಡಿ ಪರಿಶೀಲಿಸಬೇಕು. ಪ್ರತಿ ಮನೆ–ಮನೆಗೆ ಭೇಟಿ ನೀಡಿ ಸರಿಯಾದ ಮಾಹಿತಿಯನ್ನು ಅಧಿಕಾರಿಗಳು ಸಂಗ್ರಹಿಸಿರುವ ಬಗ್ಗೆ ನಿಗಾ ವಹಿಸಬೇಕು ಎಂದು ಹೇಳಿದರು.

ಅಂತಿಮ ಮತದಾರರ ಪಟ್ಟಿಯ ತಯಾರಿಯಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಗಳ ವಿಧಾನಸಭಾ ಕ್ಷೇತ್ರಗಳಲ್ಲಿ ಅತ್ಯಂತ ಕಡಿಮೆ ಸೇರ್ಪಡೆಗೊಂಡಿರುವ (Addition) ಮತ್ತು ತೆಗೆದುಹಾಕಿರುವ (Deletion) 10 ಮತಕೇಂದ್ರಗಳನ್ನು ಗುರುತಿಸಿ ಅವುಗಳಿಗೆ ಸಕಾರಣಗಳನ್ನು ಗುರುತಿಸಿ ಸರಿ ಮಾಡುವಂತೆ ಸೂಚಿಸಿದರು. ಕಳೆದ ಸಾರ್ವತ್ರಿಕ ಚುನಾವಣಾ ಸಂದರ್ಭದಲ್ಲಿ ಅತ್ಯಂತ ಕಡಿಮೆ ಮತದಾನವಾಗಿರುವ ವಿಧಾನಸಭಾ ಕ್ಷೇತ್ರಗಳಲ್ಲಿ ಈ ಬಾರಿ ಶೇಕಡಾವಾರು ಮತದಾನವನ್ನು ಹೆಚ್ಚಿಸಲು ಸೂಕ್ತ ಕ್ರಮಕೈಗೊಳ್ಳುವುದು ಹಾಗೂ ಮತದಾರರ ಜಾಗೃತಿಗಾಗಿ ಹೆಚ್ಚಿನ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಲಹೆ ನೀಡಿದರು.

ಇದಲ್ಲದೇ, ಚುನಾವಣಾ ಕಾರ್ಯಕ್ಕಾಗಿ ಅವಶ್ಯವಿರುವ ಮಾನವ ಸಂಪನ್ಮೂಲ ಕುರಿತು ಸಹ ಚರ್ಚಿಸಿದ ಅವರು, ತಮಗೆ ಅವಶ್ಯವಿರುವ ಸ್ಥಾನಗಳ ಕುರಿತು ಕೂಡಲೇ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಗಮನಕ್ಕೆ ತರಲು ಸೂಚಿಸಿದರು. ಈ ಎರಡು ದಿನಗಳ ಭೇಟಿಯಲ್ಲಿ ಮೊದಲ ದಿನ ರಾಜ್ಯ ಮಟ್ಟದ ಹಾಗೂ ಎರಡನೇ ದಿನ ಜಿಲ್ಲಾಮಟ್ಟದ ಸಭೆ ನಡೆಸಿದ ನಂತರ ಅವರು ಪೂರ್ವತಯಾರಿ ಕಾರ್ಯಗಳ ಕುರಿತು ಅಧಿಕಾರಿಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತೃಪ್ತಿ ವ್ಯಕ್ತಪಡಿಸಿದ ಅವರು ಉತ್ತಮವಾಗಿ ಚುನಾವಣೆ ನಡೆಸಲು ಎಲ್ಲರೂ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ಕರೆ ನೀಡಿದರು.

ಈ ಎರಡು ದಿನಗಳ ಸಭೆಯಲ್ಲಿ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ, ಅಪರ ಮುಖ್ಯ ಚುನಾವಣಾಧಿಕಾರಿಗಳಾದ ವೆಂಕಟೇಶ್ ಕುಮಾರ್, ಪಿ. ರಾಜೇಂದ್ರ ಚೋಳನ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಥಿಯೇಟರ್‌ಗಳು ಶುದ್ಧವಾದ ಕುಡಿಯುವ ನೀರು ಫ್ರೀ ನೀಡಬೇಕು: ಸುಪ್ರೀಂ

ನವದೆಹಲಿ, ಜ.3– ಪ್ರೇಕ್ಷಕರು ಹೊರಗಡೆಯಿಂದ ಆಹಾರ ಮತ್ತು ಪಾನೀಯವನ್ನು ಚಲನಚಿತ್ರ ಮಂದಿರಕ್ಕೆ ಕೊಂಡೊಯ್ಯುವುದನ್ನು ನಿಯಂತ್ರಿಸುವ ಹಕ್ಕು ಚಿತ್ರಮಂದಿರದ ಮಾಲೀಕರಿಗೆ ಇದೆ ಎಂದು ಸುಪ್ರೀಂಕೋರ್ಟ್ ಹೇಳಿದೆ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಮತ್ತು ನ್ಯಾ. ಪಿ.ಎಸ್. ನರಸಿಂಹ ಅವರ ಪೀಠವು ಚಿತ್ರಮಂದಿರವು ಮಾಲೀಕರ ಖಾಸಗಿ ಆಸ್ತಿಯಾಗಿದೆ ಆದರೆ ಶುದ್ಧವಾದ ನೀರನ್ನು ಉಚಿತವಾಗಿ ನೀಡಬೇಕು ಎಂದು ಅಭಿಪ್ರಾಯಪಟ್ಟಿದೆ.

ವೀಕ್ಷಕರು ಮನರಂಜನೆಗಾಗಿ ಸಿನಿಮಾ ಹಾಲ್‌ಗೆ ಭೇಟಿ ನೀಡುತ್ತಾರೆ. ಚಿತ್ರಮಂದಿರದ ಮಾಲೀಕರು ಆಹಾರ ಮತ್ತು ಪಾನೀಯಗಳ ಪ್ರವೇಶವನ್ನು ನಿಯಂತ್ರಿಸುವ ಹಕ್ಕನ್ನು ಹೊಂದಿದ್ದಾರೆ. ಲಭ್ಯವಿರುವ ಪಾನೀಯವನ್ನು ಸೇವಿಸಬೇಕೇ, ಬೇಡವೇ ಎಂಬುದು ಸಂಪೂರ್ಣವಾಗಿ ಚಲನಚಿತ್ರ ಪ್ರೇಕ್ಷಕರ ಆಯ್ಕೆಯ ಮೇಲೆ ಇರುತ್ತದೆ ಎಂದು ಪೀಠ ಹೇಳಿದೆ.

ವೀಕ್ಷಕರು ಚಲನಚಿತ್ರ ಮಂದಿರಕ್ಕೆ ಪ್ರವೇಶಿಸಿದರೆ, ಅವನು/ಅವಳು ಚಿತ್ರಮಂದಿರದ ಮಾಲೀಕರ ನಿಯಮಗಳಿಗೆ ಬದ್ಧವಾಗಿರಬೇಕು ಮತ್ತು ಇದು ಸ್ಪಷ್ಟವಾಗಿ ಥಿಯೇಟರ್ ಮಾಲೀಕರ ವಾಣಿಜ್ಯ ನಿರ್ಧಾರದ ವಿಷಯವಾಗಿದೆ ಎಂದು ನ್ಯಾಯಾಲಯ ತಿಳಿಸಿದೆ.

ಬಹು ಅಂಗಾಂಗ ದಾನದ ಮೂಲಕ 'ಮಾಲತಿ' ಚಿರಾಯು

● ಸಾವಿನಲ್ಲೂ ಏಳು ಮಂದಿಯ ಬಾಳಿಗೆ ಬೆಳಕಾದ ಹಿರಿಯ ಜೀವ ● ಏರ್‌ಲಿಫ್ಟ್ ಮೂಲಕ ಅಪೋಲೋ ಬಿಜಿಎಸ್ ಆಸ್ಪತ್ರೆಯಿಂದ ಸಿಕಂದರಾಬಾದ್‌ನ ಕಿಮ್ಸ್ ಆಸ್ಪತ್ರೆಗೆ ಶ್ವಾಸಕೋಶಗಳ ರವಾನೆ ● 'ಗ್ರೀನ್ ಕಾರಿಡಾರ್' ಮೂಲಕ ಹಲವು ಅಂಗಾಂಗಗಳ ರವಾನೆ



ಅಂಗಾಂಗ ದಾನಿ ಮಾಲತಿ





ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಿಂದ ಸಿಕಂದರಾಬಾದ್‌ನ ಕಿಮ್ಸ್ ಆಸ್ಪತ್ರೆಗೆ ಏರ್‌ಲಿಫ್ಟ್ ಮಾಡುತ್ತಿರುವುದು.

ಮೈಸೂರು,ಜ.3(ಪಿಎಂ)– ಅಂಗಾಂಗ ದಾನದ ಮೂಲಕ ಮೈಸೂರಿನ ಹಿರಿಯ ಜೀವವೊಂದು ಚಿರಾಯು ಆಗಿದೆ. ಆ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆದು ಮೈಸೂರಿನ 61 ವರ್ಷದ ಹಿರಿಯರಾದ ಎಸ್.ಪಿ.ಮಾಲತಿ, ಏಳು ಮಂದಿಯ ಬಾಳಿಗೆ ಬೆಳಕಾಗಿದ್ದಾರೆ.

ಮಾಲತಿಯವರ ಶ್ವಾಸಕೋಶಗಳು, ಎರಡು ಮೂತ್ರಪಿಂಡಗಳು, ಒಂದು ಯಕೃತ್ತು, ಹೃದಯ ಕವಾಟುಗಳು ಮತ್ತು ಕಾರ್ನಿಯಾಗಳನ್ನು ಸೋಮವಾರ ಮೈಸೂರಿನ ಅಪೋಲೊ ಬಿಜಿಎಸ್ ಆಸ್ಪತ್ರೆಯಿಂದ ವಿವಿಧ ಆಸ್ಪತ್ರೆಗಳಿಗೆ ಗ್ರೀನ್ ಕಾರಿಡಾರ್ ವ್ಯವಸ್ಥೆ ಮೂಲಕ ಕಳಿಸಿಕೊಡಲಾಯಿತು.

ನಂಜನಗೂಡು ರಸ್ತೆಯ ಆರ್‌ಎಂಸಿ ಬಳಿ ಅಪಘಾತದಲ್ಲಿ ಗಾಯಗೊಂಡಿದ್ದ ಮಾಲತಿಯವರನ್ನು ಡಿ.31ರಂದು ಮೈಸೂರಿನ ನಿರ್ಮಲಾ ಆಸ್ಪತ್ರೆಯಿಂದ ಅತ್ಯಂತ ಗಂಭೀರ ಸ್ಥಿತಿಯಲ್ಲಿ ಇಲ್ಲಿನ ಅಪೋಲೋ ಬಿಜಿಎಸ್ ಆಸ್ಪತ್ರೆಗೆ ತರಲಾಯಿತು. ಮಾಲತಿಯವರು ತಮ್ಮ ಪತಿಯವರೊಂದಿಗೆ ಸ್ಕೂಟರ್‌ನಲ್ಲಿ ಹಿಂಬದಿ ಸವಾರರಾಗಿ ಪ್ರಯಾಣಿಸುತ್ತಿದ್ದಾಗ, ಇವರ ಸ್ಕೂಟರ್‌ಗೆ ಹಿಂಬದಿಯಿಂದ ಮತ್ತೊಂದು ಸ್ಕೂಟರ್ ಡಿಕ್ಕಿ ಹೊಡೆದ ಪರಿಣಾಮ ಮಾಲತಿಯವರು ಕೆಳಗೆ ಬಿದ್ದಿದ್ದರು. ಈ ವೇಳೆ ಅವರು ತಮ್ಮ ಹೆಲ್ಮೆಟ್ ಲಾಕ್ ಮಾಡಿಕೊಳ್ಳದ ಹಿನ್ನೆಲೆಯಲ್ಲಿ ಅವರ ತಲೆಗೆ ಗಂಭೀರ ಪೆಟ್ಟು ಬಿದ್ದಿತ್ತು.

ಆರಂಭಿಕ ಸಿಟಿ ಸ್ಕ್ಯಾನ್‌ನಿಂದ ಅವರ ಮೆದುಳು ಕಾಂಡ ಊದಿಕೊಂಡಿರುವುದು ಪತ್ತೆಯಾಯಿತು. ತಕ್ಷಣ ಅವರನ್ನು ಜೀವ ರಕ್ಷಕ ವ್ಯವಸ್ಥೆ ಮತ್ತು ತುರ್ತು ಆರೈಕೆಗಾಗಿ ತೀವ್ರ ನಿಗಾ ಘಟಕಕ್ಕೆ (ಐಸಿಯು) ದಾಖಲಿಸಲಾಯಿತು. ಜೀವ ರಕ್ಷಕ ವ್ಯವಸ್ಥೆಯಲ್ಲಿ ಇರಿಸಿದರೂ ಅವರ ಸ್ಥಿತಿ ಅತ್ಯಂತ ಗಂಭೀರವಾಗಿತ್ತು. ಜ.1ರಂದು ಅಪೋಲೋ ಬಿಜಿಎಸ್ ಆಸ್ಪತ್ರೆ ತಜ್ಞವೈದ್ಯರ ತಂಡವು ಮಾಲತಿಯವರ ಸ್ಥಿತಿಗತಿ ಪರಿಶೀಲಿಸಿ, ರಾತ್ರಿ 9.03ಕ್ಕೆ ಅವರ ಮೆದುಳು ನಿಷ್ಕ್ರಿಯವಾಗಿರುವುದನ್ನು ಘೋಷಣೆ ಮಾಡಿತು. ಮಾನವ ಅಂಗಾಂಗ ಕಸಿ ಕಾಯ್ದೆ 1994ರ ಶಿಷ್ಟಾಚಾರದ ಅನುಸಾರ ಅಪೊಲೊ ಬಿಜಿಎಸ್ ಆಸ್ಪತ್ರೆ ವೈದ್ಯರು ಈ ಪ್ರಕ್ರಿಯೆ ನಡೆಸಿದರು.

ಅಪಘಾತಕ್ಕೂ ಮುನ್ನ ಮಾಲತಿಯವರು ಆರೋಗ್ಯದಿಂದ ಇದ್ದ ಹಿನ್ನೆಲೆಯಲ್ಲಿ ಪರೀಕ್ಷೆಗಳ ಮೂಲಕ ಅವರ ಅಂಗಾಂಗಗಳು ದಾನಕ್ಕೆ ಯೋಗ್ಯವಾಗಿವೆ ಎಂಬುದನ್ನು ಖಚಿತಪಡಿಸಿಕೊಳ್ಳಲಾಯಿತು. ನಿಗದಿತ ಶಿಷ್ಟಾಚಾರದಂತೆ ಕುಟುಂಬ ಸದಸ್ಯರೊಂದಿಗೆ ಅಂಗಾಂಗ ದಾನದ ಕುರಿತು ಆಪ್ತ ಸಮಾಲೋಚನೆ ನಡೆಸಲಾಯಿತು. ಬಳಿಕ ಕುಟುಂಬದವರು ಅಂಗಾಂಗ ದಾನಕ್ಕೆ ಸಮ್ಮತಿಸಿದರು.

ಏರ್‌ಲಿಫ್ಟ್‌ನಲ್ಲಿ ರವಾನೆ: ಮಾಲತಿಯವರ ಶ್ವಾಸಕೋಶಗಳನ್ನು ಅಪೋಲೋ ಬಿಜಿಎಸ್ ಆಸ್ಪತ್ರೆಯಿಂದ ಸಿಕಂದರಾಬಾದ್‌ನ ಕಿಮ್ಸ್ ಆಸ್ಪತ್ರೆಗೆ ಏರ್‌ಲಿಫ್ಟ್ ಮೂಲಕ ರವಾನಿಸಲಾಯಿತು. ಇದಕ್ಕೂ ಮುನ್ನ ಆಸ್ಪತ್ರೆಯಿಂದ ಮಂಡಕಳ್ಳಿ ವಿಮಾನ ನಿಲ್ದಾಣದವರೆಗೆ 'ಗ್ರೀನ್ ಕಾರಿಡಾರ್' ವ್ಯವಸ್ಥೆ ಮೂಲಕ ಅಂಬುಲೆನ್ಸ್‌ನಲ್ಲಿ ಶ್ವಾಸಕೋಶಗಳನ್ನು ಲಘು ವಿಮಾನಕ್ಕೆ ತಲುಪಿಸಲಾಯಿತು.

ಅಲ್ಲದೆ, ಹೃದಯ ಕವಾಟಗಳನ್ನು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ಅಂಬುಲೆನ್ಸ್ ಮೂಲಕ 'ಗ್ರೀನ್ ಕಾರಿಡಾರ್' ವ್ಯವಸ್ಥೆ ಮೂಲಕ ರವಾನಿಸಲಾಯಿತು. ಅಂತೆಯೇ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಗೆ ಬಲ ಮೂತ್ರಪಿಂಡ ಹಾಗೂ ಕೆಆರ್ ಆಸ್ಪತ್ರೆಗೆ ಕಾರ್ನಿಯಾಗಳನ್ನು ಕಳುಹಿಸಿಕೊಡಲಾಯಿತು. ಯಕೃತ್ತು ಮತ್ತು ಎಡ ಮೂತ್ರಪಿಂಡವನ್ನು ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆಯಲ್ಲಿ ಬಳಸಿಕೊಳ್ಳಲಾಯಿತು. ಒಟ್ಟಾರೆ ಮಾಲತಿಯವರ ಅಂಗಾಂಗಗಳು ಹಲವರ ಬಾಳಿಗೆ ಬೆಳಕು ನೀಡಿವೆ.

ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆಯು ಈಗ ಬಹು ಅಂಗಾಂಗ ಕಸಿಗಳಿಗೆ ಪರವಾನಗಿ ಪಡೆದಿದೆ. ಅಂಗಾಂಗ ದಾನದ ಉದಾತ್ತ ಉದ್ದೇಶಕ್ಕೆ ಸಮ್ಮತಿಸಿದ ಮೃತ ಮಾಲತಿಯವರ ಕುಟುಂಬಕ್ಕೆ ಆಸ್ಪತ್ರೆಯು ಧನ್ಯವಾದ ಅರ್ಪಿಸುತ್ತದೆ. ಗ್ರೀನ್ ಕಾರಿಡಾರ್ ವ್ಯವಸ್ಥೆ ಮೂಲಕ ಅಂಗಾಂಗ ರವಾನೆಗೆ ಸಹಕರಿಸಿದ ಮೈಸೂರು ನಗರ ಸಂಚಾರ ಪೊಲೀಸ್ ಮತ್ತು ಮಂಡಕಳ್ಳಿ ವಿಮಾನ ನಿಲ್ದಾಣ ಕೆಎಸ್‌ಐಎಸ್‌ಎಫ್ ಪೊಲೀಸ್‌ಗೆ ಅಪೋಲೋ ಬಿಜಿಎಸ್ ಆಸ್ಪತ್ರೆ ಧನ್ಯವಾದಗಳನ್ನು ಸಲ್ಲಿಸುತ್ತದೆ.

–ಎನ್.ಜಿ.ಭರತೀಶ ರೆಡ್ಡಿ, ಉಪಾಧ್ಯಕ್ಷರು, ಯೂನಿಟ್ ಹೆಡ್, ಅಪೋಲೊ ಬಿಜಿಎಸ್ ಆಸ್ಪತ್ರೆ, ಮೈಸೂರು.

ವಿವಿಧ 29 ದೇಶಗಳಲ್ಲಿ ವ್ಯವಸ್ಥೆ ಕಲ್ಪಿಸಿರುವ ಮೆಡಿಕಲ್ ಕಾಲೇಜುಗಳಿಗೆ ಮರಳಿದ ಉಕ್ರೇನ್‌ನಿಂದ ಬಂದಿದ್ದ ಮೈಸೂರು ವಿದ್ಯಾರ್ಥಿಗಳು

ಅನಿಶ್ಚಿತತೆ ಮುಂದುವರಿಕೆ ಹಿನ್ನೆಲೆಯಲ್ಲಿ ಉಕ್ರೇನ್ ಮೆಡಿಕಲ್ ಕಾಲೇಜುಗಳಿಂದಲೇ ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ

ಮೈಸೂರು, ಜ.3(ಎಂಟಿವೈ)– ಯುದ್ಧ ಪೀಡಿತ ಉಕ್ರೇನ್‌ನಿಂದ ಹಿಂದಿರುಗಿರುವ ವೈದ್ಯಕೀಯ ವಿದ್ಯಾರ್ಥಿಗಳ ಭವಿಷ್ಯ ಸಂಬಂಧ ಕೇಂದ್ರ ಸರ್ಕಾರ ಯಾವುದೇ ಸ್ಪಷ್ಟ ನಿಲುವು ಪ್ರಕಟಿಸದಿರುವುದರಿಂದ ಹಲವು ವಿದ್ಯಾರ್ಥಿಗಳು ಅಕಾಡೆಮಿಕ್ ಮೊಬಿಲಿಟಿ ಪ್ರೋಗ್ರಾಂ(ಎಎಂಪಿ) ಮೂಲಕ ಬೇರೆ ದೇಶಗಳಲ್ಲಿ ಉಕ್ರೇನ್ ವೈದ್ಯಕೀಯ ವಿವಿಗಳ ಮೂಲಕವೇ ಶಿಕ್ಷಣ ಮುಂದುವರೆಸಲು ಮುಂದಾಗಿದ್ದರೆ, ಉಕ್ರೇನ್ ವಿವಿಗಳೇ ಬೇರೆ ದೇಶಗಳ ವಿಶ್ವವಿದ್ಯಾಲಯಗಳಲ್ಲಿ ಕಲ್ಪಿಸಿರುವ ಅವಕಾಶ ಬಳಸಿಕೊಳ್ಳಲು ಮುಂದಾಗಿದ್ದಾರೆ.

ರಷ್ಯಾ ದಾಳಿಯಿಂದ ತತ್ತರಿಸಿರುವ ಉಕ್ರೇನ್‌ನಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದ ಮೈಸೂರಿನ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ವಿವಿಧ ರಾಜ್ಯಗಳ ನೂರಾರು ವಿದ್ಯಾರ್ಥಿಗಳು ಸುರಕ್ಷಿತವಾಗಿ ತವರಿಗೆ ಮರಳಿದ್ದರು. ಸುದೀರ್ಘ ಅವಧಿಗೆ ಮುಂದುವರೆದಿರುವ ರಷ್ಯಾ–ಉಕ್ರೇನ್ ಯುದ್ಧದಿಂದಾಗಿ ಉಕ್ರೇನ್‌ನಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದ ವಿದ್ಯಾರ್ಥಿಗಳು ಅಲ್ಲಿಗೆ ಹಿಂದಿರುಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ತಾಯ್ನಾಡಿನಲ್ಲೇ ಶಿಕ್ಷಣ ಮುಂದುವರೆಸಲು ಅವಕಾಶ ನೀಡುವಂತೆ ಕೋರಿದ್ದರು. ಈ ಹಿನ್ನೆಲೆಯಲ್ಲಿ ಸುಪ್ರಿಂ ಕೋರ್ಟ್, ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ(ಎನ್‌ಎಂಸಿ) ಸೂಚನೆ ನೀಡಿ, ಉಕ್ರೇನ್‌ನಿಂದ ಮರಳಿರುವ ಭಾರತೀಯ ವೈದ್ಯಕೀಯ ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ಕ್ರಮ ಕೈಗೊಳ್ಳುವಂತೆ ಸಲಹೆ ನೀಡಿತ್ತು. ಇದಕ್ಕೆ ಸಂಬಂಧಿಸಿದಂತೆ ಕೆಲ ವಿದ್ಯಾರ್ಥಿಗಳ ಪೋಷಕರು ಮಕ್ಕಳ ಭವಿಷ್ಯಕ್ಕಾಗಿ ನೆರವಾಗುವಂತೆ ಕೋರ್ಟ್ ಮೊರೆ ಹೋಗಿದ್ದರು. ಈ ಸಂಬಂಧ ಜನವರಿ 24ರಂದು ನ್ಯಾಯಾಲಯದಿಂದ ಆದೇಶ ಹೊರ ಬೀಳುವ ಸಾಧ್ಯತೆ ಇದೆ. ಆದರೂ, ಹಲವು ವಿದ್ಯಾರ್ಥಿಗಳು ತಮ್ಮ ವೈದ್ಯಕೀಯ ಶಿಕ್ಷಣವನ್ನು ಮುಂದುವರೆಸಲು ಅನ್ಯ ಮಾರ್ಗ ಕಂಡು ಕೊಂಡಿದ್ದಾರೆ.

ಈ ಮಧ್ಯೆ ಉಕ್ರೇನ್‌ನಲ್ಲಿನ ವೈದ್ಯಕೀಯ ವಿಶ್ವವಿದ್ಯಾನಿಲಯಗಳು ತಮ್ಮಲ್ಲಿ ಶಿಕ್ಷಣ ಪಡೆಯುತ್ತಿದ್ದ ಅನ್ಯ ದೇಶಗಳ ವಿದ್ಯಾರ್ಥಿಗಳ ಹಿತಕಾಯಲು ಮುಂದಾಗಿವೆ. ಯುದ್ಧದ ಸಂದರ್ಭದಲ್ಲಿಯೂ ಅಜ್ಞಾತಸ್ಥಳದಿಂದಲೇ ಆನ್‌ಲೈನ್ ಕ್ಲಾಸ್ ನಡೆಸುವ ಮೂಲಕ ವಿದ್ಯಾರ್ಥಿಗಳ ಭವಿಷ್ಯ ಕಾಯಲು ಪ್ರಯತ್ನ ನಡೆಸಿದ್ದವು. ಈ ಮಧ್ಯೆ ಕಳೆದ 3–4 ತಿಂಗಳಿಂದ ಉಕ್ರೇನ್ ವಿವಿಗಳು ನೆರೆ ರಾಷ್ಟ್ರಗಳಲ್ಲಿ ಕಟ್ಟಡ ಬಾಡಿಗೆಗೆ ಪಡೆದು ವಿದ್ಯಾರ್ಥಿಗಳ ಶಿಕ್ಷಣ ಮುಂದುವರೆಸಲು ಅವಕಾಶ ಕಲ್ಪಿಸಲು ಕ್ರಮ ಕೈಗೊಂಡಿದ್ದವು. ಆದರೆ, ಆನ್‌ಲೈನ್ ತರಗತಿಗಳನ್ನೂ ಮುಂದುವರೆಸಲಾಗಿತ್ತು. ಅಂತಿಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸೀಮಿತಗೊಂಡಂತೆ ಅಕಾಡೆಮಿಕ್ ಮೊಬಿಲಿಟಿ ಪ್ರೋಗ್ರಾಂ(ಎಎಂಪಿ) ಮೂಲಕ ಶಿಕ್ಷಣ ನೀಡಲಾಗುತ್ತಿದ್ದು, ಆ ದೇಶಕ್ಕೆ ವಿದ್ಯಾರ್ಥಿಗಳು ಹಿಂದಿರುಗಲು ಬೇಕಾದ ವೀಸಾ ಸಂಬಂಧ ನೆರವು ನೀಡಿದೆ. ಇದರಿಂದ ಮೈಸೂರಿನ ಜನತಾನಗರದ ನಿವಾಸಿ ಪುಟ್ಟಮಾದೇಗೌಡರ ಪುತ್ರ ಅಂತಿಮ ವರ್ಷದ ವೈದ್ಯಕೀಯ ವಿದ್ಯಾರ್ಥಿ ಗಣೇಶ್ ಉಜ್ಬೇಕಿಸ್ತಾನ್‌ನಲ್ಲಿ ಶಿಕ್ಷಣ ಮುಂದುವರೆಸಲು ಪ್ರಯಾಣಿಸಿದ್ದಾರೆ.

ಉಜ್ಬೇಕಿಸ್ತಾನ್‌ನಲ್ಲಿ ಉಕ್ರೇನ್‌ನ ಝಪೋರಿಝಿಯಾ ಸ್ಟೇಟ್ ಮೆಡಿಕಲ್ ಯೂನಿವರ್ಸಿಟಿಯು, ಕಟ್ಟಡ ಬಾಡಿಗೆಗೆ ಪಡೆದು ಅಂತಿಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಶಿಕ್ಷಣ ಮುಂದುವರೆಸಲು ಅವಕಾಶ ಕಲ್ಪಿಸಿದೆ. ಇದರಿಂದ ಎಎಂಪಿ ಕಾರ್ಯಕ್ರಮದ ಮೂಲಕ ಭಾರತದ ಸುಮಾರು 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ಬೇರೆ ಬೇರೆ ದೇಶಗಳ 150 ಮಂದಿ ಅಂತಿಮ ವರ್ಷದ ವಿದ್ಯಾರ್ಥಿಗಳು ಶಿಕ್ಷಣ ಪಡೆದುಕೊಳ್ಳುತ್ತಿದ್ದಾರೆ.

29 ದೇಶಗಳಿಗೆ ವರ್ಗಾವಣೆಗೆ ಅವಕಾಶ: ಉಕ್ರೇನ್‌ನಲ್ಲಿನ ವಿವಿಧ ವಿವಿಗಳಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದ ಮೊದಲ, ದ್ವಿತೀಯ, ತೃತೀಯ ಹಾಗೂ ನಾಲ್ಕನೇ ವರ್ಷದ ವಿದ್ಯಾರ್ಥಿಗಳು ಪೋಲೆಂಡ್, ಆಸ್ಟ್ರಿಯಾ, ಜೆಕ್ ರಿಪಬ್ಲಿಕ್, ಫ್ರಾನ್ಸ್, ಜಾರ್ಜಿಯಾ, ಕಝಾಕಿಸ್ತಾನ್, ಲಿಥುವೇನಿಯಾ, ಮೊಲ್ಡೊವಾ, ಸ್ಲೋವಾಕಿಯಾ, ಸ್ಪೇನ್, ಉಜ್ಬೇಕಿಸ್ತಾನ್, ಯುಎಸ್, ಇಟಲಿ, ಬೆಲ್ಜಿಯಂ, ಈಜಿಪ್ಟ್, ಬೆಲಾರಸ್, ಲಾಟ್ವಿಯಾ, ಕಿರ್ಗಿಸ್ತಾನ್, ಗ್ರೀಸ್, ರೊಮೇನಿಯಾ, ಸ್ವೀಡನ್, ಇಸ್ರೇಲ್, ಇರಾನ್, ಅಜೆರ್ಬೈಜಾನ್, ಬಲ್ಗೇರಿಯಾ, ಜರ್ಮನಿ, ಟರ್ಕಿ, ಕ್ರೊಯೇಷಿಯಾ ಮತ್ತು ಹಂಗೇರಿ ಸೇರಿದಂತೆ 29 ದೇಶಗಳಲ್ಲಿ ವೈದ್ಯಕೀಯ ವಿಶ್ವವಿದ್ಯಾಲಯಗಳಿಗೆ ತಾತ್ಕಾಲಿಕವಾಗಿ ವರ್ಗಾವಣೆ ಮಾಡಿಕೊಳ್ಳಲು ಅನುಮತಿ ದೊರೆತಿದೆ. ಹಾಗಾಗಿ ಅಂತಿಮ ವರ್ಷದ ವಿದ್ಯಾರ್ಥಿಗಳು ಹೊರತುಪಡಿಸಿ ಉಳಿದ ವಿದ್ಯಾರ್ಥಿಗಳು ಬೇರೆ ದೇಶಗಳ ವಿವಿಗಳಿಗೆ ವರ್ಗಾವಣೆ ಮಾಡಿಸಿಕೊಂಡಿದ್ದಾರೆ. ಮೈಸೂರಿನ ವಿದ್ಯಾರ್ಥಿನಿ ಐಸಿರಿ, ಜಾರ್ಜಿಯ ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆಗೊಂಡಿದ್ದಾರೆ.

ಎಲ್ಲರ ಚಿತ್ತ ನ್ಯಾಯಾಲಯದತ್ತ: ಉಕ್ರೇನ್‌ನಿಂದ ವಾಪಸ್ಸಾಗಿರುವ ಪ್ರಥಮ, ದ್ವಿತೀಯ, ತೃತೀಯ ಮತ್ತು ನಾಲ್ಕನೇ ವರ್ಷದ ವಿದ್ಯಾರ್ಥಿಗಳಿಗೆ ಎಎಂಪಿ ಕಾರ್ಯಕ್ರಮದಲ್ಲಿ ಅವಕಾಶ ನೀಡಿಲ್ಲ. ಆದರೆ, ಆನ್‌ಲೈನ್ ತರಗತಿಗೆ ಹಾಜರಾಗುತ್ತಿದ್ದಾರೆ. ಕೆಲವರು ಮಾತ್ರ ಇತರೆ ದೇಶಗಳಿಗೆ ವರ್ಗಾವಣೆ ಮಾಡಿಸಿಕೊಂಡಿದ್ದಾರೆ. ಇನ್ನಷ್ಟು ಮಂದಿ ವಿದ್ಯಾರ್ಥಿಗಳು ಸುಪ್ರೀಂಕೋರ್ಟ್ ಆದೇಶದ ನಿರೀಕ್ಷೆಯಲ್ಲಿದ್ದಾರೆ. 2022ರ ಮಾರ್ಚ್‌ನಲ್ಲಿ ವಾಪಸ್ಸಾಗಿರುವ ವಿದ್ಯಾರ್ಥಿಗಳಲ್ಲಿ ಇನ್ನು ಸಾಕಷ್ಟು ವಿದ್ಯಾರ್ಥಿಗಳು ತೂಗುಯ್ಯಾಲೆಯಲ್ಲಿದ್ದಾರೆ.

ನೆರವಾಗಲಿಲ್ಲ: ವಿದ್ಯಾರ್ಥಿನಿ ಐಸಿರಿ ಅವರ ತಾಯಿ ಗೀತಾ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಉಕ್ರೇನ್‌ನಿಂದ ವಾಪಸ್ಸಾಗಿರುವ ವೈದ್ಯಕೀಯ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ನೆರವು ನೀಡುತ್ತದೆ ಎಂಬ ನಿರೀಕ್ಷೆ ಇತ್ತು. ಆದರೆ, ಇದುವರೆಗೂ ಯಾವುದೇ ಪ್ರತಿಕ್ರಿಯೆ ಬರಲಿಲ್ಲ. ಮಕ್ಕಳ ಭವಿಷ್ಯಕ್ಕಾಗಿ ನಾವು ಉಕ್ರೇನ್ ವಿವಿಯಿಂದ ಜಾರ್ಜಿಯ ವಿವಿಗೆ ವರ್ಗಾವಣೆ ಮಾಡಿಸಿಕೊಂಡಿದ್ದೇವೆ. ವೀಸಾ ಸಿಗುವುದು ಒಂದು ವಾರ ವಿಳಂಬವಾಯಿತು. ಇನ್ನೆರಡು ದಿನದಲ್ಲಿ ಮಗಳು ಜಾರ್ಜಿಯ ದೇಶಕ್ಕೆ ಪ್ರಯಾಣ ಬೆಳೆಸಲಿದ್ದಾರೆ. ಮೈಸೂರಲ್ಲಿದ್ದಾಗ ಸಮಯ ವ್ಯರ್ಥವಾಗದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಸುಯೋಗ್ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಎಸ್.ಪಿ.ಯೋಗಣ್ಣ ಮತ್ತು ನ್ಯೂರೋ ಸರ್ಜನ್ ಡಾ.ಜನಾರ್ದನ್ ಅವರು ನನ್ನ ಮಗಳಿಗೆ ನೆರವಾಗಿ, ಆಸ್ಪತ್ರೆ ಮತ್ತು ಕ್ಲಿನಿಕ್‌ನಲ್ಲಿ ಅಧ್ಯಯನಕ್ಕೆ ಸಹಕರಿಸಿದರು ಎಂದರು.

ಬ್ರಿಡ್ಜ್ ಕೋರ್ಸ್ 511 ವಿದ್ಯಾರ್ಥಿಗಳು ಹಾಜರು: ಉಕ್ರೇನ್‌ನಿಂದ ಬಂದ ವೈದ್ಯಕೀಯ ವಿದ್ಯಾರ್ಥಿಗಳಿಗೆ ನೆರವು ನೀಡಲು 2022ರ ಮೇ.ನಲ್ಲಿ ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನಲ್ಲಿ ಉಚಿತ ಬ್ರಿಡ್ಜ್ ಕೋರ್ಸ್ ನಡೆಸಲಾಗಿತ್ತು. ಅದರಲ್ಲಿ 511 ವಿದ್ಯಾರ್ಥಿಗಳು ಹೆಸರು ನೋಂದಾಯಿಸಿಕೊಂಡಿದ್ದರು. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ನಿರ್ದೇಶನದ ಮೇರೆಗೆ ಮಾನವೀಯ ನೆಲೆಯಲ್ಲಿ ಬ್ರಿಡ್ಜ್ ಕೋರ್ಸ್ ನೀಡಲಾಗುತ್ತಿತ್ತು ಎಂದು ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಸಮುದಾಯ ವೈದ್ಯ ವಿಭಾಗದ ಸಹ ಪ್ರಾಧ್ಯಾಪಕ ಡಾ.ಡಿ.ಸುನೀಲ್ ಕುಮಾರ್ ತಿಳಿಸಿದರು.

ಈ ಕೋರ್ಸ್‌ಗೆ ಕರ್ನಾಟಕವಲ್ಲದೆ, ದೆಹಲಿ, ಮುಂಬೈ, ಗುಜರಾತ್ ಮತ್ತು ಇತರ ಸ್ಥಳಗಳ ವಿದ್ಯಾರ್ಥಿಗಳು ಹಾಜರಾಗುತ್ತಿದ್ದರು. 511 ವಿದ್ಯಾರ್ಥಿಗಳಲ್ಲಿ 321 ವಿದ್ಯಾರ್ಥಿಗಳು ಕರ್ನಾಟಕದವರು. ಥಿಯರಿ ಮತ್ತು ಪ್ರಾಕ್ಟಿಕಲ್ ಎರಡನ್ನೂ ನಡೆಸಲಾಯಿತು. ಸ್ಕಿಲ್, ಲ್ಯಾಬ್ ಮತ್ತು ವರ್ಚುವಲ್ ಕೇಸ್ ಸನ್ನಿವೇಶವನ್ನು ಬಳಸಿಕೊಂಡು ಕೌಶಲ್ಯ ತರಬೇತಿಯೊಂದಿಗೆ ಕ್ಲಿನಿಕಲ್ ವೀಕ್ಷಣೆಯನ್ನು ಒದಗಿಸಲಾಗಿದೆ. ಎಲ್ಲಾ ಪ್ರಯೋಗಾಲಯ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗಿದೆ. ಈ ವಿದ್ಯಾರ್ಥಿಗಳಿಗೆ ತಾತ್ಕಾಲಿಕ ಶೈಕ್ಷಣಿಕ ನೆರವಾಗಿ ಬ್ರಿಡ್ಜ್ ಕೋರ್ಸ್ ಅನ್ನು ನೀಡಲಾಯಿತು ಎಂದು ಅವರು ವಿವರಿಸಿದರು.

ವೈದ್ಯಕೀಯ ಶಿಕ್ಷಣವನ್ನೇ ತ್ಯಜಿಸಿದ ವಿದ್ಯಾರ್ಥಿನಿ



ಸರ್ಕಾರ ನೆರವಿಗೆ ಬಾರದ ಹಿನ್ನೆಲೆಯಲ್ಲಿ ಉಕ್ರೇನ್‌ನ ಬುಕೊವಿನಿಯನ್ ಸ್ಟೇಟ್ ಮೆಡಿಕಲ್ ಯೂನಿವರ್ಸಿಟಿಯಲ್ಲಿ (ಬಿಎಸ್‌ಎಂಯು) ಎಂಬಿಬಿಎಸ್ ಎರಡನೇ ವರ್ಷ ವ್ಯಾಸಂಗ ಮಾಡುತ್ತಿದ್ದ ಮೈಸೂರಿನ ಪ್ರಿಯಾಂಕಾ ಗುರುಮಲ್ಲೇಶ್ ಈಗ ವೈದ್ಯಕೀಯ ಶಿಕ್ಷಣವನ್ನು ತ್ಯಜಿಸಿದ್ದಾರೆ. ಡಿಸೈನಿಂಗ್‌ನಲ್ಲಿ ಆಸಕ್ತಿ ಹೊಂದಿ, ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯಕ್ಕೆ ಸೇರಿದ್ದಾರೆ.

ಈ ಕುರಿತು ಬಿಲ್ಡರ್ ಆಗಿರುವ ಪ್ರಿಯಾಂಕ ಅವರ ತಂದೆ ಗುರುಮಲ್ಲೇಶ್ ಮಾತನಾಡಿ, ಅಕಾಡೆಮಿಕ್ ಮೊಬಿಲಿಟಿ ಕಾರ್ಯಕ್ರಮಕ್ಕಾಗಿ ನಾವು ಅವಳನ್ನು ಯಾವುದೇ 29 ದೇಶಗಳಿಗೆ ಕಳುಹಿಸಲಿಲ್ಲ. ಉಕ್ರೇನ್‌ನಲ್ಲಿದ್ದಾಗ ಆಗಿರುವ ಕಹಿ ಅನುಭವ ಸಾಕಾಗಿದೆ. ಕೋರ್ಸ್ ಮುಂದುವರೆಸುವ ಕುರಿತು ಅನಿಶ್ಚಿತತೆ ಕಾಡುತ್ತಿದೆ. ಮತ್ತೆ ವಿದೇಶಕ್ಕೆ ಕಳುಹಿಸಿ ಅಪಾಯ ಎದುರಿಸಲು ನಾವು ಬಯಸುವುದಿಲ್ಲ. ಮಗಳಿಗೆ ವೈದ್ಯಕೀಯ ಶಿಕ್ಷಣವನ್ನು ಮುಂದುವರಿಸಬೇಕೆಂದು ಬಯಸಿದ್ದೆವು. ಆದರೆ ವಿಧಿ ಬೇರೆಯದೇ ಇಚ್ಛಿಸಿತ್ತು ಆಕೆ ಸುರಕ್ಷಿತವಾಗಿ ಭಾರತಕ್ಕೆ ಮರಳಿ ಬಂದಿರುವುದು ನನಗೆ ಖುಷಿ ತಂದಿದೆ. ಅವಳ ಎರಡು ವರ್ಷ ಸಮಯ ಹಾಗೂ ಶುಲ್ಕ ಪಾವತಿಸಿದ 17 ಲಕ್ಷ ರೂ. ವ್ಯರ್ಥವಾಯಿತು. ಆದರೆ ಈಗ ಮಗಳು ಖುಷಿ ಯಾಗಿದ್ದಾಳೆ. ಆಕೆ ಡಿಸೈನಿಂಗ್‌ನಲ್ಲಿ ಆಸಕ್ತಿ ಇದ್ದು, ಅದೇ ಕ್ಷೇತ್ರದಲ್ಲಿ ಮುಂದುವರೆಯಲಿದ್ದಾಳೆ ಎಂದರು.

ಉದ್ಯಮಿ ಪ್ರದೀಪ್‌ದು ಆತ್ಮಹತ್ಯೆಯಲ್ಲ; ಕೊಲೆ

● ಕಾಂಗ್ರೆಸ್ ಗಂಭೀರ ಆರೋಪ ● ಪ್ರದೀಪ್ ನಿವಾಸಕ್ಕೆ ಭೇಟಿ ನೀಡಿದ ಕಾಂಗ್ರೆಸ್ ನಾಯಕರು

ಬೆಂಗಳೂರು,ಜ.3(ಕೆಎಂಶಿ)–ಉದ್ಯಮಿ ಪ್ರದೀಪ್‌ದು ಆತ್ಮಹತ್ಯೆ ಅಲ್ಲ, ಅದೊಂದು ಕೊಲೆ ಎಂದು ಕಾಂಗ್ರೆಸ್ ಆರೋಪಿಸಿದೆ.

ರಾಜ್ಯ ಉಸ್ತುವಾರಿ ಹೊಣೆ ಹೊತ್ತ ಎಐಸಿಸಿಯ ಪ್ರಧಾನ ಕಾರ್ಯದರ್ಶಿ ಸುರ್ಜೇವಾಲಾ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಪ್ರದೀಪ್ ನಿವಾಸಕ್ಕೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟ ಸರ್ಕಾರದಿಂದ ಆಗುತ್ತಿರುವ ಸಾವುಗಳು ಇವೆಲ್ಲಾ.

ಶೇಕಡ 40ರಷ್ಟು ಕಮಿಷನ್‌ನಿಂದ ಬಿಜೆಪಿ ಕಾರ್ಯಕರ್ತರೇ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಪ್ರದೀಪ್ ಸಾವೂ ಕೂಡ ಆತ್ಮಹತ್ಯೆ ಅಲ್ಲ. ಇದು ಸರ್ಕಾರವನ್ನಾಳುತ್ತಿರುವ ಪ್ರತಿನಿಧಿಗಳು ಮಾಡಿರುವ ಕೊಲೆ ಎಂದು ದೂರಿದರು. ಸಂತೋಷ್ ಪಾಟೀಲ್ ಕೂಡ ಬಿಜೆಪಿ ಲೀಡರ್ ಆಗಿದ್ದ. ಅವನಿಗೂ ಹಣಕಾಸಿನ ಸಮಸ್ಯೆ ಆಗಿತ್ತು. ಪ್ರಸಾದ್ ಸಾವಿಗೂ ಹಣಕಾಸಿನ ಸಮಸ್ಯೆಯೇ ಕಾರಣವಾಗಿತ್ತು

ಬಿಜೆಪಿ ನಾಯಕರು ಯಾಕೆ ಹಣಕಾಸಿನ ವ್ಯವಹಾರಗಳಲ್ಲಿ ತಲೆ ಹಾಕುತ್ತಿದ್ದಾರೆ. ಇವರ ಮಗಳ, ಹೆಂಡತಿಯ ಕಣ್ಣೀರು ಒರೆಸುವುದಕ್ಕೆ ಸರ್ಕಾರದ ಕೈಲಿ ಸಾಧ್ಯ ಇದೆಯಾ. ಭ್ರಷ್ಟಾಚಾರದಿಂದಾಗಿಯೇ ಇದೆಲ್ಲ ಆಗ್ತಾ ಇದೆ. ಪ್ರದೀಪ್ ಕೊಲೆಗೆ ಕಾರಣ ಆದವರಿಗೆ ಸರ್ಕಾರ ಶಿಕ್ಷೆ ಕೊಡಬೇಕು. ಅದು ಎಷ್ಟೇ ಪ್ರಭಾವಿಗಳಾಗಿದ್ದರೂ ಅವರಿಗೆ ಶಿಕ್ಷೆ ಆಗಬೇಕು. ಅವರನ್ನು ಬಂಧಿಸಿ, ಕಂಬಿ ಹಿಂದೆ ಕಳಿಸಬೇಕು.

ಇದೇ ಸಂದರ್ಭದಲ್ಲಿ ಮಾತನಾಡಿದ ಸಿದ್ದರಾಮಯ್ಯ, ಪ್ರದೀಪ್ ಪತ್ನಿ ತಮ್ಮ ಪತಿಗೆ ನ್ಯಾಯ ಕೊಡಿಸಿ ಅಂತ ಕೇಳಿದ್ದಾರೆ. 1.5 ಕೋಟಿ ನಾವು ಇನ್ವೆಸ್ಟ್ ಮಾಡಿದ್ವಿ ಒಂದೇ ಒಂದು ಪೈಸೆ ಲಾಭ ಬಂದಿಲ್ಲ. ನಮ್ಮ ಹಣ ವಾಪಸ್ ಕೊಡಿ ಅನ್ನೋದು ಇವರ ವಾದ. ಲಿಂಬಾವಳಿ ಈ ಭಾಗದ ಶಾಸಕರು. ಸೆಟ್ಲ್‌ಮೆಂಟ್‌ಗೆ ಮಧ್ಯೆ ಪ್ರವೇಶ ಮಾಡಿದ್ದಾರೆ. ಡೆತ್‌ನೋಟ್‌ನಲ್ಲಿ 6 ಜನರ ಹೆಸರು ಇದೆ. ಲಿಂಬಾವಳಿ ಹೆಸರು ಇದೆ. ಈಗಾಗಲೇ ಎಫ್‌ಐಆರ್ ಆಗಿದೆ ಪೊಲೀಸರು ಹಣವನ್ನು ವಾಪಸ್ ಕೊಡಿಸಬೇಕು. ಕೂಡಲೇ ಎಲ್ಲರನ್ನು ಅರೆಸ್ಟ್ ಮಾಡಬೇಕು.

ಸಾವಿಗೆ ಕಾರಣರಾದವರ ಮೇಲೆ ಕಾನೂನು ಕ್ರಮ ಆಗಬೇಕು. ಶಿಕ್ಷೆ ಆಗುವಂತೆ ಮಾಡಬೇಕು. ಶಾಸಕ ಇರಲಿ ಯಾರೇ ಇರಲಿ. ತಪ್ಪು ಯಾರೇ ಮಾಡಿದ್ದರೂ ಅದು ತಪ್ಪು. ಕಾನೂನು ಪ್ರಕಾರ ಕ್ರಮ ಆಗಬೇಕು. ಶಾಸಕರನ್ನು ಅರೆಸ್ಟ್ ಮಾಡಬೇಕು. ಇಲ್ಲದೆ ಹೋದರೆ ಸಾಕ್ಷಿ ನಾಶ ಮಾಡಬಹುದು. ಪೊಲೀಸರು ಅವರ ಮನೆಯವರ ಮೊಬೈಲ್ ಕೇಳುತ್ತಿದ್ದಾರಂತೆ. ಹೀಗೆಲ್ಲ ಮಾಡೋದು ಸರಿಯಲ್ಲ. ಗುತ್ತಿಗೆದಾರ ಸಂತೋಷ್ ಪಾಟೀಲ್ ನನ್ನ ಸಾವಿಗೆ ಈಶ್ವರಪ್ಪ ಕಾರಣ ಎಂದು ಹೇಳಿದ್ದರು. 3 ತಿಂಗಳಲ್ಲಿ ಬಿ ರಿಪೋರ್ಟ್ ಕೊಟ್ಟರು. ಆ ಪರಿಸ್ಥಿತಿ ಈ ಕೇಸ್‌ನಲ್ಲಿ ಆಗಬಾರದು.

ಸರ್ಕಾರ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಬೇಕು. ಈ ಸರಕಾರದಲ್ಲಿ ಅನೇಕ ಜನ ಸಾಯೋದು, ದಯಾ ಮರಣ ಕೋರೋದು ಆಗುತ್ತಿದೆ. ಇದಕ್ಕೆ ಭ್ರಷ್ಟಾಚಾರ ಕಾರಣ. ಭ್ರಷ್ಟಾಚಾರದ ವಿರುದ್ಧ ಕ್ರಮ ಆಗದೆ ಇರುವುದಕ್ಕೆ ಹೀಗೆ ಆಗುತ್ತಿದೆ. ಈ ಕೇಸ್‌ನಲ್ಲಿ ಪ್ರದೀಪ್ ಕುಟುಂಬಕ್ಕೆ ನ್ಯಾಯ ಕೊಡಿಸಬೇಕು ಎಂದರು.



ಮೈಸೂರು ನಗರದ ಅನಂತಗೀತ ವಿದ್ಯಾಲಯದಲ್ಲಿ ವಿಜ್ಞಾನ ಮತ್ತು ಚಿತ್ರಕಲಾ ಮೇಳ ಆಯೋಜಿಸಲಾಗಿತ್ತು. ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಈ ವೇಳೆ ಪ್ರಾಂಶುಪಾಲ ಶ್ರೀಕಾಂತ್ ಅಮರನಾಥ್, ಉಪ ಪ್ರಾಂಶುಪಾಲ ಹರದೂರು ಲೋಕೇಶ್, ಶಿಕ್ಷಕರಾದ ಸ್ಮಿತಾ, ಪ್ರೇಮ, ಶಿಲ್ಪ ಹಾಗೂ ವಿಜ್ಞಾನ ಸಂಯೋಜಕಿ ಉಷಾ ಹಾಜರಿದ್ದರು.

ಮತದಾರರ ಚೀಟಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಲು ಉಚಿತ ಶಿಬಿರ

ಮೈಸೂರು, ಜ. 3–ಮೈಸೂರಿನ ಅಶೋಕ ರಸ್ತೆಯಲ್ಲಿರುವ ಮಸೀದಿ–ಇ–ಅಜ಼ಾಮ್ ಮರ್ಕಾಜ಼್ ಅಹಲೆ ಸುನ್ನತ್–ವಲ್–ಜಮಾತ್‌ನ ಅಜ಼ಮ್ ಮಾಹಿತಿ ಕೇಂದ್ರದ ವತಿಯಿಂದ ಜ.1 ಮತ್ತು 5ರಂದು ಬೆಳಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರು ಸೇರಿಸಲು, ತಿದ್ದುಪಡಿಗಳನ್ನು ಮಾಡಲು ಹಾಗೂ ಮತದಾರರ ಚೀಟಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಲು ಉಚಿತ ಶಿಬಿರವನ್ನು ಆಯೋಜಿಸಲಾಗಿದೆ. ನಗರಪಾಲಿಕಾ ವಾರ್ಡ್ ನಂ.26 ಮತ್ತು 27ರ ನಿವಾಸಿಗಳು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಕೋರಲಾಗಿದೆ.

ಪಂಚಮಸಾಲಿ, ಒಕ್ಕಲಿಗ ಸಮುದಾಯಕ್ಕೆ ಮೀಸಲಾತಿ ಹೆಚ್ಚಳ ಬರೀ ರಾಜಕೀಯ ಗಿಮಿಕ್

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಆರೋಪ



ಮೈಸೂರು, ಜ.3(ಎಂಟಿವೈ)–ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ರಾಜಕೀಯ ಲಾಭದ ಏಕೈಕ ಉದ್ದೇಶದಿಂದ ರಾಜ್ಯ ಸರ್ಕಾರ ಪಂಚಮಸಾಲಿ ಮತ್ತು ಒಕ್ಕಲಿಗ ಸಮುದಾಯಕ್ಕೆ ಮೀಸಲಾತಿ ಕಲ್ಪಿಸುವ ಸಂಬಂಧ ರಾಜಕೀಯ ಗಿಮಿಕ್ ಮಾಡುತ್ತಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಆರೋಪಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ರಾಜಕೀಯ ಲಾಭ ಮಾಡಿಕೊಳ್ಳಲು ಬಿಜೆಪಿ ಹಲವು ತಂತ್ರಗಾರಿಕೆ ನಡೆಸುತ್ತಲೇ ಇದೆ. ಅದರ ಒಂದು ಭಾಗವಾಗಿ ಮೀಸಲಾತಿ ಅಸ್ತ್ರವನ್ನು ಪ್ರಯೋಗಿಸಿದೆ. ಅದರಲ್ಲಿ ಪ್ರಬಲ ಸಮುದಾಯಗಳಾದ ಪಂಚಮಸಾಲಿ ಸಮುದಾಯವನ್ನು 3ಬಿಯಿಂದ 2ಡಿಗೆ, ಒಕ್ಕಲಿಗ ಸಮುದಾಯವನ್ನು 3ಎ ಯಿಂದ 2ಸಿ ಎಂದು ಹೊಸ ಪ್ರವರ್ಗ ಸೃಷ್ಟಿಸಲಾಗಿದೆ. 2ಸಿಗೆ ಶೇ.3ರಷ್ಟು ಮತ್ತು ಪಂಚಮಸಾಲಿ ಸಮುದಾಯಕ್ಕೆ ಶೇ.4ರಷ್ಟು ಇಡಬ್ಲ್ಯೂಎಸ್ ಕೋಟಾದಿಂದ ಮೀಸಲಾತಿ ಹೆಚ್ಚಳ ಮಾಡುವುದಾಗಿ ಹೇಳಿದೆ. ಆದ್ರೆ, ಸಂವಿಧಾನ ಪರಿಚ್ಛೇದ 15(6) ಹಾಗೂ 16(6)ರ ಪ್ರಕಾರ ಇಡಬ್ಲ್ಯೂಎಸ್ ಕೋಟಾದಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ನೀಡುತ್ತಿಲ್ಲವೆಂದು ಹೇಳಿದೆ. ಒಕ್ಕಲಿಗರು ಮತ್ತು ಪಂಚಮಸಾಲಿಗಳು ಒಬಿಸಿ ಕೆಟಗರಿಯಲ್ಲಿ ಬರುವುದರಿಂದ ಇಡಬ್ಲ್ಯೂಎಸ್ ಕೋಟಾದಲ್ಲಿ ನೀಡಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ಸರ್ಕಾರ ಸುಳ್ಳು ಹೇಳುತ್ತಿದೆ ಎಂದು ಕಿಡಿಕಾರಿದರು. ಈ ಎರಡು ವರ್ಗಕ್ಕೆ ಇಡಬ್ಲ್ಯೂಎಸ್ ಕೋಟಾದಲ್ಲಿ ಮೀಸಲಾತಿ ನೀಡಲು ಕಾನೂನಿನಲ್ಲಿ ಅವಕಾಶವಿಲ್ಲ. ಮೀಸಲಾತಿ ನೀಡುವ ಸರ್ಕಾರದ ನಿಲುವನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುವಂತಹ ಅವಕಾಶವನ್ನು ಬಿಜೆಪಿಗರೇ ಮಾಡಿಕೊಡುತ್ತಿದ್ದಾರೆ. ನ್ಯಾಯಾಲಯದಲ್ಲಿ ಇದು ಊರ್ಜಿತವಾಗುವುದಿಲ್ಲ. ಬಳಿಕ ಕಾಂಗ್ರೆಸ್ ವಿರುದ್ಧ ದೂರುತ್ತಾರೆ. ಬಿಜೆಪಿಗರ ಮನೆಯಲ್ಲಿ ಮದುವೆ ಮತ್ತು ಮಕ್ಕಳಾದರು ಕಾಂಗ್ರೆಸ್ ಕಾರ್ಯಕರ್ತರೇ ಕಾರಣ ಎನ್ನುವ ಪರಿಸ್ಥಿತಿ ನಿರ್ಮಾಣ ಮಾಡುತ್ತಾರೆ ಎಂದು ಕಿಡಿಕಾರಿದರು.

ಬಿಎಸ್‌ವೈ ಬಿಟ್ಟು ಬಿಜೆಪಿ ಕಟ್ಟುವ ಪ್ರಯತ್ನ: ಮಂಡ್ಯದಲ್ಲಿ ಅಮಿತ್ ಷಾ ನೇತೃತ್ವದಲ್ಲಿ ಜನ ಸಂಕಲ್ಪ ಸಮಾವೇಶಕ್ಕೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಗೈರಾಗಿದ್ದಾರೆ. ಅಮಿತ್ ಶಾ ಅವರ ನಿರ್ದೇಶನದ ಮೇಲೆ ಪ್ರಹ್ಲಾದ್ ಜೋಷಿ ಅವರ ಕಡೆಯಿಂದ ಯಡಿಯೂರಪ್ಪ ಅವರನ್ನು ದೂರವಿಡುವ ಸೂಚನೆ ಮೇರೆಗೆ ಯಡಿಯೂರಪ್ಪ ಗೈರಾಗಿದ್ದಾರೆ ಎಂಬ ಮಾಹಿತಿ ಇದೆ. ಇದನ್ನು ಯಡಿಯೂರಪ್ಪ ಅವರು ಸ್ಪಷ್ಟಪಡಿಸಬೇಕು. ರಾಜ್ಯದಲ್ಲಿ ಯಡಿಯೂರಪ್ಪ ಅವರ ಕುಟುಂಬವನ್ನು ದೂರವಿಟ್ಟು ಬಿಜೆಪಿ ಕಟ್ಟಲು ಹೊರಟಿದ್ದಾರೆ. ಆ ಸಮುದಾಯ ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಲೀನ ಹುನ್ನಾರ: ಕೆಎಂಎಫ್ ಹಾಲು ಒಕ್ಕೂಟವನ್ನು ಅಮುಲ್‌ನೊಂದಿಗೆ ವಿಲೀನ ಮಾಡಲು ಸರ್ಕಾರವೇ ಹುನ್ನಾರ ನಡೆಸಿದೆ. ಅಮಿತ್ ಶಾ ನೇತೃತ್ವದಲ್ಲಿ ಅಸ್ಸಾಂನಲ್ಲಿ ನಡೆದ ಸಭೆಯಲ್ಲಿ ದೇಶದ ನಾಲ್ಕು ಪ್ರಮುಖ ಹಾಲು ಒಕ್ಕೂಟಗಳನ್ನು ವಿಲೀನ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ.

ರಾಜ್ಯದ ಬಿಜೆಪಿ ನಾಯಕರು ವಿಲೀನ ಮಾಡುವುದಿಲ್ಲ ಎಂದು ಹೇಳುತ್ತಿದ್ದಾರೆ. ಆದರೆ ವಾಸ್ತವ ಪರಿಸ್ಥಿತಿಯೇ ಬೇರೆಯಿದ್ದು, ವಿಲೀನಕ್ಕೆ ಹುನ್ನಾರ ನಡೆದಿದೆ. ನಂದಿನಿ ಮತ್ತು ಅಮುಲ್ ಅನ್ನು ಒಂದು ಮಾಡಿ ಅದಾನಿ ಅಥವಾ ಅಂಬಾನಿಗೆ ವಹಿಸುತ್ತಾರೆ. ಇದರಿಂದ 25 ಲಕ್ಷ ಕುಟುಂಬಗಳು ಬೀದಿಪಾಲು ಮಾಡುತ್ತಾರೆ. ರಾಜ್ಯದಲ್ಲಿ 15 ಹಾಲು ಒಕ್ಕೂಟ, 13 ಲಕ್ಷಕ್ಕೂ ಹೆಚ್ಚು ಹಾಲು ಉತ್ಪಾದಕರ ಸಹಕಾರ ಸಂಘಗಳು ಸಂಕಷ್ಟಕ್ಕೆ ಸಿಲುಕಲಿವೆ. ಕರಾವಳಿಯ 10 ಸಾರ್ವಜನಿಕ ಬ್ಯಾಂಕುಗಳನ್ನು 4 ಬ್ಯಾಂಕುಗಳಿಗೆ ವಿಲೀನ ಮಾಡಲಾಗಿದೆ. ಇದರ ಬಗ್ಗೆ ಕರಾವಳಿಯ ಜನರೂ ಆಕ್ಷೇಪಿಸಿಲ್ಲ. ಮುಸ್ಲಿಂ ಸಮುದಾಯದ ವಿರುದ್ಧ ದ್ವೇಷದ ಅಫೀಮನ್ನು ಕೊಟ್ಟಿರುವ ಕಾರಣ ಬಾಯಿ ಬಿಡುತ್ತಿಲ್ಲ. ಉದ್ಯೋಗ ಕಳೆದುಕೊಂಡು ಅತಂತ್ರವಾಗಿರುವ ಹಲವು ಕುಟುಂಬಗಳ ಸ್ಥಿತಿ ಶೋಚನೀಯವಾಗಿದೆ ಎಂದರು.

ಬೃಹತ್ ಪ್ರತಿಭಟನೆಗೆ ನಿರ್ಧಾರ: ಮೈಸೂರಿನ ರಂಗಾಯಣದಲ್ಲಿ ಇತ್ತೀಚೆಗೆ ಪ್ರದರ್ಶನಗೊಂಡ 'ಸಾಂಬಶಿವ ಪ್ರಹಸನ' ನಾಟಕದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಅವಹೇಳನ ಮಾಡಿರುವುದನ್ನು ಖಂಡಿಸಿ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ. ರಂಗಾಯಣದ ಮೂಲಕ ಮೈಸೂರಿನಲ್ಲಿ ಶಾಂತಿ ಕದಡುವ ಕೆಲಸವನ್ನು ಬಿಜೆಪಿ ಸರ್ಕಾರ ಮಾಡುತ್ತಿದೆ. ರಂಗಾಯಣದ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ರೌಡಿಯಂತೆ ವರ್ತಿಸುತ್ತಿದ್ದಾರೆ. ಟಿಪ್ಪು ನಿಜಕನಸುಗಳು ನಾಟಕದ ಮೂಲಕ ಶಾಂತಿ ಕದಡಲು ಮುಂದಾದ ಅಡ್ಡಂಡ ಕಾರ್ಯಪ್ಪ ಇದೀಗ ಮತ್ತೊಂದು ನಾಟಕದಲ್ಲಿ ಕಾಂಗ್ರೆಸ್ ನಾಯಕರ ಅವಹೇಳನ ಮಾಡಿ ಶಾಂತಿ ಕದಡಲು ಹೊರಟಿದ್ದಾರೆ. ಸಾಹಿತಿ ಪ್ರೊ.ಎಸ್.ಎಲ್.ಭೈರಪ್ಪ ಹಾಗೂ ಮಾಸ್ಟರ್ ಮೈಂಡ್ ಪ್ರತಾಪ್ ಸಿಂಹ ಮುಂದಿಟ್ಟುಕೊಂಡು ಅಶಾಂತಿ ಸೃಷ್ಟಿಸಲು ಯತ್ನಿಸುತ್ತಿದೆ. ಇದರ ವಿರುದ್ಧ ಸದ್ಯದಲ್ಲೇ ಬೃಹತ್ ಪ್ರತಿಭಟನೆ ಮಾಡುತ್ತೇವೆ. ಪ್ರತಿಭಟನೆಯಲ್ಲಿ ಹತ್ತು ಸಾವಿರ ಮಂದಿ ಭಾಗಿಯಾಗಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ನಗರಪಾಲಿಕೆ ಮಾಜಿ ಸದಸ್ಯ ಶಿವಣ್ಣ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಪ್ರಧಾನ ಕಾರ್ಯದರ್ಶಿ ಈಶ್ವರ್ ಚಕ್ಕಡಿ, ಗಿರೀಶ್, ತಿವಾರಿ, ಮೈಸೂರು ಬಸವಣ್ಣ, ಸಿದ್ದಪ್ಪ, ಮಾಧ್ಯಮ ವಕ್ತಾರ ಮಹೇಶ್ ಇದ್ದರು.

ರಾಜ್ಯ ಬಿಜೆಪಿಗೆ ನಾಯಕತ್ವ ಇಲ್ಲ...!

●ಹಾಗಾಗಿಯೇ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಷಾ ರಾಜ್ಯಕ್ಕೆ ಪದೇ ಪದೆ ಭೇಟಿ ನೀಡುತ್ತಾರೆ: ಡಿಕೆಶಿ

●ಇನ್ನು 60 ದಿನವಷ್ಟೇ ಬಿಜೆಪಿಯ ಭ್ರಷ್ಟ ಸರ್ಕಾರ ಸಹಿಸಿಕೊಳ್ಳಬೇಕಿದೆ; ನಂತರ ಕಾಂಗ್ರೆಸ್ ಸರ್ಕಾರ ಬರುವುದು ಖಚಿತ

ಬೆಂಗಳೂರು, ಜ.3(ಕೆಎಂಶಿ)–ಕರ್ನಾಟಕದ ಬಿಜೆಪಿಗೆ ನಾಯಕತ್ವ ಇಲ್ಲದೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಷಾ ಮುಂಬರುವ ವಿಧಾನಸಭಾ ಚುನಾವಣಾ ಉಸ್ತುವಾರಿ ವಹಿಸಿಕೊಳ್ಳುತ್ತಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಇಂದಿಲ್ಲಿ ವ್ಯಂಗ್ಯವಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಮಿತ್ ಷಾ ಅವರ ಮಾತಿಗೆ ನಾವು ತಲೆ ಕೆಡಿಸಿಕೊಳ್ಳುವುದಿಲ್ಲ. ಆದರೆ ಅವರು ರಾಜ್ಯ ಬಿಜೆಪಿಯಲ್ಲಿ ನಾಯಕತ್ವ ಇಲ್ಲ ಎಂದು ಒಪ್ಪಿಕೊಂಡಿರುವುದನ್ನು ನಾನು ಅಭಿನಂದಿಸುತ್ತೇನೆ ಎಂದರು.

ಈ ಕಾರಣಕ್ಕೆ ರಾಜ್ಯಕ್ಕೆ ಅಮಿತ್ ಷಾ ಹಾಗೂ ಪ್ರಧಾನಿ ಮೋದಿ ಆಗಮಿಸುತ್ತಿರುವ ಅರ್ಥ ರಾಜ್ಯದಲ್ಲಿರುವ ಬಿಜೆಪಿ ಸರ್ಕಾರ ಸಂಪೂರ್ಣ ವೈಫಲ್ಯ ಅನುಭವಿಸಿದೆ ಎಂದು. ಹೀಗಾಗಿ ರಾಜ್ಯ ಚುನಾವಣೆಯಲ್ಲಿ ಬಿಜೆಪಿ ರಾಷ್ಟ್ರೀಯ ನಾಯಕತ್ವವನ್ನು ಬಳಸಿಕೊಳ್ಳಲಾಗುತ್ತಿದೆ. ಕರ್ನಾಟಕದ ವಿಚಾರಗಳೇ ಬೇರೆ.



ರಾಜ್ಯದಲ್ಲಿನ ಆಡಳಿತ, ಅಭಿವೃದ್ಧಿಯ ವಿಚಾರ ಗಣನೆಗೆ ಬರುತ್ತದೆ. ಇಡೀ ವಿಶ್ವ ಕರ್ನಾಟಕದ ಮೂಲಕ ಭಾರತವನ್ನು ನೋಡುತ್ತಿದೆ. ನಾವು ಜ.11ರಿಂದ ರಾಜ್ಯ ಪ್ರವಾಸ ಆರಂಭಿಸುತ್ತಿದ್ದು, ಎಲ್ಲ ಮೂಲೆ, ಮೂಲೆಗಳನ್ನು ತಲುಪಿ ಎಲ್ಲ ವರ್ಗದ ಜನರನ್ನು ಭೇಟಿ ಮಾಡಲಾಗುವುದು. ಬಿಜೆಪಿ ಸರ್ಕಾರ ತನ್ನ ಕೊನೆಯ ದಿನಗಳಲ್ಲಿದ್ದು, ಈ ಸರ್ಕಾರ ಮಾಡಿರುವ ಅನ್ಯಾಯವನ್ನು ಜನರಿಗೆ ತಿಳಿಸುತ್ತೇವೆ. ಬಿಜೆಪಿ ಸರ್ಕಾರದ ಅಂತ್ಯವಾಗಿ ಕಾಂಗ್ರೆಸ್ ಸರ್ಕಾರ ಬರಲಿದೆ ಎಂದು ತಿಳಿಸಿದರು.

ಉದ್ಯಮಿ ಆತ್ಮಹತ್ಯೆ ಪ್ರಕರಣದಲ್ಲಿ ಶಾಸಕರ ಹೆಸರು ಪ್ರಸ್ತಾಪವಾಗಿದ್ದು, ಸರ್ಕಾರ ಯಾರನ್ನೂ ರಕ್ಷಣೆ ಮಾಡಬಾರದು. ತನಿಖೆ ಆಗಲಿ, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಿ, ನಾವು ಈ ವಿಚಾರದಲ್ಲಿ ಅನಗತ್ಯವಾಗಿ, ಯಾರ ಹೆಸರನ್ನೂ ಹೇಳುವುದಿಲ್ಲ.


ಜನಸಾಮಾನ್ಯರು ಈ ಪ್ರಕರಣವನ್ನು ನೋಡುತ್ತಿದ್ದು, ಸರ್ಕಾರ ದೃಢ ಕ್ರಮ ಕೈಗೊಳ್ಳಬೇಕು. ಶಾಸಕರ ದುರ್ವರ್ತನೆಗಳಿಂದ ಅನೇಕ ಸಾವುಗಳು ಸಂಭವಿಸುತ್ತಿವೆ. ಇದಕ್ಕೆ ಕೊನೆ ಹಾಡಬೇಕು. ತಪ್ಪಿತಸ್ಥರು ಶಿಕ್ಷೆಗೆ ಒಳಗಾಗಬೇಕು. ಕಾನೂನಿನ ಮುಂದೆ ಲಿಂಬಾವಳಿ ಬೇರೆಯಲ್ಲ, ಶಿವಕುಮಾರ್ ಬೇರೆಯಲ್ಲ. ಆದರೆ ಈ ಸರ್ಕಾರ ಇಂತಹ ಕೊಲೆ ಪ್ರಕರಣಗಳಲ್ಲಿ ಆರೋಪಿಗಳ ರಕ್ಷಣೆ ಮಾಡಿಕೊಂಡು ಬಂದಿದೆ. ಜನ ಇನ್ನು 60 ದಿನ ಈ ಸರ್ಕಾರದ ಅನ್ಯಾಯವನ್ನು ತಡೆದುಕೊಳ್ಳಬೇಕಿದೆ ಎಂದರು. ನಂದಿನಿ ಹಾಗೂ ಅಮುಲ್ ವಿಲೀನವಿಲ್ಲ. ಕೇವಲ ತಂತ್ರಜ್ಞಾನ ವಿನಿಮಯ ಮಾತ್ರ ಎಂಬ ಮುಖ್ಯಮಂತ್ರಿಗಳ ಸ್ಪಷ್ಟನೆಗೆ, ಬೊಮ್ಮಾಯಿ ಅವರು ಈ ಪ್ರಕರಣವನ್ನು ಮರೆಮಾಚುವ ಪ್ರಯತ್ನ ಮಾಡುತ್ತಿದ್ದಾರೆ. ಅಮಿತ್ ಷಾ ಅವರು ಏನು ಹೇಳಿದ್ದಾರೆ ಎಂಬುದನ್ನು ಒಮ್ಮೆ ಕೇಳಿ ನೋಡಿ.

ಷಾ ಅವರು ಸಾರ್ವಜನಿಕ ವೇದಿಕೆಯಲ್ಲಿ ನೀಡಿರುವ ಹೇಳಿಕೆ ಬಹಿರಂಗವಾಗಿದೆ. ನಾವು ಇದನ್ನು ಪ್ರಶ್ನಿಸಿದ ಹಿನ್ನೆಲೆಯಲ್ಲಿ ಬೊಮ್ಮಾಯಿ ಅವರು ಈ ವಿಚಾರ ಮುಚ್ಚಿಹಾಕಲು ಪ್ರಯತ್ನಿಸುತ್ತಿದ್ದಾರೆ. ಇದು ರಾಜ್ಯಗಳ ವಿಚಾರವೇ ಹೊರತು ರಾಷ್ಟ್ರೀಯ ವಿಚಾರವಲ್ಲ.

ನೀವು ಕನಕಪುರಕ್ಕೆ ಹೋಗಿ ಅಲ್ಲಿನ ಹಾಲು ಉತ್ಪಾದನೆ ಘಟಕವನ್ನು ನೋಡಿ. ಅದು ಅಮುಲ್ ಸಂಸ್ಥೆಗಿಂತ ಹಾಗೂ ಏಷ್ಯಾದಲ್ಲೇ ಅತ್ಯುತ್ತಮ ಆಧುನಿಕ ತಂತ್ರಜ್ಞಾನವನ್ನು ಹೊಂದಿರುವ ಘಟಕ. ರಾಜ್ಯದಲ್ಲಿ ಇಂತಹ ತಂತ್ರಜ್ಞಾನ ಇರುವಾಗ ನಮಗೆ ಬೇರೆ ರಾಜ್ಯದ ತಂತ್ರಜ್ಞಾನದ ಅಗತ್ಯವಿಲ್ಲ. ನಮ್ಮ ರಾಜ್ಯದ ಮಾದರಿಯು ಗುಜರಾತ್ ಮಾದರಿಗಿಂತ ಉತ್ತಮವಾಗಿದೆ. ಅಮುಲ್ ಕುರಿಯನ್ ಕ್ರಾಂತಿಯ ಫಲವಾಗಿದೆ. ಹೀಗಾಗಿ ನಾವು ಅವರನ್ನು ಗೌರವಿಸುತ್ತೇವೆ ಎಂದು ಹೇಳಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಬೂತ್ ವಿಜಯ್ ಅಭಿಯಾನ

ಸರ್ಕಾರದ ಸಾಧನೆ ಮನೆ ಮನೆಗೆ ತಲುಪಿಸಿ ಪಕ್ಷ ಸಂಘಟನೆಗೆ ಅರುಣ್‌ಕುಮಾರ ಗೌಡರ ಕರೆ



ಮೈಸೂರು, ಜ.3(ಎಂಕೆ)– ಕೇಂದ್ರ ಹಾಗೂ ರಾಜ್ಯ ಬಿಜೆಪಿ ನಾಯಕರ ಕರ್ನಾಟಕ ಮಿಷನ್–150 ಗುರಿಯಂತೆ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಬೂತ್ ವಿಜಯ್ ಅಭಿಯಾನ ನಡೆಸಲಾಯಿತು. ಬೀರಿಹುಂಡಿ, ದಾಸನಕೊಪ್ಪಲು ಗ್ರಾಮದ ಬಿಜೆಪಿ ಕಾರ್ಯಕರ್ತರ ಮನೆಗಳಲ್ಲಿ ಬಿಜೆಪಿ ಬಾವುಟ ಹಾರಿಸಿ ಬೂತ್ ಸಭೆ ನಡೆಸಲಾಯಿತು. ಈ ವೇಳೆ ಚಾಮುಂಡೇಶ್ವರಿ ಕ್ಷೇತ್ರದ ನಿಕಟಪೂರ್ವ ಅಧ್ಯಕ್ಷ ಎನ್.ಅರುಣ್ ಕುಮಾರ್ ಗೌಡ ಮಾತನಾಡಿ, ಬೂತ್ ವಿಜಯ್ ಅಭಿಯಾನದಿಂದ ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಬಲಿಷ್ಠವಾಗುವುದರ ಜೊತೆಗೆ ರಾಜ್ಯ ಹಾಗೂ ಚಾಮುಂಡೇಶ್ವರಿ ಕ್ಷೇತ್ರದಲ್ಲೂ ಬಿಜೆಪಿ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರಲ್ಲದೆ ಕಾರ್ಯಕರ್ತರು, ಪದಾಧಿಕಾರಿಗಳು, ಬಿಜೆಪಿ ಸರ್ಕಾರದ ಜನಪರ ಯೋಜನೆಗಳ ಮಾಹಿತಿಯನ್ನು ಪ್ರತಿ ಮನೆ–ಮನೆಗೂ ತಿಳಿಸುವ ಮೂಲಕ ಪಕ್ಷ ಸಂಘಟಿಸಬೇಕು ಎಂದು ಕರೆ ನೀಡಿದರು.

ಕ್ಷೇತ್ರದ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್ ಮಾತನಾಡಿ, ರಾಜ್ಯ ಸಮಿತಿ ಸೂಚನೆಯಂತೆ ಬೂತ್ ವಿಜಯ್ ಅಭಿಯಾನ ಜ.2 ರಿಂದ 12 ರವರೆಗೆ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಬೂತ್‌ನಲ್ಲೂ ನಡೆಯಲಿದೆ. ಕಾರ್ಯಕರ್ತರ ಮನೆ ಮೇಲೆ ಬಿಜೆಪಿ ಬಾವುಟ ಹಾರಿಸುವುದರೊಂದಿಗೆ ಮುಂಬರುವ ಚುನಾವಣೆ ವಿಜಯದ ಕಡೆಗೆ ಹೆಜ್ಜೆಯನ್ನಿಡುವ ಅಭಿಯಾನ ಹಮ್ಮಿಕೊಳ್ಳಬೇಕು ಎಂದರು.

ಮಾಜಿ ಜಿಲ್ಲಾಧ್ಯಕ್ಷ ಎಸ್.ಡಿ.ಮಹೇಂದ್ರ, ಹಿರಿಯ ಮುಖಂಡ ಜಗದೀಶ್ ಗೌಡ, ಸಂಚಾಲಕ ಶ್ರೀನಿವಾಸ್ ಹಿನಕಲ್, ಸಹ ಸಂಚಾಲಕ ಗೋಪಾಲ್‌ಗೌಡ, ಕ್ಷೇತ್ರದ ಪ್ರಧಾನ ಕಾರ್ಯದರ್ಶಿಗಳಾದ ಪೈಲ್ವಾನ್ ರವಿ, ಈರಪ್ಪ, ಸೋಮಶೇಖರ್, ಕೃಷ್ಣಮಹಾದೇವು, ಕೆಂಚಪ್ಪ, ಪುಷ್ಪ, ಶಿವಕುಮಾರ್, ರಾಜು ಮತ್ತಿತರರಿದ್ದರು.

ನಂ.ಗೂಡು ನಗರಸಭೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

ಅವೈಜ್ಞಾನಿಕ ಕಾಮಗಾರಿ, ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ಹಿಂದಿನ ನೀರಿನ ಬಿಲ್ ವಜಾಗೊಳಿಸಲು ಆಗ್ರಹ



ನಂಜನಗೂಡು, ಜ.3– ಇಲ್ಲಿನ ನಗರಸಭೆಯಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು, ಅವೈಜ್ಞಾನಿಕ, ಕಳಪೆ ಕಾಮಗಾರಿಗಳ ತನಿಖೆ ನಡೆಸಬೇಕು ಹಾಗೂ ಹಿಂದಿನ ನೀರಿನ ಬಿಲ್ ವಜಾಗೊಳಿಸಿ ಹೊಸ ಪರಿಷ್ಕೃತ ದರ ನಿಗದಿಗೆ ಒತ್ತಾಯಿಸಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ನಗರಸಭೆ ಮುಂಭಾಗ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ನಗರಸಭೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್ ಮಾತನಾಡಿ, ಭ್ರಷ್ಟಾಚಾರದಿಂದ ತುಂಬಿ ಹೋಗಿರುವ ನಗರಸಭೆ ಸಾರ್ವಜನಿಕರಿಗೆ ನರಕಸಭೆಯಾಗಿದೆ. ಆದ್ದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು. ನಗರದ ಚಾಮಲಾಪುರಹುಂಡಿ ಬಡಾವಣೆಯಲ್ಲಿ ಮುಡಾದಿಂದ ನಡೆಯುತ್ತಿರುವ ಚರಂಡಿ ಮತ್ತು ರಸ್ತೆ ನಿರ್ಮಾಣ ಕಾಮಗಾರಿ ಅವೈಜ್ಞಾನಿಕವಾಗಿದ್ದು, ಚರಂಡಿ ನೀರು ಹರಿಯದೆ ನಿಂತಲ್ಲೆ ನಿಂತಿದೆ. ಚರಂಡಿ ಮೇಲೆ ಕವರ್‌ಡೆಕ್ ನಿರ್ಮಿಸದ ಕಾರಣ ಹಳೆಯ ರಸ್ತೆ ಸಹ ಮುಚ್ಚಿ ಹೋಗಿದೆ. ಇದರಿಂದ ಕೋರೆಹುಂಡಿ, ಕೈಗಾರಿಕಾ ಪ್ರದೇಶಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಮಾಯವಾಗಿದೆ. ನಗರದ ಎಲ್ಲಾ ಬಡಾವಣೆಗಳಲ್ಲಿ ಮುಡಾ ವತಿಯಿಂದ ನಡೆಯುತ್ತಿರುವ ಕಾಮಗಾರಿಗಳ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

24x7 ಕುಡಿಯುವ ನೀರಿನ ಬಿಲ್‌ಗಳು 60ರಿಂದ 70 ಸಾವಿರದವರೆಗೆ ಬರುತ್ತಿದ್ದು, ಈ ಹಿಂದೆ ಪ್ರತಿಭಟನೆ ನಡೆಸಿದ ವೇಳೆ ದರ ಪರಿಷ್ಕರಿಸುವ ಭರವಸೆ ನೀಡಲಾಗಿತ್ತು ಆದರೆ, ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಹಿಂದಿನ ಬಿಲ್ ವಜಾಗೊಳಿಸಿ ಹೊಸ ದರ ನಿಗದಿಪಡಿಸಬೇಕು. ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ನಗರದಲ್ಲಿ ಯುಜಿಡಿ ಕಾಮಗಾರಿ ಅವೈಜ್ಞಾನಿಕವಾಗಿದ್ದು, ಹೊಸ ರಸ್ತೆಗಳನ್ನೇ ಅಗೆದು ಹಾಳು ಮಾಡುತ್ತಿದ್ದಾರೆ. ಎಲ್ಲಾ ಕಡೆ ಮ್ಯಾನ್‌ಹೋಲ್ ಗುಂಡಿಗಳನ್ನು ಶೀಘ್ರ ಮುಚ್ಚಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ನಗರಸಭಾ ಆಯುಕ್ತ ರಾಜಣ್ಣ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಜಿಪಂ ಸದಸ್ಯೆ ಲತಾ, ಕೆಪಿಸಿಸಿ ಸದಸ್ಯ ಅಕ್ಬರ್ ಅಲಿಂ, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್, ಮುಖಂಡರಾದ ರಾಜೇಶ್, ನಾಗರಾಜು, ದೊರೆಸ್ವಾಮಿ ನಾಯಕ, ಶಿವಪ್ಪದೇವರು, ಡಿ.ಆರ್.ರಾಜು, ಸೌಭಾಗ್ಯ, ಸೋಮಣ್ಣ, ಶೈಲಜ, ರವಿ, ನಗರಸಭಾ ಸದಸ್ಯರಾದ ಗಂಗಾಧರ್, ಎಸ್.ಪಿ.ಮಹೇಶ್, ಸಿದ್ದಿಕ್, ನಾಗರಾಜು, ಕಮಲೇಶ್, ಸುಬ್ಬೇಗೌಡ, ಭದ್ರೇಗೌಡ, ರವಿ, ಮಹದೇವು, ರಾಮು, ಸಂಪತ್ ಕುಮಾರ್. ವೇಣುಗೋಪಾಲ್ ನಾಯರ್, ಮುನಾವರ್, ನಾಸಿರ್, ರಾಮಚಂದ್ರಯ್ಯ, ಸೇರಿದಂತೆ ಕಾರ್ಯಕರ್ತರು, ಮುಖಂಡರು ಇದ್ದರು.

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕಾರ್ಮಿಕರ ಪ್ರತಿಭಟನೆ



ಬನ್ನೂರು, ಜ.3– ಗುತ್ತಿಗೆ ಕಾರ್ಮಿಕರ ಕಾಯ್ದೆ ಜಾರಿಗೊಳಿಸಬೇಕು. ಪಡಿತರ ಆಹಾರ ಧಾನ್ಯಗಳ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕೆಲಸಕ್ಕೆ ಪ್ರತಿ ಕ್ವಿಂಟಾಲ್‌ಗೆ 25 ರೂ. ನಿಗದಿ ಮಾಡಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಂಗಳವಾರ ಕಾರ್ಮಿಕರು ಕೆಲಸ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಗೋದಾಮು ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಸರ್ಕಾರ ಹಾಗೂ ಜಿಲ್ಲಾಡಳಿತದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಲೋಡಿಂಗ್ ಮತ್ತು ಅನ್ ಲೋಡಿಂಗ್ ಕಾರ್ಮಿಕರ ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ಎನ್.ಎಸ್.ನರಸಿಂಹಮೂರ್ತಿ ಮಾತನಾಡಿ, ಗುತ್ತಿಗೆದಾರರು ಸಂಬಳ ಚೀಟಿ, ಮಾಸ್ಟರ್ ರೋಲ್ ನೀಡುತ್ತಿಲ್ಲ. ಸಾಗಾಣಿಕೆ ಪ್ರಮಾಣಕ್ಕೆ ಅನುಗುಣವಾಗಿ ಲೋಡಿಂಗ್, ಅನ್ ಲೋಡಿಂಗ್ ಕೆಲಸಕ್ಕೆ ನಿಗದಿ ಪಡಿಸಿರುವ ಕೂಲಿ ದರಕ್ಕೆ ಅನುಗುಣವಾಗಿ ಕೂಲಿ ನೀಡುತ್ತಿಲ್ಲ. ಇಎಸ್‌ಐ, ಪಿಎಫ್ ಪಾವತಿಸುತ್ತಿಲ್ಲ. ಈ ಬಗ್ಗೆ ಸಾಕಷ್ಟು ಮನವಿ ಸಲ್ಲಿಸಿದರೂ, ಯಾವುದೇ ಪ್ರಯೋಜನವಾಗಿಲ್ಲ. ಅಲ್ಲದೆ 2018ರಲ್ಲಿ ಕೂಲಿ ಹಣ ಪ್ರತಿ ಕ್ವಿಂಟಾಲ್‌ಗೆ 16 ರೂ. ನಿಗದಿ ಪಡಿಸಲಾಗಿತ್ತು. ಇಲ್ಲಿವರೆಗೂ ಯಾವುದೇ ಪರಿಷ್ಕರಣೆ ಮಾಡಿಲ್ಲ. ಆದ್ದರಿಂದ ಪ್ರತಿ ಕ್ವಿಂಟಾಲ್‌ಗೆ 25 ರೂ. ಕೂಲಿ ನಿಗದಿಪಡಿಸಬೇಕು ಎಂಬ ಬೇಡಿಕೆಯೊಂದಿಗೆ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು. ಪ್ರತಿಭಟನೆಯಲ್ಲಿ ನಾಗರಾಜು, ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ಅಧ್ಯಕ್ಷ ನಾಗೇಂದ್ರ, ಉಪಾಧ್ಯಕ್ಷ ಬಿ.ಆರ್.ರಾಘವೇಂದ್ರಸ್ವಾಮಿ, ರಂಗಸ್ವಾಮಿ, ರಾಜು, ನಾಗಣ್ಣ, ಮುದ್ದೇಗೌಡ, ಪರಶಿವ, ಸಿದ್ದೇಗೌಡ, ಮಣಿಕಂಠ, ಧರ್ಮಸೇನ, ಮಣಿಕಂಠ, ಅಪ್ಪಿ, ಲೋಕೇಶ್, ಮಹೇಶ್, ನಾರಾಯಣ, ಜಾಕೀರ್ ಸೇರಿದಂತೆ ಹಲವರಿದ್ದರು.

ಸಮರ್ಪಕ ಬಸ್ ಸೌಲಭ್ಯಕ್ಕೆ ವಿದ್ಯಾರ್ಥಿಗಳ ಆಗ್ರಹ



ಹೆಚ್.ಡಿ.ಕೋಟೆ. ಜ.3– ಸಮರ್ಪಕ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳು ಮಂಗಳವಾರ ಮೈಸೂರು–ಮಾನಂದವಾಡಿ ಮುಖ್ಯರಸ್ತೆ ಬಂದ್ ಮಾಡಿ ಪ್ರತಿಭಟನೆ ನಡೆಸಿದರು. ತಾಲೂಕಿನ ಮಾದಾಪುರ ಗ್ರಾಮದ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಬೆಳಗ್ಗೆ ಹೆಚ್.ಡಿ.ಕೋಟೆಯಿಂದ ಮೈಸೂರಿಗೆ ತೆರಳುವ ಸಾರಿಗೆ ಸಂಸ್ಥೆ ಬಸ್‌ಗಳು ಬಾರದ ಕಾರಣ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಕೆಲಸಕ್ಕೆ ತೆರಳುವ ಸಾರ್ವಜನಿಕರಿಗೆ ತೊಂದರೆಯಾಗಿದೆ. ಸೂಕ್ತ ಬಸ್ ಸೌಲಭ್ಯ ಕಲ್ಪಿಸುವಂತೆ ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ, ಯಾವುದೇ ಪ್ರಯೋಜನ ವಾಗಿಲ್ಲ ಎಂದು ಆರೋಪಿಸಿದರು.

ವಿದ್ಯಾರ್ಥಿಗಳು ಮಾತನಾಡಿ ಮಾದಾಪುರ, ಕೆ.ಬೆಳ್ತೂರು, ಅಡಹಳ್ಳಿ, ಚಕ್ಕೂರು, ಹುನಗಹಳ್ಳಿ ಸೇರಿದಂತೆ ಸುತ್ತಮುತ್ತಲಿನ 600 ವಿದ್ಯಾರ್ಥಿಗಳು ನಿತ್ಯ ಮೈಸೂರಿಗೆ ವಿದ್ಯಾಭ್ಯಾಸಕ್ಕೆ ತೆರಳಲಿದ್ದು, ಹೆಚ್.ಡಿ.ಕೋಟೆ ಹಾಗೂ ಸರಗೂರಿನಿಂದ ಬರುವ ಬಸ್‌ಗಳು ಮಾದಾಪುರದಲ್ಲಿ ನಿಲ್ಲಿಸುವುದಿಲ್ಲ. ಮಾದಾಪುರದಲ್ಲಿ ನಿಲ್ಲಿಸುವ ಬಸ್‌ಗಳು ಭರ್ತಿಯಾಗಿರುತ್ತವೆ. ಇದರಿಂದ ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಶಾಲಾ ಕಾಲೇಜಿಗೆ ತೆರಳಲು ಸಾಧ್ಯವಾಗುತ್ತಿಲ್ಲ ಎಂದರು.

ಕೆಲ ದಿನಗಳ ಹಿಂದೆ ಸಾರ್ವಜನಿಕರ ಮನವಿ ಮೇರೆಗೆ ಸಾರಿಗೆ ಅಧಿಕಾರಿಗಳು ಮಾದಾಪುರದಿಂದ ಮೈಸೂರಿಗೆ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಿದ್ದರು. ಇದೀಗ ಏಕಾಏಕಿ ಬಸ್ ಸಂಚಾರ ನಿಲ್ಲಿಸಲಾಗಿದೆ ಎಂದು ಆರೋಪಿಸಿದರು.

ಸ್ಥಳಕ್ಕೆ ಹೆಚ್.ಡಿ.ಕೋಟೆ ಪೊಲೀಸರು ಭೇಟಿ ನೀಡಿ ವಿದ್ಯಾರ್ಥಿಗಳ ಮನವೊಲಿಸಿದರಾದರೂ, ವಿದ್ಯಾರ್ಥಿಗಳು ಸ್ಥಳಕ್ಕೆ ಡಿಪೋ ಮ್ಯಾನೇಜರ್ ಆಗಮಿಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಡಿಪೋ ಮ್ಯಾನೇಜರ್ ತ್ಯಾಗರಾಜ್, ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳು, ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದ ರೀತಿ ಬಸ್ ವ್ಯವಸ್ಥೆ ಮಾಡಿಕೊಡುವುದಾಗಿ ನೀಡಿದ ಭರವಸೆ ಮೇರೆಗೆ ಪ್ರತಿಭಟನೆ ಕೈಬಿಟ್ಟರು.

ಗಂಟೆಗೂ ಹೆಚ್ಚು ಕಾಲ ರಸ್ತೆ ಬಂದ್ ಮಾಡಿದ್ದರಿಂದ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಇದರಿಂದ ವಾಹನ ಸಂಚಾರ ಅಸ್ತವ್ಯಸ್ತವಾಯಿತು. ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.



ನಂಜನಗೂಡು ತಾಲೂಕಿನ ಮಲ್ಕುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಕ್ಯಾಲೆಂಡರ್ ಅನ್ನು ಸಂಘದ ಅಧ್ಯಕ್ಷ ಎಂ.ಪುಟ್ಟಸುಬ್ಬಪ್ಪ ಬಿಡುಗಡೆಗೊಳಿಸಿದರು. ಈ ವೇಳೆ ಉಪಾಧ್ಯಕ್ಷ ಎಂ.ಶಿವಣ್ಣ, ಹುರ ಪಿಎಸಿಎಸ್ ಅಧ್ಯಕ್ಷ ಗುರುಮಲ್ಲಪ್ಪ ಗ್ರಾಪಂ ಮಾಜಿ ಸದಸ್ಯ ಎಂ.ಎನ್.ಸತೀಶ್, ನಿರ್ದೇಶಕರಾದ ನಂದೀಶ, ಮಹದೇವಮ್ಮ, ಶಾಂತಮ್ಮ, ಮಹದೇವಮ್ಮ, ಸಿಇಓ ಮುತ್ತುರಾಜ್ ಸೇರಿದಂತೆ ಇತರರಿದ್ದರು.



ಸರಗೂರಲ್ಲಿ ರಾಜ್ಯ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕಾರ್ಮಿಕರ ಒಕ್ಕೂಟದಿಂದ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ಸರಗೂರು ಲೋಡರ್ಸ್ ಸಂಘದ ಅಧ್ಯಕ್ಷ ಶ್ರೀನಿವಾಸ್, ಉಪಾಧ್ಯಕ್ಷ ಚನ್ನ, ಕಾರ್ಯದರ್ಶಿ ಮದನಾಯಕ, ಖಜಾಂಚಿ ರಾಜು, ಪ್ರಕಾಶ್, ತಾರಕರಾಮ್, ವೆಂಕಟೇಶ್, ನಾರಾಯಣ್, ರಾಜೇಶ್, ಕರಿಯಪ್ಪ, ನಾಗ, ವೆಂಕಟೇಶ್ ಇತರರಿದ್ದರು.

ಅಡುಗೆ ಅನಿಲ ಪೈಪ್‌ಲೈನ್ ವಿರೋಧಿಸಿ ಕರವೇ ಪ್ರತಿಭಟನೆ



ನಂಜನಗೂಡು, ಜ.3– ಅಡುಗೆ ಅನಿಲ ಪೈಪ್‌ಲೈನ್ ಅಳವಡಿಸುವುದರಿಂದ ಅಗ್ನಿ ಅವಘಡ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ. ಹೀಗಾಗಿ ಅನಿಲ ಪೈಪ್‌ಲೈನ್ ಅಳವಡಿಕೆ ಬೇಡ ಎಂದು ಕರವೇ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ನಗರಸಭೆ ಎದುರು ಜಮಾವಣೆಗೊಂಡ ಕರವೇ ಕಾರ್ಯಕರ್ತರು ನಗರಸಭೆ ಸದಸ್ಯರು ಮತ್ತು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕರವೇ ಜಿಲ್ಲಾಧ್ಯಕ್ಷ ಪ್ರವೀಣ್‌ಕುಮಾರ್ ಮಾತನಾಡಿ, ಪೈಪ್‌ಲೈನ್ ಮೂಲಕ ಅನಿಲ ಅಳವಡಿಸುವ ಪ್ರಸ್ತಾವಕ್ಕೆ ನಗರಸಭೆ ಸಾಮಾನ್ಯ ಸಭೆ ಅನುಮೋದನೆ ನೀಡಿದ್ದು, ಪಿಎನ್‌ಜಿ ಅಳವಡಿಸಿಕೊಳ್ಳಬೇಕಾದರೆ ಒಬ್ಬ ಗ್ರಾಹಕ 6 ಸಾವಿರ ಠೇವಣಿ ಇಡಬೇಕು. ಅಲ್ಲದೇ ಅಳವಡಿಕೆ ಸಂದರ್ಭ ಟೈಲ್ಸ್ ಮತ್ತು ಗ್ರಾನೈಟ್ ನಾಶಪಡಿಸಲಾಗುತ್ತದೆ. ಎಲ್‌ಪಿಜಿಯಲ್ಲಿ 10 ನಿಮಿಷಕ್ಕೆ ಅಡುಗೆಯಾದರೆ ಎನ್‌ಪಿಜಿಯಲ್ಲಿ 20 ನಿಮಿಷ ತೆಗೆದುಕೊಳ್ಳುತ್ತದೆ. ಬೆಳಗ್ಗೆ 7ರಿಂದ 9, ಸಂಜೆ 5 ರಿಂದ ರಾತ್ರಿ 9ರ ಸಮಯದಲ್ಲಿ ಎಲ್ಲಾ ಗ್ರಾಹಕರು ಅನಿಲ ಉಪಯೋಗಿಸುವ ಕಾರಣ ವೇಗ ಕಡಿಮೆಯಾಗುತ್ತದೆ. ಎಲ್‌ಪಿಜಿ ಮತ್ತು ಎನ್‌ಪಿಜಿ ದರ ಒಂದೇ ಆಗಿರುತ್ತದೆ. ಈ ಸಂಪರ್ಕದಿಂದ ಗ್ರಾಹಕ ಇನ್ನೊಂದು ಎಲ್‌ಪಿಜಿ ಮನೆಯಲ್ಲಿಟ್ಟುಕೊಳ್ಳಬೇಕಾಗುತ್ತದೆ. ಒಂದು ಬಡಾವಣೆಯಲ್ಲಿ ಅನಿಲ ಸೋರಿಕೆಯಾಗಿ ಅಗ್ನಿ ಅವಘಡ ಸಂಭವಿಸಿದರೆ ಸಂಪೂರ್ಣ ಬಡಾವಣೆಯಲ್ಲೇ ಅಗ್ನಿ ಅವಘಡ ಸಂಭವಿಸಬಹುದಾಗಿದೆ. ಈಗಾಗಲೇ ಸಾಕಷ್ಟು ಕಡೆ ಅಗ್ನಿ ಅವಘಡ ಸಂಭವಿಸಿರುವ ಉದಾಹರಣೆಯಿದೆ. ಅಲ್ಲದೆ ಒಂದು ಕಡೆ ಅನಿಲ್ ಕಡಿತಗೊಂಡರೆ ಸಂಪೂರ್ಣ ಬಡಾವಣೆಯಲ್ಲೇ ಅಡುಗೆ ಅನಿಲ ಸಂಪರ್ಕವಿರುವುದಿಲ್ಲ ಇಷ್ಟೆಲ್ಲಾ ಅನಾನುಕೂಲಗಳಿದ್ದರೂ ತಿಳುವಳಿಕೆಯಿರುವ ಸದಸ್ಯರು ಒಪ್ಪಿಗೆ ಪ್ರಸ್ತಾವಕ್ಕೆ ಅನುಮೋದನೆ ನೀಡಿರುವುದು ಹಾಸ್ಯಾಸ್ಪದ. ಜೊತೆಗೆ ಹಲವಾರು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಆದ್ದರಿಂದ ಕೂಡಲೇ ಈ ಯೋಜನೆ ರದ್ದುಗೊಳಿಸಬೇಕು. ಇಲ್ಲವಾದರೆ ಉಗ್ರ ಪ್ರತಿಭಟನೆ ರೂಪಿಸುವ ಎಚ್ಚರಿಕೆ ನೀಡಿದರು.

ತಾಲೂಕು ಅಧ್ಯಕ್ಷ ಹೇಮಂತ್ ಕುಮಾರ್, ಶ್ರೀನಿವಾಸ್, ಸರೋಜ, ಮಮತಾ, ಕಮಲ, ಗೌರಿ, ಲತಾ, ಭರತ್, ಬಾಲು, ಮಹೇಶ್, ವಿಜಯ್, ಆನಂದ್, ಕೃಷ್ಣ, ಭಾಸ್ಕರ್, ಪ್ರಸಾದ್, ಅಭಿ ಸೇರಿದಂತೆ ಹಲವಾರು ಕಾರ್ಯಕರ್ತರು ಇದ್ದರು.

ನಾಳೆಯಿಂದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ



ಹುಣಸೂರು, ಜ.3– ರಾಜ್ಯಮಟ್ಟದ ಛಾಯಾಗ್ರಾಹಕರ 10ನೇ ವಾರ್ಷಿಕೋತ್ಸವ ಅಂಗವಾಗಿ ಪಟ್ಟಣದಲ್ಲಿ 3 ದಿನಗಳ ಕಾಲ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ನಡೆಯಲಿದೆ ಎಂದು ತಾಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಕೆ.ಎಸ್.ರಾಮಸ್ವಾಮಿ ತಿಳಿಸಿದರು.

ನಗರದ ಪತ್ರಕರ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ಜ.5, 6 ಹಾಗೂ 7ರಂದು 3 ದಿನಗಳಕಾಲ ಟೆನ್ನಿಸ್‌ಬಾಲ್ ಕ್ರಿಕೆಟ್ ಪಂದ್ಯಾವಳಿ ನಡೆಯಲಿದೆ ಎಂದರು.


ಕಾರ್ಯಕ್ರಮವನ್ನು ಶಾಸಕ ಹೆಚ್.ಪಿ. ಮಂಜುನಾಥ್ ಉದ್ಘಾಟಿಸುವರು. ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡುವರು. ಅತಿಥಿಗಳಾಗಿ ನಗರ ಸಭಾಧ್ಯಕ್ಷೆ ಗೀತಾ, ಶ್ರೀ ಗಣೇಶ್ ಫೋಟೋ ಪ್ಯಾಲೇಸ್ ಮಾಲೀಕ ಶ್ರೀನಿಧಿ, ಹುಡಾ ಅಧ್ಯಕ್ಷ ಗಣೇಶ್ ಕುಮಾರ ಸ್ವಾಮಿ, ಎಂಡಿಪಿಎಂ ಅಧ್ಯಕ್ಷ ಮಹೇಶ್, ಉದ್ಯಮಿ ಗೌರಿ ಶಂಕರ್, ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಆರ್.ಕೃಷ್ಣಕುಮಾರ್, ಮೈಮುಲ್ ನಿರ್ದೇಶಕ ಕೆ.ಎಸ್.ಕುಮಾರ್, ನಗರಸಭೆ ಉಪಾಧ್ಯಕ್ಷೆ ಆಶಾ, ರಜಿತಾ ಚಿಕ್ಕಮಾದು ಭಾಗವಹಿಸಲಿದ್ದಾರೆ.

ವಿಶೇಷ ಟ್ರೋಫಿ: ಕ್ರಿಕೆಟ್ ಪಂದ್ಯಾವಳಿ ವಿಜೇತರಿಗೆ ಬಹುಮಾನವಾಗಿ ನೀಡಲು ಸ್ಥಳೀಯ ಕಲಾವಿದರಿಂದ ಟೀಕ್ ಮರದಿಂದ ವಿಶೇಷವಾಗಿ ಕ್ಯಾಮರಾ ಶೈಲಿಯಲ್ಲಿ ಟ್ರೋಫಿಯನ್ನು ಕಲಾತ್ಮಕವಾಗಿ ಸಿದ್ಧಪಡಿಸಲಾಗಿದೆ ಎಂದು.

ಗೋಷ್ಠಿಯಲ್ಲಿ ಕಾರ್ಯದರ್ಶಿ ಪ್ರದೀಪ್, ಸಹ ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಎಚ್.ಎಸ್.ದಾಮೋದರ್, ಕ್ಯಾಪ್ಟನ್ ಸುರೇಶ್, ಅರುಣ್, ಗಜೇಂದ್ರ ಇದ್ದರು.

ಸಾರ್ವಜನಿಕರಿಗೆ ಮೂಲ ಸೌಕರ್ಯ ಕಲ್ಪಿಸಿ

ಪುರಸಭಾಧ್ಯಕ್ಷ ನಂಜುಂಡಸ್ವಾಮಿಗೆ ಮಾಜಿ ಸಿಎಂ ಸಿದ್ದರಾಮಯ್ಯ ಕಿವಿಮಾತು



ತಿ.ನರಸೀಪುರ ಜ.3– ಪುರಸಭೆ ಆಡಳಿತ ಪಾರದರ್ಶಕವಾಗಿಟ್ಟುಕೊಳ್ಳಲು ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ಸ್ಥಳೀಯ ಸಂಪನ್ಮೂಲ ಕ್ರೋಢೀಕರಿಸಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕು. ನಿವೇಶನ ಸಮಸ್ಯೆ ಇತ್ಯರ್ಥಪಡಿಸಿ ಖಾತೆ ಕ್ರಮಬದ್ಧಗೊಳಿಸುವ ಮೂಲಕ ಪಟ್ಟಣದ ನಿವಾಸಿಗಳಿಗೆ ಮೂಲ ಸೌಕರ್ಯ ಕಲ್ಪಿಸುವಂತೆ ಮಾಜಿ ಸಿಎಂ ಸಿದ್ದರಾಮಯ್ಯ ಅಧ್ಯಕ್ಷರಿಗೆ ಕಿವಿಮಾತು ಹೇಳಿದರು.

ಪಟ್ಟಣದ ಪುರಸಭೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಟಿ.ಎಂ.ನಂಜುಂಡಸ್ವಾಮಿ ಅವರಿಂದ ಬೆಂಗಳೂರಿನ ಸರ್ಕಾರಿ ನಿವಾಸದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನಮ್ಮ ಮೇಲಿನ ಗೌರವಕ್ಕೆ ಸಮ್ಮತಿಸಿರುವ ಪುರಸಭೆ ಸದಸ್ಯರು ಅವಿರೋಧ ಆಯ್ಕೆಗೆ ಜೈ ಎಂದಿದ್ದಾರೆ. ಸಿಕ್ಕಿರುವ ಅಧ್ಯಕ್ಷರ ಅವಧಿಯಲ್ಲಿ ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯುವಂತೆ ತಾಕೀತು ಮಾಡಿದರು.

ಮುಂಬರುವ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು, ಮುಖಂಡರು ಮತ್ತು ಕಾರ್ಯಕರ್ತರು ಈಗಿನಿಂದಲೇ ಸಜ್ಜಾಗಬೇಕು. ವರುಣಾ ಹಾಗೂ ನರಸೀಪುರ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು. ಸ್ಥಳೀಯರ ಸಂಪರ್ಕದಲ್ಲಿದ್ದುಕೊಂಡು ಕಾಂಗ್ರೆಸ್ ಬೆಂಬಲಿಸುವಂತೆ ಮನವೊಲಿಸಬೇಕು ಎಂದು ಸಲಹೆ ನೀಡಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸಯೀದ್ ಅಹಮದ್, ಸದಸ್ಯರಾದ ಸಿ.ಪ್ರಕಾಶ್, ಎಸ್.ಸಿದ್ದು, ಗರ್ಗೇಶ್ವರೀ ಗ್ರಾಪಂ ಉಪಾಧ್ಯಕ್ಷ ಮಸ್ರೂರ್ ಅಹಮ್ಮದ್, ಕುರುಬರ ಸಂಘದ ಕಾರ್ಯಾಧ್ಯಕ್ಷ ಮಾದೇಶ್, ನಿರ್ದೇಶಕ ಸಂಜು, ಪಪಂ ಮಾಜಿ ಸದಸ್ಯ ರಾಘವೇಂದ್ರ, ಗ್ರಾಪಂ ಮಾಜಿ ಸದಸ್ಯ ಹೇಮಂತ್ ಕುಮಾರ್, ಮುಖಂಡರಾದ ಬಸವರಾಜು, ರಜತ್‌ಗೌಡ ಇನ್ನಿತರರಿದ್ದರು.

ಭಾರತದ ಕಲಾ ವೈಭವ ವಿಶ್ವಕ್ಕೆ ಪರಿಚಯಿಸಿದ ಜಕಣಾಚಾರಿ ಸ್ಮರಿಸಿ

ಜೆಎಸ್‌ಎಸ್ ಕಾಲೇಜಿನ ಉಪನ್ಯಾಸಕ ಸಿದ್ದಲಿಂಗಸ್ವಾಮಿ



ಸರಗೂರು, ಜ.3– ಕಲ್ಲಿನಲ್ಲಿ ಸುಂದರ ಕಲಾಕೃತಿ ಕೆತ್ತುವ ಮೂಲಕ ಭಾರತದ ಕಲಾ ವೈಭವವನ್ನು ವಿಶ್ವಕ್ಕೆ ಪರಿಚಯಿಸಿದ ಅಮರಶಿಲ್ಪಿ ಜಕಣಾಚಾರಿ ಅವರನ್ನು ಎಲ್ಲರೂ ಸ್ಮರಿಸಬೇಕು ಎಂದು ಜೆಎಸ್‌ಎಸ್ ಕಾಲೇಜಿನ ಉಪನ್ಯಾಸಕ ಸಿದ್ದಲಿಂಗಸ್ವಾಮಿ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ತಾಲೂಕು ವಿಶ್ವಕರ್ಮ ಸಮಾಜದಿಂದ ನಡೆದ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯಲ್ಲಿ ಜಕಣಾಚಾರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ನಿರ್ಜೀವ ಕಲ್ಲುಗಳಿಗೂ ಜೀವ ತುಂಬಿ ಅವುಗಳಿಗೂ ಒಂದು ಸುಂದರ ರೂಪ ನೀಡಿದ ಅಮರಶಿಲ್ಪಿ ಜಕಣಾಚಾರಿ ದ್ರಾವಿಡ ವಾಸ್ತುಶಿಲ್ಪದಲ್ಲಿ ಅಗ್ರಗಣ್ಯರಾಗಿದ್ದರು. ಹೀಗಾಗಿಯೇ ಅಮರಶಿಲ್ಪಿ, ದೇವಾ ಶಿಲ್ಪಿಯೆಂದು ಪ್ರಖ್ಯಾತರಾಗಿದ್ದರು. ಬೇಲೂರಿನ ಚನ್ನಕೇಶವ ದೇವಾಲಯ, ಹಳೆಬೀಡಿನ ಹೊಯ್ಸಳೇಶ್ವರ ಮತ್ತು ಶಾಂತಲೇಶ್ವರ ದೇವಾಲಯಗಳು ಇವರ ಕೈಚಳಕದಿಂದ ಮೂಡಿಬಂದಿದ್ದು, ಮುಂದಿನ ಪೀಳಿಗೆ ಶಿಲ್ಪಿಗಳಿಗೆ ಮಾದರಿಯಾಗಿವೆ ಎಂದರು.

ತಹಸೀಲ್ದಾರ್ ಚೆಲುವರಾಜು ಮಾತನಾಡಿದರು. ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ವೈ.ಡಿ.ರಾಜಣ್ಣ, ಪಪಂ ಅಧ್ಯಕ್ಷೆ ರಾಧಿಕಾ, ಮುಖ್ಯಾಧಿಕಾರಿ ವಸಂತಕುಮಾರ್, ತಾಲೂಕು ವಿಶ್ವಕರ್ಮ ಸಮಾಜದ ಅಧ್ಯಕ್ಷ ಜಿ.ರವಿ, ವಿಶ್ವಕರ್ಮ ಮಹಾಸಭಾ ಜಿಲ್ಲಾಧ್ಯಕ್ಷ ವಿಷ್ಣು, ಜೆಡಿಎಸ್ ಹಿಂದುಳಿದ ವರ್ಗಗಳ ತಾಲೂಕು ಅಧ್ಯಕ್ಷ ಮೂರ್ತಿ, ಮುಳ್ಳೂರು ಗ್ರಾಪಂ ಅಧ್ಯಕ್ಷ ಗೋವಿಂದಚಾರ್, ಜಿ.ರವಿ, ನಿವೃತ್ತ ಪಿಡಿಓ ಲಿಂಗರಾಚಾರಿ, ವಿಶ್ವಕರ್ಮ ಸೇನಾ ಸಮಿತಿ ಅಧ್ಯಕ್ಷ ಲೋಕೇಶ್, ಕಾರ್ಯದರ್ಶಿ ರವಿ, ಶ್ರೀನಿವಾಸ, ಸ್ಪಂದನಾ ಸಮಿತಿ ಅಧ್ಯಕ್ಷ ಶ್ರೀನಿವಾಸ, ಎಚ್.ಎಂ.ದಾಸಚಾರಿ, ಮಂಜುನಾಥ, ನಟರಾಜು, ನಾಗರಾಜು, ವಸಂತಚಾರಿ, ಸೋಮಚಾರಿ, ಗೋವಿಂದಚಾರಿ, ಆನಂದ್, ಸುರೇಶ್, ಶ್ರೀನಿವಾಸ, ಗೋಪಾಲಸ್ವಾಮಿ, ಸತೀಶ್, ವೇಣುಗೋಪಾಲ್, ಸೋಮಣ್ಣ, ಆನಂದ್, ಪ್ರವೀಣ್ ಇತರರಿದ್ದರು.

ಮೈಸೂರು ಚಳಿಗಾಲದ ರೇಸುಗಳು

8ನೇ ದಿನ, ಬುಧವಾರ 4-1-2023

ಇಂದಿನ ರೇಸಿಗೆ ನಮ್ಮ ಆಯ್ಕೆ

(ಮೊದಲನೇ ರೇಸ್ ಮಧ್ಯಾಹ್ನ 1.00 ಗಂಟೆಗೆ)

I. B. ಖನ್ನಾ ಮೆಮೋರಿಯಲ್ ಪ್ಲೇಟ್–1600 ಮೀ. ರೇಟೆಡ್ 00 ರಿಂದ 25. ಮ.1.00ಕ್ಕೆ
1. ಬಚ್ಚೂಸ್ 2. ಲೀಡ್ ಸಿಂಗರ್ 3. ರೈನ್ ಕ್ಲೌಡ್

II. ಫಾರ್ಮಲ್ ಇನ್‌ವಿಟೇಷನ್ ಪ್ಲೇಟ್–1400 ಮೀ. ರೇಟೆಡ್ 00 ರಿಂದ 25. ಮ.1.30ಕ್ಕೆ
1. ಟಾಪ್ ರ‍್ಯಾಂಕ್ 2. ಡಿ.ದುರ್ಗಾ 3. ಕಂಟ್ರೀಸ್ ಪೆಸ್

III. ಆನ್ಸಬಾಚ್ ಪ್ಲೇಟ್– 1200 ಮೀ. ರೇಟೆಡ್ 20 ರಿಂದ 45. ಮ.2.00ಕ್ಕೆ
1 ಡಿಮ್ಯೂಸ್ 2 NRI ಲೆವೆಲ್ 3 ಸ್ಟೋನ್ ಹೌಸ್

IV. M.ಗೋವಿಂದಪ್ಪ ಮೆಮೋರಿಯಲ್ ಟ್ರೋಫಿ ಡಿ2– 1400 ಮೀ. ಮ.2.30ಕ್ಕೆ
1. ಮೆಡೌವ್ ಫ್ಲವರ್ 2. ಎನ್‌ಎಕ್ಸ್ಟಬಲ್ 3. ಐ ದಿ ಮೈಂಡ್

V. ಕಾರ್ಕಳ ಪ್ಲೇಟ್ –1800 ಮೀ. ರೇಟೆಡ್ 60 ಮತ್ತು ಮೇಲ್ಪಟ್ಟ. ಮ.3.00ಕ್ಕೆ
1. ಗ್ಯಾಮು 2. ಜ್ಯೂವೆಲ್ ಥೀಫ್ 3. ಅಮಾಜೋನಿಯಾ

VI. M.ಗೋವಿಂದಪ್ಪ ಮೆಮೋರಿಯಲ್ ಟ್ರೋಫಿ ಡಿ1– 1400 ಮೀ. ಮ.3.30ಕ್ಕೆ
1. ಫ್ಲಾಮಿಂಗೋ ಡ್ಯಾಸರ್ 2. ಸಮಯ ಬಲವಾನ್ 3. ಮಿಸ್ಟಿಕ್ ಡಿವೈನ್

VII. ಮೈಸೂರ್ ಬುಕ್ ಮೇಕರ್ ಅಸೋಸಿಯೇಷನ್ ಜ್ಯೂವೆನೈಲ್ ಮಿಲಿಯನ್ – 1200 ಮೀ. 3 ವರ್ಷ (ಟರ್ಮ್ಸ್). ಸಂ.4.00ಕ್ಕೆ
1. ಮೂನ್‌ಲೈಟ್ ಕ್ವೀನ್ 2. ರನ್ನಿಂಗ್ ಬೋಲ್ಟ್ 3. ಶಿವಾಲಿಕ ಸ್ಟನರ್


VIII. ಸ್ಕೈಲೈನ್ ಪ್ಲೇಟ್ ಡಿ2– 1400 ಮೀ. ರೇಟೆಡ್ 40 ರಿಂದ 65. ಸಂ.4.30ಕ್ಕೆ
1. ಅಚೂಕ್ 2. ಸಾಕ್ ರೇಟ್ 3. ಕಾಪರ್ ಸನ್‌ರೈಸ್

IX. ಸ್ಕೈಲೈನ್ ಪ್ಲೇಟ್ ಡಿ1– 1400 ಮೀ. ರೇಟೆಡ್ 40 ರಿಂದ 65. ಸಂ.5.00ಕ್ಕೆ
1. ಹೀರೋಡೋಟಸ್ 2. ಗ್ರೀನ್ ಟೋಕಿ 3. ಸೌಂಡ್ ಆಫ್ ಕೆನಾನ್ಸ್

ದಿನದ ಅತ್ಯುತ್ತಮ	ಮೂನ್‌ಲೈಟ್ ಕ್ವೀನ್
ಡಬ್ಬಲ್	ಬಚ್ಚೂಸ್, ಹೀರೋಡೋಟಸ್
ಜಾಕ್‌ಪಾಟ್	5, 6, 7, 8 ಮತ್ತು 9
I ಟ್ರಿಬಲ್	1, 2 ಮತ್ತು 3
II ಟ್ರಿಬಲ್	4, 5 ಮತ್ತು 6
III ಟ್ರಿಬಲ್	7, 8 ಮತ್ತು 9
ಎಕ್ಸ್‌ಆಕ್ಸ್	9 ಮತ್ತು 10

ಟಿಪ್‌ಸ್ಟರ್ ಪಿಜಿಸಿ

ನೆನಪು



ಶ್ರೀಕೃಷ್ಣ ಆಲನಹಳ್ಳಿ 1947-1989

ಪತ್ನಿ: ವಿನುತ ಕೃಷ್ಣ ಆಲನಹಳ್ಳಿ, ಪುತ್ರ: ಪ್ರದ್ಯುಮ್ನ ಆಲನಹಳ್ಳಿ, ಪುತ್ರಿ: ಕೃತ್ತಿಕ ಆಲನಹಳ್ಳಿ, ಸೊಸೆ: ಜೋತ್ಸ್ನ ಆಲನಹಳ್ಳಿ, ಮೊಮ್ಮಕ್ಕಳು: ಹೃದಯ ಆಲನಹಳ್ಳಿ, ಸ್ಪರ್ಶ ಆಲನಹಳ್ಳಿ

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಬಿ.ಸಿದ್ದು (ಕ್ಯಾಬು ಸಿದ್ದಪ್ಪ) ರವರು
(ಉರುಗೆಜ್ಜೆ ಕುಟುಂಬ)

ಇವರು ದಿನಾಂಕ 25.12.2022 ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ: 04.1.2023ರ ಬುಧವಾರ ಬೆಳಗ್ಗೆ 11.00 ಗಂಟೆಗೆ, ಕುವೆಂಪುನಗರ ಕಾವೇರಿ ಶಾಲೆ ಪಕ್ಕ, ಮರುಳೇಶ್ವರ ದೇವಸ್ಥಾನದ ಎದುರು, ಕೆ.ಜಿ.ಕೊಪ್ಪಲು. ಇಲ್ಲಿ ನಡೆಸಲು ನಿಶ್ಚಯಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ

ದುಃಖತಪ್ತರು: ಪತ್ನಿ ಕೆ.ಎಸ್.ಮಂಜುಳ, ಮಗ ಅಭಿಷೇಕ್, ಸೊಸೆ ಚೈತ್ರಾ, ಮಗಳು ಎಸ್. ಅನುಷಾ, ಅಳಿಯ ಮದನ್ ಹಾಗೂ ಉರುಗೆಜ್ಜೆ ಕುಟುಂಬವರ್ಗದವರು.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಕಾರ್ಯಪಾಲಕ ಅಭಿಯಂತರರವರ ಕಛೇರಿ
ಕನನೀಸ ಮತ್ತು ಒಚ ಮಂಡಳಿ, ನಗರ ವಿಭಾಗ (ಜೆ.ಎನ್.ನರ್ಮ್)
ಜಲಭವನ, 2ನೇ ಮಹಡಿ, ಪಿ–4,10ನೇ ಮುಖ್ಯ ರಸ್ತೆ,
3ನೇ ಅಡ್ಡರಸ್ತೆ,ಸರಸ್ವತಿಪುರಂ, ಮೈಸೂರು–570009 ☏: 9480813129
ಇ–ಮೇಲ್: kwbmysjnee@gmail.com

ಅಲ್ಪಾವಧಿ ಟೆಂಡರ್ ಪ್ರಕಟಣೆ

ಅಮೃತ್ 2.0 ಯೋಜನೆಯಡಿಯಲ್ಲಿ ಮೈಸೂರು ತಾಲ್ಲೂಕಿನ ಶೀರಾಂಪುರ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಹಾಗೂ ಹೂಟಗಳ್ಳಿ ನಗರಸಭೆ ವ್ಯಾಪ್ತಿಗಳಿಗೆ ಸಂಬಂಧಿಸಿದ ಅಂದಾಜು ಪಟ್ಟಿ, ವಿನ್ಯಾಸಗಳು, ರೇಖಾಚಿತ್ರಗಳು, ವರದಿ ಇತ್ಯಾದಿಗಳನ್ನು ಅಗತ್ಯವಿರುವ ಗಾತ್ರಗಳಲ್ಲಿ ಮುದ್ರಿಸಿ ಮತ್ತು ಡಿ.ಪಿ.ಆರ್ ಪುಸ್ತಕಗಳನ್ನು ಬೈಂಡಿಂಗ್ ಮಾಡುವ ಕಾಮಗಾರಿಯ ಅಲ್ಪಾವಧಿ ಟೆಂಡರ್ ಪ್ರತ್ಯೇಕವಾಗಿ ಕರೆಯಲಾಗಿದ್ದು, ಖಾಲಿ ಟೆಂಡರ್ ಪುಸ್ತಕದ ಬೆಲೆ ತಲಾ –ರೂ1,500/–, ಭರ್ತಿ ಮಾಡಿದ ಟೆಂಡರ್ ಸಲ್ಲಿಸಲು ಕೊನೆಯ ದಿ:11.01.2023, ಇತರೆ ಮಾಹಿತಿ ಕಚೇರಿಯಿಂದ ಪಡೆಯಬಹುದಾಗಿದೆ.

ಸಹಿ/–ಕಾರ್ಯಪಾಲಕ ಅಭಿಯಂತರರು,

1ನೇ ವರ್ಷದ ಸವಿನೆನಪು



ಶ್ರೀಮತಿ ಕವಿತಾ

ಸದಾ ನಿಮ್ಮ ನೆನಪಿನಲ್ಲಿರುವ ಅಮ್ಮ ಮಂಜುಳ, ನಂದೀಶ, ವಿದ್ಯಾ, ಮಂಜು (ಕುಮಾರ್ ಅಂಚಿ K.G.K), ಹರ್ಷಿಲ್, ಮನ್ವಿತ್ ಮತ್ತು ನಿನ್ನ ಮಗನಾದ ಯಧುದಿಗೆ ನಿನ್ನ ಆಶೀರ್ವಾದವಿರಲಿ

ಕರ್ನಾಟಕ ಸರ್ಕಾರ
ಸರ್ಕಾರಿ ಹೈಟೆಕ್ ಪಂಚಕರ್ಮ ಆಸ್ಪತ್ರೆ

ಬೃಂದಾವನ ಬಡಾವಣೆ, ಕೆ.ಆರ್.ಎಸ್.ರಸ್ತೆ ಮೈಸೂರು–570020
ದೂರವಾಣಿ: ಸಂಖ್ಯೆ: 0821–2515588 & 2515589, Email id: dmshtpkmysuru@gmail.com

ಸಂಖ್ಯೆ: ಹೈಪಆ/27/ಸರಬ/2022–23 ದಿನಾಂಕ: 02.01.2023

ಟೆಂಡರ್ ಪ್ರಕಟಣೆ – ಇ–ಪ್ರಕ್ಯೂರ್‌ಮೆಂಟ್ ಮುಖಾಂತರ

ವಿಷಯ:– ಇ–ಪ್ರಕ್ಯೂರ್‌ಮೆಂಟ್ ಮುಖಾಂತರ ಸರ್ಕಾರಿ ಹೈಟೆಕ್ ಪಂಚಕರ್ಮ ಆಸ್ಪತ್ರೆ, ಮೈಸೂರು, ಇಲ್ಲಿಗೆ 2022–23ನೇ ಸಾಲಿಗೆ Computer radiography system ಖರೀದಿಸುವ ಬಗ್ಗೆ ಮೂರನೇ ಬಾರಿ ಇ–ಟೆಂಡರ್ ಪ್ರಕಟಣೆ.

ಸರ್ಕಾರಿ ಹೈಟೆಕ್ ಪಂಚಕರ್ಮ ಆಸ್ಪತ್ರೆ, ಮೈಸೂರು, ಇಲ್ಲಿಗೆ 2022–23ನೇ ಸಾಲಿಗೆ **Computer radiography System** ಖರೀದಿಸುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ನಿಯಮ 2000 ರನ್ವಯ ಇ–ಪ್ರಕ್ಯೂರ್‌ಮೆಂಟ್ ಮುಖಾಂತರ ನೊಂದಾಯಿತ ಆರ್ಹ ಟೆಂಡರ್‌ದಾರರಿಂದ ಮೂರನೇ ಬಾರಿ ಟೆಂಡರ್ ಕರೆಯಲಾಗಿದೆ. ಟೆಂಡರ್ ವಿವರಗಳನ್ನು ವೆಬ್‌ಸೈಟ್ **http.www.eproc.karnataka.gov.in** ಇದರಲ್ಲಿ ನೋಡುವುದು, ಟೆಂಡರ್ ಅಪ್‌ಲೋಡ್ ಮಾಡಲು ಕೊನೆಯ **ದಿನಾಂಕ:16.01.2023 ರಂದು ಸಂಜೆ 5.00 ಗಂಟೆ** ಆಗಿರುತ್ತದೆ Computer radiography system ಖರೀದಿಸುವ ಅಂದಾಜು ಮೌಲ್ಯ **ರೂ.6.50** ಲಕ್ಷಗಳಾಗಿರುತ್ತದೆ. ಇ.ಎಂ.ಡಿ, **ರೂ.16,250/–** ಗಳನ್ನು ನಿಗದಿಪಡಿಸಿದೆ. ಟೆಂಡರ್ ತೆರೆಯುವ **ದಿನಾಂಕ:18.01.2023** ಗಳಾಗಿರುತ್ತದೆ. ಹೆಚ್ಚಿನ ವಿವರಗಳನ್ನು ಕಚೇರಿ ವೇಳೆಯಲ್ಲಿ ಉಪವೈದ್ಯಕೀಯ ಅಧೀಕ್ಷಕರು, ಸರ್ಕಾರಿ ಹೈಟೆಕ್ ಪಂಚಕರ್ಮ ಆಸ್ಪತ್ರೆ, ಮೈಸೂರು, ಇವರನ್ನು ಸಂಪರ್ಕಿಸಬಹುದಾಗಿದೆ.

ಸಹಿ/–
ಉಪವೈದ್ಯಕೀಯ ಅಧೀಕ್ಷಕರು/ ಅಧ್ಯಕ್ಷರು
ಸರ್ಕಾರಿ ಹೈಟೆಕ್ ಪಂಚಕರ್ಮ ಆಸ್ಪತ್ರೆ,
ಮೈಸೂರು–570020

ವಾಪಾಸಂಇ/ಮೈಸೂರು/ಶಿರಡಿ ಸಾಯಿ/837/2022–23

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಕಾರ್ಯಪಾಲಕ ಅಭಿಯಂತರರವರ ಕಛೇರಿ
ಕನನೀಸ ಮತ್ತು ಒಚ ಮಂಡಳಿ, ನಗರ ವಿಭಾಗ (ಜೆ.ಎನ್.ನರ್ಮ್)
ಜಲಭವನ, 2ನೇ ಮಹಡಿ, ಪಿ–4,10ನೇ ಮುಖ್ಯ ರಸ್ತೆ,
3ನೇ ಅಡ್ಡರಸ್ತೆ,ಸರಸ್ವತಿಪುರಂ, ಮೈಸೂರು–570009 ☏: 9480813129
ಇ–ಮೇಲ್: kwbmysjnee@gmail.com

ಅಲ್ಪಾವಧಿ ಟೆಂಡರ್ ಪ್ರಕಟಣೆ

ಮೈಸೂರು ತಾಲ್ಲೂಕಿನ ರಮ್ಮನಹಳ್ಳಿ, ಶ್ರೀರಾಂಪುರ ಪಟ್ಟಣ ಪಂಚಾಯಿತಿ ಮತ್ತು ಹೂಟಗಳ್ಳಿ ನಗರಸಭೆಗಳಲ್ಲಿನ ಹಾಲಿ ಇರುವ ಗೃಹ ಸಂಪರ್ಕಗಳ ಸರ್ವೆ ಕಾಮಗಾರಿಯ ಟೆಂಡರ್‌ನ್ನು ಪ್ರಕಟಣೆ ಸಂಖ್ಯೆ:2358/2022–23, ದಿನಾಂಕ:02.01.2023 ಅಲ್ಪಾವಧಿ ಟೆಂಡರ್ ಪ್ರತ್ಯೇಕವಾಗಿ ಕರೆಯಲಾಗಿದ್ದು, ಖಾಲಿ ಟೆಂಡರ್ ಪುಸ್ತಕದ ಬೆಲೆ ತಲಾ –ರೂ.2,200/– ಅರ್ಜಿ ಸಲ್ಲಿಸಲು ಕೊನೆಯ ದಿ:11.01.2023, ಖಾಲಿ ಟೆಂಡರ್ ಪತ್ರಗಳನ್ನು ವಿತರಿಸುವ ದಿ:10.01.2023 ತನಕ, ಭರ್ತಿ ಮಾಡಿದ ಟೆಂಡರ್ ಸಲ್ಲಿಸಲು ಕೊನೆಯ ದಿ:11.01.2023, ಇತರೆ ಮಾಹಿತಿ ಕಚೇರಿಯಿಂದ ಪಡೆಯಬಹುದಾಗಿದೆ.

ಸಹಿ/–
ಕಾರ್ಯಪಾಲಕ ಅಭಿಯಂತರರು,

In the Court of the Hon'ble III Additional Senior Civil Judge, At Mysore

O.S. No. 995/2021

Plaintiff: B.K. Manjula, D/o late B.N. Kengegowda, aged about 73 years, residing at #58, 'F' Block, Jockey Quarters, Lalith Mahal Road, Mysuru.

V/s

Defendants: 1) B.K. Geetha, D/o Late B.N. Kenge Gowda, aged about 69 years, residing at Swayamkrushi Apartments, 6th Main, Mallappa Layout, Prakruthi Township, Babusapalya, Kalyan Nagar, Bengaluru. (2) B.K. Mala, D/o Late B.N. Kengegowda, aged about 67 years. (3) B.K. Indira, D/o Late B.N. Kengegowda, aged about 65 years. (4) B.K. Vandana, D/o Late B.N. Kengegowda, aged about 63 years. (5) B.K. Shubha, D/o Late B.N. Kengegowda, aged about 61 years. (6) B.K. Babu, S/o Late B.N. Kengegowda, aged about 58 years. (7) B.K. Srinivas, S/o Late B.N. Kengegowda, aged about 56 years.

Defendants No. 2 to 7 are the residents of #4691, 2nd Cross, Shivaji Road, N.R. Mohalla, Mysuru.

(8) H.P. Amarnath, S/o K.H. Prakash, aged about 42 years, #67/1, Udayagiri Main Road, Ganesh Nagar, B Block, N.R. Mohalla, Mysuru.

PAPER PUBLICATION

It is hereby notified to you, the defendants No. 1 to 7 in the above case, that the plaintiff has filed a suit against the defendants, before the Hon'ble III Additional Senior Civil Judge, Mysuru. The said case now stands posted to 20-01-2023 for your personal appearance at 11 am. If you do not appear on the said date at that time, you will be placed exparte & further proceedings will be proceeded with, in your absence.

By the Order of the Court
Sd/- Chief Ministrial Officer, Court of Senior Civil Judge and CJM, Mysuru
Sd/- Advocate for the Plaintiff
Mysuru
Date: 2-1-2023

PUBLIC NOTICE

Notice is given to the general public at large that my client is negotiating and intending to purchase the property mentioned in the schedule below from its present owner Mrs. Pallavi Bhat, Wife of Rajesh Srinivas & Mr. Rajesh Srinivas, Son of Mr. N.Srinivas, both residing at Door No. 122, ITI Layout, Benson Town, Bengaluru - 560046. Any family members, individuals, banks, financial institutions etc having any objections for my client entering into any transaction with the said owner is hereby required to communicate their objections in writing to my office with documentary evidence within 07 days from the date of this publication. In the absence of any authenticated obejctions / claims, my client will proceed to complete the transaction of sale and no claim in this regard will be entertained thereafter.

SCHEDULE OF THE PROPERTY

All that piece and parcel of residential house property bearing No.71, situated at 16th Cross, 3-A Block, V.V.Puram, V.V.Mohalla, Devaraja Mohalla, Mysuru - 570002 measuring East to West Sixty (60) feet and North to South Forty (40) Feet admeasuring 2400 Square feet with an RCC building of 750 Square Feet with red oxide flooring and bounded by:

East By: Property bearing no.55, West By : Road, North By : Property bearing no.72, and South By : Property bearing no.70.

Sd/- Dinesh Solanki,
B.com, LL.M, Advocate.
#1197, 12/2, K.R.B.Road, Behind Palyam Printers, Chamarajapuram, Mysuru - 570005. Mob.: 9343430011

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಕಾರ್ಯಪಾಲಕ ಅಭಿಯಂತರರವರ ಕಛೇರಿ
ಕನನೀಸ ಮತ್ತು ಒಚ ಮಂಡಳಿ, ನಗರ ವಿಭಾಗ (ಜೆ.ಎನ್.ನರ್ಮ್)
ಜಲಭವನ, 2ನೇ ಮಹಡಿ, ಪಿ–4,10ನೇ ಮುಖ್ಯ ರಸ್ತೆ,
3ನೇ ಅಡ್ಡರಸ್ತೆ,ಸರಸ್ವತಿಪುರಂ, ಮೈಸೂರು–570009 ☏: 9480813129
ಇ–ಮೇಲ್: kwbmysjnee@gmail.com

ಅಲ್ಪಾವಧಿ ಟೆಂಡರ್ ಪ್ರಕಟಣೆ

ಅಮೃತ್ 2.0 ಯೋಜನೆಯಡಿಯಲ್ಲಿ ಮೈಸೂರು ತಾಲ್ಲೂಕಿನ ಶೀರಾಂಪುರ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಹಾಗೂ ಹೂಟಗಳ್ಳಿ ನಗರಸಭೆ ವ್ಯಾಪ್ತಿಯಲ್ಲಿ ಹಾಲಿ ಅಸ್ತಿತ್ವದಲ್ಲಿರುವ ಫೀಡರ್ ಮತ್ತು ವಿತರಣಾ ಕೊಳವೆ ಮಾರ್ಗಗಳ ಕಂಡಿಶ್ಯನಲ್ ಅಸ್ಸೆಸ್‌ಮೆಂಟ್ ಕಾಮಗಾರಿಯ ಟೆಂಡರ್‌ನ್ನು ಪ್ರಕಟಣೆ ಸಂಖ್ಯೆ:2366, ದಿನಾಂಕ:02.01.2023 ಅಲ್ಪಾವಧಿ ಟೆಂಡರ್ ಪ್ರತ್ಯೇಕವಾಗಿ ಕರೆಯಲಾಗಿದ್ದು, ಖಾಲಿ ಟೆಂಡರ್ ಪುಸ್ತಕದ ಬೆಲೆ ತಲಾ –ರೂ.1,500/– ಅರ್ಜಿ ಸಲ್ಲಿಸಲು ಕೊನೆಯ ದಿ:11.01.2023, ಖಾಲಿ ಟೆಂಡರ್ ಪತ್ರಗಳನ್ನು ವಿತರಿಸುವ ದಿ:10.01.2023 ತನಕ, ಭರ್ತಿ ಮಾಡಿದ ಟೆಂಡರ್ ಸಲ್ಲಿಸಲು ಕೊನೆಯ ದಿ:11.01.2023, ಇತರೆ ಮಾಹಿತಿ ಕಚೇರಿಯಿಂದ ಪಡೆಯಬಹುದಾಗಿದೆ.

ಸಹಿ/–
ಕಾರ್ಯಪಾಲಕ ಅಭಿಯಂತರರು,